23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 300 | ನವದೆಹಲಿ | ಬೆಲೆ ₹10 | ಮೇ 6 2026, ಬುಧವಾರ

## ಒಳಪುಟಗಳಲ್ಲಿ

ವಿಯೆಟ್ನಾಂ ಅಧ್ಯಕ್ಷ ಟೋ ಲಾಮ್ ಭಾರತಕ್ಕೆ ಮೊದಲ ಭೇಟಿ: ವ್ಯೂಹಾತ್ಮಕ ಸಂಬಂಧ ವೃದ್ಧಿಗೆ ಆದ್ಯತೆ - ಪು.4

ನಾದಯೋಗಿ: ಡಾ.ರಾಜ ಕುಮಾರ್ ಕೃತಿ ಇಂದು ಲೋಕಾರ್ಪಣೆ - ಪು.5

ಅಂತಾರಾಜ್ಯ ಮನೆಗಳ್ಳನ ಬಂಧನ: 14 ಲಕ್ಷ ಮೌಲ್ಯದ ಚಿನ್ನಾಭರಣ ವಶ - ಪು.6

# ಮೇ 7ಕ್ಕೆ ವಿಜಯ್ ಪ್ರಮಾಣ?, ಮೇ 9ರಂದು ಪ.ಬಂಗಾಳದಲ್ಲಿ ಸರ್ಕಾರ ರಚನೆ

## ಸಣ್ಣ ಪಕ್ಷಗಳ ಬೆಂಬಲ ಪಡೆಯಲು ಸಲಹೆ




**ಚೆನ್ನೈ, ಮೇ 5: ಚಿತ್ರರಂಗ ಬಿಟ್ಟು ರಾಜಕೀಯಕ್ಕೆ ಧುಮುಕಿ ಮೊದಲ ಚುನಾವಣೆಯಲ್ಲೇ ಭರ್ಜರಿ ಫಲಿತಾಂಶ ನೀಡಿರುವ ನಟ ವಿಜಯ್ ತಮಿಳುನಾಡು ರಾಜಕೀಯ ಚಿತ್ರಣವನ್ನೇ ಬದಲಿಸಿದ್ದು, ಇದೀಗ ಅವರ ನೇತೃತ್ವದ ಮೊದಲ ಸರ್ಕಾರ ರಚನೆಯ ಬಗ್ಗೆ ಸಾಕಷ್ಟು ಕುತೂಹಲ ಮೂಡಿಸಿದೆ.**

ತಮಿಳುನಾಡಿನ 234 ಕ್ಷೇತ್ರಗಳ ಪೈಕಿ ಟಿವಿಕೆ 108 ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ. ಡಿಎಂಕೆ 59, ಅಣ್ಣಾ ಡಿಎಂಕೆ 47, 20 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಸೇರಿದಂತೆ ಇತರ ಪಕ್ಷಗಳ ಶಾಸಕರು ಆಯ್ಕೆಯಾಗಿದ್ದಾರೆ. ಸದ್ಯ ಸರ್ಕಾರ ರಚನೆಗೆ 118 ಶಾಸಕರ ಬೆಂಬಲದ ಅಗತ್ಯವಿದ್ದು 108 ಸ್ಥಾನ ಪಡೆದಿರುವ ನಟ ವಿಜಯ್‌ಗೆ ಹತ್ತು ಶಾಸಕರ ಬೆಂಬಲದ ಅಗತ್ಯವಿದೆ.

**ಡಿಎಂಕೆ– ಎಡಿಎಂಕೆ ಮೈತ್ರಿ ತಳ್ಳಿಹಾಕಿದ ಟಿವಿಕೆ:** ಈ ನಡುವೆ ಸ್ಥಿರ ಸರ್ಕಾರ ರಚನೆ ಮಾಡುವ ನಿಟ್ಟಿನಲ್ಲಿ ಡಿಎಂಕೆ ಅಥಾವ ಅಣ್ಣಾ ಡಿಎಂಕೆ ಜೊತೆಗೆ ಮೈತ್ರಿ ಮಾಡಿಕೊಳ್ಳುವ ಚರ್ಚೆಗಳಿತ್ತು ಆದರೆ ಈ ಚರ್ಚೆಯನ್ನು ಪಕ್ಷ ತಳ್ಳಿ ಹಾಕಿದೆ. ಮಂಗಳವಾರ ನಡೆದ ಮೊದಲ ಶಾಸಕಾಂಗ ಪಕ್ಷದ ಸಭೆಯಲ್ಲಿ ಟಿವಿಕೆ ಪಕ್ಷದ ಎಲ್ಲ ಶಾಸಕರು ಡಿಎಂಕೆ ಅಣ್ಣಾಡಿಎಂಕೆ ಜೊತೆಗೆ ಮೈತ್ರಿ ಬೇಡ ಎಂದು ಆಗ್ರಹಿಸಿದ್ದಾರೆ. ಕಾಂಗ್ರೆಸ್, ಕಮ್ಯೂನಿಸ್ಟ್ ಸೇರಿದಂತೆ ಇತರೆ ಸಣ್ಣ ಪಕ್ಷಗಳ ಬೆಂಬಲ ಪಡೆಯುವ ಸಲಹೆ ನೀಡಿದ್ದಾರೆ ಎನ್ನಲಾಗಿದೆ.

ನಟ ವಿಜಯ್ ಸರ್ಕಾರಕ್ಕೆ ಕಾಂಗ್ರೆಸ್ ಹೊರಗಿನಿಂದ ಬೆಂಬಲ ನೀಡಬಹುದು ಅಥವಾ ಮೈತ್ರಿಯ ಭಾಗವಾಗಬಹುದು ಎನ್ನಲಾಗುತ್ತಿದೆ. ಈ ಬಗ್ಗೆ ರಾಹುಲ್ ಗಾಂಧಿ ನಟ ವಿಜಯ್ ಜೊತೆಗೆ ಮಾತುಕತೆ ನಡೆಸಿ ಬೆಂಬಲ ನೀಡಿದ್ದಾರೆ ಎನ್ನಲಾಗಿದೆ. ಈ ನಡುವೆ ತಮಿಳುನಾಡು ಸಿಪಿಐ(ಎಂ) ಕಾರ್ಯದರ್ಶಿ ಪಿ. ಷಣ್ಮುಗಂ ಮಾತನಾಡಿ, ಮೊದಲು ವಿಜಯ್ ತಮ್ಮ ನಿಲುವನ್ನು ಸ್ಪಷ್ಟವಾಗಿ ಹೇಳಲಿ ಅವರು ಹೇಳಿದ ನಂತರ, ಯಾರನ್ನು ಬೆಂಬಲಿಸಬೇಕೆಂದು ನಾವು ನಿರ್ಧರಿಸುತ್ತೇವೆ, ನಾವು ಡಿಎಂಕೆ ಮೈತ್ರಿಕೂಟದೊಂದಿಗೆ ಇದ್ದೇವೆ ಎಂಬುದರಲ್ಲಿ ಯಾವುದೇ ಸಂದೇಹವಿಲ್ಲ ಎಂದು ಹೇಳಿದ್ದಾರೆ. ವಿಸಿಕೆ ಮುಖ್ಯಸ್ಥ ಥೋಲ್ ತಿರುಮಾವಲವನ್ ಪ್ರತಿಕ್ರಿಯೆ ನೀಡಿ ರಾಜ್ಯದಲ್ಲಿ ಸರ್ಕಾರ ರಚಿಸುವಲ್ಲಿ ಟಿವಿಕೆಗೆ ಬೆಂಬಲ ನೀಡುವ ಬಗ್ಗೆ ನಾವು ನಿರ್ಧರಿಸಿಲ್ಲ ಎಂದು ಹೇಳಿದ್ದಾರೆ. ವಿಜಯ್ ಅವರು ಈಗಾಗಲೇ ತಮ್ಮ ಪಕ್ಷದಲ್ಲಿ 60:40 ಸೂತ್ರವನ್ನು ಘೋಷಿಸಿದ್ದಾರೆ. ಅಂದರೆ 60% ಸ್ಥಾನಗಳನ್ನು ಹಳೆಯ ನಿಷ್ಠಾವಂತ ಕಾರ್ಯಕರ್ತರಿಗೆ ಮತ್ತು 40% ಸ್ಥಾನಗಳನ್ನು ಹೊಸಬರಿಗೆ ಅಥವಾ ಹೊರಗಿನ ಗಣ್ಯ ವ್ಯಕ್ತಿಗಳಿಗೆ ನೀಡುವ ಭರವಸೆ ನೀಡಿದ್ದಾರೆ.

## ಕೇಂದ್ರ ವೀಕ್ಷಕರಾಗಿ ಅಮಿತ್ ಶಾ, ನಡ್ಡಾ ನೇಮಕ



**ನವದೆಹಲಿ, ಮೇ 5: ಇತ್ತೀಚಿನ ಬೆಳವಣಿಗೆಗಳ ಪ್ರಕಾರ ಹೊಸದಾಗಿ ಆಯ್ಕೆಯಾದ ಬಿಜೆಪಿ ಶಾಸಕರು ಮೇ 9ರಂದು ನೊಬೆಲ್ ಪ್ರಶಸ್ತಿ ಪುರಸ್ಕೃತ ರವೀಂದ್ರನಾಥ ಟ್ಯಾಗೋರ್ ಅವರ ಜನ್ಮ ದಿನಾಚರಣೆಯಾದ ರವೀಂದ್ರ ಜಯಂತಿಯೊಂದಿಗೆ ಪಶ್ಚಿಮ ಬಂಗಾಳದಲ್ಲಿ ಸರ್ಕಾರ ರಚಿಸಲು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಬಿಜೆಪಿ ರಾಜ್ಯ ಅಧ್ಯಕ್ಷ ಸಮಿಕ್ ಭಟ್ಟಾಚಾರ್ಯ ನೀಡಿದ ಮಾಹಿತಿ ಪ್ರಕಾರ, ಪಶ್ಚಿಮ ಬಂಗಾಳದ ಹೊಸ ಮುಖ್ಯಮಂತ್ರಿಯ ಪ್ರಮಾಣ ವಚನ ಸ್ವೀಕಾರ ಸಮಾರಂಭ ಮೇ 9ರಂದು ನಡೆಯಲಿದೆ ಎಂದು ಹೇಳಿದ್ದಾರೆ.**

ಅಸ್ಸಾಂನಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ವಿಧಾನಸಭಾ ಚುನಾವಣೆಯಲ್ಲಿ ಸತತ ಮೂರನೇ ಬಾರಿಗೆ ಗೆಲುವು ಸಾಧಿಸಿದೆ. 126 ಸದಸ್ಯರ ವಿಧಾನಸಭೆಯಲ್ಲಿ ಬಿಜೆಪಿ 82 ಸ್ಥಾನಗಳನ್ನು ಗೆದ್ದುಕೊಂಡಿದೆ. ಇದು ರಾಜ್ಯದಲ್ಲಿ ಪಕ್ಷಕ್ಕೆ ಅತ್ಯಧಿಕ ಸ್ಥಾನವಾಗಿದೆ. ಇನ್ನು ಮಿತ್ರಪಕ್ಷಗಳಾದ ಬೋಡೋಲ್ಯಾಂಡ್ ಪೀಪಲ್ಸ್ ಫ್ರಂಟ್ ಮತ್ತ ಎಜಿಪಿ ತಲಾ ಹತ್ತು ಸ್ಥಾನಗಳನ್ನು ಗೆದ್ದುಕೊಂಡಿವೆ.

ಸತತ ಮೂರನೇ ಅವಧಿಗೆ ಅಸ್ಸಾಂನಲ್ಲಿ ಬಿಜೆಪಿ ಅಧಿಕಾರ ಉಳಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ. ಈ ಬಾರಿ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಅಲ್ಲಿನ ಜನರು ಐತಿಹಾಸಿಕ ತೀರ್ಪು ನೀಡಿದ್ದು ರಾಜ್ಯದಲ್ಲಿ ತೃಣಮೂಲ ಕಾಂಗ್ರೆಸ್ ಆಡಳಿತವನ್ನು ಕೊನೆಗೊಳಿಸಲು ಬಿಜೆಪಿಗೆ ಸ್ಪಷ್ಟ ಜನಾದೇಶ ನೀಡಿದ್ದಾರೆ. ಕೇಸರಿ ಪಕ್ಷವು 294 ಸದಸ್ಯರ ವಿಧಾನಸಭೆಯಲ್ಲಿ 200 ಕ್ಕೂ ಹೆಚ್ಚು ಸ್ಥಾನಗಳನ್ನು ಗೆದ್ದು ಸಂಪೂರ್ಣ ಬಹುಮತವನ್ನು ಗಳಿಸಿದೆ. ಸ್ವಾತಂತ್ರ್ಯದ ನಂತರ ಮೊದಲ ಬಾರಿಗೆ ರಾಜ್ಯದಲ್ಲಿ ಬಿಜೆಪಿ ಸರ್ಕಾರ ರಚಿಸಲು ಸಜ್ಜಾಗಿದೆ.

ಬಂಗಾಳ ಮತ್ತು ಅಸ್ಸಾಂ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಪಕ್ಷದ ಐತಿಹಾಸಿಕ ಗೆಲುವಿನ ನಂತರ, ಭಾರತೀಯ ಜನತಾ ಪಕ್ಷ ಶಾಸಕಾಂಗ ಪಕ್ಷದ ನಾಯಕರ ಆಯ್ಕೆ ಕಸರತ್ತು ಆರಂಭಿಸಿದೆ.

ಪಶ್ಚಿಮ ಬಂಗಾಳದಲ್ಲಿ ಶಾಸಕಾಂಗ ಪಕ್ಷದ ನಾಯಕನ ಆಯ್ಕೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಕೇಂದ್ರ ವೀಕ್ಷಕರಾಗಿ ಪಕ್ಷ ನೇಮಕ ಮಾಡಿದೆ. ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅರುಣ್ ಸಿಂಗ್ ಬಿಡುಗಡೆ ಮಾಡಿದ ಅಧಿಕೃತ ಪ್ರಕಟಣೆಯ ಪ್ರಕಾರ, ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಅವರನ್ನು ಬಂಗಾಳಕ್ಕೆ ಸಹವೀಕ್ಷಕರಾಗಿ ಹೆಸರಿಸಲಾಗಿದೆ.

ಅಸ್ಸಾಂಗೆ ಕೇಂದ್ರ ಸಚಿವ ಮತ್ತು ಮಾಜಿ ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ ಅವರನ್ನು ಕೇಂದ್ರ ವೀಕ್ಷಕರಾಗಿ ನೇಮಕ ಮಾಡಲಾಗಿದೆ. ಇನ್ನು ಹರಿಯಾಣ ಮುಖ್ಯಮಂತ್ರಿ ನಯಾಬ್ ಸಿಂಗ್ ಸೈನಿ ಅವರನ್ನು ಸಹ–ವೀಕ್ಷಕರಾಗಿ ಕಳುಹಿಸಿಕೊಡಲು ತೀರ್ಮಾನಿಸಲಾಗಿದೆ.

## ಪಂಚರಾಜ್ಯಗಳ ಚುನಾವಣೆ ಬಿಜೆಪಿ ಸಾಧನೆಗೆ ದೇವೇಗೌಡರ ಶ್ಲಾಘನೆ



**ಬೆಂಗಳೂರು, ಮೇ 5:** ಪಂಚರಾಜ್ಯಗಳ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಮಾಡಿದ ಸಾಧನೆಗೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಶ್ಲಾಘಿಸಿದ್ದಾರೆ. ಪಶ್ಚಿಮ ಬಂಗಾಳ, ಅಸ್ಸಾಂ ಮತ್ತು ಪುದುಚೇರಿಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್‌ನಬೀನ್ ಅವರ ನೇತೃತ್ವದಲ್ಲಿ ಬಿಜೆಪಿಯ ಸಾಧನೆಯ ಬಗ್ಗೆ ಪಾಲುದಾರನಾಗಿ ನನಗೆ ತುಂಬಾ ಸಂತೋಷ ಮತ್ತು ಹೆಮ್ಮೆ ಇದೆ ಎಂದು ಹೇಳಿದ್ದಾರೆ. ಕೇರಳದಲ್ಲಿ ಬಿಜೆಪಿಯ ಸಂಖ್ಯೆ ಸಾಧಾರಣವಾದರೂ ಐತಿಹಾಸಿಕ. ಬಿಜೆಪಿ ನಾಯಕತ್ವಕ್ಕೆ ನನ್ನ ಅಭಿನಂದನೆಗಳು ಎಂದು ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದ್ದಾರೆ.

## ಸೋಲಿನ ವಿರುದ್ಧ ಕಾನೂನು ಹೋರಾಟ: ಮಮತಾ ಪಣ



**ಕೋಲ್ಕತ್ತಾ, ಮೇ 5:** ಪಶ್ಚಿಮ ಬಂಗಾಳದ ಪ್ರತಿಷ್ಠಿತ ಭವಾನಿಪುರ ವಿಧಾನಸಭಾ ಕ್ಷೇತ್ರದಲ್ಲಿ ಅನುಭವಿಸಿದ ಅನಿರೀಕ್ಷಿತ ಸೋಲಿನ ಬೆನ್ನಲ್ಲೇ, ಟಿಎಂಸಿ ನಾಯಕಿ ಮಮತಾ ಬ್ಯಾನರ್ಜಿ ಅವರ ಸ್ಫೋಟಕ ಫೋನ್ ಕರೆ ತೀವ್ರ ಸಂಚಲನ ಮೂಡಿಸಿದೆ. ಚುನಾವಣೆಯಲ್ಲಿ ತಮ್ಮ ಪಕ್ಷದ ಕಾರ್ಯಕರ್ತರನ್ನು ಥಳಿಸಲಾಗಿದೆ, ಮತಗಟ್ಟೆಗಳಿಂದ ಹೊರಹಾಕಲಾಗಿದೆ ಮತ್ತು ಮತಗಳನ್ನು ಲೂಟಿ ಮಾಡಲಾಗಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಪಕ್ಷದ ಮುಖಂಡರೊಂದಿಗೆ ಸೋಲಿನ ಪರಾಮರ್ಶೆ ನಡೆಸುತ್ತಿರುವ ವೇಳೆ ಮಾತನಾಡಿದ್ದಾರೆ ಎನ್ನಲಾದ ಈ ಆಡಿಯೊ ಸಂಭಾಷಣೆ ಇದಾಗಿದೆ. ನಮ್ಮ ಕಾರ್ಯಕರ್ತರ ಮೇಲೆ ಅಮಾನವೀಯವಾಗಿ ಹಲ್ಲೆ ನಡೆಸಲಾಗಿದೆ. ಚುನಾವಣಾ ಏಜೆಂಟರನ್ನು ಬಲವಂತವಾಗಿ ಮತಗಟ್ಟೆಗಳಿಂದ ಹೊರದಬ್ಬಲಾಗಿದೆ ಹಾಗೂ ವ್ಯವಸ್ಥಿತವಾಗಿ ಮತಗಳ ಲೂಟಿ ನಡೆದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಸೋಲಿನ ಹಿಂದೆ ಚುನಾವಣಾ ಆಯೋಗದ ಪಾತ್ರವಿದೆ ಎಂದೂ ವಾಗ್ದಾಳಿ ನಡೆಸಿದ್ದಾರೆ. ಭವಾನಿಪುರದಲ್ಲಿ ಪ್ರಜಾಪ್ರಭುತ್ವದ ಕಗ್ಗೊಲೆಯಾಗಿದೆ, ಇದು ಕೇವಲ ಜನರ ತೀರ್ಪಲ್ಲ. ವ್ಯವಸ್ಥೆಯನ್ನು ದುರ್ಬಳಕೆ ಮಾಡಿಕೊಂಡು ನಮ್ಮನ್ನು ಸೋಲಿಸಲಾಗಿದೆ. ಈ ಅಕ್ರಮ ಮತ್ತು ಅನ್ಯಾಯದ ವಿರುದ್ಧ ಎಂದು ಕಾನೂನು ಹೋರಾಟದ ಎಚ್ಚರಿಕೆ ನೀಡಿದ್ದಾರೆ.

## 2 ವಾರ ಸಮಯ ಕೇಳಿ ರಾಜ್ಯಪಾಲರಿಗೆ ವಿಜಯ್ ಪತ್ರ

**ಚೆನ್ನೈ ಮೇ 5:** ಸರ್ಕಾರ ರಚಿಸಲು ಅಗತ್ಯವಿರುವ 118 ಸ್ಥಾನಗಳ ಮ್ಯಾಜಿಕ್ ನಂಬರ್ ತಲುಪಲು ಇನ್ನು 10 ಸ್ಥಾನಗಳ ಕೊರತೆಯಿದ್ದು, ಬಹುಮತ ಸಾಬೀತುಪಡಿಸಲು ತಮಗೆ ಎರಡು ವಾರಗಳ ಕಾಲಾವಕಾಶ ನೀಡಬೇಕು ಎಂದು ಕೋರಿ ಟಿವಿಕೆ ನಾಯಕ ವಿಜಯ್ ಅವರು ತಮಿಳುನಾಡು ರಾಜ್ಯಪಾಲರಿಗೆ ಪತ್ರ ಬರೆದಿದ್ದಾರೆ. ಬಹುಮತ ಸಾಬೀತಿಗೆ ಇನ್ನು 10 ಶಾಸಕರ ಬೆಂಬಲದ ಅಗತ್ಯವಿರುವುದರಿಂದ, ಟಿವಿಕೆ ಪಕ್ಷವು ಇದೀಗ ಸಣ್ಣ ಪಕ್ಷಗಳತ್ತ ಮುಖಮಾಡಿದೆ. ಪ್ರಸ್ತುತ ಚುನಾವಣೆಯಲ್ಲಿ ಕಾಂಗ್ರೆಸ್ 5, ಪಿಎಂಕೆ 4, ಎಡಪಕ್ಷಗಳು 4 ಹಾಗೂ ವಿಸಿಕೆ 2 ಸ್ಥಾನಗಳನ್ನು ಗೆದ್ದುಕೊಂಡಿವೆ. ವಿಜಯ್ ಅವರು ಈ ಪಕ್ಷಗಳೊಂದಿಗೆ ಮೈತ್ರಿಗೆ ಮುಂದಾಗುವ ಸಾಧ್ಯತೆಯಿದ್ದು, ಸರ್ಕಾರ ರಚನೆಯ ಕೀಲಿ ಕೈ ಈಗ ಈ ಸಣ್ಣ ಪಕ್ಷಗಳ ಕೈಯಲ್ಲಿದೆ. ಮೈತ್ರಿ ವಿಚಾರವಾಗಿ ಶೀಘ್ರದಲ್ಲೇ ನಿರ್ಧಾರ ಪ್ರಕಟಿಸುವುದಾಗಿ ಕಾಂಗ್ರೆಸ್ ನಾಯಕರು ಕೂಡ ಸುಳಿವು ನೀಡಿದ್ದಾರೆ. ರಾಜ್ಯಪಾಲರು ವಿಜಯ್ ಅವರ ಮನವಿಯನ್ನು ಪುರಸ್ಕರಿಸಿ ಸರ್ಕಾರ ರಚಿಸಲು ಆಹ್ವಾನ ನೀಡುತ್ತಾರೆಯೇ ಅಥವಾ ಸಣ್ಣ ಪಕ್ಷಗಳು ಟಿವಿಕೆಗೆ ಬೆಂಬಲ ಸೂಚಿಸುತ್ತವೆಯೇ ಎಂಬುದನ್ನು ಕಾದು ನೋಡಬೇಕಿದೆ.

## ಸಿಎಂ ಸ್ಥಾನಕ್ಕೆ ಸ್ಟಾಲಿನ್ ರಾಜೀನಾಮೆ: ಪ್ರಬಲ ವಿಪಕ್ಷವಾಗಿ ಕೆಲಸ ಮಾಡುವುದಾಗಿ ಶಪಥ



ಚೆನ್ನೈ, ಮೇ 5: ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ದ್ರಾವಿಡ ಮುನ್ನೇತ್ರ ಕಳಗಂ (ಡಿಎಂಕೆ) ಪಕ್ಷದ ತೀವ್ರ ಹಿನ್ನಡೆಂ ಬೆನ್ನಲ್ಲೇ ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರು ತಮ್ಮ ಸ್ಥಾನಕ್ಕೆ ಅಧಿಕೃತವಾಗಿ ರಾಜೀನಾಮೆ ನೀಡಿದ್ದಾರೆ. ಸೋಮವಾರ ತಡರಾತ್ರಿ ಚುನಾವಣಾ ಫಲಿತಾಂಶ ಸ್ಪಷ್ಟವಾಗುತ್ತಿದ್ದಂತೆ, ಸ್ಟಾಲಿನ್ ಅವರು ರಾಜೀನಾಮೆ ಪತ್ರವನ್ನು ತಮಿಳುನಾಡು ರಾಜ್ಯಪಾಲರಾದ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರಿಗೆ ರವಾನಿಸಿದ್ದಾರೆ. ಈ ಮೂಲಕ ತಮಿಳುನಾಡಿನಲ್ಲಿ ಸುಮಾರು ಐದು ದಶಕಗಳಿಂದ ಸಾಗಿದ್ದ ಸಾಂಪ್ರದಾಯಿಕ ದ್ರಾವಿಡ ಪಕ್ಷಗಳ ಪಾರುಪತ್ಯದ ಶಕೆಯೊಂದು ಅಂತ್ಯಗೊಂಡಂತಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರ ತೀರ್ಪೇ ಅಂತಿಮ. ನಾಡಿನ ಜನರ ಈ ಜನಾದೇಶವನ್ನು ಅತ್ಯಂತ ವಿನಮ್ರತೆಯಿಂದ ಒಪ್ಪಿಕೊಳ್ಳುತ್ತೇನೆ ಮತ್ತು ಹೊಸ ಸರ್ಕಾರಕ್ಕೆ ಶುಭಾಶಯ ಕೋರುತ್ತೇನೆ. ಮುಂಬರುವ ದಿನಗಳಲ್ಲಿ ತಮಿಳುನಾಡು ವಿಧಾನಸಭೆಯಲ್ಲಿ ಡಿಎಂಕೆ ಪಕ್ಷವು ಅತ್ಯುತ್ತಮ ಹಾಗೂ ಜವಾಬ್ದಾರಿಯುತ ವಿರೋಧ ಪಕ್ಷವಾಗಿ ಕಾರ್ಯನಿರ್ವಹಿಸಲಿದೆ. ತಮಿಳುನಾಡಿನ ಜನರ ಪರವಾದ ಧ್ವನಿಯಾಗಿ, ಅವರ ಹಕ್ಕುಗಳ ರಕ್ಷಣೆಗಾಗಿ ನಾವು ನಿರಂತರವಾಗಿ ಹೋರಾಡುತ್ತೇವೆ ಎಂದು ಸ್ಪಷ್ಟಪಡಿಸಿದ್ದಾರೆ.

## ಟಿವಿಕೆ ಜೊತೆ ಮೈತ್ರಿಗೆ ಮುಕ್ತ ಕೆ.ಸಿ.ವೇಣುಗೋಪಾಲ್ ಸುಳಿವು




**ನವದೆಹಲಿ, ಮೇ 5:** ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ನಟ ವಿಜಯ್ ನೇತೃತ್ವದ ತಮಿಳಗ ವೆಟ್ರಿ ಕಳಗಂ (ಟಿವಿಕೆ) ಪಕ್ಷವು 108 ಸ್ಥಾನಗಳನ್ನು ಗೆಲ್ಲುವ ಅತಿಹೆಚ್ಚು ಸ್ಥಾನ ಗೆದ್ದ ಪಕ್ಷವಾಗಿ ಹೊರಹೊಮ್ಮಿದೆ. ಆದರೆ, ಸರ್ಕಾರ ರಚಿಸಲು ಅಗತ್ಯವಿರುವ ಬಹುಮತದ ಸಂಖ್ಯೆ (118) ಗಿಂತ ಸ್ವಲ್ಪ ಹಿಂದಿರುವ ಟಿವಿಕೆ ಪಕ್ಷದ ಜೊತೆ ಮಾತುಕತೆ ನಡೆಸಲು ಕಾಂಗ್ರೆಸ್ ಮುಕ್ತವಾಗಿದೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಸುಳಿವು ನೀಡಿದ್ದಾರೆ. ಕೇರಳದ ಆಲಪ್ಪುಳದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷವು ಡಿಎಂಕೆ ಮೈತ್ರಿಯ ಭಾಗವಾಗಿ ಚುನಾವಣೆಯನ್ನು ಎದುರಿಸಿತ್ತು. ಆದಾಗ್ಯೂ, ತಮಿಳುನಾಡಿನಲ್ಲಿ ಈಗ ಒಂದು ಹೊಸ ಪರಿಸ್ಥಿತಿ ನಿರ್ಮಾಣವಾಗಿದೆ. ಉದ್ಭವಿಸಿರುವ ಈ ಹೊಸ ಸಮೀಕರಣಗಳನ್ನು ಕಾಂಗ್ರೆಸ್ ಗಮನಿಸಲಿದೆ ಮತ್ತು ಅದಕ್ಕೆ ಅನುಗುಣವಾಗಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ತಿಳಿಸಿದರು. ಪ್ರಕಟಿತ ಅಂಕಿ–ಅಂಶಗಳ ಪ್ರಕಾರ, ಟಿವಿಕೆ 108 ಸ್ಥಾನಗಳಲ್ಲಿ ಜಯಗಳಿಸಿದ್ದರೆ, ಕಾಂಗ್ರೆಸ್ 5 ಮತ್ತು ಪಿಎಂಕೆಯು 4 ಸ್ಥಾನಗಳನ್ನು ಗೆದ್ದುಕೊಂಡಿವೆ.

### ಪ.ಬಂಗಾಳ ಸಿಎಂ ಯಾರಾಗಬಹುದು?



**ಕೋಲ್ಕತ್ತಾ, ಮೇ 5:** ಪಶ್ಚಿಮ ಬಂಗಾಳದಲ್ಲಿ ಇದೇ ಮೊದಲ ಬಾರಿಗೆ ಬಿಜೆಪಿ ಅಧಿಕಾರ ಹಿಡಿಯಲು ಸಜ್ಜಾಗಿದೆ. ಮೇ 9ರಂದು ಪಶ್ಚಿಮ ಬಂಗಾಳದ ನೂತನ ಮುಖ್ಯಮಂತ್ರಿಯವರ ಪ್ರಮಾಣವಚನ ಸಮಾರಂಭ ನಡೆಯಲಿದೆ. ಆದರೆ, ಮುಖ್ಯಮಂತ್ರಿ ಹುದ್ದೆಗೇರುವ ನಾಯಕ ಯಾರು ಎಂಬುದು ಈವರೆಗೂ ಅಂತಿಮಗೊಂಡಿಲ್ಲ. ಮುಂದಿನ ಮುಖ್ಯಮಂತ್ರಿ ಹಾಗೂ ನೂತನ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ಕುರಿತು ಪಕ್ಷದ ಉನ್ನತ ವರಿಷ್ಠರ ಮಟ್ಟದಲ್ಲಿ ಗಂಭೀರ ಚರ್ಚೆಗಳು ನಡೆಯುತ್ತಿವೆ. ಈ ಬೆಳವಣಿಗೆಯ ಬಗ್ಗೆ ಪ್ರತಿಕ್ರಿಯಿಸಿರುವ ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸುನೀಲ್ ಬನ್ಸಾಲ್, ಪ್ರಸ್ತುತ ಯಾವುದೇ ಅಂತಿಮ ನಿರ್ಧಾರ ಕೈಗೊಂಡಿಲ್ಲ ಹಾಗೂ ಮುಂದಿನ ಮಾತುಕತೆಗಾಗಿ ತಾವು ದೆಹಲಿಗೆ ತೆರಳುತ್ತಿರುವುದಾಗಿ ತಿಳಿಸಿದ್ದಾರೆ. ಸಮಾರಂಭದ ನಿಖರ ಸಮಯ, ಸ್ಥಳದ ರೂಪುರೇಷೆಗಳು ಹಾಗೂ ಸಂಭಾವ್ಯ ಸಚಿವರ ಪಟ್ಟಿಯನ್ನು ಪಕ್ಷದ ಹೈಕಮಾಂಡ್ ಒಪ್ಪಿಗೆ ಪಡೆದ ನಂತರವೇ ಅಧಿಕೃತವಾಗಿ ಬಿಡುಗಡೆ ಮಾಡುವ ನಿರೀಕ್ಷೆಯಿದೆ. ಸುವೆಂದು ಅಧಿಕಾರಿ ಸಿಎಂ ರೇಸ್‌ನಲ್ಲಿ ಮುಂಚೂಣಿಯಲ್ಲಿದ್ದಾರೆ ಎನ್ನಲಾಗಿದೆ

## ಬಂಗಾಳ, ಅಸ್ಸಾಂ ಫಲಿತಾಂಶ ಪ್ರಜಾಪ್ರಭುತ್ವಕ್ಕೆ ಅಪಾಯಕಾರಿ: ರಾಹುಲ್ ಗಾಂಧಿ ಎಚ್ಚರಿಕೆ



ವಿರೋಧ ಪಕ್ಷಗಳ ಒಗ್ಗಟ್ಟಿಗೆ ಕರೆ

**ನವದೆಹಲಿ, ಮೇ 5:** ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ವಿಧಾನಸಭಾ ಚುನಾವಣೆಯ ಫಲಿತಾಂಶಗಳ ಬಗ್ಗೆ "ಸಣ್ಣ ರಾಜಕೀಯ ಪ್ರತಿಕ್ರಿಯೆಗಳ" ವಿರುದ್ಧ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಂಗಳವಾರ ಎಚ್ಚರಿಕೆ ನೀಡಿದ್ದಾರೆ. ಈ ಬೆಳವಣಿಗೆಗಳು ಭಾರತದ ಪ್ರಜಾಪ್ರಭುತ್ವ ಸಂಸ್ಥೆಗಳಿಗೆ ದೊಡ್ಡ ಸವಾಲಾಗಿವೆ ಎಂದು ತಿಳಿಸಿದ್ದಾರೆ.

ಸಾಮಾಜಿಕ ಮಾಧ್ಯಮ ವೇದಿಕೆ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ಗಾಂಧಿ, ಪಶ್ಚಿಮ ಬಂಗಾಳದಲ್ಲಿ ತೃಣಮೂಲ ಕಾಂಗ್ರೆಸ್ ಹಿನ್ನಡೆ ಅನುಭವಿಸಿದ್ದಕ್ಕೆ ಕಾಂಗ್ರೆಸ್ ಮತ್ತು ಇತರ ವಿರೋಧ ಪಕ್ಷದ ವಲಯಗಳಲ್ಲಿ ವ್ಯಕ್ತವಾಗುತ್ತಿರುವ ಸಂತಸದ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. "ಕಾಂಗ್ರೆಸ್‌ನಲ್ಲಿರುವ ಕೆಲವು ನಾಯಕರು ಮತ್ತು ಇತರರು ಟಿಎಂಸಿ ಸೋಲಿನ ಬಗ್ಗೆ ಸಂಭ್ರಮಿಸುತ್ತಿದ್ದಾರೆ," ಎಂದು ಬರೆದಿರುವ ಅವರು, ಈ ಫಲಿತಾಂಶಗಳ ವ್ಯಾಪಕ ಪರಿಣಾಮಗಳನ್ನು ಮರುಪರಿಶೀಲಿಸುವಂತೆ ಮನವಿ ಮಾಡಿದ್ದಾರೆ.

ಆಡಳಿತಾರೂಢ ಭಾರತೀಯ ಜನತಾ ಪಕ್ಷ (ಬಿಜೆಪಿ) ವಿರುದ್ಧ ಗಂಭೀರ ಆರೋಪಗಳನ್ನು ಮಾಡಿರುವ ಅವರು, "ಅಸ್ಸಾಂ ಮತ್ತು ಬಂಗಾಳದ ಜನಾದೇಶದ ಕಳವು, ಭಾರತೀಯ ಪ್ರಜಾಪ್ರಭುತ್ವವನ್ನು ನಾಶಪಡಿಸುವ ಬಿಜೆಪಿಯ ಕಾರ್ಯತಂತ್ರದ ಒಂದು ದೊಡ್ಡ ಹೆಜ್ಜೆಯಾಗಿದೆ ಎಂಬುದನ್ನು ಎಲ್ಲರೂ ಸ್ಪಷ್ಟವಾಗಿ ಅರ್ಥಮಾಡಿಕೊಳ್ಳಬೇಕು ಎಂದು ಹೇಳಿದ್ದಾರೆ. ವಿರೋಧ ಪಕ್ಷಗಳ ನಡುವೆ ಒಗ್ಗಟ್ಟಿನ ಅಗತ್ಯವನ್ನು ಒತ್ತಿಹೇಳಿದ ಅವರು, "ಕ್ಷುಲ್ಲಕ ರಾಜಕೀಯವನ್ನು ಬದಿಗಿಡಿ. ಇದು ಒಂದು ಪಕ್ಷ ಅಥವಾ ಇನ್ನೊಂದು ಪಕ್ಷದ ವಿಷಯವಲ್ಲ. ಇದು ದೇಶದ ಪ್ರಜಾಪ್ರಭುತ್ವದ ವಿಷಯ," ಎಂದು ಗಂಭೀರವಾಗಿ ತಿಳಿಸಿದ್ದಾರೆ.


ಚುನಾವಣಾ ಫಲಿತಾಂಶವನ್ನು ಕೇವಲ ರಾಜ್ಯಮಟ್ಟದ ಸ್ಪರ್ಧೆಗಳಾಗಿ ನೋಡುವ ಬದಲು, ದೊಡ್ಡ ಸೈದ್ಧಾಂತಿಕ ಮತ್ತು ಸಾಂಸ್ಥಿಕ ಯುದ್ಧದ ಭಾಗವಾಗಿ ಬಿಂಬಿಸಲು ಕಾಂಗ್ರೆಸ್ ನಾಯಕತ್ವ ಪ್ರಯತ್ನಿಸುತ್ತಿದೆ ಎಂಬುದನ್ನು ರಾಹುಲ್ ಅವರ ಈ ಮಧ್ಯಪ್ರವೇಶ ಪ್ರತಿಬಿಂಬಿಸುತ್ತದೆ. ವಿರೋಧ ಪಕ್ಷಗಳ ನಡುವಿನ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು, ಪ್ರಜಾಪ್ರಭುತ್ವದ ಮೌಲ್ಯಗಳನ್ನು ರಕ್ಷಿಸಲು ಒಗ್ಗೂಡುವಂತೆ ಅವರು ಕರೆ ನೀಡಿದ್ದಾರೆ.

## ಕಾಂಗ್ರೆಸ್‌ಗೆ ಆತ್ಮಾವಲೋಕನ ಅಗತ್ಯ: ತರೂರ್



**ನವದೆಹಲಿ, ಮೇ 5:** ನರೇಂದ್ರ ಮೋದಿ ಮತ್ತು ಅಮಿತ್ ಶಾ ಅವರ ಚುನಾವಣಾ ತಂತ್ರಗಳು ವಿಶೇಷವಾಗಿ ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ರಾಜ್ಯಗಳಲ್ಲಿ ಉತ್ತಮವಾಗಿತ್ತು ಎಂದು ಸಂಸದ ಶಶಿ ತರೂರ್ ಹೊಗಳಿದ್ದಾರೆ. ಪಂಚರಾಜ್ಯಗಳ ಚುನಾವಣಾ ಫಲಿತಾಂಶದ ಕುರಿತು ಪ್ರತಿಕ್ರಿಯಿಸಿರುವ ಅವರು, ಮೋದಿ ಮತ್ತು ಅಮಿತ್ ಶಾ ಚುನಾವಣೆಯನ್ನು ಅತ್ಯಂತ ವೃತ್ತಿಪರವಾಗಿ ನಡೆಸುತ್ತಾರೆ. ಅವರಿಂದ ಎಲ್ಲರೂ ಕಲಿಯಬೇಕಾದ ವಿಷಯಗಳಿವೆ. ಆದರೆ ರಾಜಕೀಯ ಸಂದೇಶಗಳು ಜನರನ್ನು ಒಂದಾಗಿಸುವಂತಿರಬೇಕು. ಭಾರತೀಯರನ್ನು ವಿಭಜಿಸುವುದಕ್ಕಿಂತ ಒಂದಾಗಿಸುವ ಸಂದೇಶವೇ ಇರಲಿ ಎಂದು ನಾನು ಆಶಿಸುತ್ತೇನೆ. ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ನಡೆದ ವಿಧಾನಸಭಾ ಚುನಾವಣೆಯ ಮಿಶ್ರ ಫಲಿತಾಂಶಗಳ ಹಿನ್ನೆಲೆ ಕಾಂಗ್ರೆಸ್ ಪಕ್ಷ ಗಂಭೀರ ಆತ್ಮಾವಲೋಕನ ಮಾಡಿಕೊಳ್ಳಬೇಕು. ಕಾಂಗ್ರೆಸ್ ಪಕ್ಷ ತನ್ನ ತಂತ್ರಗಳನ್ನು ಸೂಕ್ಷ್ಮವಾಗಿ ವಿಶ್ಲೇಷಿಸಬೇಕು ಎಂದಿದ್ದಾರೆ. ಇದೇ ವೇಳೆ ಕೇರಳದಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಗೆಲುವು ಸಾಧಿಸಿ, ಎಲ್‌ಡಿಎಫ್ ಆಡಳಿತದ 10 ವರ್ಷಗಳ ಬಳಿಕ ಮತ್ತೆ ಅಧಿಕಾರಕ್ಕೆ ಬಂದಿರುವುದನ್ನು ಅವರು ಸ್ವಾಗತಿಸಿದ್ದಾರೆ.

## ಕಾಂಗ್ರೆಸ್ ಅಭ್ಯರ್ಥಿಗೆ ಬಿದ್ದ ಮತಗಳನ್ನು ತಿದ್ದಲಾಗಿದೆ



■ ಶೃಂಗೇರಿ ಕ್ಷೇತ್ರ ಮರು ಎಣಿಕೆಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಆರೋಪ

**ಬೆಂಗಳೂರು, ಮೇ 5:** ಶೃಂಗೇರಿ ಕ್ಷೇತ್ರದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಬಿದ್ದಿರುವ ಅಂಚೆ ಮತಗಳನ್ನು ತಿದ್ದುವ ಮೂಲಕ ಮರು ಎಣಿಕೆಯಲ್ಲಿ ಅಸಿಂಧುಗೊಳಿಸಲಾಗಿದೆ. ಇಡೀ ದೇಶದಲ್ಲಿ ಇಂತಹ ಅಪರಾಧ ನಡೆದಿಲ್ಲ. ಇದರ ವಿರುದ್ಧ ಕಾನೂನು ಹೋರಾಟ ಮಾಡುತ್ತೇವೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಶೃಂಗೇರಿ ಕ್ಷೇತ್ರದ ಮರುಎಣಿಕೆಯ ಬಗ್ಗೆ ಕೇಳಿದಾಗ, ಚುನಾವಣೆ ಮತ ಎಣಿಕೆ ಸಮಯದಲ್ಲಿ ಪ್ರತಿ ಅಂಚೆ ಮತವನ್ನು ತೆರೆದು ಎರಡೂ ಪಕ್ಷಗಳ ಏಜೆಂಟರು ಹಾಗೂ ಅಧಿಕಾರಿಗಳಿಗೆ ತೋರಿಸಿ ಅದನ್ನು ಮಾನ್ಯ ಮಾಡಿ ಎಣಿಕೆ ಮಾಡಲಾಗಿರುತ್ತದೆ. ಈ ರೀತಿ ಮತ ಎಣಿಕೆ ಮಾಡಿದ ಬಳಿಕ ಬಿಜೆಪಿ ಅಭ್ಯರ್ಥಿ ಅಧಿಕಾರಿಗಳನ್ನು ದುರ್ಬಳಕೆ ಮಾಡಿಕೊಂಡು ಅಂಚೆ ಮತಗಳನ್ನು ತಿದ್ದಲಾಗಿದೆ. ಹೀಗಾಗಿಯೇ ಅವರು ನಿರ್ದಿಷ್ಟ ಮತಗಳ ಬಂಡಲ್ ಅನ್ನೇ ಮರು ಎಣಿಕೆ ಮಾಡಿ ಎಂದು ಪಟ್ಟು ಹಿಡಿದಿದ್ದರು.

ಅಧಿಕಾರಿಗಳು ಹಾಗೂ ಬಿಜೆಪಿ ಅಭ್ಯರ್ಥಿ ಈ ಅಕ್ರಮದಲ್ಲಿ ಭಾಗಿಯಾಗಿದ್ದು, ಗಂಭೀರವಾದ ತನಿಖೆ ನಡೆಯಬೇಕಿದೆ. ಚುನಾವಣಾ ಆಯೋಗವು ಈ ವಿಚಾರದಲ್ಲಿ ನ್ಯಾಯ ಒದಗಿಸಬೇಕಿದೆ.

ಇದು ದೇಶದಲ್ಲೇ ಅತಿದೊಡ್ಡ ಷಡ್ಯಂತ್ರವಾಗಿದೆ. ಕರ್ನಾಟಕದಲ್ಲಿ ಬಿಜೆಪಿ ಇಂತಹ ಕೆಲಸದಲ್ಲಿ ಭಾಗಿಯಾಗಿದ್ದು, ನಾವು ಕಾನೂನಾತ್ಮಕ ಹೋರಾಟ ಮಾಡುತ್ತೇವೆ. ರಾಜಕೀಯ ಹೇಗೆ ಮಾಡಬೇಕು ಎಂದು ನಮಗೆ ಗೊತ್ತಿದೆ ಎಂದು ಕಿಡಿಕಾರಿದರು.

## ಶೃಂಗೇರಿ ಕ್ಷೇತ್ರ ಅಂಚೆ ಮತ ಮರುಎಣಿಕೆಯಲ್ಲಿ ಕಳವು

### ಪ್ರಜಾಪ್ರಭುತ್ವಕ್ಕೆ ಬಗೆದ ದ್ರೋಹ: ಬಿಜೆಪಿಯಿಂದ ಪಿತೂರಿ ಎಂದು ಸಿಎಂ ಸಿದ್ದರಾಮಯ್ಯ ಕಿಡಿ



**ಬೆಂಗಳೂರು, ಮೇ 5:** ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆಮತಗಳ ಮರುಎಣಿಕೆಯಲ್ಲಿ ಬಿಜೆಪಿ "ಪಿತೂರಿ" ನಡೆಸಿದ್ದು, ವ್ಯವಸ್ಥಿತವಾಗಿ ಮತಗಳನ್ನು ಕಳವು ಮಾಡಲಾಗಿದೆ. ಇದು ಪ್ರಜಾಪ್ರಭುತ್ವಕ್ಕೆ ಬಗೆದ ದ್ರೋಹ ಎಂದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕಿಡಿಕಾರಿದ್ದಾರೆ.

2023ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಟಿ.ಡಿ. ರಾಜೇಗೌಡ ಅವರು 201 ಮತಗಳ ಅಂತರದಿಂದ ಜಯಗಳಿಸಿದ್ದರು. ಆದರೆ, ಹೈಕೋರ್ಟ್ ಆದೇಶದಂತೆ ನಡೆದ ಮರು ಎಣಿಕೆಯ ಸಂದರ್ಭದಲ್ಲಿ ದಾಖಲೆಗಳನ್ನು ತಿದ್ದುವ ಮೂಲಕ ಫಲಿತಾಂಶವನ್ನು ಬದಲಿಸಲು ಯತ್ನಿಸಲಾಗಿದೆ ಎಂದು ಆರೋಪಿಸಿದರು.

ಹೈಕೋರ್ಟ್ ಆದೇಶದಂತೆ ನಡೆದ ಮರು ಎಣಿಕೆಯಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ ವಿವರಿಸಿದ ಮುಖ್ಯಮಂತ್ರಿಗಳು, "ಮೊದಲು ಸಿಂಧು ಎಂದು ಘೋಷಿತವಾಗಿದ್ದ ರಾಜೇಗೌಡರಿಗೆ ಲಭಿಸಿದ 255 ಅಂಚೆ ಮತಗಳನ್ನು ಮರು ಎಣಿಕೆಯಲ್ಲಿ ಅಸಿಂಧು ಮಾಡಲಾಗಿದೆ. ಅಧಿಕಾರಿಗಳ ಪ್ರಭಾವ ಬಳಸಿ ಟ್ರಂಕ್‌ನಲ್ಲಿದ್ದ ಮತಪತ್ರಗಳನ್ನು ತಿದ್ದಿರುವುದು ಸ್ಪಷ್ಟವಾಗಿದೆ. ರಾಜೇಗೌಡರ ಮತಗಳು ಮಾತ್ರ ಹೇಗೆ ಅಸಿಂಧುವಾಗುತ್ತವೆ. ಇದು ಬಿಜೆಪಿಯ ಅಧಿಕಾರ ದುರುಪಯೋಗಕ್ಕೆ ಸಾಕ್ಷಿ" ಎಂದು ದೂರಿದರು. 2023ರಲ್ಲಿ ಚುನಾವಣಾ ಅಧಿಕಾರಿಗಳು ಮತ್ತು ಏಜೆಂಟರು ಒಪ್ಪಿಕೊಂಡಿದ್ದ ಮತಗಳು ಈಗ ಮರು ಎಣಿಕೆಯಲ್ಲಿ ತಿರುಚಲ್ಪಟ್ಟಿರುವುದು ಗಂಭೀರ ಕ್ರಿಮಿನಲ್ ಅಪರಾಧ ಎಂದರು.

ಕೋತಿ ತಾನು ತಿಂದು ಮೇಕೆ ಬಾಯಿಗೆ ಒರೆಸಿದಂತೆ ಬಿಜೆಪಿಯವರು ವರ್ತಿಸುತ್ತಿದ್ದಾರೆ. ಚಿಲುಮೆ ಹಗರಣದಿಂದ ಹಿಡಿದು ಈಗಿನ ವೋಟ್ ಚೋರಿವರೆಗೆ ಬಿಜೆಪಿಗೆ ಸಂವಿಧಾನ ಮತ್ತು ನಿಷ್ಪಕ್ಷಪಾತ ಚುನಾವಣೆಯ ಮೇಲೆ ನಂಬಿಕೆಯೇ ಇಲ್ಲ ಎಂದು ಲೇವಡಿ ಮಾಡಿದರು. ಕೇಂದ್ರ ಸಚಿವರು ಮತ್ತು ರಾಜ್ಯ ಬಿಜೆಪಿ ನಾಯಕರು ಈ ಅಕ್ರಮವನ್ನು ಸಮರ್ಥಿಸಿಕೊಳ್ಳುತ್ತಿರುವುದು ದುರದೃಷ್ಟಕರ ಎಂದ ಅವರು, ಆಳಂದದಲ್ಲಿ ನೈಜ ಮತದಾರರನ್ನು ಬಿಟ್ಟಿದ್ದ ಮತ್ತು ಮತದಾರರ ಪಟ್ಟಿ ತಿದ್ದುಪಡಿ ಮಾಡಲು ಹೊರಟಿದ್ದ ಬಿಜೆಪಿ ಹಳೆಯ ಚಾಳಿಯನ್ನೇ ಮುಂದುವರಿಸಿದೆ ಎಂದು ವಾಗ್ದಾಳಿ ನಡೆಸಿದರು.

**ನಿತ್ಯ ಪಂಚಾಂಗದ 6.05.2026 ಬುಧವಾರ**



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ಚೈತ್ರ-ವೈಶಾಖ ಮಾಸ

ವೈಶಾಖ ಬಹುಳ, ಪಂಚಮಿ, ಮೂಲ ನಕ್ಷತ್ರ, ಸಿದ್ದಾಪುರ ರಥ, ನರಕ ಆದಿಶಕ್ತಿ ಲಕ್ಷ್ಮೀ ವರ್ಧಂತಿ, ಕೊಕ್ಕಡ ರಥ, ಸಂತೆಸರಗೂರು ಚೌಡೇಶ್ವರೀ ಉತ್ಸವ

| ದಿನ | ರಾಹುಕಾಲ | ಯಮಗಂಡ | ಗುಳಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಕಾಂಗ್ರೆಸ್ ಪಕ್ಷ ಗೆದ್ದರೆ ಇವಿಎಂ ಸರಿಯಿದೆ, ಸೋತರೆ ಇವಿಎಂ ಸರಿಯಿಲ್ಲ

**ಪಾಪದ ಹಣದಿಂದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದಿದೆ, ಕಾಂಗ್ರೆಸ್ ಪಕ್ಷದ ಪಾಪದ ಕೊಡ ತುಂಬಿದೆ-ಕೇಂದ್ರ ಸಚಿವ ವಿ.ಸೋಮಣ್ಣ**



ವಿಜಯನಗರ, ಮೇ 5: ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಮೂರು ರಾಜ್ಯಗಳಲ್ಲಿ ಬಿಜೆಪಿ ಪಕ್ಷ ಜಯಭೇರಿ ಬಾರಿಸಿದ ಹಿನ್ನಲೆಯಲ್ಲಿ ಮಾಧ್ಯಮಗೋಷ್ಠಿ ಏರ್ಪಡಿಸಿದ್ದರು.

ಮೂರು ರಾಜ್ಯಗಳಲ್ಲಿ ಪ್ರಧಾನಿ ನರೇಂದ್ರಮೋದಿ, ಗೃಹ ಸಚಿವ ಅಮಿತ್ ಷಾ, ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ರವರ ನೇತೃತ್ವದಲ್ಲಿ ಬಿಜೆಪಿ ಜಯಭೇರಿ ಬಾರಿಸಿದೆ. ಕರ್ನಾಟಕದ ಜನತೆಯ ಪರವಾಗಿ ಅಭಿನಂದನೆ ಸಲ್ಲಿಸಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಮತದಾರರು ಐತಿಹಾಸಿಕ ತೀರ್ಪು ನೀಡಿದ್ದಾರೆ. 209ಸ್ಥಾನಗಳಲ್ಲಿ ಬಿಜೆಪಿ ಪಕ್ಷ ಗೆದ್ದಿದೆ.

140ಕೋಟಿ ಜನರ ಬದುಕನ್ನು ರೂಪಿಸಲು, ಸಾರ್ವಭೌಮತೆಯಿಂದ ಬದುಕಲು ಬಿಜೆಪಿ ಪಕ್ಷ ಸಹಕಾರ ನೀಡಿದೆ.

ಟಿ.ಎಂ.ಸಿ. ಗೂಂಡಾಗಿರಿ, ಹಿಂಸಾಚಾರ ದುರಾಡಳಿತಕ್ಕೆ ಬಂಗಾಳದ ಜನರು ಕೊನೆ ಹಾಡಿದ್ದಾರೆ. ಸಾಬ್ ಕಾ ಸಾತ್, ಸಬ್ ಕಾ ವಿಕಾಸ್ ಎಂಬ ಸಿದ್ದಾಂತದಲ್ಲಿ ಬಿಜೆಪಿ ಪಕ್ಷ ನಂಬಿದೆ.

ಟಿಎಂಸಿ, ಕಾಂಗ್ರೆಸ್, ಡಿ.ಎಂ.ಕೆ.ಮಹಿಳಾ ಮೀಸಲು ಮಸೂದೆ ವಿರೋಧಿ ಮಾಡಿದರು ಇದರ ಪ್ರತಿಫಲ ಅನುಭವಿಸುತ್ತಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಸ್ವಾಮಿ ವಿವೇಕಾನಂದ, ಬಂಕಿಮಚಂದ್ರ ಚಟ್ಟೋಪಾಧ್ಯಾಯ ಸೇರಿದಂತೆ ಅನೇಕ ಮಹನೀಯರ ಪುಣ್ಯಭೂಮಿಯನ್ನು ನರಕ ಮಾಡಿದರು ಮಮತಾ ಬ್ಯಾನರ್ಜಿ.

ಪ್ರಧಾನಿ ನರೇಂದ್ರಮೋದಿ ಅವರ ಜನಪ್ರಿಯ ಯೋಜನೆಗಳನ್ನು ಪಶ್ಚಿಮ ಬಂಗಾಳದಲ್ಲಿ ಅನುಷ್ಠಾನ ಮಾಡಲಿಲ್ಲ. ಟಿ.ಎಂ.ಸಿ. ಪಕ್ಷ ಬಾಂಗ್ಲ ನುಸುಳುಕೋರರನ್ನು ದೇಶದ ಒಳಗೆ ಬಿಟ್ಟುಕೊಂಡಿದ್ದೀರಿ.

ಭವಿಷ್ಯ ಭಾರತ ಅಭಿವೃದ್ಧಿಯಲ್ಲಿ ಪಶ್ಚಿಮ ಬಂಗಾಳ ಸಹ ಅಭಿವೃದ್ಧಿಯಾಗಲಿದೆ. ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿಯಲ್ಲಿ ಜಯಭೇರಿ ಬಾರಿಸಿದೆ. ಹೆಣ್ಣು ಮಕ್ಕಳ ಅಧಿಕಾರ ಮೊಟಕು ಮಾಡಿದ ವಿರೋಧ ಪಕ್ಷದವರಿಗೆ ರಾಷ್ಟ್ರದ ಜನರು ಬುದ್ಧಿ ಕಲಿಸಿದ್ದಾರೆ ಎಂದು ಹೇಳಿದ್ದಾರೆ.

ಮಹಿಳೆಯರು ಬಿಜೆಪಿ ಪಕ್ಷದ ಪರ ನಿಂತಿದ್ದರು. ಪಾಪದ ಕೊಡ ತುಂಬಿದ ಟಿ.ಎಂ.ಸಿ. ಪಕ್ಷಕ್ಕೆ ಮಹಿಳೆಯರಿಗೆ ಸರಿಯಾಗಿ ಪಾಠ ಕಲಿಸಿದ್ದಾರೆ.

ಮಹಿಳಾ ಸಹಾಯವಾಣಿ, ಮಹಿಳಾ ಪರ ಯೋಜನೆಗಳು, ಜಲಜೀವನ್ ಮಿಷನ್, ಪಿ.ಎಂ.ಕಿಸಾನ್ ಯೋಜನೆ, ಪಿ.ಎಂ.ಅವಾಜ್ ಯೋಜನೆ, ಗ್ರಾಮ ಸಡಾಕ್, ಮತ್ತು ಶಿಕ್ಷಣ ಮೂಲಸೌಕರ್ಯ ಯೋಜನೆಯನ್ನು ತಡೆಹಿಡಿದ ಟಿ.ಎಂ.ಸಿ.ಪಕ್ಷ ಪಶ್ಚಿಮ ಬಂಗಾಳ ಹಿಂದುಳಿಯಲು ಕಾರಣವಾಯಿತು.

ಪಶ್ಚಿಮ ಬಂಗಾಳದಲ್ಲಿ ಟಿ.ಎಂ.ಸಿ.ಸರ್ಕಾರ 1ಲಕ್ಷದ 16ಸಾವಿರ ಕೋಟಿ ರೂಪಾಯಿ ಹಣವನ್ನು ಪೋಲು ಮಾಡಿದರು ಇದರ ಕುರಿತು ತನಿಖೆಯಾಗಬೇಕು ಎಂದು ಸೋಮಣ್ಣ ಒತ್ತಾಯಿಸಿದ್ದಾರೆ.

ಕೇಂದ್ರ ಸರ್ಕಾರ ಕೊಟ್ಟ ಯೋಜನೆಗಳನ್ನು ತಿರಸ್ಕಾರ ಮಾಡಿದರು. ಮಮತಾ ಬ್ಯಾನರ್ಜಿ ತನ್ನದೇ ಸಾಮ್ರಾಜ್ಯ ಕಟ್ಟಿಕೊಂಡು ರಾಜ್ಯವನ್ನು ಹಾಳು ಮಾಡಿದರು.


ಕಾಂಗ್ರೆಸ್ ಪಕ್ಷದವರು ಮಾಡಿದ ಪಾಪದ ಕೆಲಸ, ಸಂಚಿನಿಂದ ಮಹಿಳಾ ಮೀಸಲಾತಿ ವಿರೋಧಿಯಲ್ಲಿ ಪ್ರಮುಖ ಪಾತ್ರವಹಿಸಿದ ಡಿಎಂಕೆ ಆಮ್ ಆದ್ಮಿ ಪಕ್ಷ, ಟಿ.ಎಂ.ಸಿ.ಎಲ್ಲ ಪಕ್ಷಗಳಿಗೆ ಜನರು ಪಾಠ ಕಲಿಸಿದ್ದಾರೆ.

ಎಲ್ಲಿ ಕಾಂಗ್ರೆಸ್ ಸೋಲುತ್ತದೆ ಅಲ್ಲಿ ಇವಿಎಂ ಸರಿಯಿಲ್ಲ, ಕಾಂಗ್ರೆಸ್ ಪಕ್ಷ ಗೆದ್ದರೆ ಇವಿಎಂ ಸರಿಯಿರುತ್ತದೆ.

ಪಾಪದ ಹಣದಲ್ಲಿ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸಿದೆ. ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ನಾಮಾವಶೇಷವಾಗಲಿದೆ ಎಂದಿದ್ದಾರೆ.

# ಜೀವರಾಜ್‌ಗೆ ಪ್ರಮಾಣವಚನ ಬೋಧನೆಗೆ ಸ್ಪೀಕರ್ ವಿಳಂಬ

**ರಾಜ್ಯಪಾಲರೇ ಪ್ರಮಾಣವಚನ ಬೋಧಿಸಲು ಪ್ರತಿಪಕ್ಷ ನಾಯಕ ಅಶೋಕ್ ಮನವಿ**



ಶೃಂಗೇರಿ ಕ್ಷೇತ್ರದ ಫಲಿತಾಂಶ ಪ್ರಕಟಣೆ ನಂತರದ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಅವರು ಶೃಂಗೇರಿ ಶಾಸಕ ಜೀವರಾಜ್ ಜತೆ ಮಂಗಳವಾರ ಮಧ್ಯಾಹ್ನ ಲೋಕಭವನಕ್ಕೆ ತೆರಳಿ ರಾಜ್ಯಪಾಲರಿಗೆ ಮನವಿ ಸಲ್ಲಿಸಿ, ಮಧ್ಯ ಪ್ರವೇಶಕ್ಕೆ ಮನವಿ ಮಾಡಿದರು.

ಬೆಂಗಳೂರು, ಮೇ 5: ಶೃಂಗೇರಿ ಶಾಸಕ ಡಿ.ಎನ್.ಜೀವರಾಜ್ ಅವರಿಗೆ ಸ್ಪೀಕರ್ ಯು.ಟಿ.ಖಾದರ್ ಪ್ರಮಾಣವಚನ ಬೋಧಿಸಲು ತಡಮಾಡುತ್ತಿದ್ದಾರೆ. ಆದ್ದರಿಂದ ರಾಜ್ಯಪಾಲರೇ ನೇರವಾಗಿ ಪ್ರಮಾಣವಚನ ಬೋಧಿಸಲು ಕೋರಿದ್ದೇವೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ರಾಜ್ಯಪಾಲರನ್ನು ಭೇಟಿಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶೃಂಗೇರಿ ವಿಧಾನಸಭಾ ಕ್ಷೇತ್ರದ ಮತ ಮರುಎಣಿಕೆಯಲ್ಲಿ ಬಿಜೆಪಿಯ ಡಿ.ಎನ್.ಜೀವರಾಜ್ ಶಾಸಕರು ಎಂಬ ಫಲಿತಾಂಶ ಬಂದಿದೆ. ಚುನಾವಣಾ ಆಯೋಗದಿಂದ ಎಲ್ಲ ಶಾಸಕರಿಗೆ ಪ್ರಮಾಣ ಪತ್ರ ನೀಡುವಂತೆ ಇವರಿಗೂ ಪ್ರಮಾಣಪತ್ರ ಸಿಕ್ಕಿದೆ. ರಾಜ್ಯ ಸರ್ಕಾರದ ರಾಜ್ಯಪತ್ರದ ಆದೇಶವೂ ಬಂದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಎಲ್ಲ ಶಾಸಕರು ಇದೇ ರೀತಿ ಶಾಸಕರು ಎನಿಸಿಕೊಳ್ಳುತ್ತಾರೆ. ಈ ಕುರಿತು ಸಭಾಧ್ಯಕ್ಷ ಯು.ಟಿ.ಖಾದರ್ ಅವರಿಗೆ ಫೋನ್ ಕರೆ ಮಾಡಿ ಮಾತಾಡಲು ಯತ್ನಿಸಿದರೆ ಬೇಕೆಂದೇ ಕರೆ ಸ್ವೀಕರಿಸಲಿಲ್ಲ. ಈಗ ಭೇಟಿ ಮಾಡಿದರೆ ನನಗೆ ಕಾನೂನಿನ ಬೋಧನೆ ಮಾಡುತ್ತಿದ್ದಾರೆ. ಸ್ಪೀಕರ್ ಕೂಡ ಇದೇ ರೀತಿ ಶಾಸಕರಾಗಿ ಆಯ್ಕೆಯಾಗಿದ್ದಾರೆ.

ಹಾಗೆ ಆಯ್ಕೆಯಾಗುವಾಗ ಅವರೇನೂ ಕೋರ್ಟ್‌ಗೆ ಹೋಗಿರಲಿಲ್ಲ. ಯಾವುದೇ ಶಾಸಕರ ವಿರುದ್ಧ ಕೋರ್ಟ್‌ಗೆ ಹೋಗಲು 45 ದಿನಗಳ ಕಾಲಾವಕಾಶವಿದ್ದರೂ ಪ್ರಮಾಣವಚನಕ್ಕೆ ಅದು ಅಡ್ಡಿಯಾಗುವುದಿಲ್ಲ. ಆದರೆ ಸ್ಪೀಕರ್ ಯು.ಟಿ.ಖಾದರ್ ಮಾತ್ರ ಪ್ರಮಾಣವಚನಕ್ಕೆ ಅವಕಾಶ ಮಾಡಿಕೊಡದೆ ಹೊಸ ಸಂಪ್ರದಾಯ ಆರಂಭಿಸಿದ್ದಾರೆ ಎಂದು ದೂರಿದರು.

ಜೀವರಾಜ್ ಅವರ ವಿರುದ್ಧದ ದೂರಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಛೀಮಾರಿ ಹಾಕಿದೆ. ಕಾಂಗ್ರೆಸ್‌ನವರೇ ದೊಡ್ಡ ಡಕಾಯಿತಿ ಮಾಡುತ್ತಾರೆ. ಮತ ಎಣಿಕೆ ವೇಳೆ ಚುನಾವಣಾಧಿಕಾರಿಗೆ ಸಿದ್ದರಾಮಯ್ಯ ಅಥವಾ ಡಿ.ಕೆ.ಶಿವಕುಮಾರ್ ಕರೆಮಾಡಿ ಒತ್ತಡ ಹೇರಿದ್ದಾರೆಯೇ ಎಂದು ಸಿಬಿಐ ತನಿಖೆ ಆಗಬೇಕಿದೆ. ಫಲಿತಾಂಶವನ್ನು ಕೋರ್ಟ್‌ಗೆ ಸಲ್ಲಿಸಿ ಎಂದು ಎಲ್ಲೂ ಹೇಳಿಲ್ಲ. ಫಲಿತಾಂಶವನ್ನು ಕೂಡಲೇ ಪ್ರಕಟಿಸಿ ಎಂಬ ಸೂಚನೆ ಇದೆ. ಇಲ್ಲಿ ಸ್ಪೀಕರ್ ಭೇಟಿಯಾಗಿ ಕೇಳಿದರೆ, ನಾಳೆ ಬಾ ನೋಡೋಣ, ಕಾನೂನು ಸಲಹೆ ಪಡೆಯಬೇಕಿದೆ ಎನ್ನುತ್ತಾರೆ. ಹಾಗಿದ್ದರೆ 224 ಶಾಸಕರ ಬಗ್ಗೆಯೂ ಕಾನೂನು ಸಲಹೆ ಪಡೆಯಬೇಕಿತ್ತು ಎಂದರು.

ಸಂವಿಧಾನದ ವಿಧಿ 188 ಪ್ರಕಾರ, ಪ್ರಮಾಣವಚನವನ್ನು ರಾಜ್ಯಪಾಲರು ಬೋಧಿಸುತ್ತಾರೆ. ಸ್ಪೀಕರ್ ಇಲ್ಲವಾದರೆ ಬೇರೆಯವರ ಹೆಸರು ಸೂಚಿಸುವ ಅಧಿಕಾರ ರಾಜ್ಯಪಾಲರಿಗಿದೆ. ಆದ್ದರಿಂದ ಸ್ಪೀಕರ್ ಬದಲು ನೀವೇ ಪ್ರಮಾಣವಚನ ಬೋಧಿಸಿ ಎಂದು ರಾಜ್ಯಪಾಲರಿಗೆ ಮನವಿ ಮಾಡಿದ್ದೇವೆ. ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ಸರ್ಕಾರ ಹೀಗೆ ಮಾಡಿದಾಗ ಇಬ್ಬರು ಬಿಜೆಪಿ ಶಾಸಕರು ರಾಜ್ಯಪಾಲರಿಗೆ ಕೋರಿದ್ದರು. ಅದೇ ರೀತಿ ನಾವು ಕೂಡ ಕೋರಿದ್ದೇವೆ. ಈ ಪ್ರಕ್ರಿಯೆ ನಡೆಯದೇ ಇದ್ದಲ್ಲಿ ಸ್ಪೀಕರ್ ವಿರುದ್ಧ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ಕೊಟ್ಟರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕೈ ಕೆಳಗಿನ ಅಧಿಕಾರಿಗಳು ಪೇಮೆಂಟ್ ಗಿರಾಕಿಗಳು ಅಂದಮೇಲೆ ಅವರೇ ಟ್ಯಾಂಪರ್ ಮಾಡಲು ಹೇಗೆ ಸಾಧ್ಯ. ಜೀವರಾಜ್ ಸೋತು ಎಂಟು ವರ್ಷವಾಗಿರುವಾಗ ಅವರ ಮಾತನ್ನು ಅಧಿಕಾರಿಗಳು ಕೇಳಲು ಸಾಧ್ಯವೇ ಅಧಿಕಾರಿಗಳು ಮುಖ್ಯಮಂತ್ರಿಯ ಮಾತನ್ನು ಕೇಳುತ್ತಾರೆ. ಶೃಂಗೇರಿ ಕ್ಷೇತ್ರ ವೋಟ್ ಚೋರಿಗೆ ಉದಾಹರಣೆಯಾಗಿದ್ದು, ಇಡೀ ಸರ್ಕಾರ ವಜಾ ಮಾಡಬೇಕಿದೆ. ಎಲ್ಲ ಕಡೆ ಮತಗಳ್ಳತನ ಆಗುತ್ತಿದೆ ಎಂದರೆ ಸರ್ಕಾರದ ಎಲ್ಲ ಅಧಿಕಾರಿಗಳು ಡಕಾಯಿತರು ಎನ್ನಬೇಕಾಗುತ್ತದೆ. ಎಲ್ಲ ಕಡೆ ಸಿಸಿಟಿವಿ ಕ್ಯಾಮರಾ ಇರುವಾಗ ಕಳ್ಳತನವಾಗಲು ಸಾಧ್ಯವಿಲ್ಲ ಎಂದರು.

ತಮಿಳುನಾಡಿನಲ್ಲಿ ಕಾಂಗ್ರೆಸ್ ಊಟ ಸಿಗುವ ಕಡೆ ಓಡುತ್ತಿದೆ. ಈಗ ನಟ ವಿಜಯ್ ಬಳಿ ಹೋಗಿದ್ದಾರೆ. ಡಿಎಂಕೆಗೆ ಕಾಂಗ್ರೆಸ್ ಕೈಕೊಡುವ ಲಕ್ಷಣ ಕಂಡುಬಂದಿದೆ. ಕಾಂಗ್ರೆಸ್ ಗೆ ನ್ಯಾಯ–ನೀತಿ ಇಲ್ಲದೆ ಗೆದ್ದ ಎತ್ತಿನ ಬಾಲ ಹಿಡಿಯುತ್ತಿದ್ದಾರೆ. ಹಿಂದುತ್ವದ ವಿರುದ್ಧ ಮಾತಾಡಿದ ಉದಯ್ ಹಾಗೂ ಸ್ಟಾಲಿನ್ ಸೋತಿದ್ದಾರೆ. ಹಿಂದುಗಳನ್ನು ಕೆಣಕಿದರೆ ಏನಾಗುತ್ತದೆ ಎಂದು ಇದರಿಂದ ತಿಳಿಯುತ್ತದೆ ಎಂದರು.



ನಾಗರಿಕರ ಸುಗಮ ಪ್ರಯಾಣಕ್ಕೆ ಅನುಕೂಲವಾಗುವಂತೆ, ರಾಮನಗರ ನಿಲ್ದಾಣದಲ್ಲಿ ಹೆಚ್ಚುವರಿ ನಿಲುಗಡೆಯೊಂದಿಗೆ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಬೆಂಗಳೂರು – ಮೈಸೂರು ಒಡೆಯರ್ ಸೂಪರ್ ಫಾಸ್ಟ್ ಎಕ್ಸ್‌ಪ್ರೆಸ್ ರೈಲಿಗೆ (ರೈಲು ಸಂಖ್ಯೆ. 12614) ಮಂಗಳವಾರ ಕೇಂದ್ರ ಸಚಿವ ವಿಸೋಮಣ್ಣ ಚಾಲನೆ ನೀಡಿದರು. ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಸಂಸದ ಡಾ.ಸಿ.ಎನ್.ಮಂಜುನಾಥ್, ಶಾಸಕ ಎಚ್.ಎ ಇಕ್ಬಾಲ್ ಹುಸೇನ್, ವಿಧಾನಪರಿಷತ್ ಸದಸ್ಯ ಎಚ್.ಪಿ.ಸುಧಾಮದಾಸ್, ರಾಮನಗರ ನಗರಪಾಲಿಕೆ ಅಧ್ಯಕ್ಷ ಕೆ.ಶೇಷಾದ್ರಿ, ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಪ್ರವೀಣ್ ಕಾತರಕಿ ಮುಂತಾದವರು ಇದ್ದರು.

# ಸ್ಟಾರ್ಟ್‌ಅಪ್‌ಗಳ ಸಂಶೋಧನೆಗೆ ವಿಶ್ವ ಮನ್ನಣೆ ಒದಗಿಸಲು ಒಪ್ಪಂದ

**ಜೀವವಿಜ್ಞಾನ ಕ್ಷೇತ್ರದಲ್ಲಿ ಕರ್ನಾಟಕವನ್ನು ಜಾಗತಿಕ ಹಬ್ ಆಗಿ ಗುರುತಿಸಲು ಸಹಕಾರಿ: ಐಟಿಬಿಟಿ ಇಲಾಖೆ ಕಾರ್ಯದರ್ಶಿ ಡಾ. ಎನ್. ಮಂಜುಳಾ**

ಬೆಂಗಳೂರು, ಮೇ 5: ಕರ್ನಾಟಕದ ನಾವೀನ್ಯತಾ ಪರಿಸರ ವ್ಯವಸ್ಥೆಯನ್ನು ಬಲಪಡಿಸುವ ಮಹತ್ವದ ಹೆಜ್ಜೆಯಾಗಿ ಹಾಗೂ ಸ್ಟಾರ್ಟ್‌ಅಪ್‌ಗಳ ಸಂಶೋಧನೆಗಳಿಗೆ ಜಾಗತಿಕ ಮಾನ್ಯತೆ ಒದಗಿಸುವ ಉದ್ದೇಶದಿಂದ ಬೆಂಗಳೂರು ಬಯೋ–ಇನ್ನೋವೇಷನ್ ಸೆಂಟರ್ ಮತ್ತು ರಾಷ್ಟ್ರೀಯ ಪರೀಕ್ಷೆ ಮತ್ತು ಮಾಪನಾಂಕ ನಿರ್ಣಯ ಪ್ರಯೋಗಾಲಯಗಳ ಮಾನ್ಯತಾ ಮಂಡಳಿ ಜತೆಗೆ ರಾಜ್ಯ ಸರ್ಕಾರದ (ಎಲೆಕ್ಟ್ರಾನಿಕ್ಸ್, ಐಟಿ, ಬಿಟಿ ಇಲಾಖೆ) ಕಾರ್ಯದರ್ಶಿ ಹಾಗೂ ಅಧ್ಯಕ್ಷೆ ಡಾ. ಎನ್. ಮಂಜುಳಾ ಅವರ ಸಮ್ಮುಖದಲ್ಲಿ, ವ್ಯವಸ್ಥಾಪಕ ನಿರ್ದೇಶಕ ಡಾ. ಮೊಹಮ್ಮದ್ ಆದಿಲ್ ಎ.ಎ. ಮತ್ತು ಕ್ವಾಲಿಟಿ ಕಂಟ್ರೋಲ್ ಆಫ್ ಇಂಡಿಯಾ ಸಿಇಒ ಡಾ. ರಮಾನಂದ್ ಶುಕ್ಲಾ ಒಪ್ಪಂದಕ್ಕೆ ಸಹಿ ಹಾಕಿದರು.

ಬಳಿಕ ಮಾತನಾಡಿದ ಡಾ. ಎನ್. ಮಂಜುಳಾ, "ಜೀವ ವಿಜ್ಞಾನ ಕ್ಷೇತ್ರದಲ್ಲಿ ಕರ್ನಾಟಕವನ್ನು ಜಾಗತಿಕ ಹಬ್ ಆಗಿ ಗುರುತಿಸಿಕೊಳ್ಳುವುದಕ್ಕೆ ಈ ಒಪ್ಪಂದ ಬಹಳ ಸಹಕಾರಿಯಾಗಲಿದೆ. ನಾವು ಈಗಾಗಲೇ 512ಕ್ಕೂ ಹೆಚ್ಚಿನ ನಾವೀನ್ಯತಾ ಪ್ರಾಜೆಕ್ಟ್‌ಗಳಿಗೆ ಬೆಂಬಲ ನೀಡಿದ್ದೇವೆ. ಇದರಲ್ಲಿ 24 ಜಾಗತಿಕ ಸ್ಟಾರ್ಟ್‌ಅಪ್‌ಗಳು ಮತ್ತು 74 ಪೇಟೆಂಟ್‌ಗಳು ಸೇರಿವೆ. ಜೈವಿಕ ತಂತ್ರಜ್ಞಾನದಲ್ಲಿ (ಬಯೋ ಟೆಕ್ನಾಲಜಿ) ಬೆಂಗಳೂರು ಬಯೋ–ಇನ್ನೋವೇಷನ್ ಸೆಂಟರ್ ಅನ್ನು ಜಾಗತಿಕ ನಾವೀನ್ಯತಾ ಕೇಂದ್ರವಾಗಿ ಬಲಪಡಿಸಲು ಈ ಒಪ್ಪಂದ ಹೆಚ್ಚು ಅನುಕೂಲಕರವಾಗಿದೆ" ಎಂದರು.

"ಈ ಒಪ್ಪಂದದ ಅನ್ವಯ, ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ಟಾರ್ಟ್‌ಅಪ್‌ಗಳು ಕಟ್ಟುನಿಟ್ಟಿನ ಮಾನ್ಯತಾ ಪ್ರಕ್ರಿಯೆಗಳನ್ನು ಅತ್ಯಂತ ಸರಳವಾಗಿ ಮತ್ತು ತ್ವರಿತವಾಗಿ ಪಡೆಯಲು ಸಾಧ್ಯವಾಗುತ್ತದೆ. ಇದರಿಂದಾಗಿ ಹೊಸ ಸಂಶೋಧನೆಗಳು ಹಾಗೂ ಉತ್ಪನ್ನಗಳ ದೃಢೀಕರಣಕ್ಕೆ ತಗಲುವ ಸಮಯ ಹಾಗೂ ಸಂಕೀರ್ಣತೆ ಗಣನೀಯವಾಗಿ ಕಡಿಮೆಯಾಗಲಿದೆ. ಜತೆಗೆ ಜೈವಿಕ ನಾವೀನ್ಯತೆಗಳನ್ನು ಜಾಗತಿಕ ಮಾರುಕಟ್ಟೆಗೆ ಕೊಂಡೊಯ್ಯಲು ಮತ್ತು ಕ್ಲಿನಿಕಲ್ ಪ್ರಯೋಗಗಳನ್ನು ಬೆಂಬಲಿಸಲು ಆಸ್ಟ್ರೇಲಿಯಾದ ಮೆಲ್ಬರ್ನ್‌ನಲ್ಲಿರುವ ಕಚೇರಿಯನ್ನು ತೆರೆಯುವ ಮೂಲಕ ಶ್ಲಾಘನೀಯ ಸಾಧನೆ ಮಾಡಲಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಿಇಒ ಡಾ. ರಮಾನಂದ್ ಎನ್. ಶುಕ್ಲಾ ಮಾತನಾಡಿ, "ಜಾಗತಿಕ ಮಾರುಕಟ್ಟೆ ಮತ್ತು ಹೂಡಿಕೆಗೆ ಮುಕ್ತ ಅವಕಾಶ ಕಲ್ಪಿಸುವುದಕ್ಕೆ ಈ ರೀತಿಯ ಒಪ್ಪಂದದ ಅವಶ್ಯಕತೆ ಇತ್ತು. ಇದು ಜಾಗತಿಕ ಮಾರುಕಟ್ಟೆ ಪ್ರವೇಶಿಸಲು ಮತ್ತು ಗ್ರಾಹಕರಲ್ಲಿ ನಂಬಿಕೆ ಸೃಷ್ಟಿಸಲು ಸಹಕಾರಿಯಾಗಲಿದೆ. ಪ್ರಾಯೋಗಾಲಯಗಳನ್ನು ಮತ್ತಷ್ಟು ಉನ್ನತ ದರ್ಜೆಗೆ ಏರಿಸುವುದು, ತರಬೇತಿ ಮತ್ತು ಮಾನ್ಯತಾ ಚೌಕಟ್ಟುಗಳಿಗೆ ಈ ಒಪ್ಪಂದ ಬೆಂಬಲ ನೀಡಲಿದೆ" ಎಂದರು. ಸಂಶೋಧನೆ, ನಾವೀನ್ಯತೆ ಮತ್ತು ಜೈವಿಕ ತಂತ್ರಜ್ಞಾನದ ಉದ್ಯಮಶೀಲತೆಗೆ ಕರ್ನಾಟಕವನ್ನು ನೆಚ್ಚಿನ ತಾಣವನ್ನಾಗಿ ರೂಪಿಸುವಲ್ಲಿ ಈ ಉಪಕ್ರಮವು ನಿರ್ಣಾಯಕ ಪಾತ್ರ ವಹಿಸಲಿದೆ ಎಂದು ಅವರು ವಿವರಿಸಿದರು.

ವ್ಯವಸ್ಥಾಪಕ ನಿರ್ದೇಶಕ ಡಾ. ಮೊಹಮ್ಮದ್ ಆದಿಲ್ ಮಾತನಾಡಿ, "ಈ ಒಪ್ಪಂದವು ಶಿಕ್ಷಣ ತಜ್ಞರು, ಸ್ಟಾರ್ಟ್‌ಅಪ್‌ಗಳು ಹಾಗೂ ಕಾರ್ಪೊರೇಟ್ ಸಂಸ್ಥೆಗಳಿಗೆ ಅಂತರಾಷ್ಟ್ರೀಯ ಗುಣಮಟ್ಟದ ಮಾನದಂಡಗಳನ್ನು ಸುಲಭವಾಗಿ ಪಡೆಯಲು ದಾರಿಮಾಡಿಕೊಡಲಿದೆಪ್ರಂ ಯೋಗಾಲಯದ ಗುಣಮಟ್ಟದ ವ್ಯವಸ್ಥೆಗಳು, ಲೆಕ್ಕಪರಿಶೋಧನಾ ಅಭ್ಯಾಸಗಳು, ಮೌಲ್ಯಮಾಪನ ಮತ್ತು ಮಾಪನ ಮಾನದಂಡಗಳ ಬಗ್ಗೆ ವ್ಯವಸ್ಥಿತ ತರಬೇತಿ ಕಾರ್ಯಕ್ರಮಗಳು ಮತ್ತು ತಾಂತ್ರಿಕ ಮಾರ್ಗದರ್ಶನವನ್ನು ಈ ಒಪ್ಪಂದ ತರಲಿದೆ. ಇದು ವಿಶ್ವಾಸಾರ್ಹ, ಮೌಲ್ಯೀಕರಿಸಿದ ಮತ್ತು ವಿಸ್ತರಿಸಬಹುದಾದ ಸ್ಟಾರ್ಟ್‌ಅಪ್‌ಗಳನ್ನು ರೂಪಿಸಲು ನೆರವಾಗಲಿದೆ. ಆವಿಷ್ಕಾರಗಳಿಗೆ ತ್ವರಿತವಾಗಿ ಮಾನ್ಯತೆ ಪಡೆದುಕೊಳ್ಳಲು ಇದು ನೆರವಾಗಲಿದೆ" ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ಪ್ರಧಾನ ವೈಜ್ಞಾನಿಕ ಸಲಹೆಗಾರರ ಕಚೇರಿ ಮತ್ತು ಶಿಕ್ಷಣ ಸಚಿವಾಲಯದ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಪ್ರಾಮಾಣಿಕತೆ ಕೊಡವರ ಡಿಎನ್‌ಎಯಲ್ಲಿಯೇ ಇದೆ: ಬಸವರಾಜ ಬೊಮ್ಮಾಯಿ

**ಕೊಡವರ ಸಂಸ್ಕಾರ ಮತ್ತು ಸಂಸ್ಕೃತಿ ಜಗತ್ತು ಮೆಚ್ಚುವಂತಹದು: ಬಸವರಾಜ ಬೊಮ್ಮಾಯಿ**





ಕೊಡಗಿನ ಮಾದಾಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೊಡವ ಸಮಾಜದ ಸಮುಯದಾಯ ಭವನವನ್ನು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮೈಸೂರು–ಕೊಡಗು ಸಂಸದ ಯದುವೀರ ಒಡೆಯರ್, ಮಾಜಿ ಸಚಿವ ಅಪ್ಪಚ್ಚು ರಂಜನ್, ಮಾದಾಪುರ ಕೊಡವ ಸಮಾಜದ ಅಧ್ಯಕ್ಷ ಮಂಡೆಪಂಡ ಮನು ಮೇದಪ್ಪ ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು.

ಮಡಿಕೇರಿ, ಮೇ 5: ಕೊಡಗಿನ ಜನರು ವೀರರು, ಧೀರರು, ಶೂರರು ಸಮರ್ಥರು ಅಷ್ಟೇ ಅಲ್ಲದೇ ಪ್ರಾಮಾಣಿಕರು. ಕೊಡವರ ಡಿಎನ್‌ಎಯಲ್ಲಿಯೇ ಪ್ರಾಮಾಣಿಕತೆ ಇದೆ. ನಿಮ್ಮ ಸಂಸ್ಕಾರ ಮತ್ತು ಸಂಸ್ಕೃತಿ ಜಗತ್ತು ಮೆಚ್ಚುವಂತಹದು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಕೊಡಗಿನ ಮಾದಾಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೊಡವ ಸಮಾಜದ ಸಮುಯದಾಯ ಭವನವನ್ನು ಉದ್ಘಾಟಿಸಿ ಮಾತನಾಡಿದರು.

ನಮಗೆ ಶಾಸಕ, ಮಂತ್ರಿ, ಸಿಎಂ ಸ್ಥಾನವನ್ನು ಕೊಟ್ಟವರು ನೀವು, ಆ ಸ್ಥಾನದಲ್ಲಿ ಕೂಡಿಸಿದವರು ನೀವು. ನಿಮ್ಮದನ್ನು ನಿಮಗೆ ಕೊಟ್ಟು ಪುಣ್ಯವನ್ನು ಪಡೆಯುತ್ತಿರುವವರು ನಾವು. ಅದಕ್ಕಾಗಿ ನಿಮಗೆ ಕೃತಜ್ಞತೆ ಹೇಳಬೇಕು. ಎರಡನೆಯದಾಗಿ ಯಾರಾದರೂ ಸಹಾಯ ಮಾಡಿದರೆ ಸ್ಮರಣೆ ಮಾಡುವುದು ಮನುಷ್ಯನ ಅತ್ಯಂತ ಶ್ರೇಷ್ಠ ಗುಣ. ಸಣ್ಣಕೆಲಸ ಮಾಡಿದರೂ ಕೂಡ ನೀವು ಬಹಳ ದೊಡ್ಡದಾಗಿ ಸ್ಮರಣೆ ಮಾಡಿದ್ದೀರಿ. ನಾವು ಬೇರೆ ಬೇರೆ ರೀತಿಯಲ್ಲಿ ಕೆಲಸ ಮಾಡಿರುತ್ತೇವೆ. ಎಲ್ಲವನ್ನು ನೆನಪಿಟ್ಟು ಸ್ಮರಣೆ ಮಾಡಿದ್ದಕ್ಕೆ ದೊಡ್ಡವರಾಗಿದ್ದೀರಿ ಎಂದು ಹೇಳಿದರು.


**ಕೊಡವರು ಪ್ರಾಮಾಣಿಕರು**

ಕೊಡಗಿನ ಜನರು ವೀರರು, ಧೀರರು ಶೂರರು ಸಮರ್ಥರು ಜೊತೆಗೆ ಪ್ರಾಮಾಣಿಕರು ಜಗತ್ತಿನಲ್ಲಿ ಏನಾದರೂ ಅತ್ಯಂತ ಕಡಿಮೆ ಇರುವುದು ಪ್ರಾಮಾಣಿಕತೆ. ನಿಮ್ಮ ಡಿಎನ್‌ಎಯಲ್ಲಿಯೇ ಪ್ರಾಮಾಣಿಕತೆ ಇದೆ. ಇದ್ದದ್ದನ್ನು ಇದ್ದ ಹಾಗೆ ಹೇಳುತ್ತೀರಿ, ನೇರ ನುಡಿ ಪ್ರಾಮಾಣಿಕತೆ ಕೊಡವರಲ್ಲಿ ಇದೆ. ನಿಮ್ಮ ಸಂಸ್ಕಾರ ಮತ್ತು ಸಂಸ್ಕೃತಿ ಜಗತ್ತು ಮೆಚ್ಚುವಂತಹದು. ನಾಗರಿಕತೆ ಮತ್ತು ಸಂಸ್ಕೃತಿ ನಡುವಿನ ವ್ಯತ್ಯಾಸ ಬಹಳ ಜನರಿಗೆ ಗೊತ್ತಿಲ್ಲ. ನಾವು ಏನು ಹೊಂದಿದ್ದೇವೆ ಅದು ನಾಗರಿಕತೆ. ಮೊದಲು ಒಣಕೆ ಇತ್ತು. ಬೀಸೋಕಲ್ಲು ಇತ್ತು ಈಗ ಮಿಕ್ಸಿ ಬಂದಿದೆ. ಫ್ಯಾನ್, ಕಾರ್, ಏರೋಪ್ಲೇನ್ ಬಂದಿದೆ. ಇದು ನಾಗರಿಕತೆಯ ಬೆಳವಣಿಗೆ. ಇದು ಒಂದು ಭಾಗ ಅದರ ಜೊತೆಗೆ ನಾವೇನಾಗಿದ್ದೇವೆ ಎನ್ನುವುದು ನಮ್ಮ ಸಂಸ್ಕೃತಿ. ಆದರೆ, ಕೊಡಗಿನಲ್ಲಿ ನಿಮ್ಮ ಸಂಸ್ಕೃತಿ ಬಹಳ ದೊಡ್ಡದಾಗಿದೆ. ಇದು ಒಂದು ಸಮುದಾಯದ ಜೊತೆಗೆ ಬೆರೆತಿದೆ. ಇದು ದೇಶದ ಸಂಸ್ಕೃತಿಯಾದರೆ ಆ ದೇಶದ ಹೆಸರು ವಿಶ್ವವ್ಯಾಪ್ತಿಯಾಗುತ್ತದೆ. ಅದಕ್ಕೆ ನಮ್ಮ ಪಧಾನಿ ನರೇಂದ್ರ ಮೋದಿಯವರು ಅಭಿವೃದ್ಧಿ ಮತ್ತು ಪರಂಪರೆ ಎರಡನ್ನೂ ಬೆಳೆಸಬೇಕು ಎಂದು ಹೇಳುತ್ತಾರೆ.

ಇವತ್ತು ಪರಂಪರೆಯನ್ನು ಉಳಿಸುವುದು ಬಹಳ ಕಷ್ಟ ಆ ಪರಂಪರೆ ಉಳಿಸಿಕೊಂಡು ಹೋಗುವ ಕೆಲಸವನ್ನು ನಿಮ್ಮ ಹಿರಿಯರು, ಯುವಕರು ಮಾಡಿಕೊಂಡು ಹೋಗುತ್ತಿದ್ದೀರಿ ಹೀಗಾಗಿ ನಿಮ್ಮ ಪರಂಪರೆ ಬಗ್ಗೆ ಅಭಿಮಾನ, ಗೌರವ ಇದೆ. ಅದಕ್ಕೆ ಘನತೆ ತಂದು ಕೊಟ್ಟು ನೀವು ಬಹಳ ದೊಡ್ಡ ಸೇವೆ ಮಾಡಿದ್ದೀರಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮೈಸೂರು–ಕೊಡಗು ಸಂಸದ ಯದುವೀರ ಒಡೆಯರ್ , ಮಾಜಿ ಸಚಿವ ಅಪ್ಪಚ್ಚು ರಂಜನ್, ಮಾದಾಪುರ ಕೊಡವ ಸಮಾಜದ ಅಧ್ಯಕ್ಷ ಮಂಡೆಪಂಡ ಮನು ಮೇದಪ್ಪ ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು.

# ಅಸ್ಸಾಂ, ಬಂಗಾಳದಂತೆ ಕರ್ನಾಟಕದಲ್ಲೂ ಚುನಾವಣಾ ಆಯೋಗ ದುರುಪಯೋಗಪಡಿಸಿ ಗೆಲ್ಲಲು ಹುನ್ನಾರ: ಪ್ರಿಯಾಂಕ್ ಖರ್ಗೆ ಆರೋಪ



ಬೆಂಗಳೂರು, ಮೇ 5: ಅಸ್ಸಾಂ ಮತ್ತು ಪಶ್ಚಿಮ ಬಂಗಾಳದಲ್ಲಿ ಚುನಾವಣಾ ಆಯೋಗವನ್ನು ದುರುಪಯೋಗ ಪಡಿಸಿಕೊಂಡು ಗೆದ್ದಿರುವಂತೆ ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲೂ ಬಿಜೆಪಿ ಹುನ್ನಾರ ನಡೆಸಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ ಖರ್ಗೆ ಎಚ್ಚರಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರು ಚುನಾವಣಾ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ನಾಶ ಮಾಡಿದ್ದಾರೆ. ಆಯೋಗವನ್ನು ತನ್ನ ಜೇಬಿನಲ್ಲಿ ಇಟ್ಟುಕೊಂಡು ದುರುಪಯೋಗ ಪಡಿಸಿಕೊಂಡಿದ್ದಾರೆ. ಅಸ್ಸಾಂ ಮತ್ತು ಪಶ್ಚಿಮ ಬಂಗಾಲದಲ್ಲಿ ಬಿಜೆಪಿಯ ಗೆಲುವಲ್ಲ, ಚುನಾವಣಾ ಆಯೋಗದ ಗೆಲುವು ಎಂದು ಟೀಕಿಸಿದರು.

ಮಹಾರಾಷ್ಟ್ರ, ಮಧ್ಯಪ್ರದೇಶ, ಹರ್ಯಾಣದಂತೆ ಪಶ್ಚಿಮ ಬಂಗಾಳ ಮತ್ತು ಅಸ್ಸಾಂನಲ್ಲೂ ವ್ಯವಸ್ಥೆಯನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ. ಅಸ್ಸಾಂನಲ್ಲಿ ಕ್ಷೇತ್ರ ಪುನರ್ ವಿಂಗಡಣೆಯ ಮೂಲಕ ಗೊಂದಲ ಮೂಡಿಸಲಾಗಿದೆ. ಪಶ್ಚಿಮ ಬಂಗಾಳದಲ್ಲಿ ಮತದಾರ ಪಟ್ಟಿ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಹೆಸರಿನಲ್ಲಿ ಒಂದು ಕೋಟಿ ಮತದಾರರನ್ನು ಪಟ್ಟಿಯಿಂದ ತೆಗೆದು ಹಾಕಲಾಗಿದೆ. ಅದರ ಪರಿಶೀಲನೆಗೆ ನ್ಯಾಯಾಧೀಕರಣ ರಚಿಸಲಾಗಿತ್ತು. 28 ಲಕ್ಷ ಜನ ಅರ್ಹರು ನ್ಯಾಯಾಧೀಕರಣಕ್ಕೆ ಮೇಲನವಿ ಸಲ್ಲಿಸಿದರು, ಆದರೆ ಅವರ ವಾದವನ್ನೇ ಕೇಳಲಿಲ್ಲ ಎಂದು ದೂರಿದರು.

91 ಲಕ್ಷ ಜನರು ಎಸ್‌ಐಆರ್‌ನಿಂದಾಗಿ ಮತದಾನದಿಂದ ವಂಚಿತರಾಗಿದ್ದಾರೆ. ಅವರ ಅಹವಾಲು ಕೇಳದೆ ಇದ್ದರೆ ಹೇಗೆ, ಅವರು ದೇಶದ ನಾಗರಿಕರಲ್ಲವೇ, ಮತದಾರರಲ್ಲವೇ ಅವರು ಎಲ್ಲಿಗೆ ಹೋಗಬೇಕು ಎಂದು ಪ್ರಶ್ನಿಸಿದರು. ಮಶ್ಚಿಮ ಬಂಗಾಳದಲ್ಲಿ ಶೇ.4ರಷ್ಟು ಮತಗಳ ವ್ಯತ್ಯಾಸ 80 ರಿಂದ 100 ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳನ್ನು ಗೆಲ್ಲಿಸಿದೆ. ಇದರಲ್ಲಿ ಮುಚ್ಚುಮರೆ ಏನು ಇಲ್ಲ. ಎಲ್ಲ ದತ್ತಾಂಶಗಳು ಕಣ್ಣಮುಂದೆಯೇ ಇವೆ. ಈ ವಿಚಾರವನ್ನು ಕಾನೂನು ಸಮರದ ಮೂಲಕ ಹೇಗೆ ಹೆದರಿಸಬೇಕು ಎಂದು ಪರಿಶೀಲನೆ ನಡೆಯುತ್ತಿದೆ. ಇದೇ ಪ್ರವೃತ್ತಿ ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲೂ ನಡೆಯಬಹುದು ಎಂದು ಹೇಳಿದರು. ತಮಿಳು ನಾಡಿನ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ನಿರೀಕ್ಷೆಗಿಂತ ಕಡಿಮೆ ಸ್ಥಾನಗಳು ಬಂದಿವೆ. ಆದರೆ ಜನರ ತೀರ್ಪಿಗೆ ತಲೆಬಾಗಲೇಬೇಕಿದೆ. ಸಂಪೂರ್ಣವಾಗಿ ಯಾರಿಗೂ ಬಹುಮತ ಬಂದಿಲ್ಲ. ಮುಂದಿನ ದಿನಗಳಲ್ಲಿ ಏನು ಮಾಡಬೇಕು ಎಂಬುದನ್ನು ಹೈಕಮಾಂಡ್ ತಿಳಿಸಲಿದ್ದಾರೆ. ರಾಜ್ಯದ ದಾವಣಗೆರೆ ದಕ್ಷಿಣ ಕ್ಷೇತ್ರದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆ 8ಇನ್ನೂ ಹೆಚ್ಚಿನ ಮತಗಳು ಬರಬೇಕಿತ್ತು. ಆದರೆ ಕಾಂಗ್ರೆಸ್‌ಗೆ ಗೆಲುವಂತೂ ಆಗಿದೆ. ಒಂದು ಮತದಿಂದ ಗೆದ್ದಿದ್ದರೂ ವಿಧಾನಸೌಧದಲ್ಲಿ ಶಾಸಕರಾಗಿರುತ್ತಾರೆ. ಲಿಡ್ ಕಡಿಮೆಯಾಗಿರುವುದಕ್ಕೆ ಪಕ್ಷದ ಆಂತರಿಕವಾಗಿ ಚರ್ಚೆ ನಡೆಸಲಾಗುವುದು ಎಂದರು.

ಮುಖ್ಯಮಂತ್ರಿ ಹುದ್ದೆ ಖಾಲಿ ಇಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೇ ಹೇಳಿದ ಮೇಲೆ ಇನ್ಯಾರು ಹೇಳಬೇಕು. ಅದೇ ಸ್ಪಷ್ಟ ಉತ್ತರ ಅಲ್ಲವೇ ಅದರ ಬಳಿಕವೂ ನಾವೆಲ್ಲಾ ಮಾತನಾಡುವುದು ಅಪ್ರಸ್ತುತ ಎಂದರು.

# ಜ್ಞಾನೇಶ್‌ಕುಮಾರ್‌ರಿಂದಾಗಿ ಬಂಗಾಳ, ಅಸ್ಸಾಂನಲ್ಲಿ ಬಿಜೆಪಿಗೆ ಗೆಲುವು

**ಚುನಾವಣಾ ಆಯೋಗದ ವಿರುದ್ಧ ಸಚಿವ ಸಂತೋಷ್ ಲಾಡ್ ಕಿಡಿ**



ಬೆಂಗಳೂರು, ಮೇ 5: ಪಶ್ಚಿಮ ಬಂಗಾಳ ಮತ್ತು ಅಸ್ಸಾಂನಲ್ಲಿ ಕೇಂದ್ರ ಚುನಾವಣೆ ಆಯುಕ್ತ ಜ್ಞಾನೇಶ್ ಕುಮಾರ್‌ರಿಂದ ಬಿಜೆಪಿಗೆ ಗೆಲುವಾಗಿದೆ ಎಂದು ಸಚಿವ ಸಂತೋಷ್ ಲಾಡ್ ಚುನಾವಣಾ ಆಯೋಗದ ವಿರುದ್ಧ ಕಿಡಿಕಾರಿದ್ದಾರೆ. ಪಂಚರಾಜ್ಯ ಚುನಾವಣೆ ಮತ್ತು ಉಪ ಚುನಾವಣೆ ಫಲಿತಾಂಶದ ಬಗ್ಗೆ ಬೆಂಗಳೂರಿನಲ್ಲಿ ಪ್ರತಿಕ್ರಿಯೆ ನೀಡಿದ ಅವರು, ರಾಜ್ಯದಲ್ಲಿ ನಡೆದ ಉಪಚುನಾವಣೆಯಲ್ಲಿ ನಿರೀಕ್ಷೆಯಂತೆ 2 ಕ್ಷೇತ್ರದಲ್ಲಿ ಕಾಂಗ್ರೆಸ್ ಗೆದ್ದಿದೆ. ಸರ್ಕಾರದ ಕಾರ್ಯಕ್ರಮ ಅದರ ಜೊತೆ ಕಾರ್ಯಕರ್ತರು, ಮುಖಂಡರ ಕೆಲಸದಿಂದ ಜನ ಗೆಲ್ಲಿಸಿದ್ದಾರೆ ಎಂದು ಹೇಳಿದ್ದಾರೆ.

ಪಂಚರಾಜ್ಯ ಚುನಾವಣೆ ಫಲಿತಾಂಶದಲ್ಲಿ ಅಚ್ಚರಿ ಆಗಿರೋದು ತಮಿಳುನಾಡಿನಲ್ಲಿ ವಿಜಯ್ ಗೆಲುವು. 35% ಮತಗಳನ್ನು ಪಡೆದಿದ್ದಾರೆ. ವಿಜಯ್‌ಗೆ ಆಲ್ ದಿ ಬೆಸ್ಟ್. ಒಂದು ವರ್ಷದಲ್ಲಿ ಸಿಂಪಲ್ ಮೆಜಾರಿಟಿ ಬಂದಿದೆ. ವಿಜಯ್‌ಗೆ ಶುಭವಾಗಲಿ ಎಂದರು. ಟಿವಿಕೆ ಜೊತೆ ಮೈತ್ರಿ ಬಗ್ಗೆ ಹೈಕಮಾಂಡ್ ನಿರ್ಧಾರ ಮಾಡುತ್ತೆ ಎಂದಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

## ಬೆಂಗಳೂರಿನಲ್ಲಿ ವಿಶ್ವ ಹೋಮಿಯೋಪಥಿ ದಿನಾಚರಣೆ

# ಜೀವನಶೈಲಿ ಕಾಯಿಲೆಗೆ ಹೋಮಿಯೋಪಥಿ ಸಮಗ್ರ ಪರಿಹಾರ: ಗೆಹ್ಲೋತ್ ಅಭಿಮತ



**ಬೆಂಗಳೂರು, ಮೇ 5:** ಭಾರತದಲ್ಲಿ ಹೋಮಿಯೋಪಥಿ ಒಂದು ಶಕ್ತಿಶಾಲಿ ಮತ್ತು ಜನಪ್ರಿಯ ವೈದ್ಯಕೀಯ ಪದ್ಧತಿಯಾಗಿ ಸ್ಥಾಪಿಸಿಕೊಳ್ಳುತ್ತಿದೆ. ದೇಶಾದ್ಯಂತ ಲಕ್ಷಾಂತರ ಜನರು ಈ ಪದ್ಧತಿಯಿಂದ ಪ್ರಯೋಜನ ಪಡೆಯುತ್ತಿದ್ದಾರೆ. ಭಾರತ ಸರ್ಕಾರದ ಆಯುಷ್ ಸಚಿವಾಲಯವು ಈ ದಿಕ್ಕಿನಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸುತ್ತಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಹೇಳಿದರು.

ಹೋಮಿಯೋಪಥಿ ಫೌಂಡೇಶನ್ ಮತ್ತು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ ವಿಶ್ವ ಹೋಮಿಯೋಪಥಿ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯದಲ್ಲಿ, ಉತ್ತಮ ಗುಣಮಟ್ಟದ ವೈದ್ಯಕೀಯ ಶಿಕ್ಷಣ, ಸಮರ್ಪಿತ ವೈದ್ಯರು ಮತ್ತು ಸಂಶೋಧನಾ–ಆಧಾರಿತ ವಿಧಾನವು ಹೋಮಿಯೋಪಥಿಯ ಬೆಳವಣಿಗೆಗೆ ಕಾರಣವಾಗಿದೆ ಎಂದರು.

ಮಹಾನ್‌ವೈದ್ಯ ಡಾ. ಸ್ಯಾಮ್ಯುಯೆಲ್ ಹ್ಯಾನಿಮನ್ ಅವರ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ವಿಶ್ವ ಹೋಮಿಯೋಪಥಿ ದಿನವನ್ನು ಪ್ರತಿವರ್ಷ ಏಪ್ರಿಲ್ 10 ರಂದು ಆಚರಿಸಲಾಗುತ್ತದೆ. ಅವರು ಮಾನವೀಯತೆಗೆ ರೋಗಗಳ ಚಿಕಿತ್ಸೆಗೆ ಸೀಮಿತವಾಗಿರದೆ ಇಡೀ ವ್ಯಕ್ತಿ, ಅವನ ದೇಹ, ಮನಸ್ಸು ಮತ್ತು ಆತ್ಮದ ಸಮತೋಲನಕ್ಕೆ ಪ್ರಾಮುಖ್ಯತೆಯನ್ನು ನೀಡುವ ವೈದ್ಯಕೀಯ ವ್ಯವಸ್ಥೆಯನ್ನು ನೀಡಿದರು. ಹೋಮಿಯೋಪಥಿಯ ಮೂಲಭೂತ ತತ್ವವೆಂದರೆ ಚಿಕಿತ್ಸೆಯ ಹಾಗೆ ರೋಗಗಳಿಗೂ ಪರಿಹಾರಗಳು ಪ್ರಕೃತಿಯಲ್ಲೇ ಇವೆ ಎಂಬುದನ್ನು ಕಲಿಸುತ್ತದೆ ಎಂದು ಹೇಳಿದರು.

ಸರಿಯಾದ ಪ್ರಮಾಣದಲ್ಲಿ ನೀಡಲಾಗುವ ಔಷಧಿಗಳು ದೇಹದ ನೈಸರ್ಗಿಕ ರೋಗನಿರೋಧಕ ಶಕ್ತಿಯನ್ನು ಜಾಗೃತಗೊಳಿಸುತ್ತವೆ ಮತ್ತು ಅದು ತನ್ನನ್ನು ತಾನೇ ಗುಣಪಡಿಸಿಕೊಳ್ಳಲು ಉತ್ತೇಜಿಸುತ್ತವೆ. ಇಂದಿಗೂ, ವೈದ್ಯಕೀಯ ವಿಜ್ಞಾನವು ಬಹಳ ಮುಂದುವರಿದಿದ್ದರೂ, ಜೀವನಶೈಲಿ ಕಾಯಿಲೆಗಳು, ಮಾನಸಿಕ ಒತ್ತಡ ಮತ್ತು ದೀರ್ಘಕಾಲದ ಕಾಯಿಲೆಗಳು ಹೆಚ್ಚುತ್ತಿವೆ. ಅಂತಹ ಸಮಯದಲ್ಲಿ, ಹೋಮಿಯೋಪಥಿಯ ಸಮಗ್ರ ವಿಧಾನವು ಸಮತೋಲಿತ ಮತ್ತು ಶಾಶ್ವತ ಆರೋಗ್ಯದ ಕಡೆಗೆ ನಮ್ಮನ್ನು ಕರೆದೊಯ್ಯುತ್ತದೆ ಎಂದು ತಿಳಿಸಿದರು.

**ಈ ವರ್ಷದ ಧ್ಯೇಯವಾಕ್ಯ:**

ಸುಸ್ಥಿರ ಆರೋಗ್ಯಕ್ಕಾಗಿ ಹೋಮಿಯೋಪಥಿ" ಅತ್ಯಂತ ಅರ್ಥಪೂರ್ಣ ಮತ್ತು ಸಮಯೋಚಿತ ವಾಗಿದೆ. "ಸುಸ್ಥಿರ ಆರೋಗ್ಯ" ಎಂದರೆ ಕೇವಲ ರೋಗದಿಂದ ಮುಕ್ತಿ ಎಂದಲ್ಲ, ಬದಲಾಗಿ ದೀರ್ಘಕಾಲೀನ, ಪರಿಸರ ಸ್ನೇಹಿ ಮತ್ತು ಎಲ್ಲರಿಗೂ ಪ್ರವೇಶಿಸಬಹುದಾದ ಆರೋಗ್ಯ. ಈ ವಿಷಯದಲ್ಲಿ ಹೋಮಿಯೋಪಥಿ ಒಂದು ಆದರ್ಶ ವ್ಯವಸ್ಥೆಯಾಗಿದೆ ಏಕೆಂದರೆ ಅದು ಕೈಗೆಟಕಲಿದೆ.

ವ್ಯಕ್ತಿ ಕೇಂದ್ರಿತ ಚಿಕಿತ್ಸೆಯನ್ನು ಒದಗಿಸುತ್ತದೆ. ಇದು ನೈಸರ್ಗಿಕ ಸಂಪನ್ಮೂಲಗಳ ಸಮತೋಲಿತ ಬಳಕೆಯನ್ನು ಉತ್ತೇಜಿಸುತ್ತದೆ. ಯಾವುದೇ ವೈದ್ಯಕೀಯ ವ್ಯವಸ್ಥೆಯ ಪ್ರಸ್ತುತತೆ ನಿರಂತರ ಸಂಶೋಧನೆ ಮತ್ತು ನಾವೀನ್ಯತೆಯನ್ನು ಅವಲಂಬಿಸಿರುತ್ತದೆ. ಇಂದು, ಹೋಮಿಯೋಪಥಿಯಲ್ಲಿ ವೈದ್ಯಕೀಯ ಸಂಶೋಧನೆಯನ್ನು ಉತ್ತೇಜಿಸುವ, ಆಧುನಿಕ ತಂತ್ರಜ್ಞಾನಗಳನ್ನು – ಡಿಜಿಟಲ್ ಆರೋಗ್ಯ ಮತ್ತು ಕೃತಕ ಬುದ್ಧಿಮತ್ತೆ – ಬಳಸಿಕೊಳ್ಳುವ ಮತ್ತು ಅದರ ಫಲಿತಾಂಶಗಳನ್ನು ಜಾಗತಿಕ ವೇದಿಕೆಯಲ್ಲಿ ಪ್ರಸ್ತುತಪಡಿಸುವ ಅವಶ್ಯಕತೆಯಿದೆ. ಇದು ಅದರ ವಿಶ್ವಾಸಾರ್ಹತೆಯನ್ನು ಹೆಚ್ಚಿಸುತ್ತದೆ ಮತ್ತು ಜಾಗತಿಕ ಆರೋಗ್ಯ ವ್ಯವಸ್ಥೆಯಲ್ಲಿ ಹೆಚ್ಚು ಬಲವಾದ ಸ್ಥಾನವನ್ನು ಪಡೆಯಲು ಅನುವು ಮಾಡಿಕೊಡುತ್ತದೆ ಎಂದು ಅಭಿಪ್ರಾಯಪಟ್ಟರು.

ಹೊಮಿಯೋಪತಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳೇ ಈ ಕ್ಷೇತ್ರದ ಭವಿಷ್ಯ. ಸಾಂಪ್ರದಾಯಿಕ ಜ್ಞಾನವನ್ನು ಆಧುನಿಕ ವಿಜ್ಞಾನದೊಂದಿಗೆ ಸಂಯೋಜಿಸಲು, ಸಂಶೋಧನೆಯಲ್ಲಿ ಹೊಸ ನೆಲೆಯನ್ನು ಕಂಡುಕೊಳ್ಳಲು ಮತ್ತು ಹೋಮಿಯೋಪಥಿಯನ್ನು ಜಾಗತಿಕ ಮನ್ನಣೆಗೆ ತರಲು ನಿಮಗೆ ಅವಕಾಶವಿದೆ. ನಿಮ್ಮ ಶಕ್ತಿ, ನಿಮ್ಮ ಕುತೂಹಲ ಮತ್ತು ನಿಮ್ಮ ಬದ್ಧತೆಯು ಈ ಅಭ್ಯಾಸವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುತ್ತದೆ ಎಂದರು.

**ರೋಗದ ಮೂಲ ಹುಡುಕುವ ಹೋಮಿಯೋಪಥಿ: ಡಾ. ಬಿ.ಸಿ.ಭಗವಾನ್**

ರೋಗಕ್ಕೆ ಚಿಕಿತ್ಸೆ ನೀಡುವುದು ಮಾತ್ರವಲ್ಲ, ಅದರ ಮೂಲ ಹುಡುಕುವ ಕೆಲಸವನ್ನು ಹೋಮಿಯೋಪಥಿ ಮಾಡುತ್ತದೆ. ಇದು ಈ ಆಧುನಿಕ ಯುಗದ ಅಗತ್ಯಗಳಲ್ಲಿ ಒಂದು. ಹೀಗಾಗಿ ಹೋಮಿಯೋಪಥಿ ಶಿಕ್ಷಣವನ್ನು ಬಲಪಡಿಸುವುದು ಹಾಗೂ ಅದನ್ನು ಮುಖ್ಯ ಆರೋಗ್ಯ ವ್ಯವಸ್ಥೆಯೊಂದಿಗೆ ಜೋಡಿಸುವುದು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಬದ್ಧತೆಯಾಗಿದೆ ಎಂದು ಕುಲಪತಿ ಡಾ. ಭಗವಾನ್ ಬಿ.ಸಿ. ಹೇಳಿದರು. ಜಗತ್ತಿನಲ್ಲಿ ಅತಿಹೆಚ್ಚು ವ್ಯಾಪಕವಾಗಿ ಬಳಸಲಾಗುವ ಎರಡನೇ ವೈದ್ಯ ಪದ್ಧತಿ ಎಂದರೆ ಹೋಮಿಯೋಪಥಿ. ಕಡಿಮೆ ವೆಚ್ಚದ, ಸುಲಭವಾಗಿ ಲಭ್ಯವಿರುವ ಹಾಗೂ ರೋಗಿಕೇಂದ್ರಿತ ಚಿಕಿತ್ಸೆಯನ್ನು ಒದಗಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ.

ಇದರ ಸಮಗ್ರ ದೃಷ್ಟಿಕೋನ ಆಧುನಿಕ ವೈಯಕ್ತಿಕ ಚಿಕಿತ್ಸಾ ವಿಧಾನಗಳಲ್ಲಿ ಹೆಚ್ಚುತ್ತಿರುವ ಪ್ರಸ್ತುತತೆಯನ್ನು ಹೊಂದಿದೆ ಎಂದು ಅವರು ಅಭಿಪ್ರಾಯಪಟ್ಟರು.

ಹೋಮಿಯೋಪಥಿಯನ್ನು ಮಹಾತ್ಮಾ ಗಾಂಧಿ ಆರ್ಥಿಕವಾಗಿ ಹಾಗೂ ಅಹಿಂಸಾತ್ಮಕವಾಗಿ ರೋಗಿಗಳಿಗೆ ಚಿಕಿತ್ಸೆ ನೀಡುವ ಸೂಕ್ಷ್ಮ ವಿಧಾನ ಎಂದು ವರ್ಣಿಸಿದ್ದಾರೆ. ರವೀಂದ್ರನಾಥ ಟ್ಯಾಗೋರ್ ಇದನ್ನು ತಾರ್ಕಿಕ ತತ್ತ್ವದೊಂದಿಗೆ ಇರುವ ವಿಜ್ಞಾನ ಎಂದು ಹೇಳಿದ್ದಾರೆ. ಇದೇ ವೇಳೆ ವಿಲಿಯಂ ಓಸ್ಲರ್ ವೈದ್ಯಕೀಯ ಚಿಕಿತ್ಸೆಯನ್ನು ಹೆಚ್ಚು ಮಾನವೀಯಗೊಳಿಸುವಲ್ಲಿ ಕೊಡುಗೆ ನೀಡಿದ್ದಾರೆ ಎಂದು ಅವರು ಉಲ್ಲೇಖಿಸಿದರು. ರಾಜೀವ್ ಗಾಂಧಿ ಆರೋಗ್ಯ ವಿವಿ ವ್ಯಾಪ್ತಿಯಲ್ಲಿ ಮಾನ್ಯತೆ ಪಡೆದ 18 ಹೋಮಿಯೋಪಥಿ ಕಾಲೇಜುಗಳು, ಅದರಲ್ಲಿ 5 ಸ್ನಾತಕೋತ್ತರ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ಸಂಸ್ಥೆಗಳು ಜವಾಬ್ದಾರಿಯುತ ಮತ್ತು ಸಹಾನುಭೂತಿಯುಳ್ಳ ಭವಿಷ್ಯದ ಸಾವಿರಾರು ವೈದ್ಯರನ್ನು ರೂಪಿಸುತ್ತಿವೆ ಎಂದು ಹೇಳಿದರು.

**ಶೇ.50ರಷ್ಟು ರೋಗಗಳಿಗೆ ಔಷಧಿಯೇ ಬೇಕಿಲ್ಲ: ಡಾ. ರುದ್ರೇಶ್**

ಇಂದು ನಾವು ಕಾಣುವ ಶೇ 50ರಷ್ಟು ರೋಗಗಳಿಗೆ ಔಷಧಿಗಳು ಬೇಕಾಗಿಲ್ಲ, ಬದಲಾಗಿ ಪ್ರೀತಿ, ಕಾಳಜಿ, ಸ್ನೇಹ ಕರುಣೆಯ ಅಗತ್ಯವಿದೆ. ಹೋಮಿಯೋಪಥಿ ವೈಜ್ಞಾನಿಕ ವೈದ್ಯಪದ್ಧತಿಯೇ ಎನ್ನುವ ಬಗ್ಗೆ ಆಗಾಗ ಪ್ರಶ್ನೆಗಳು ಎದುರಾಗುತ್ತವೆ. ಆದರೆ, ವೈದ್ಯಶಾಸ್ತ್ರವು ಶುದ್ಧ ವಿಜ್ಞಾನವಲ್ಲ; ಅದು ಸಂಬಂಧಿತ ವಿಜ್ಞಾನ. ಇದೇ ಕಾರಣಕ್ಕೆ ವೈದ್ಯಶಾಸ್ತ್ರವು ಅನಿಶ್ಚಿತತೆಯ ವಿಜ್ಞಾನ ಮತ್ತು ಸಾಧ್ಯತೆಗಳ ಕಲೆ ಎಂಬುದನ್ನು ತಜ್ಞರು ಪ್ರತಿಪಾದಿಸಿದ್ದಾರೆ ಎಂದು ಕರ್ನಾಟಕ ಹೋಮಿಯೋಪಥಿ ಮಂಡಳಿಯ ಅಧ್ಯಕ್ಷ ಡಾ. ಬಿ.ಟಿ. ರುದ್ರೇಶ್ ಹೇಳಿದರು. ಬಹುತೇಕ ಆಧುನಿಕ ರೋಗಗಳ ಮೂಲ ಅಡಗಿರುವುದು ನಮ್ಮ ಸಂಬಂಧಗಳಲ್ಲಿ, ನಮ್ಮ ಮನೆ, ನಮ್ಮ ಸಮಾಜ ಹಾಗೂ ನಮ್ಮ ಕಾರ್ಯಕ್ಷೇತ್ರ– ಈ ಮೂರು ಕಡೆ ನಮ್ಮ ಸಂಬಂಧ ಹೇಗಿದೆ ಎನ್ನುವುದರ ಮೇಲೆ ನಮ್ಮ ಆರೋಗ್ಯ ತೀರ್ಮಾನವಾಗುತ್ತದೆ. ಕಾಯಿಲೆ ಕೇವಲ ವೈರಸ್‌ಗಳಿಂದ ಬರುವುದಿಲ್ಲ. ಕಾಯಿಲೆಗಳಿಗೆ ಆಹ್ವಾನ ನೀಡುವ ಅಶಕ್ತತೆ ಮನುಷ್ಯನಲ್ಲಿರುತ್ತದೆ ಮತ್ತು ಹೋಮಿಯೋಪಥಿ ಅದರ ಮೂಲ ತಿಳಿದು ಪರಿಹಾರ ನೀಡುತ್ತದೆ ಎಂದು ತಿಳಿಸಿದರು.

ಜಯನಗರ ಶಾಸಕ ಸಿ.ಕೆ. ರಾಮಮೂರ್ತಿ ಮಾತನಾಡಿದರು. ಅಪರ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಹಸಿನ್ ಮಾತನಾಡಿದರು. ಕುಲಸಚಿವರಾದ ಅರ್ಜುನ್ ಒಡೆಯರ್, ಮೌಲ್ಯಮಾಪನ ಕುಲಸಚಿವರಾದ ಡಾ. ರಿಯಾಜ್ ಬಾಷಾ ಎಸ್. ಹಣಕಾಸು ಅಧಿಕಾರಿ ಬಿ.ಕೆ. ಗಂಗಾಧರ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಅಧ್ಯಾಪಕರು, ವಿದ್ಯಾರ್ಥಿಗಳು ಹಾಗೂ ವೈದ್ಯರು ಭಾಗವಹಿಸಿದ್ದರು.

# ಗ್ರಾಮೀಣ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ 208.67 ಕೋಟಿ ರೂ. ಬಿಡುಗಡೆ

### ತುರ್ತು ಕಾಮಗಾರಿಗಳಿಗೆ ಮತ್ತೆ 72 ಕೋಟಿ ರೂ. ಬಿಡುಗಡೆ: ಸಚಿವ ಪ್ರಿಯಾಂಕ್ ಖರ್ಗೆ



**ಬೆಂಗಳೂರು, ಮೇ 5:** ರಾಜ್ಯದ ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಎದುರಾಗಿರುವ ಕುಡಿಯುವ ನೀರಿನ ಅಭಾವವನ್ನು ತಗ್ಗಿಸಲು ಸರ್ಕಾರವು ಸಮರೋಪಾದಿಯಲ್ಲಿ ಕ್ರಮ ಕೈಗೊಂಡಿದ್ದು, ಮಾರ್ಚ್ 2026 ರಿಂದ ಇಂದಿನವರೆಗೆ ಒಟ್ಟು 208.67 ಕೋಟಿ ರೂ. ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಮಂಗಳವಾರ ಈ ಕುರಿತು ಮಾಹಿತಿ ನೀಡಿರುವ ಅವರು, ತುರ್ತು ಕಾಮಗಾರಿಗಳಿಗಾಗಿ ಇಂದು ಪುನಃ 72 ಕೋಟಿ ರೂ.ಗಳ ಹೆಚ್ಚುವರಿ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಈ ಅನುದಾನವನ್ನು ಪ್ರಸಕ್ತ ಸಾಲಿನ ಹೊಸ ಕಾಮಗಾರಿಗಳ ಜೊತೆಗೆ, ಈ ಹಿಂದೆ ಟಾಸ್ಕ್ ಫೋರ್ಸ್ ಸಮಿತಿಯಿಂದ ಅನುಮೋದನೆ ಪಡೆದು ಪೂರ್ಣಗೊಂಡಿದ್ದ ಕಾಮಗಾರಿಗಳ ಬಾಕಿ ಪಾವತಿಗಾಗಿ ವಿನಿಯೋಗಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ತುರ್ತು ಕ್ರಮಗಳಿಗೆ ಸೂಚನೆ:

ಬೇಸಿಗೆಯ ತೀವ್ರತೆಯಿಂದ ಅಂತರ್ಜಲ ಮಟ್ಟ ಕುಸಿದು ಕೊಳವೆಬಾವಿಗಳ ಇಳುವರಿ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ, ಜಿಲ್ಲಾಡಳಿತಗಳು ಲಭ್ಯವಿರುವ ಕೊಳವೆಬಾವಿಗಳನ್ನು ಫ್ಲಶಿಂಗ್ ಮಾಡಲು ಮತ್ತು ಆಳಗೊಳಿಸಲು ಸಚಿವರು ನಿರ್ದೇಶನ ನೀಡಿದ್ದಾರೆ. ನೀರಿನ ಮೂಲಗಳಿಲ್ಲದ ಕಡೆಗಳಲ್ಲಿ ಖಾಸಗಿ ಕೊಳವೆಬಾವಿಗಳನ್ನು ಬಾಡಿಗೆಗೆ ಪಡೆಯಲು ಅಥವಾ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಅನುಮತಿ ನೀಡಲಾಗಿದೆ. ಅನಿವಾರ್ಯ ಸಂದರ್ಭಗಳಲ್ಲಿ ಭೂವಿಜ್ಞಾನಿಗಳ ವರದಿ ಆಧರಿಸಿ ಹೊಸ ಕೊಳವೆಬಾವಿ ಕೊರೆಯಲು ಮತ್ತು ಪಂಪಿಂಗ್ ಯಂತ್ರಗಳನ್ನು ಅಳವಡಿಸಲು ಸೂಚಿಸಲಾಗಿದೆ.

ಪರಿಸ್ಥಿತಿ ಅವಲೋಕನ:

ಬೇಸಿಗೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಕೊರತೆಯುಂಟಾಗದಂತೆ ಸಮರ್ಪವಾಗಿ ನೀರು ಸರಬರಾಜು ಮಾಡಲು ನಿರಂತರವಾಗಿ ಜಿಲ್ಲಾ ಮಟ್ಟದ ಅಧಿಕಾರಿಗಳು ಟಾಸ್ಕ್ ಫೋರ್ಸ್ ಸಭೆಗಳನ್ನು ನಡೆಸುತ್ತಿದ್ದಾರೆ, ಸರ್ಕಾರದ ಮಟ್ಟದಲ್ಲಿ ನಿಯಮಿತವಾಗಿ ಪರಿಸ್ಥಿತಿಯನ್ನು ಅವಲೋಕಿಸಲಾಗುತ್ತಿದೆ ಎಂದೂ ಸಚಿವರು ಹೇಳಿದ್ದಾರೆ.

ಪಾರದರ್ಶಕತೆಗೆ ಆದ್ಯತೆ:

"ಈ ಎಲ್ಲಾ ಕಾಮಗಾರಿಗಳನ್ನು ಕೈಗೊಳ್ಳುವಾಗ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ ಮತ್ತು ಆರ್ಥಿಕ ಸಂಹಿತೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಕಾಮಗಾರಿಗಳ ಭೌತಿಕ ಪ್ರಗತಿಯನ್ನು ಆಧರಿಸಿ ಮಾತ್ರ ಬಿಲ್‌ಗಳನ್ನು ಪಾವತಿಸಲು ಮತ್ತು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯಿಂದ ಕಡ್ಡಾಯವಾಗಿ ಅನುಮೋದನೆ ಪಡೆಯಲು ಅಧಿಕಾರಿಗಳಿಗೆ ಸೂಚಿಸಲಾಗಿದೆ" ಎಂದು ಸಚಿವರು ತಿಳಿಸಿದ್ದಾರೆ.

ಈ ಬೃಹತ್ ಮೊತ್ತದ ಬಿಡುಗಡೆಯಿಂದಾಗಿ ರಾಜ್ಯದ 31 ಜಿಲ್ಲೆಗಳ ಗ್ರಾಮೀಣ ಭಾಗದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ತಕ್ಷಣದ ಪರಿಹಾರ ದೊರೆಯಲಿದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.



ವಿಯೆಟ್ನಾಂ ಗಣರಾಜ್ಯದ ಅಧ್ಯಕ್ಷ ಟೋ ಲ್ಯಾಮ್ ಅವರು ಮಂಗಳವಾರ ಬಿಹಾರದ ಬೋಧ್ ಗಯಾದಲ್ಲಿರುವ ಮಹಾಬೋಧಿ ದೇವಾಲಯಕ್ಕೆ ಭೇಟಿ ನೀಡಿದ್ದರು.

# ರಾಜ್ಯಾದ್ಯಂತ ಪ್ಯಾಲಿಯೇಟಿವ್ ಕೇರ್ ಕೇಂದ್ರ ವಿಸ್ತರಣೆಗೆ ಚಿಂತನೆ: ದಿನೇಶ್ ಗುಂಡೂರಾವ್

### ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿ ಐದು ಬೆಡ್‌ಗಳ ಒಂದು ವಾರ್ಡ್ ಉದ್ಘಾಟನೆ



**ಬೆಂಗಳೂರು, ಮೇ.5:** ಪ್ಯಾಲಿಯೇಟಿವ್ ಕೇರ್ ಕೇಂದ್ರವನ್ನು ರಾಜ್ಯಾದ್ಯಂತ ಪ್ರಾರಂಭಿಸುವ ಗುರಿ ಹೊಂದಲಾಗಿದೆ. ಈಗಾಗಲೇ ಬೆಂಗಳೂರಿನಲ್ಲಿ ನಾಲ್ಕೈದು ಕಡೆ ಪ್ರಾರಂಭಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಸರನಂ ಇಂಡಿಯಾ ಸಂಸ್ಥೆಯ ಸಹಯೋಗದೊಂದಿಗೆ ಮಲ್ಲೇಶ್ವರಂ ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿ ಪ್ಯಾಲಿಯೇಟಿವ್ ಕೇರ್ ಯುನಿಟ್ ಉದ್ಘಾಟಿಸಿದ ಅವರು, ಪ್ಯಾಲಿಯೇಟಿವ್ ಕೇರ್ ಕೇಂದ್ರದಲ್ಲಿ ಚಿಕಿತ್ಸೆ ನೀಡುವುದಿಲ್ಲ. ರೋಗಿಗಳು ಚಿಕಿತ್ಸೆಗೆ ಸ್ಪಂದಿಸದೇ ಇರುವ ಹಂತದಲ್ಲಿ, ಅಸಾಧಾರಣ ನೋವು, ಮಾನಸಿಕ ಒತ್ತಡದಿಂದ ಬಳಲುವ ರೋಗಿಗಳ ಮತ್ತು ಅಂತಹ ರೋಗಿಗಳ ಆರೈಕೆ ಮಾಡುತ್ತಿರುವ ಕುಟುಂಬ ವರ್ಗದವರಿಗೆ ಇದು ವರದಾನವಾಗಲಿದೆ ಎಂದರು.

ಪ್ರಾಥಮಿಕವಾಗಿ ಐದು ಬೆಡ್‌ಗಳ ಒಂದು ವಾರ್ಡ್ ನಿರ್ಮಾಣ ಮಾಡಿದ್ದೇವೆ. ಮಾರಣಾಂತಿಕ ಅಥವಾ ತೀವ್ರವಾದ ಕಾಯಿಲೆಗಳಿಂದ ಬಳಲುತ್ತ, ಅಂತಿಮ ಹಂತದಲ್ಲಿರುವ ರೋಗಿಗಳಿಗೆ ಇದು ವಿಶೇಷ ಯೂನಿಟ್ ಆಗಿದೆ. ಕ್ಯಾನ್ಸರ್, ಕಿಡ್ನಿ ವೈಫಲ್ಯ ಸೇರಿದಂತೆ ಇತರ ರೋಗಿಗಳ ಆರೈಕೆಗೆ ಈ ವಾರ್ಡ್ ಸಹಾಯಕ. ತೀವ್ರವಾದ ನೋವು, ಉಸಿರಾಟ ತೊಂದರೆ, ನರ ಸಂಬಂಧಿ ಕಾಯಿಲೆಯಿಂದ ಬಳಲುವವರು, ಮಾನಸಿಕ ಅಸ್ವಸ್ಥತೆಯಿಂದ ಬಳಲುತ್ತಿರುವವರಿಗೆ ಈ ಕೇಂದ್ರ ಅನುಕೂಲ. ರೋಗವನ್ನು ಗುಣಪಡಿಸುವುದಕ್ಕೆ ಸಾಧ್ಯವಿಲ್ಲದ ಹಂತದಲ್ಲಿ ರೋಗಿಯ ದೈಹಿಕ ನೋವು ಮತ್ತು ಮಾನಸಿಕ ಒತ್ತಡವನ್ನು ಕಡಿಮೆ ಮಾಡುವ ಉದ್ದೇಶದೊಂದಿಗೆ ಇದನ್ನು ಮಾಡಿದ್ದೇವೆ. ರೋಗಿಗಳ ಕುಟುಂಬದವರಿಗೂ ಸೂಕ್ತ ತರಬೇತಿ ನೀಡಲಾಗುತ್ತದೆ ಎಂದು ಹೇಳಿದರು.

ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿ ಸರನಂ ಸಂಸ್ಥೆಯ ಸಹಕಾರದೊಂದಿಗೆ ಉದ್ಘಾಟನೆಯಾದ ಈ ಯುನಿಟ್‌ನಲ್ಲಿ ತಜ್ಞರ ತಂಡದಿಂದ ಹೊರರೋಗಿ ವಿಭಾಗ, ಡೇ ಕೇರ್ ವಿಭಾಗ, ಸುಸಜ್ಜಿತ ಒಳ ರೋಗಿ ವಿಭಾಗ ಮತ್ತು ಕೆ.ಸಿ.ಜನರಲ್ ಆಸ್ಪತ್ರೆಯಿಂದ 5–8 ಕಿ.ಮೀ. ವ್ಯಾಪ್ತಿಯಲ್ಲಿ ಮನೆಗೆ ತೆರಳಿ ಆರೈಕೆ ಮಾಡುವ ಮತ್ತು ಆರೈಕೆಗೆ ಪೂರಕ ತರಬೇತಿ ನೀಡುವ ಮೊಬೈಲ್ ಯುನಿಟ್ ಸಹ ಇರಲಿದೆ. ಮಾನವೀಯತೆ ದೃಷ್ಟಿಯಿಂದ ಈ ಸೇವೆ ನೀಡಲಾಗುತ್ತಿದ್ದು ಸರ್ವಜನಿಕರು ಇದರ ಉಪಯೋಗ ಪಡೆಯಬೇಕು ಎಂದರು.

ಕೆ.ಸಿ.ಜನರಲ್ ಆಸ್ಪತ್ರೆಯ ಹಿರಿಯ ವೈದ್ಯಾಧಿಕಾರಿಗಳು, ಸರನಂ ಇಂಡಿಯಾ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಸಿಎಂ–ಡಿಸಿಎಂ ಗೊಂದಲಕ್ಕೆ ಬ್ರೇಕ್ ಬೀಳಬೇಕು: ಸತೀಶ್ ಜಾರಕಿಹೊಳಿ



ಬೆಂಗಳೂರು, ಮೇ 5: ಸಿಎಂ, ಡಿಸಿಎಂ ಅವರನ್ನು ದೆಹಲಿಗೆ ಕರೆಯಲೇಬೇಕು. ಗೊಂದಲಕ್ಕೆ ಬ್ರೇಕ್ ಹಾಕಲೇಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಒತ್ತಾಯಿಸಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮ ದವರೊಂದಿಗೆ ಮಾತನಾಡಿದ ಅವರು, ಮಲ್ಲಿಕಾರ್ಜುನ್ ಖರ್ಗೆಯವರೂ ಅದನ್ನೇ ಹೇಳಿದ್ದಾರೆ. ಎಷ್ಟು ದಿವಸ ಅಂತ ಹೀಗೆ ಬಿಡ್ತೀರ. ಬೇಗ ಆಗಬೇಕು ಅಂತ ಮಾಡಬೇಕಲ್ಲ. ಹೈಕಮಾಂಡ್ ನಾಯಕರು ಕರೆಯಬಹುದು. ಎಲ್ಲರ ಅಭಿಪ್ರಾಯವೂ ಅದೇ ಇದೆ. ಏನಾದ್ರೂ ತೀರ್ಮಾನ ಮಾಡಲಿ ಅನ್ನೋದು. ಮೊದಲು ಗೊಂದಲಗಳನ್ನು ಸರಿಪಡಿಸಬೇಕು ಎಂದರು

ನಾವು ಅಹಿಂದ ವೋಟು ವಾಪಸ್ ತಂದಿದ್ದೇವೆ. ನಮ್ಮ ಟೀಂ ಕೂಡ ಸಾಕಷ್ಟು ವರ್ಕ್ ಮಾಡಿದೆ. ಶಿಗ್ಗಾಂವಿಯಲ್ಲೂ ನಾವು ಅದೇ ತಂತ್ರ ಮಾಡಿದ್ದೆವು. ಅಲ್ಲಿಯೂ ಅಹಿಂದ ಮತಗಳೇ ಕೈಹಿಡಿದಿದ್ದು. ಕಾಂಗ್ರೆಸ್ ಗೆಲ್ಲೋಕೆ ಅವೇ ಮುಖ್ಯ. ಅವನ್ನು ನಾವು ಕಾಪಾಡಿಕೊಂಡು ಹೋಗಬೇಕು. 2028ರಲ್ಲಿ ಅಹಿಂದ ಒಗ್ಗೂಡಿಸುವ ಸವಾಲಿದೆ. ಎರಡು ವರ್ಷ ನಮಗೆ ಇದೆ. ಅಲ್ಲಿಯವರೆಗೆ ನಾವು ಒಟ್ಟುಗೂಡಿಸ್ತೇವೆ. ಜಿ.ಪಂ, ತಾ.ಪಂ ಚುನಾವಣೆಗಳು ಬರುತ್ತವೆ. ಅಲ್ಲಿ ಬೇರೆ ರೀತಿ ಮಾಡಬೇಕು. ನಾವೂ ಅಹಿಂದ ತಾನೇ. ಸ್ಥಳೀಯವಾಗಿ ಇದು ವರ್ಕೌಟ್ ಆಗಲ್ಲ ಎಂದರು.

ದಾವಣಗೆರೆಯಲ್ಲಿ ಅಲ್ಪಸಂಖ್ಯಾತ ವೋಟು ಮೈನಸ್ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಕೈವಾಡದಿಂದ ಆಗಿದ್ಯೋ, ಸ್ಥಳೀಯ ಅಭ್ಯರ್ಥಿ ಇರಲಿಲ್ವೋ. ಅದರ ಬಗ್ಗೆ ಹೇಳೋಕೆ ಆಗಲ್ಲ. ಲೋಕಲ್, ಒಳ ಹೊರಗು ಅಂತ ಪ್ರಶ್ನೆ ಬರಲ್ಲ. ಅಲ್ಲಿ ಸರಿಪಡಿಸುವ ಕೆಲಸ ಆಗಬೇಕು. ಚುನಾವಣೆಗೆ ಎರಡು ವರ್ಷ ಇದೆ, ಅಷ್ಟರಲ್ಲಿ ಸರಿಪಡಿಸಬೇಕು. ದಾವಣಗೆರೆ ಸೀಮಿತವಾಗಿ ನೋಡೋದು ಬೇಡ. ಇಡೀ ರಾಜ್ಯವನ್ನು ನೋಡಬೇಕಿದೆ. ಇನ್ನೂ ಸಮಯವಿದೆ. ಸಿಎಂ, ಡಿಸಿಎಂ ಎಲ್ಲರನ್ನೂ ಕರೆಸಿ ಮಾತನಾಡ್ತಾರೆ ಎಂದರು.

ನಸೀರ್ ಅಹ್ಮದ್, ಜಬ್ಬಾರ್ ಅಮಾನತು ವಿಚಾರವಾಗಿ ಪ್ರತಿಕ್ರಿಯಿಸಿ ಸಿಎಂ, ಡಿಸಿಎಂ ನೋಡ್ತಾರೆ. ನಮ್ಮ ಗೊಂದಲದಿಂದ ವೋಟು ಹೋಗಿದೆ ಅಷ್ಟೇ. ಯಾಕೆ ನಮ್ಮ ವೋಟು ಹೋಯ್ತು. ಅದನ್ನು ಸರಿಪಡಿಸುವ ಕೆಲಸ ಮಾಡಬೇಕು.

ಹಿಂದೆಯೂ ಸಾಕಷ್ಟು ಜನ ವಿರೋಧ ಮಾಡಿದ್ದರು. ಒಮ್ಮೆ ತಪ್ಪುಮಾಡ್ತಾರೆ ಸರಿಪಡಿಸಿಕೊಳ್ಳಬೇಕು ಎಂದು ತಿಳಿಸಿದರು. ಸೀರ್, ಜಬ್ಬಾರ್ ವಿರುದ್ಧ ಕೆಪಿಸಿಸಿ ಕ್ರಮ ಸರಿಯಿದೆ ಎಂಬ ಸಿಎಂ ಹೇಳಿಕೆ ವಿಚಾರವಾಗಿ ಮಾತನಾಡಿ, ಅವರು ರಾಜೀನಾಮೆ ಕೊಟ್ಟಿದ್ದಾರೆ. ಮತ್ತೆ ಪಕ್ಷದಲ್ಲಿ ಅವರಿಗೆ ಅವಕಾಶ ಕೊಡಬೇಕು. ಆ ಸಮುದಾಯ ಕಾಂಗ್ರೆಸ್ ಬಿಟ್ಟು ಎಲ್ಲಿಗೆ ಹೋಗುತ್ತದೆ. ಹಾಗಾಗಿ ಅವರ ಮೇಲಿನ ಅಮಾನತು ವಾಪಸ್ ಪಡೆಯಬೇಕು ಎಂದು ಸತೀಶ್ ಜಾರಕಿಹೊಳಿ ಒತ್ತಾಯಿಸಿದರು.



ರೈಲ್ವೆ ಮತ್ತು ಜಲಶಕ್ತಿ ಸಚಿವ ವಿ. ಸೋಮಣ್ಣ ಅವರ ಗೃಹಕಚೇರಿಯಲ್ಲಿ ಮಂಗಳವಾರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 2026–27 ರ ಸಾಲಿನ ನವೀಕೃತ ಕಾರ್ಡನ್ನು ಬೆಂಗಳೂರು ನಗರ ಜಿಲ್ಲಾದ್ಯಕ್ಷ ಎಸ್.ಸೋಮಶೇಖರ ಗಾಂಧಿ ಮತ್ತು ಸದಸ್ಯರಾದ ಕೆ.ಶ್ರೀನಿವಾಸನ್ ಮತ್ತು ರೇಣುಕಪ್ರಸಾದ್ ಅವರಿಗೆ ವಿತರಿಸಿದರು. ಈ ಸಂದರ್ಭದಲ್ಲಿ ಕಾರ್ಯಕಾರಿ ಸಮಿತಿ ಸದಸ್ಯರಾದ. ಬಿ.ಎನ್ ಮೋಹನ್, ರಾಜಗಿರಿ ಪ್ರದೀಪ್ ಹಾಜರಿದ್ದರು

# ಎಸ್‌ಐಆರ್ ಮೂಲಕ ಕರ್ನಾಟಕದ ಚುಕ್ಕಾಣಿಗೆ ಆರ್‌ಎಸ್‌ಎಸ್ ಚಿತ್ತ

**ನಗರದಲ್ಲಿ ಬೀಡುಬಿಟ್ಟು ತಂತ್ರ ಹೆಣೆಯುತ್ತಿರುವ ಸ್ವಯಂಸೇವಕ ಸಂಘದ ಮುಖ್ಯಸ್ಥ ಮೋಹನ್ ಭಾಗವತ್**



**ಬೆಂಗಳೂರು, ಮೇ 5:** ಪಂಚ ರಾಜ್ಯಗಳ ವಿಧಾನಸಭಾ ಚುನಾವಣೆಯ ನಂತರ ಇದೀಗ ಆರ್.ಎಸ್.ಎಸ್ ಕರ್ನಾಟಕದತ್ತ ಚಿತ್ತ ನೆಟ್ಟಿದೆ. ಬಂಗಾಳದಂತೆ ಕರ್ನಾಟಕದಲ್ಲೂ ಮತ ವಿಭಜನೆ, ಎಸ್.ಐ.ಆರ್ ಮೂಲಕ ಅಧಿಕಾರದ ಚುಕ್ಕಾಣಿ ಹಿಡಿಯಲು ಆರ್.ಎಸ್.ಎಸ್. ಚಿತ್ತ ಹರಿಸಿದೆ.

ಈ ಹಿನ್ನೆಲೆಯಲ್ಲಿಆರ್.ಎಸ್.ಎಸ್. ವರಿಷ್ಠ ಮೋಹನ್ ಭಾಗವತ್ ಅವರು ನಗರದಲ್ಲಿ ಬೀಡುಬಿಟ್ಟಿದ್ದು, ವ್ಯಾಪಕ ಕಾರ್ಯತಂತ್ರದಲ್ಲಿ ನಿರತರಾಗಿದ್ದಾರೆ. ಚುನಾವಣೆಗೆ ಬೇಕಾದ ಎಲ್ಲಾ ಸರಂಜಾಮುಗಳನ್ನು ಸಜ್ಜುಗೊಳಿಸು ತ್ತಿದ್ದಾರೆ. ತನ್ಮೂಲಕ ಕರ್ನಾಟಕ ವಿಧಾನಸಭಾ ಚುನಾವಣೆಗೆ ಸಿದ್ಧತೆ ಆರಂಭಿಸಿದ್ದು, ಭಾನುವಾರ ಮಧ್ಯಾಹ್ನದಿಂದ ಬೆಂಗಳೂರಿನ ಚನ್ನೇನಹಳ್ಳಿಯಲ್ಲಿ ಮೋಹನ್ ಭಾಗವತ್ ನೆಲೆಯೂರಿದ್ದಾರೆ.

ಆರ್.ಎಸ್.ಎಸ್ ಧುರೀಣರಾದ ದತ್ತಾತ್ರೆಯ ಹೊಸಬಾಳೆ, ಮುಕುಂದ್ ಇತರಪರಿವಾರ ಧುರೀಣ ರೊಂದಿಗೆ ವ್ಯಾಪಕ ಸಮಾಲೋಚನೆ ಯಲ್ಲಿ ತೊಡಗಿದ್ದಾರೆ.

ಅತ್ಯಂತ ರಹಸ್ಯ ವಾಗಿ ನಡೆಯುತ್ತಿರುವ ಸಭೆಗೆ ಬಿಜೆಪಿ ಮುಖಂಡರಿಗೆ ಅವಕಾಶ ನೀಡಿಲ್ಲ. ಆದರೆ ಪಶ್ಚಿಮ ಬಂಗಾಳ ರೀತಿಯಲ್ಲಿ ಮತ ವಿಭಜನೆ, ಎಸ್.ಐ.ಆರ್. ಸಿದ್ಧತೆ ಮೊದಲಾದ ವಿಚಾರಗಳ ಚರ್ಚೆ ನಡೆಸುತ್ತಿದ್ದಾರೆ ಎನ್ನಲಾಗಿದೆ.

ಕರಾವಳಿಯಲ್ಲಿ ಪಕ್ಷ ಹಾಗೂ ಸಂಘಟನೆಯ ಬೇರುಗಳು ಸಡಿಲವಾಗುತ್ತಿರುವ ಹಿನ್ನೆಲೆಯಲ್ಲಿ ಕರಾವಳಿಯಲ್ಲಿ ಸಂಘದ ಪ್ರತ್ಯೇಕ ವಿಭಾಗ ರಚಿಸಲು ತೀರ್ಮಾನಿಸಿದ್ದಾರೆ.

ಮಂಗಳೂರು ಪೊಲೀಸ್ ಆಯುಕ್ತರು ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅತ್ಯಂತ ಕಟ್ಟುನಿಟ್ಟಿನಿಂದ ಕಾರ್ಯನಿರ್ವಹಿಸುತ್ತಿದ್ದು, ಸಂಘ ಪರಿವಾರಕ್ಕೆ ಅವಕಾಶ ನೀಡುತ್ತಿಲ್ಲ. ಈ ಹಿನ್ನೆಲೆಯಲ್ಲಿ ಕರಾವಳಿ ಪೊಲೀಸರ ಕಾರ್ಯವೈಖರಿ ಬಗ್ಗೆ ಮೋಹನ್ ಭಾಗವತ್ ಗಂಭೀರ ಸಮಾಲೋಚನೆ ನಡೆಸಿದರು ಎನ್ನಲಾಗಿದೆ.

ಸಂಘದ ಕಾರ್ಯಕರ್ತರ ಮೂಲಕ ಹಿಂದು, ಮುಸ್ಲಿಂ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಜನಾಭಿಪ್ರಾಯ ಮೂಡಿಸುವ ಸಂಬಂಧ ಸಮಾ ಲೋಚನೆ ನಡೆಸಿದ್ದು, ಚುನಾವಣೆಗೆ ಹೇಗೆ ಸನ್ನದ್ಧರಾಗಬೇಕು ಎಂಬ ಬಗ್ಗೆ ಚರ್ಚೆ ನಡೆಸುತ್ತಿದ್ದಾರೆ.

ಪಂಚರಾಜ್ಯಗಳ ಚುನಾವಣೆಯ ಸಂಭ್ರಮಾಚರಣೆಯಲ್ಲಿ ತೊಡಗಬೇಕಿದ್ದ ಮೋಹನ್ ಭಾಗವತ್, ಇದೀಗ ಮುಂದಿನ ಗುರಿ ಬಗ್ಗೆ ಕಾರ್ಯತಂತ್ರದಲ್ಲಿ ನಿರತರಾಗಿ ದ್ದಾರೆ. ಒಟ್ಟು ಆರು ದಿನ ಚೆನ್ನೇನಹಳ್ಳಿಯ ಆರ್.ಎಸ್.ಎಸ್ ತಾಣದಲ್ಲಿರುವ ಭಾಗವತ್, ಚುನಾವಣೆಗೆ ಸರ್ವ ಸನ್ನದ್ಧತೆಯಲ್ಲಿ ತಲ್ಲೀನರಾಗಿದ್ದಾರೆ.

# ವಿಯೆಟ್ನಾಂ ಅಧ್ಯಕ್ಷ ಟೋ ಲಾಮ್ ಭಾರತಕ್ಕೆ ಮೊದಲ ಭೇಟಿ; ವ್ಯೂಹಾತ್ಮಕ ಸಂಬಂಧ ವೃದ್ಧಿಗೆ ಆದ್ಯತೆ

**ನವದೆಹಲಿ, ಮೇ 5:** ಪ್ರಧಾನಮಂತ್ರಿ ನರೇಂದ್ರ ಮೋದಿ ಆಹ್ವಾನದ ಮೇರೆಗೆ ವಿಯೆಟ್ನಾಂ ಅಧ್ಯಕ್ಷ ಟೋ ಲಾಮ್ ಮಂಗಳವಾರ ನವದೆಹಲಿಗೆ ಆಗಮಿಸಿದ್ದಾರೆ. ಅಧ್ಯಕ್ಷರಾದ ನಂತರ ಅವರು ಭಾರತಕ್ಕೆ ನೀಡುತ್ತಿರುವ ಮೊದಲ ಅಧಿಕೃತ ಭೇಟಿ ಇದಾಗಿದೆ.



ವಿಯೆಟ್ನಾಂನ ಕಮ್ಯುನಿಸ್ಟ್ ಪಕ್ಷದ ಪ್ರಧಾನ ಕಾರ್ಯದರ್ಶಿಯೂ ಆಗಿರುವ ಲಾಮ್ ಅವರಿಗೆ ನವದೆಹಲಿಯಲ್ಲಿ ಅದ್ದೂರಿ ಸ್ವಾಗತ ಕೋರಲಾಯಿತು. ಕೇಂದ್ರ ಗೃಹ ಇಲಾಖೆಯ ರಾಜ್ಯ ಸಚಿವ ನಿತ್ಯಾನಂದ ರಾಯ್ ಅವರು ವಿಮಾನ ನಿಲ್ದಾಣದಲ್ಲಿ ಅವರನ್ನು ಬರಮಾಡಿಕೊಂಡರು.

ಎರಡೂ ದೇಶಗಳ ನಡುವಿನ 'ಸಮಗ್ರ ವ್ಯೂಹಾತ್ಮಕ ಪಾಲುದಾರಿಕೆ'ಯು (ಅಠಟಿಠಿಡಿಜುಜಟಿಭಿತಜ ಖಣಡಿಚಿಣಜರುಭಿ ಕಚಿಡಿಣಟಿಜಡ್ಡಿುರಿ) 10 ವರ್ಷಗಳನ್ನು ಪೂರೈಸುತ್ತಿರುವ ಸಂದರ್ಭದಲ್ಲಿ ಈ ಮೂರು ದಿನಗಳ ಭೇಟಿ ನಡೆಯುತ್ತಿರುವುದು ವಿಶೇಷವಾಗಿದೆ. ಈ ಭೇಟಿಯು ದ್ವಿಪಕ್ಷೀಯ ಸಂಬಂಧಕ್ಕೆ ಹೊಸ ವೇಗ ನೀಡುವ ಜೊತೆಗೆ ರಕ್ಷಣೆ, ವ್ಯಾಪಾರ ಮತ್ತು ಪ್ರಾದೇಶಿಕ ಭದ್ರತೆಯಂತಹ ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರವನ್ನು ವಿಸ್ತರಿಸುವ ನಿರೀಕ್ಷೆಯಿದೆ.


ಟೋ ಲಾಮ್ ಅವರು ದೆಹಲಿಗೆ ಆಗಮಿಸಿದ ನಂತರ ಗಯಾಕ್ಕೆ ಭೇಟಿ ನೀಡಿದರು ಮತ್ತು ಅಧಿಕೃತ ಕಾರ್ಯಕ್ರಮಗಳಿಗಾಗಿ ಸಂಜೆ ಪುನಃ ನವದೆಹಲಿಗೆ ಮರಳಿದರು. ಅವರೊಂದಿಗೆ ಸಚಿವರು, ಹಿರಿಯ ಅಧಿಕಾರಿಗಳು ಮತ್ತು ಉದ್ಯಮಿಗಳನ್ನೊಳಗೊಂಡ ಉನ್ನತ ಮಟ್ಟದ ನಿಯೋಗವು ಭಾರತಕ್ಕೆ ಬಂದಿದೆ. ಇದು ಭಾರತ ಮತ್ತು ವಿಯೆಟ್ನಾಂ ನಡುವಿನ ಆಳವಾದ ಆರ್ಥಿಕ ಮತ್ತು ವ್ಯೂಹಾತ್ಮಕ ಸಂಬಂಧವನ್ನು ಪ್ರತಿಬಿಂಬಿಸುತ್ತದೆ.

ಮೇ 6ರಂದು ರಾಷ್ಟ್ರಪತಿ ಭವನದಲ್ಲಿ ವಿಯೆಟ್ನಾಂ ನಾಯಕನಿಗೆ ಔಪಚಾರಿಕ ಸ್ವಾಗತ ನೀಡಲಾಗುವುದು. ಬಳಿಕ ಅವರು ಪ್ರಧಾನಿ ಮೋದಿ ಅವರೊಂದಿಗೆ ಸಮಗ್ರ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಈ ವೇಳೆ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆಯೂ ಚರ್ಚೆಗಳು ನಡೆಯಲಿವೆ. ಭೇಟಿಯ ಸಂದರ್ಭದಲ್ಲಿ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಲಿದ್ದಾರೆ ಮತ್ತು ಮುಂಬೈಗೂ ಪ್ರವಾಸ ಕೈಗೊಳ್ಳಲಿದ್ದಾರೆ.

ಭಾರತ ಮತ್ತು ವಿಯೆಟ್ನಾಂ ಐತಿಹಾಸಿಕವಾಗಿ ಆಳವಾದ ಸಾಂಸ್ಕೃತಿಕ ಸಂಬಂಧವನ್ನು ಹೊಂದಿವೆ.

2016 ರಲ್ಲಿ ಪ್ರಧಾನಿ ಮೋದಿ ಅವರ ವಿಯೆಟ್ನಾಂ ಭೇಟಿಯ ಸಂದರ್ಭದಲ್ಲಿ ಎರಡೂ ದೇಶಗಳ ಸಂಬಂಧವನ್ನು 'ಸಮಗ್ರ ವ್ಯೂಹಾತ್ಮಕ ಪಾಲುದಾರಿಕೆ'ಗೆ ಏರಿಸಲಾಗಿತ್ತು. ಭಾರತದ 'ಆಕ್ಟ್ ಈಸ್ಟ್' ನೀತಿಯಲ್ಲಿ ವಿಯೆಟ್ನಾಂ ಪ್ರಮುಖ ಪಾಲುದಾರ ರಾಷ್ಟ್ರವಾಗಿದೆ.

ಪ್ರಸ್ತುತ ವಿಯೆಟ್ನಾಂ ಭಾರತದ 15ನೇ ಅತಿದೊಡ್ಡ ವ್ಯಾಪಾರ ಪಾಲುದಾರ ರಾಷ್ಟ್ರವಾಗಿದ್ದು, ಆಸಿಯಾನ್ ಒಕ್ಕೂಟದಲ್ಲಿ ನಾಲ್ಕನೇ ಸ್ಥಾನದಲ್ಲಿದೆ. 2025–26ರಲ್ಲಿ ಎರಡೂ ದೇಶಗಳ ನಡುವಿನ ವ್ಯಾಪಾರ ಸುಮಾರು 16 ಶತಕೋಟಿ ಡಾಲರ್‌ಗಳಷ್ಟಿದೆ. ಇಂಧನ, ಮೂಲಸೌಕರ್ಯ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸಹಕಾರವು ನಿರಂತರವಾಗಿ ಬೆಳೆಯುತ್ತಿದೆ. ಟೋ ಲಾಮ್ ಅವರು ವಿಯೆಟ್ನಾಂ ಅಧ್ಯಕ್ಷರಾಗಿ ಆಯ್ಕೆಯಾದಾಗ ಪ್ರಧಾನಿ ಮೋದಿ ಅವರು ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದ್ದರು ಮತ್ತು ಎರಡೂ ರಾಷ್ಟ್ರಗಳ ಹಿತದೃಷ್ಟಿಯಿಂದ ಒಟ್ಟಾಗಿ ಕೆಲಸ ಮಾಡುವ ಆಶಯ ವ್ಯಕ್ತಪಡಿಸಿದ್ದರು.



ಉತ್ತರ ಪ್ರದೇಶದ ಪ್ರಯಾಗರಾಜ್‌ನಲ್ಲಿ ನಡೆದ ನಾರ್ತ್ ಟೆಕ್ ವಿಚಾರಸಂಕಿರಣದಲ್ಲಿ ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ಪಾಲ್ಗೊಂಡಿದ್ದರು.

# ಪಂಚರಾಜ್ಯ ಚುನಾವಣೆಯಲ್ಲಿ ಗೆದ್ದ ಕಾಂಗ್ರೆಸ್ ಅಭ್ಯರ್ಥಿಗಳಲ್ಲಿ ಬಹುತೇಕರು ಮುಸ್ಲಿಮರು

**ನವದೆಹಲಿ, ಮೇ 5:** ಅಸ್ಸಾಂ, ಕೇರಳ, ಪಶ್ಚಿಮ ಬಂಗಾಳ ಮತ್ತು ತಮಿಳುನಾಡು ರಾಜ್ಯದಲ್ಲಿ ವಿಧಾನಸಭಾ ಚುನಾವಣೆಯಲ್ಲಿ ಗೆಲುವು ಕಂಡ ಕಾಂಗ್ರೆಸ್ ಅಭ್ಯರ್ಥಿಗಳಲ್ಲಿ ಬಹುತೇಕರು ಮುಸ್ಲಿಂ ಅಭ್ಯರ್ಥಿಗಳಾಗಿದ್ದಾರೆ ಎಂದು ಫಲಿತಾಂಶದ ಬಳಿಕ ವಿಶ್ಲೇಷಣೆಯಲ್ಲಿ ತಿಳಿದು ಬಂದಿದೆ.



ಫಲಿತಾಂಶದ ಪ್ರಕಾರ ಅಸ್ಸಾಂನಲ್ಲಿ ಕಾಂಗ್ರೆಸ್‌ನಿಂದ ಗೆಲುವು ಕಂಡ 19 ಶಾಸಕರಲ್ಲಿ 18 ಮಂದಿ ಮುಸ್ಲಿಮರು. ಅಸ್ಸಾಂನಲ್ಲಿ ಕಾಂಗ್ರೆಸ್ ಒಟ್ಟು 79 ಮುಸ್ಲಿಮೇತರ ಅಭ್ಯರ್ಥಿಗಳಿಗೆ ಟಿಕೆಟ್ ನೀಡಿದ್ದರೆ.

20 ಮುಸ್ಲಿಂ ಅಭ್ಯರ್ಥಿಗಳನ್ನು ಈ ಬಾರಿ ಕಣಕ್ಕೆ ಇಳಿಸಿತ್ತು. ಇದರಲ್ಲಿ ಒಬ್ಬ ಮುಸ್ಲಿಮೇತರ ಅಭ್ಯರ್ಥಿ ಹೊರತು ಪಡಿಸಿದರೆ, 18 ಮುಸ್ಲಿಂ ಅಭ್ಯರ್ಥಿಗಳು ಜಯಗಳಿಸಿದ್ದಾರೆ. ಕಾಂಗ್ರೆಸ್ ಮಿತ್ರ ಪಕ್ಷ ರೈಜೋರ್ ದಳ ಎರಡು ಸ್ಥಾನಗಳನ್ನು ಗೆದ್ದಿದ್ದು, ಅದರಲ್ಲಿ ಒಬ್ಬ ಮುಸ್ಲಿಂ ಅಭ್ಯರ್ಥಿ ಜಯಭೇರಿ ಬಾರಿಸಿದ್ದಾರೆ.

ಕೇರಳದಲ್ಲಿ ಒಟ್ಟಾರೆ 35 ಮುಸ್ಲಿಂ ಅಭ್ಯರ್ಥಿಗಳು ಜಯಕಂಡಿದ್ದು, ಈ 35 ಜನರಲ್ಲಿ 30 ಮಂದಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಮೈತ್ರಿಕೂಟಕ್ಕೇ ಸೇರಿದವರಾಗಿದ್ದಾರೆ. ಎಂಟು ಕಾಂಗ್ರೆಸ್ ಶಾಸಕರು ಮುಸ್ಲಿಮರು ಮತ್ತು ಅದರ ಮಿತ್ರಪಕ್ಷವಾದ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್‌ನ ಇತರ 22 ಶಾಸಕರು ಮುಸ್ಲಿಮ್ ಅಭ್ಯರ್ಥಿಗಳಾಗಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಕಾಂಗ್ರೆಸ್ ಎರಡು ಕ್ಷೇತ್ರದಲ್ಲಿ ಗೆಲುವು ಕಂಡಿದ್ದು, ಆ ಎರಡೂ ಕ್ಷೇತ್ರಗಳಲ್ಲಿ ಮುಸ್ಲಿಂ ಅಭ್ಯರ್ಥಿಗಳೇ ಗೆಲುವು ಸಾಧಿಸಿದ್ದಾರೆ. ಅಂದ ಹಾಗೇ ಈ ಎರಡೂ ಕ್ಷೇತ್ರಗಳು ಮುಸ್ಲಿಂ ಬಾಹುಳ್ಯದ ಕ್ಷೇತ್ರಗಳು ಎಂಬುದು ಗಮನಿಸಬೇಕಾದ ಅಂಶ. ವಾಸ್ತವವಾಗಿ 63 ಮುಸ್ಲಿಂ ಅಭ್ಯರ್ಥಿಗಳಿಗೆ ಕಾಂಗ್ರೆಸ್ ಟಿಕೆಟ್ ನೀಡಿತ್ತು. ಇದು ಟಿಎಂಸಿ ಪಕ್ಷದ ನೀಡಿದ ಟಿಕೆಟ್ ಗಳಿಗಿಂತ ಹೆಚ್ಚು. ಈ ಬಾರಿಯ ಚುನಾವಣೆಯಲ್ಲಿ ಟಿಎಂಸಿ 47 ಮುಸ್ಲಿಂ ಅಭ್ಯರ್ಥಿಗಳಿಗೆ ಟಿಕೆಟ್ ನೀಡಿತ್ತು.

ತಮಿಳುನಾಡಿನಲ್ಲಿ ಕಾಂಗ್ರೆಸ್ ಇಬ್ಬರು ಮುಸ್ಲಿಂ ಅಭ್ಯರ್ಥಿಗಳನ್ನು ಕಣಕ್ಕೆ ಇಳಿಸಿತ್ತು. ಇದರಲ್ಲಿ ಓರ್ವ ಅಭ್ಯರ್ಥಿ ಗೆಲುವು ಸಾಧಿಸಿದ್ದಾರೆ. ಕೇರಳ ಮತ್ತು ಅಸ್ಸಾಂ ಎರಡರಲ್ಲೂ ಕಾಂಗ್ರೆಸ್ ಮೈತ್ರಿಕೂಟಗಳಿಂದ ಸ್ಪರ್ಧಿಸಿರುವ ಮುಸ್ಲಿಮರು ಶೇ 80ರಷ್ಟು ಗೆಲುವಿನ ದರ ಹೊಂದಿದ್ದಾರೆ ಎಂದು ಮೂಲಗಳು ತಿಳಿಸಿವೆ.

**ಟಿಎಂಸಿ ಸೋತಿಲ್ಲ; 100 ಸ್ಥಾನಗಳನ್ನು ಬಲವಂತವಾಗಿ ಕಸಿದುಕೊಳ್ಳಲಾಗಿದೆ**

# ಚುನಾವಣಾ ಆಯೋಗದ ವಿರುದ್ಧ ಮಮತಾ ಬ್ಯಾನರ್ಜಿ ವಾಗ್ದಾಳಿ

**ಕೊಲ್ಕತ್ತಾ, ಮೇ 5:** ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ತೃಣಮೂಲ ಕಾಂಗ್ರೆಸ್ ಪಕ್ಷದ ಸೋಲಿನ ಬಳಿಕ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಚುನಾವಣಾ ಆಯೋಗ ಹಾಗೂ ಮುಖ್ಯ ಚುನಾವಣಾ ಆಯುಕ್ತರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಚುನಾವಣೆಯಲ್ಲಿ ಹಲವು ಅಕ್ರಮಗಳು ನಡೆದಿವೆ ಎಂದು ಆರೋಪಿಸಿದ್ದಾರೆ.



ನಾವು ಬಿಜೆಪಿ ವಿರುದ್ಧ ಮಾತ್ರ ಹೋರಾಡಲಿಲ್ಲ. ಆ ಪಕ್ಷಕ್ಕೆ ಅನುಕೂಲವಾಗುವಂತೆ ಕೆಲಸ ಮಾಡಿದ ಚುನಾವಣಾ ಆಯೋಗದ ವಿರುದ್ಧವೂ ಹೋರಾಡಿದೆವು. ಇಡೀ ವ್ಯವಸ್ಥೆಯೇ ನಮ್ಮ ವಿರುದ್ಧ ಇತ್ತು. ಪ್ರಧಾನಿ ಮತ್ತು ಗೃಹ ಸಚಿವರು ನೇರವಾಗಿ ಹಸ್ತಕ್ಷೇಪ ಮಾಡಿದ್ದಾರೆ ಎಂದು ಅವರು ಹೇಳಿದ್ದಾರೆ.

ಮತದಾರರ ಪಟ್ಟಿಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿದ ಅವರು, ಸುಮಾರು 90 ಲಕ್ಷ ಹೆಸರುಗಳನ್ನು ಅಳಿಸಲಾಗಿದೆ. ನ್ಯಾಯಾಲಯದ ಕದತಟ್ಟಿದ ಬಳಿಕ 32 ಲಕ್ಷ ಹೆಸರುಗಳನ್ನು ವಾಪಸ್ ಸೇರಿಸಲಾಯಿತು. ಆದರೆ ಇನ್ನೂ ಸುಮಾರು ಏಳು ಲಕ್ಷ ಹೆಸರುಗಳನ್ನು ನಂತರ ಸೇರಿಸಲಾಗಿದೆ. ಇದರ ಬಗ್ಗೆ ಯಾವುದೇ ಸ್ಪಷ್ಟತೆ ಇಲ್ಲ. ಇದು ಚುನಾವಣೆಯಲ್ಲಿ ನಡೆದ ಅಸಹ್ಯ ಹಾಗೂ ಕುತಂತ್ರದ ಆಟವನ್ನು ತೋರಿಸುತ್ತದೆ ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ.

ಫಲಿತಾಂಶಗಳನ್ನು ಪ್ರಶ್ನಿಸಿದ ಅವರು, ನಾವು ಸೋತಿಲ್ಲ; 100 ಸ್ಥಾನಗಳನ್ನು ಬಲವಂತವಾಗಿ ಕಸಿದುಕೊಂಡಿದ್ದಾರೆ ಎಂದು ದೂರಿದರು.

ಇವಿಎಂ ಬಳಕೆಯ ಮೇಲೂ ಅನುಮಾನ ವ್ಯಕ್ತಪಡಿಸಿದ ಅವರು, ಮತದಾನದ ನಂತರವೂ ಇವಿಎಂಗಳು 80–90% ಚಾರ್ಜ್ ಉಳಿಸಿಕೊಂಡಿದ್ದವು. ಇದು ಹೇಗೆ ಸಾಧ್ಯ. ಚುನಾವಣೆಗೆ ಮುನ್ನ ನಮ್ಮ ಕಾರ್ಯಕರ್ತರನ್ನು ಬಂಧಿಸಿ ದಾಳಿ ನಡೆಸಿದರು. ಐಪಿಎಸ್, ಐಎಎಸ್ ಅಧಿಕಾರಿಗಳನ್ನು ಬದಲಾಯಿಸಿ ತಮ್ಮವರನ್ನು ನೇಮಕ ಮಾಡಿದರು. ಚುನಾವಣಾ ಆಯೋಗ ಮತ್ತು ಬಿಜೆಪಿ ನಡುವೆ ಹೊಂದಾಣಿಕೆ ಇದ್ದಂತಿದೆ ಎಂದು ಆರೋಪಿಸಿದರು.

ಜನರ ಪ್ರಜಾಪ್ರಭುತ್ವ ಹಕ್ಕುಗಳನ್ನು ಕಸಿದುಕೊಳ್ಳಲು, ಇವಿಎಂಗಳನ್ನು ದುರುಪಯೋಗಪಡಿಸಿಕೊಳ್ಳಲಾಗಿದೆ. ಈ ಚುನಾವಣೆಯಲ್ಲಿ ಸಿಇಸಿ ಖಳನಾಯಕನಂತೆ ವರ್ತಿಸಿದ್ದಾರೆ. ನನ್ನ ಜೀವನದಲ್ಲಿ ಇಂತಹ ಚುನಾವಣೆಯನ್ನು ನೋಡಿಲ್ಲ ಎಂದು ಮಮತಾ ಬ್ಯಾನರ್ಜಿ ಕಿಡಿಕಾರಿದರು.

# ಟಿವಿಕೆ ಗೆಲುವಿಗೆ ಕಾಂಗ್ರೆಸ್ ನಾಯಕ ಚಿದಂಬರಂ ಶ್ಲಾಘನೆ

**ಚೆನ್ನೈ, ಮೇ 5:** ತಮಿಳುನಾಡು ಚುನಾವಣೆಯಲ್ಲಿ ಭರ್ಜರಿ ಯಶಸ್ಸು ಸಾಧಿಸಿರುವ ಟಿವಿಕೆ ಪಕ್ಷ ಹಾಗೂ ಅದರ ನಾಯಕ ವಿಜಯ್ ಅವರನ್ನು ತಮಿಳುನಾಡಿನ ಹಿರಿಯ ಕಾಂಗ್ರೆಸ್ ನಾಯಕ ಪಿ. ಚಿದಂಬರಂ ಅವರು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ತಮಿಳುನಾಡಿನ ಜನರ ತೀರ್ಪನ್ನು ಸ್ವಾಗತಿಸುತ್ತೇನೆ. ಉತ್ತಮ ಆಡಳಿತಕ್ಕೆ ವಿಜಯ'ವಾಗಲಿ ಎಂದಿದ್ದಾರೆ. ತಮಿಳುನಾಡಿನಲ್ಲಿ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿರುವ ಟಿವಿಕೆ ಹಾಗೂ ಅದರ ನಾಯಕ ವಿಜಯ್ ಅವರಿಗೆ ನಾನು ಅಭಿನಂದನೆ ಸಲ್ಲಿಸುವೆ. ಹಾಗೆಯೇ ಚುನಾವಣೆಯಲ್ಲಿ ಹಗಲಿರುಳು ದುಡಿದ ನಮ್ಮ ಒಕ್ಕೂಟದ ಕಾರ್ಯಕರ್ತರಿಗೆ ನಾನು ಧನ್ಯವಾದ ತಿಳಿಸುತ್ತೇನೆ ಎಂದಿದ್ದಾರೆ.ತಮಿಳುನಾಡು ವಿಧಾನಸಭೆ ಚುನಾವಣೆಯಲ್ಲಿ ವಿಜಯ್ ಅವರ ಟಿವಿಕೆ 108 ಸ್ಥಾನಗಳನ್ನು ಪಡೆಯುವ ಮೂಲಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಆದರೆ, ಯಾರಿಗೂ ಬಹುಮತ ಸಿಕ್ಕಿಲ್ಲ.ಚಿದಂಬರಂ ಅವರ ಕಾಂಗ್ರೆಸ್ 5 ಹಾಗೂ ಪಕ್ಷೇತರರು 11 ಸ್ಥಾನಗಳನ್ನು ಪಡೆದಿದ್ದಾರೆ. ವಿಜಯ್ ಅವರಿಗೆ ಕಾಂಗ್ರೆಸ್ ಬೆಂಬಲಿಸುವ ಸೂಚನೆಗಳು ಸಿಕ್ಕಿವೆ ಎಂದು ಕೆಲ ವರದಿಗಳು ಹೇಳಿವೆ. ಹೀಗಾಗಿ ವಿಜಯ್ ತಮಿಳುನಾಡಿನ ಮುಂದಿನ ಹೊಸ ಸಿಎಂ ಆಗುವುದು ಬಹುತೇಕ ಖಚಿತ ಎಂದಿದ್ದಾರೆ.




ನವದೆಹಲಿಯ ಭಾರತ್ ಮಂಟಪದಲ್ಲಿ ನಡೆದ ಐಐಟಿ ಮದ್ರಾಸ್ ತಂತ್ರಜ್ಞಾನ ಶೃಂಗಸಭೆ ಉದ್ಘಾಟನಾ ಸಮಾರಂಭದಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಮತ್ತು ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಮತ್ತು ಶಿಕ್ಷಣ ರಾಜ್ಯ ಸಚಿವ ಜಯಂತ್ ಚೌಧರಿ ಪಾಲ್ಗೊಂಡರು.

# ದೆಹಲಿಯ ಬೋರ್‌ವೆಲ್ ನೀತಿ ಬಡವರ ವಿರೋಧಿ: ಕಾಂಗ್ರೆಸ್ ಟೀಕೆ

**ನವದೆಹಲಿ, ಮೇ 5:** ದೆಹಲಿ ಸರ್ಕಾರದ ಪ್ರಸ್ತಾವಿತ ಬೋರ್‌ವೆಲ್ ನೀತಿಯನ್ನು ದೆಹಲಿ ಪ್ರದೇಶ ಕಾಂಗ್ರೆಸ್ ಸಮಿತಿಯು ಟೀಕಿಸಿದೆ. ಈ ನೀತಿಯು ಆರ್ಥಿಕವಾಗಿ ಹಿಂದುಳಿದ ವರ್ಗದವರು ಅಂತರ್ಜಲ ಸಂಪನ್ಮೂಲಗಳನ್ನು ಬಳಸದಂತೆ ಹೊರಗಿಡುತ್ತದೆ ಎಂದು ಕಾಂಗ್ರೆಸ್ ಆರೋಪಿಸಿದೆ.

ದೆಹಲಿ ಕಾಂಗ್ರೆಸ್ ಅಧ್ಯಕ್ಷ ದೇವೆಂದರ್ ಯಾದವ್ ಮಾತನಾಡಿ, "ಪ್ರಸ್ತಾವಿತ ನೀತಿಯ ಪ್ರಕಾರ ಮಳೆನೀರು ಕೊಯ್ಲು ವ್ಯವಸ್ಥೆಯನ್ನು ಹೊಂದಿರುವ ಮನೆಗಳು ಮತ್ತು ವಸತಿ ಪ್ರದೇಶಗಳಿಗೆ ಮಾತ್ರ ಅಧಿಕೃತ ಬೋರ್ವೆಲ್ಗಳನ್ನು ಕೊರೆಯಲು ಅನುಮತಿ ನೀಡಲಾಗುವುದು ಎಂದು ವರದಿಯಾಗಿದೆ. ಇದು ಕೊಳಚೆ ಪ್ರದೇಶಗಳು, ಅನಧಿಕೃತ ಬಡಾವಣೆಗಳು ಮತ್ತು ಪುನರ್ವಸತಿ ಪ್ರದೇಶಗಳ ಮೇಲೆ ಗಂಭೀರ ಪರಿಣಾಮ ಬೀರಲಿದೆ" ಎಂದು ಹೇಳಿದರು. ಈ ಕ್ರಮವು ಅನ್ಯಾಯದಿಂದ ಕೂಡಿದೆ ಎಂದು ಬಣ್ಣಿಸಿದ ಅವರು, ಅನೇಕ ಪ್ರದೇಶಗಳಲ್ಲಿ ನೀರಿನ ಅಗತ್ಯವಿದ್ದರೂ ಅಲ್ಲಿ ಮಳೆನೀರು ಕೊಯ್ಲು ಮೂಲಸೌಕರ್ಯಗಳ ಕೊರತೆಯಿದೆ ಎಂದು ವಾದಿಸಿದರು.

ಇಂತಹ ಷರತ್ತುಗಳ ಮೇಲೆ ಬೋರ್ವೆಲ್ ಅನುಮತಿಗಳನ್ನು ನಿರ್ಬಂಧಿಸುವುದು ಈಗಾಗಲೇ ಪೈಪ್ ಮೂಲಕ ನೀರು ಪಡೆಯಲು ಕಷ್ಟಪಡುತ್ತಿರುವ ಸಮಾಜದ ದುರ್ಬಲ ವರ್ಗದವರನ್ನು ಸಂಕಷ್ಟಕ್ಕೆ ದೂಡುತ್ತದೆ ಎಂದು ಯಾದವ್ ಹೇಳಿದರು. ಪೌರಸಂಸ್ಥೆಗಳಿಂದ ಸರಿಯಾದ ನೀರು ಸರಬರಾಜು ಇಲ್ಲದ ಸಂದರ್ಭದಲ್ಲಿ ಬೋರ್ವೆಲ್‌ಗಳೇ ಅನೇಕ ಕುಟುಂಬಗಳಿಗೆ ಪ್ರಮುಖ ನೀರಿನ ಮೂಲವಾಗಿವೆ ಎಂದು ಅವರು ತಿಳಿಸಿದರು.

ಮುಂದುವರಿದು ಅವರು, "ಹೆಚ್ಚುತ್ತಿರುವ ತಾಪಮಾನದ ನಡುವೆ ನಗರವು ತೀವ್ರ ನೀರಿನ ಅಭಾವ ಎದುರಿಸುತ್ತಿದೆ. ಹಲವಾರು ಪ್ರದೇಶಗಳು ಅನಿಯಮಿತ ನೀರು ಸರಬರಾಜಿನಿಂದಾಗಿ ಟ್ಯಾಂಕರ್ ನೀರನ್ನು ಅವಲಂಬಿಸಿವೆ ಅಥವಾ ಹಣ ನೀಡಿ ನೀರನ್ನು ಖರೀದಿಸುತ್ತಿವೆ. ಟ್ಯಾಂಕರ್ ಮೂಲಕ ಪೂರೈಸುವ ನೀರು ಅನೇಕ ಕಡೆ ಸಾಕಾಗುತ್ತಿಲ್ಲ, ಇದು ನಿವಾಸಿಗಳ ಪರಿಸ್ಥಿತಿಯನ್ನು ಇನ್ನಷ್ಟು ಹದಗೆಡಿಸಿದೆ" ಎಂದು ಕಿಡಿಕಾರಿದರು.

ದಕ್ಷಿಣ ದೆಹಲಿಯ ರಂಗಪುರಿ ಪಹಾರಿ ಪ್ರದೇಶದ ಬಗ್ಗೆ ಪ್ರಸ್ತಾಪಿಸಿದ ಅವರು, ಅಲ್ಲಿನ ಸಾವಿರಾರು ನಿವಾಸಿಗಳು ದೀರ್ಘಕಾಲದಿಂದ ನೀರಿನ ಸಮಸ್ಯೆಯನ್ನು ಎದುರಿಸುತ್ತಿದ್ದಾರೆ. ಅಧಿಕಾರಿಗಳು ಅಲ್ಲಿನ ಸ್ಥಳೀಯ ಬೋರ್ವೆಲ್‌ಗಳನ್ನು ಬಂದ್ ಮಾಡಿದ ನಂತರ, ನಿವಾಸಿಗಳು ಟ್ಯಾಂಕರ್ ನೀರನ್ನು ಅವಲಂಬಿಸುವಂತಾಗಿದೆ; ಆದರೆ ಆ ಟ್ಯಾಂಕರ್‌ಗಳು ಸಹ ಹಲವಾರು ದಿನಗಳಿಗೊಮ್ಮೆ ಅಪರೂಪಕ್ಕೆ ಬರುತ್ತವೆ ಎಂದು ಅವರು ಆರೋಪಿಸಿದರು.

ನಗರದ ಹಲವಾರು ಭಾಗಗಳಲ್ಲಿ ಕಂಡುಬರುತ್ತಿರುವ ಈ ನೀರಿನ ಬಿಕ್ಕಟ್ಟು, ಈ ಹಿಂದಿನ ಮತ್ತು ಈಗಿನ ಸರ್ಕಾರಗಳು ಬಡಪ್ರದೇಶಗಳಲ್ಲಿನ ಮೂಲಭೂತ ಸೌಕರ್ಯಗಳನ್ನು ನಿರ್ಲಕ್ಷಿಸಿರುವುದನ್ನು ಪ್ರತಿಬಿಂಬಿಸುತ್ತದೆ ಎಂದು ಯಾದವ್ ಹೇಳಿದರು.

# ಕೊನೆಗೂ ತೆರೆಯಿತು ದುರ್ಗಾ ದೇಗುಲದ ಬಾಗಿಲು

**ಆಸನ್ಸೋಲ್, ಮೇ 5:** ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಭರ್ಜರಿ ಜಯ ದಾಖಲಿಸುತ್ತಿದ್ದಂತೆಯೇ ರಾಜ್ಯದಲ್ಲಿ ಮಹತ್ವದ ಬದಲಾವಣೆಯೊಂದು ಕಂಡುಬಂದಿದೆ. ಸ್ಥಳೀಯ ಉದ್ವಿಗ್ನತೆಯ ಕಾರಣದಿಂದಾಗಿ ಕಳೆದ ಹಲವಾರು ವರ್ಷಗಳಿಂದ ಬಂದ್ ಆಗಿದ್ದ ಆಸನ್ಸೋಲ್‌ನ ದುರ್ಗಾ ದೇವಸ್ಥಾನದ ಬಾಗಿಲನ್ನು ಭಕ್ತರಿಗಾಗಿ ಸೋಮವಾರ ಮುಕ್ತಗೊಳಿಸಲಾಗಿದೆ. ಇದು ಕೇವಲ ಧಾರ್ಮಿಕ ವಿದ್ಯಮಾನವಾಗಿ ಉಳಿಯದೆ, ರಾಜ್ಯದಲ್ಲಿನ ರಾಜಕೀಯ ಬದಲಾವಣೆಯ ಸಂಕೇತವಾಗಿ ಹೊರಹೊಮ್ಮಿದೆ.

ಅಸನ್ಸೆಲ್ ಉತ್ತರ ಕ್ಷೇತ್ರದ ನೂತನ ಬಿಜೆಪಿ ಶಾಸಕ ಕೃಷ್ಣೇಂದು ಮುಖರ್ಜಿ ಅವರು ಚುನಾವಣಾ ಪ್ರಚಾರದ ವೇಳೆ ಒಂದು ಮಹತ್ವದ ಭರವಸೆ ನೀಡಿದ್ದರು. "ನಾನು ಚುನಾವಣೆಯಲ್ಲಿ ಗದ್ದರೆ, ವರ್ಷವಿಡೀ ಮುಚ್ಚಿರುವ ಈ ದೇವಸ್ಥಾನದ ಬಾಗಿಲನ್ನು ತೆರೆಸುತ್ತೇನೆ" ಎಂದು ಮಾತು ನೀಡಿದ್ದರು. ಅದರಂತೆ, ಪಶ್ಚಿಮ ಬರ್ಧಮಾನ್ ಜಿಲ್ಲೆಯ ಎಲ್ಲಾ ಒಂಬತ್ತು ವಿಧಾನಸಭಾ ಕ್ಷೇತ್ರಗಳನ್ನು ಬಿಜೆಪಿ ಗುಡಿಸಿ ಹಾಕಿದ ಬೆನ್ನಲ್ಲೇ, ಶಾಸಕರು ದೇವಸ್ಥಾನಕ್ಕೆ ಭೇಟಿ ನೀಡಿ ಅದರ ಪುನರಾರಂಭಕ್ಕೆ ಚಾಲನೆ ನೀಡಿದರು. ದುರ್ಗಾಮಾತಾ ಚಾರಿಟಬಲ್ ಟ್ರಸ್ಟ್ ನಿರ್ವಹಿಸುತ್ತಿದ್ದ ಈ ದೇವಸ್ಥಾನವು ಈ ಹಿಂದೆ ಕೇವಲ ದುರ್ಗಾ ಪೂಜೆ ಮತ್ತು ಲಕ್ಷ್ಮಿ ಪೂಜೆಯ ಸಂದರ್ಭದಲ್ಲಿ ಮಾತ್ರ ತೆರೆಯುತ್ತಿತ್ತು. ಉಳಿದ ದಿನಗಳಲ್ಲಿ ಆಡಳಿತಾತ್ಮಕ ನಿರ್ಬಂಧಗಳು ಮತ್ತು ಕೋಮು ಉದ್ವಿಗ್ನತೆಯ ಕಾರಣದಿಂದ ದೇವಸ್ಥಾನಕ್ಕೆ ಭಕ್ತರ ಪ್ರವೇಶ ನಿಷೇಧಿಸಲಾಗಿತ್ತು. 15 ವರ್ಷಗಳ ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಕಾಂಗ್ರೆಸ್ ಆಡಳಿತವನ್ನು ಅಂತ್ಯಗೊಳಿಸಿರುವ ಬಿಜೆಪಿ, 293 ಸ್ಥಾನಗಳ ಪೈಕಿ 206 ಸ್ಥಾನಗಳನ್ನು ಗೆಲ್ಲುವ ಮೂಲಕ ಸ್ಪಷ್ಟ ಬಹುಮತ ಪಡೆದಿದೆ. ಟಿಎಂಸಿ ಕೇವಲ 80 ಸ್ಥಾನಗಳಿಗೆ ಕುಸಿದಿದೆ. ಶೇ.92 ರಷ್ಟು ದಾಖಲೆ ಪ್ರಮಾಣದ ಮತದಾನ ನಡೆದಿದ್ದ ಈ ಚುನಾವಣೆಯು ಬಂಗಾಳದ ಇತಿಹಾಸದಲ್ಲಿ ಹೊಸ ಮೈಲಿಗಲ್ಲಾಗಿದೆ. ಆಸನ್ಸೋಲ್ನಲ್ಲಿ ನಡೆದ ಈ ದೇವಸ್ಥಾನ ಪುನರಾರಂಭದ ಘಟನೆಯು ಈ ಹೊಸ ರಾಜಕೀಯ ಪರ್ವದ ಸಂಕೇತವೆಂದೇ ಅಲ್ಲಿನ ನಿವಾಸಿಗಳು ಭಾವಿಸಿದ್ದಾರೆ.

**5,659 ಕೋಟಿ ರೂ.ಗಳ ವೆಚ್ಚಕ್ಕೆ ಕೇಂದ್ರ ಸಂಪುಟ ಅನುಮೋದನೆ: ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ**

# ಇಳುವರಿ, ಗುಣಮಟ್ಟ, ರಫ್ತು ಹೆಚ್ಚಿಸಲು ಹತ್ತಿ ಉತ್ಪಾದನಾ ಮಿಷನ್

**ನವದೆಹಲಿ, ಮೇ 5:** ದೇಶದ ಹತ್ತಿ ವಲಯದಲ್ಲಿನ ರಚನಾತ್ಮಕ ಅಡೆತಡೆಗಳನ್ನು ನಿವಾರಿಸಲು, ಕುಸಿಯುತ್ತಿರುವ ಬೆಳವಣಿಗೆಯನ್ನು ತಡೆಯಲು ಮತ್ತು ಗುಣಮಟ್ಟವನ್ನು ಸುಧಾರಿಸಲು 2026–27ರಿಂದ 2030–31ರ ಅವಧಿಯ ಹೊಸ "ಹತ್ತಿ ಉತ್ಪಾದನಾ ಮಿಷನ್"ಗಾಗಿ 5,659.22 ಕೋಟಿ ರೂ.ಗಳ ವೆಚ್ಚಕ್ಕೆ ಕೇಂದ್ರ ಸಚಿವ ಸಂಪುಟ ಮಂಗಳವಾರ ಅನುಮೋದನೆ ನೀಡಿದೆ ಎಂದು ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹತ್ತಿಯ ಉತ್ಪಾದಕತೆಯನ್ನು ಹೆಚ್ಚಿಸಲು, ಗುಣಮಟ್ಟದ ಮಾನದಂಡಗಳನ್ನು ಬಲಪಡಿಸಲು ಮತ್ತು ಭಾರತೀಯ ಹತ್ತಿಯನ್ನು ಜಾಗತಿಕವಾಗಿ ಸ್ಪರ್ಧಾತ್ಮಕವಾಗಿ ರೂಪಿಸಲು ಈ ಮಿಷನ್ ವಿನ್ಯಾಸಗೊಳಿಸಲಾಗಿದೆ.

ಇದು ಹತ್ತಿ ಮೌಲ್ಯ ಸರಪಳಿಯಲ್ಲಿನ ಪ್ರಮುಖ ಸವಾಲುಗಳನ್ನು ಎದುರಿಸಲಿದೆ ಮತ್ತು ದೇಶೀಯ ಉದ್ಯಮ ಹಾಗೂ ರಫ್ತು ಎರಡಕ್ಕೂ ಉತ್ತಮ ಗುಣಮಟ್ಟದ ಉತ್ಪಾದನೆಯನ್ನು ಖಚಿತಪಡಿಸಲಿದೆ ಎಂದಿದ್ದಾರೆ.

ಸರ್ಕಾರದ "5F" ದೃಷ್ಟಿಕೋನಕ್ಕೆ (Farm to Fibre to Factory to Fashion to Foreign - ಹೊಲದಿಂದ ನೂಲು, ನೂಲಿನಿಂದ ಕಾರ್ಖಾನೆ, ಕಾರ್ಖಾನೆಯಿಂದ ಫ್ಯಾಷನ್ ಮತ್ತು ಫ್ಯಾಷನ್‌ನಿಂದ ವಿದೇಶ) ಅನುಗುಣವಾಗಿ ಈ ಉಪಕ್ರಮವು ರೂಪುಗೊಂಡಿದೆ. ಇದು ಅಧಿಕ ಇಳುವರಿ ನೀಡುವ, ಹವಾಮಾನ ಸ್ಥಿತಿಸ್ಥಾಪಕ ಮತ್ತು ಕೀಟನಿರೋಧಕ ಬೀಜತಳಿಗಳನ್ನು ಅಭಿವೃದ್ಧಿ ಪಡಿಸುವುದರ ಮೇಲೆ ಕೇಂದ್ರೀಕರಿಸುತ್ತದೆ.

ಈ ಮಿಷನ್ ಹತ್ತಿ ಜಿನ್ನಿಂಗ್ ಮತ್ತು ಸಂಸ್ಕರಣಾ ಘಟಕಗಳ ಆಧುನೀಕರಣದಲ್ಲಿ ಹೂಡಿಕೆ ಮಾಡಲಿದೆ.

ಅಲ್ಲದೆ, 'ಕಸ್ತೂರಿ ಕಾಟನ್ ಭಾರತ್' ಬ್ರ್ಯಾಂಡಿಂಗ್ ಅಡಿಯಲ್ಲಿ ಭಾರತೀಯ ಹತ್ತಿಯನ್ನು ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಪ್ರೀಮಿಯಂ ಮತ್ತು ಸುಸ್ಥಿರ ಉತ್ಪನ್ನವಾಗಿ ಗುರುತಿಸುವಂತೆ ಮಾಡುವುದು ಇದರ ಪ್ರಮುಖ ಉದ್ದೇಶವಾಗಿದೆ.

ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ಹಾಗೂ ಜವಳಿ ಸಚಿವಾಲಯಗಳು ಜಂಟಿಯಾಗಿ ಈ ಮಿಷನ್ನ ಅನುಷ್ಠಾನದ ಮೇಲ್ವಿಚಾರಣೆಯನ್ನು ವಹಿಸಲಿವೆ. ಇದು ಭಾರತದ ಹತ್ತಿ ಪರಿಸರ ವ್ಯವಸ್ಥೆಯನ್ನು ಪರಿವರ್ತಿಸುವ ಮತ್ತು ಜಾಗತಿಕ ಜವಳಿ ಮಾರುಕಟ್ಟೆಯಲ್ಲಿ ಭಾರತದ ಸ್ಥಾನಮಾನವನ್ನು ಹೆಚ್ಚಿಸುವ ಸಮಗ್ರ ಪ್ರಯತ್ನವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

### ಮುಖ್ಯಾಂಶಗಳು

- **2030–31ರ ವೇಳೆಗೆ 498 ಲಕ್ಷ ಬೇಲ್ ಹತ್ತಿ ಉತ್ಪಾದಿಸುವ ಗುರಿ ಹೊಂದಲಾಗಿದೆ (ಪ್ರತಿ ಬೇಲ್ 170 ಕೆಜಿ).**
- **ಪ್ರತಿ ಹೆಕ್ಟೇರ್‌ಗೆ ಲಿಂಟ್ ಉತ್ಪಾದಕತೆಯನ್ನು 440 ಕೆಜಿಯಿಂದ 755 ಕೆಜಿಗೆ ಹೆಚ್ಚಿಸುವುದು.**
- **32 ಲಕ್ಷ ಹತ್ತಿ ಬೆಳೆಗಾರರು ಈ ಯೋಜನೆಯಿಂದ ಪ್ರಯೋಜನ ಪಡೆಯಲಿದ್ದಾರೆ.**
- **ಆರಂಭಿಕ ಹಂತದಲ್ಲಿ 14 ರಾಜ್ಯಗಳ 140 ಜಿಲ್ಲೆಗಳಲ್ಲಿ ಈ ಯೋಜನೆ ಜಾರಿಗೆ ಬರಲಿದೆ.**
- **ಹತ್ತಿ ತ್ಯಾಜ್ಯದ ಮರುಬಳಕೆ ಮತ್ತು ಬಿದಿರು, ಬಾಳೆನಾರು ಮುಂತಾದ ಇತರ ನೈಸರ್ಗಿಕ ನಾರುಗಳ ವೈವಿಧ್ಯೀಕರಣಕ್ಕೆ ಉತ್ತೇಜನ ನೀಡಲಾಗುವುದು.**

# ಕಬ್ಬಿನ ಎಫ್‌ಆರ್‌ಪಿ ಕ್ವಿಂಟಾಲ್‌ಗೆ 365 ರೂ. : ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿ ಅನುಮೋದನೆ

**ನವದೆಹಲಿ, ಮೇ 5:** 2026–27ರ ಸಕ್ಕರೆ ಹಂಗಾಮಿಗೆ ಕಬ್ಬಿನ ನ್ಯಾಯಸಮ್ಮತ ಮತ್ತು ಲಾಭದಾಯಕ ಬೆಲೆಯನ್ನು (ಎಫ್‌ಆರ್‌ಪಿ) ಪ್ರತಿ ಕ್ವಿಂಟಾಲ್‌ಗೆ 365 ರೂ.ಗಳಿಗೆ ನಿಗದಿಪಡಿಸಿ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿಯು (ಸಿಸಿಇಎ) ಮಂಗಳವಾರ ಅನುಮೋದಿಸಿದೆ. ರೈತರ ಆದಾಯವನ್ನು ರಕ್ಷಿಸುವ ಮತ್ತು ಸಕ್ಕರೆ ಆರ್ಥಿಕತೆಯನ್ನು ಬಲಪಡಿಸುವ ಉದ್ದೇಶದಿಂದ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಸಭೆಯ ನಂತರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ವೈಷ್ಣವ್ ಅವರು, 10.25 ಪ್ರತಿಶತದ ಮೂಲ ಚೇತರಿಕೆ ದರಕ್ಕೆ ಎಫ್‌ಆರ್‌ಪಿಯನ್ನು ನಿಗದಿಪಡಿಸಲಾಗಿದೆ ಎಂದು ಹೇಳಿದರು. ಈ ಮಟ್ಟಕ್ಕಿಂತ ಹೆಚ್ಚಿನ ಪ್ರತಿ 0.1 ಪ್ರತಿಶತ ಹೆಚ್ಚಳಕ್ಕೆ ಕ್ವಿಂಟಾಲ್ಗೆ 3.56 ರೂ. ಪ್ರೀಮಿಯಂ ನೀಡಲಾಗುತ್ತದೆ ಮತ್ತು ಪ್ರತಿ 0.1 ಪ್ರತಿಶತ ಇಳಿಕೆಗೆ ಅಷ್ಟೇ ಪ್ರಮಾಣದ ಮೊತ್ತವನ್ನು ಕಡಿತಗೊಳಿಸಲಾಗುತ್ತದೆ. "ಈ ನಿರ್ಧಾರವು ರೈತರಿಗೆ ನ್ಯಾಯಯುತ ಪರಿಹಾರವನ್ನು ಖಚಿತಪಡಿಸುವುದರ ಜೊತೆಗೆ ವಲಯದಲ್ಲಿ ಹೆಚ್ಚಿನ ದಕ್ಷತೆಯನ್ನು ಉತ್ತೇಜಿಸುತ್ತದೆ" ಎಂದು ಅವರು ಹೇಳಿದರು.

ಸಕ್ಕರೆ ಚೇತರಿಕೆ ಪ್ರಮಾಣವು 9.5 ಪ್ರತಿಶತಕ್ಕಿಂತ ಕಡಿಮೆ ಇರುವ ಸಂದರ್ಭಗಳಲ್ಲಿಯೂ ರೈತರನ್ನು ರಕ್ಷಿಸಲು ಸರ್ಕಾರ ನಿರ್ಧರಿಸಿದೆ. ಅಂತಹ ರೈತರಿಗೆ ಯಾವುದೇ ಕಡಿತ ಮಾಡದೆ 2026–27ರ ಹಂಗಾಮಿನಲ್ಲಿ ಕ್ವಿಂಟಾಲ್ಗೆ 338.3 ರೂ.ಗಳನ್ನು ನೀಡಲಾಗುವುದು ಎಂದು ಅವರು ತಿಳಿಸಿದರು.


ಕಬ್ಬಿನ ಉತ್ಪಾದನಾ ವೆಚ್ಚವನ್ನು (ಎ2 + ಎಫ್‌ಎಲ್) ಕ್ವಿಂಟಾಲ್‌ಗೆ 182 ರೂ. ಎಂದು ಅಂದಾಜಿಸಲಾಗಿದ್ದು, ಈಗ ಅನುಮೋದಿಸಲಾದ 365 ರೂ.ಗಳ ಎಫ್‌ಆರ್‌ಪಿಯು ಉತ್ಪಾದನಾ ವೆಚ್ಚಕ್ಕಿಂತ 100 ಪ್ರತಿಶತಕ್ಕಿಂತ ಹೆಚ್ಚಿದೆ ಎಂದು ಸರ್ಕಾರದ ಪ್ರಕಟಣೆ ತಿಳಿಸಿದೆ. ಹೊಸ ಎಫ್‌ಆರ್‌ಪಿಯು ಪ್ರಸ್ತುತ ನಡೆಯುತ್ತಿರುವ 2025–26ರ ಹಂಗಾಮಿಗಿಂತ 2.81 ಪ್ರತಿಶತ ಹೆಚ್ಚಾಗಿದೆ.

ಪರಿಷ್ಕೃತ ಬೆಲೆಯು ಅಕ್ಟೋಬರ್ 1, 2026 ರಿಂದ ಜಾರಿಗೆ ಬರಲಿದ್ದು, ಹೊಸ ಸಕ್ಕರೆ ಹಂಗಾಮಿನ ಪ್ರಾರಂಭವನ್ನು ಗುರುತಿಸುತ್ತದೆ.

ಈ ನಿರ್ಧಾರದಿಂದ ಸುಮಾರು 5 ಕೋಟಿ ಕಬ್ಬು ಬೆಳೆಗಾರರು ಮತ್ತು ಅವರ ಅವಲಂಬಿತರು ಹಾಗೂ ಸಕ್ಕರೆ ಕಾರ್ಖಾನೆಗಳು ಮತ್ತು ಸಾರಿಗೆಯಂತಹ ಪೂರಕ ವಲಯಗಳಲ್ಲಿ ಕೆಲಸ ಮಾಡುವ 5 ಲಕ್ಷ ಕಾರ್ಮಿಕರಿಗೆ ಪ್ರಯೋಜನವಾಗಲಿದೆ ಎಂದು ಸರ್ಕಾರ ಹೇಳಿದೆ.

### ವಿಮಾನ ಚಲಿಸುವ ಜಾಗದಲ್ಲಿ ಭದ್ರತೆ ಹೆಚ್ಚಿಸಲು ಸ್ಮಾರ್ಟ್ ಏರ್‌ಸೈಡ್ ಸೇಫ್ಟಿ ಸಿಸ್ಟಂ

# ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರ – ವಿಮಾನಗಳ ಸುರಕ್ಷತೆಗೆ ಹೊಸಹೆಜ್ಜೆ



**ಬೆಂಗಳೂರು, ಮೇ 5:** ಇತ್ತೀಚಿನ ದಿನಗಳಲ್ಲಿ ದೇಶ, ವಿದೇಶಗಳಲ್ಲಿ ವಿಮಾನ ಅಪಘಾತಗಳು ಹೆಚ್ಚಾಗುತ್ತಿರುವ ಹೊತ್ತಿನಲ್ಲೇ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಪ್ರಯಾಣಿಕರ ಮತ್ತು ವಿಮಾನಗಳ ಸುರಕ್ಷತೆಗಾಗಿ ಹೊಸ ಹೆಜ್ಜೆ ಇಟ್ಟಿದೆ. ವಿಮಾನಗಳು ಓಡಾಡುವ ಜಾಗದಲ್ಲಿ (ಏರ್‌ಸೈಡ್) ಭದ್ರತೆ ಹೆಚ್ಚಿಸಲು ಸ್ಮಾರ್ಟ್ ಏರ್‌ಸೈಡ್ ಸೇಫ್ಟಿ ಸಿಸ್ಟಂ ಎಂಬ ಹೊಸ ತಂತ್ರಜ್ಞಾನವನ್ನು ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು (ಬಿಐಎಎಲ್) ಜಾರಿಗೆ ತಂದಿದೆ.

ವಿಮಾನ ನಿಲ್ದಾಣದೊಳಗೆ 'ಕ್ರಾಸ್ ಸರ್ವಿಸ್ ರಸ್ತೆ'ಗಳಿರುತ್ತವೆ. ಇಲ್ಲಿ ವಿಮಾನಗಳು ಮತ್ತು ಸಿಬ್ಬಂದಿಯ ವಾಹನಗಳು ಒಟ್ಟೊಟ್ಟಿಗೆ ಓಡಾಡುತ್ತಿರುತ್ತವೆ.

ಹೀಗಾಗಿ ಇಲ್ಲಿ ಅಪಘಾತ ಆಗುವ ಸಾಧ್ಯತೆ ಇರುತ್ತದೆ. ಹಿಂದೆ, ಇಲ್ಲಿ ವಾಹನಗಳನ್ನು ನಿಯಂತ್ರಿಸುವ ಲೈಟ್‌ಗಳನ್ನು ಸಿಬ್ಬಂದಿಗಳೇ ಖುದ್ದಾಗಿ ಆನ್/ಆಫ್ ಮಾಡುತ್ತಿದ್ದರು. ಇದರಲ್ಲಿ ಕೆಲವೊಮ್ಮೆ ತಪ್ಪುಗಳಾಗಿ, ವಿಮಾನಗಳ ಹಾರಾಟ ತಡವಾಗುವ ಘಟನೆಗಳೂ ನಡೆಯುತ್ತಿದ್ದವು. ಇದನ್ನು ತಪ್ಪಿಸಲು ಈಗ ಹೊಸ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಹೊಸ ವ್ಯವಸ್ಥೆಯು ಸ್ಮಾರ್ಟ್ ಕ್ಯಾಮರಾ ಮತ್ತು ಎಐ ತಂತ್ರಜ್ಞಾನವನ್ನು ಒಳಗೊಂಡಿದ್ದು, ಇದು ರಸ್ತೆಯಲ್ಲಿ ಓಡಾಡುವ ವಾಹನಗಳನ್ನು ಗುರುತಿಸಿ, ಏನಾದರೂ ಅಪಾಯ ಎದುರಾದರೆ ತಕ್ಷಣವೇ ಎಚ್ಚರಿಕೆ ನೀಡುತ್ತದೆ. ಯಾರಾದರೂ ಸಂಚಾರ ನಿಯಮ ಉಲ್ಲಂಘಿಸಿದರೆ ಕ್ಷಣಾರ್ಧದಲ್ಲಿ ಅಧಿಕಾರಿಗಳಿಗೆ ಮಾಹಿತಿ ರವಾನೆಯಾಗುತ್ತದೆ. ಅಲ್ಲದೆ, ಪ್ರತಿಯೊಂದು ಸಣ್ಣ ಅಂಶವೂ ಕಂಪ್ಯೂಟರ್‌ನಲ್ಲಿ ಡಿಜಿಟಲ್ ರೂಪದಲ್ಲಿ ದಾಖಲಾಗುತ್ತದೆ. ಇದರಿಂದ ವಿಮಾನ ನಿಲ್ದಾಣದೊಳಗಿನ ಸಂಚಾರ ನಿರ್ವಹಣೆಯಲ್ಲಿ ಪಾರದರ್ಶಕತೆ ಹೆಚ್ಚಾಗಲಿದೆ. ಜೊತೆಗೆ ಕಾರ್ಯಕ್ಷಮತೆ ಹೆಚ್ಚಾಗಲಿದ್ದು, ನಿಖರ ಕಾರ್ಯಾಚರಣೆಯೂ ಸಾಧ್ಯವಾಗಲಿದೆ.

ಈ ಹೊಸ ತಂತ್ರಜ್ಞಾನವು ವಿಮಾನ ಹಾಗೂ ವಾಹನಗಳ ನಡುವೆ ಒಂದು ಸುರಕ್ಷಿತ ಅಂತರವನ್ನು ನಿರ್ವಹಿಸುತ್ತದೆ. ಇದರಿಂದ ರಾತ್ರಿ ವೇಳೆ ಅಥವಾ ಮಂಜು ಮುಸುಕಿ ಕಡಿಮೆ ಗೋಚರತೆ ಇದ್ದಾಗ ಮನುಷ್ಯರಿಂದ ನಡೆಯುವ ತಪ್ಪುಗಳು ತಪ್ಪಲಿವೆ. ಟ್ರಾಫಿಕ್ ಜಾಮ್ ಇಲ್ಲದೆ ವಿಮಾನಗಳು ಸರಿಯಾದ ಸಮಯಕ್ಕೆ ಹಾರಾಟ ನಡೆಸಲು ಇದು ಸಹಾಯ ಮಾಡಲಿದೆ. ಮುಂದಿನ ದಿನಗಳಲ್ಲಿ ಈ ಮಾಹಿತಿಯನ್ನು ಬಳಸಿಕೊಂಡು ವಿಮಾನ ನಿಲ್ದಾಣದ ಭದ್ರತೆಯನ್ನು ಮತ್ತಷ್ಟು ಹೆಚ್ಚಿಸಲೂ ಯೋಜನೆ ರೂಪಿಸಿಕೊಳ್ಳಬಹುದು.

2024–25ನೇ ವರ್ಷದಲ್ಲಿ ಬಿಐಎಎಲ್ 4.18 ಕೋಟಿಗೂ ಹೆಚ್ಚು ಜನರಿಗೆ ಸೇವೆ ನೀಡಿದ್ದು, ದಕ್ಷಿಣ ಭಾರತದಲ್ಲಿ ಈ ಸಾಧನೆ ಮಾಡಿದ ಮೊದಲ ವಿಮಾನ ನಿಲ್ದಾಣ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಭಾರತದ 3ನೇ ಅತಿ ದೊಡ್ಡ ವಿಮಾನ ನಿಲ್ದಾಣವಾಗಿರುವ ಕೆಐಎ ಮೂಲಕ ಈವರೆಗೆ 35 ಕೋಟಿಗೂ ಹೆಚ್ಚು ಜನರು ಪ್ರಯಾಣಿಸಿದ್ದಾರೆ.ಗ್ರಾಹಕರಿಗೆ ನೀಡುವ ಅತ್ಯುತ್ತಮ ಸೇವೆಗಾಗಿ ಜಾಗತಿಕ ಮಟ್ಟದ ಪ್ರತಿಷ್ಠಿತ ಎಸಿಐ 5–ಸ್ಟಾರ್ ಏರ್‌ಪೋರ್ಟ್ ರೇಟಿಂಗ್ ಪಡೆದುಕೊಂಡಿರುವ ನಿಲ್ದಾಣವು, ಹಣ್ಣು, ತರಕಾರಿಯಂತಹ ಬೇಗ ಕೊಳೆಯುವ ವಸ್ತುಗಳ ಸಾಗಣೆಯಲ್ಲಿ ಸತತ 4ನೇ ವರ್ಷವೂ ಭಾರತದ ನಂ. 1 ವಿಮಾನ ನಿಲ್ದಾಣವಾಗಿ ಗುರುತಿಸಿಕೊಂಡಿದೆ.



ತುಮಕೂರು ರಸ್ತೆಯಲ್ಲಿರುವ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಫ್ಲೈಓವರ್ (ಪೀಣ್ಯ ಎಲಿವೇಟೆಡ್ ಫ್ಲೈಓವರ್) ಅನ್ನು ಮೇ 5, 2026 ರಂದು ಬೆಳಿಗ್ಗೆ 5 ಗಂಟೆಯಿಂದ ಮೇ 8, 2026 ರಂದು ಬೆಳಿಗ್ಗೆ 11 ಗಂಟೆಯವರೆಗೆ ಮೂರು ದಿನಗಳವರೆಗೆ ಎಲ್ಲಾ ಸಂಚಾರಕ್ಕೆ ಮುಚ್ಚಲಾಗಿದೆ. NHAI ಕೇಬಲ್ ರಿಪೇರಿ ನಂತರ ಮುಚ್ಚುವಿಕೆಯು ಅಂತಿಮ ಲೋಡ್ ಪರೀಕ್ಷೆಯನ್ನು ಸಕ್ರಿಯಗೊಳಿಸುತ್ತದೆ.

## ಒಳಮೀಸಲಾತಿ: ಮೇ 9, 10ರ ವಿವಿಧ ಹುದ್ದೆಗಳ ನೇಮಕಾತಿ ಪರೀಕ್ಷೆ ರದ್ದು

**ಬೆಂಗಳೂರು, ಮೇ 5:** ಆರ್‌ಜಿಯುಹೆಚ್‌ಎಸ್, ಬೆಂಗಳೂರು ಜಲಮಂಡಲಿ, ಕೃಷಿ ಮಾರಾಟ ಇಲಾಖೆ ಹಾಗೂ ಕೆಎಸ್‌ಎಸ್‌ಐಡಿಸಿಯ ವಿವಿಧ ಹುದ್ದೆಗಳ ನೇಮಕಾತಿಗೆ ಇದೇ 9 ಮತ್ತು 10ರಂದು ನಡೆಯಬೇಕಿದ್ದ ಲಿಖಿತ ಪರೀಕ್ಷೆಯನ್ನು ರದ್ದುಪಡಿಸಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯ ನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ.

ಪರೀಕ್ಷೆ ನಡೆಸದಿರುವ ಹುದ್ದೆಗಳಿಗೆ ಪರಿಶಿಷ್ಟ ಜಾತಿಯ ಒಳಮೀಸಲಾತಿ ಅಳವಡಿಸಿಕೊಂಡು ಹೊಸದಾಗಿ ಅಧಿಸೂಚನೆ ಹೊರಡಿಸಲು ಏ.4ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಿರುವ ಕಾರಣ ಈ ಪರೀಕ್ಷೆಯನ್ನು ರದ್ದುಪಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಆದರೆ ವ್ಯವಸ್ಥಾಪಕರು, ಸಹಾಯಕ ವ್ಯವಸ್ಥಾಪಕರು ಮತ್ತು ಸಹಾಯಕ ಎಂಜಿನಿಯರ್ (ವಿದ್ಯುತ್) ಹುದ್ದೆಗಳಿಗೆ ಏ.26 ಮತ್ತು 27ರಂದು ಪತ್ರಿಕೆ–2 (ನಿರ್ದಿಷ್ಟ ಪತ್ರಿಕೆ) ರ ಪರೀಕ್ಷೆ ನಡೆಸಿದ್ದು ಅಂತಹವರಿಗೆ ಮೇ 9 ಮತ್ತು 10 ರಂದು ಸಾಮಾನ್ಯ ಜ್ಞಾನ ಪತ್ರಿಕೆಯ (ಪತ್ರಿಕೆ–1) ಪರೀಕ್ಷೆ ನಡೆಸಲಾಗುವುದು. ಇದಕ್ಕೆ ಪ್ರವೇಶ ಪತ್ರವನ್ನು ಕೆಇಎ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ವಿಜಯ್‌ಗೆ ನಟ ಶಿವರಾಜ್ ಕುಮಾರ್ ಅಭಿನಂದನೆ



**ಬೆಂಗಳೂರು, ಮೇ.5:** ನಟ ವಿಜಯ್ ತಮಿಳುನಾಡಿನಲ್ಲಿ ಮೊದಲ ಬಾರಿಗೆ ಇತಿಹಾಸ ಸೃಷ್ಟಿಸಿದ್ದಾರೆ, ಅವರ ಟಿವಿಕೆ ಪಕ್ಷವು ತನ್ನ ಮೊದಲ ಪ್ರಯತ್ನದಲ್ಲೇ 108 ಸ್ಥಾನಗಳನ್ನು ಗೆದ್ದಿದೆ. ಈ ನಿಟ್ಟಿನಲ್ಲಿ, ಸ್ಯಾಂಡಲ್‌ವುಡ್‌ನ ಹಿರಿಯ ನಟ ಶಿವರಾಜ್‌ಕುಮಾರ್ ನಟ ವಿಜಯ್‌ಗೆ ಅಭಿನಂದನೆ ಸಲ್ಲಿಸಿದ್ದಾರೆ. ಇದು ನಿಜವಾಗಿಯೂ ಜನರು ಯಾವಾಗಲೂ ನಿಮಗೆ ನೀಡುವ ರೀತಿಯ ಗೆಲುವು. ತೀವ್ರ ಟೀಕೆಗಳ ನಡುವೆಯೂ ಶಾಂತವಾಗಿರುವುದು ಮತ್ತು ನಿಮ್ಮ ಕೆಲಸವು ಸ್ವತಃ ಮಾತನಾಡಲು ಅವಕಾಶ ನೀಡುವುದು ದೊಡ್ಡ ಗೆಲುವು. ತಮಿಳುನಾಡಿನ ಜನರಿಗೆ ನೀವು ನೀಡಿದ ಎಲ್ಲಾ ಭರವಸೆಗಳನ್ನು ನಿಮ್ಮ ಮೂಲಕ ಈಡೇರಲಿವೆ ಎಂದರು. ವರದಿಗಾರರೊಂದಿಗೆ ಮಾತನಾಡುವಾಗ, ನಾನು ತಮಾಷೆಯಾಗಿ, ಟಿವಿಕೆ, ವಿಜಯ್ ರಾಜ ಎಂದು ಹೇಳಿದ್ದೆ. ಇಂದು ನೀವು ನಿಜವಾಗಿಯೂ ರಾಜನಂತೆ ಎದ್ದು ನಿಂತಿದ್ದೀರಿ. ತಮಿಳುನಾಡಿನ ಜನರಿಗೆ ನೀವು ನೀಡಿದ ಎಲ್ಲಾ ಭರವಸೆಗಳು ಪೂರೈಸಿ ಮತ್ತು ಅಭಿವೃದ್ಧಿ ಶಾಶ್ವತವಾಗಿ ಮುಂದುವರಿಯಲಿ ಎಂದು ಅಭಿನಂದಿಸಿದ್ದಾರೆ.

## ನಾದಯೋಗಿ: ಡಾ.ರಾಜಕುಮಾರ್ ಕೃತಿ ಇಂದು ಲೋಕಾರ್ಪಣೆ




**ಬೆಂಗಳೂರು, ಮೇ 5:** ಡಾ.ರಾಜ್, ಸಿನಿಮಾ ದಿಗ್ಗಜ. ಭೌತಿಕವಾಗಿ ನಮ್ಮೊಂದಿಗಿಲ್ಲವಾದರೂ ಪ್ರೇಕ್ಷಕರೆದೆಯಲ್ಲಿ ಸದಾ ಜೀವಂತ. ಕನ್ನಡ ಚಿತ್ರರಂಗದ ನಟಸಾರ್ವಭೌಮ ಎಂದೇ ಖ್ಯಾತರಾದ ಡಾ.ರಾಜಕುಮಾರ್ ಭಾರತೀಯ ಸಿನಿಮಾ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅಗಾಧ. ಆ ಕಾರಣದಿಂದಲೇ ಇಂದಿಗೂ ಭಾರತದ ಹೆಮ್ಮೆಯಾಗಿ ಉಳಿದಿದ್ದಾರೆ. ಅಚ್ಚು ಮೆಚ್ಚಿನ ತಾರೆಯಾಗಿ ಕನ್ನಡಿಗರ ಹೃದಯದಲ್ಲಿ ಭದ್ರ ಸ್ಥಾನ ಹೊಂದಿದ್ದಾರೆ.

ಚಾಮರಾಜಪೇಟೆಯ ಡಾ.ರಾಜ್‌ಕುಮಾರ್ ಸಭಾಂಗಣದಲ್ಲಿ ನಾದಯೋಗಿ: ಡಾ. ರಾಜ್‌ಕುಮಾರ್ ಪುಸ್ತಕವನ್ನು ರಾಜ್‌ಕುಮಾರ್ ರಾಜ್ ಪುತ್ರಿಯರಾದ ಲಕ್ಷ್ಮೀ ಗೋವಿಂದರಾಜು ಹಾಗೂ ಪೂರ್ಣಿಮಾ ರಾಮ್‌ಕುಮಾರ್ ಬಿಡುಗಡೆ ಮಾಡಲಿದ್ದಾರೆ.

ಭಾರತೀಯ ಸಂಸ್ಕೃತಿಯ ರಾಯಭಾರಿಯಾಗಿ ರಾಜ್ ಗುರುತಿಸಿ ಕೊಂಡಿದ್ದರು. ಕರ್ನಾಟಿಕ್ ಶಾಸ್ತ್ರೀಯ ಸಂಗೀತದಲ್ಲಿ ಅವರ ಪಾಂಡಿತ್ಯವು ಎಲ್ಲರಿಗೂ ಪರಿಚಿತವಾದದ್ದು. ಆದರೆ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತದ ಮೇಲಿನ ಅವರ ಅಗಾಧ ಆಸಕ್ತಿ ಮತ್ತು ಅಭ್ಯಾಸವು ಅವರ ಸಂಗೀತ ಪ್ರತಿಭೆಗೆ ಇನ್ನೊಂದು ವಿಶಿಷ್ಟ ಆಯಾಮವನ್ನೊದಗಿಸಿದೆ. ಕೃತಿಯು ಡಾ.ರಾಜ್ ಅವರೊಂದಿಗೆ ನಡೆದ ಸಂಭಾಷಣೆಗಳ ಸಂಗ್ರಹವಾಗಿದ್ದು, ಅವರ ಪತ್ನಿ ಪಾರ್ವತಮ್ಮ ರಾಜಕುಮಾರ್ ಅವರ ಸಂದರ್ಶನಗಳನ್ನೂ ಒಳಗೊಂಡಿದೆ. ಈ ಪುಸ್ತಕವು ಅವರ ತಮ್ಮ ಎಸ್.ಪಿ.ವರದರಾಜು ಅವರ ಮಹತ್ವದ ಪಾತ್ರವನ್ನೂ ಬೆಳಕಿಗೆ ತರಲಿದೆ. ಮಾರ್ಗದರ್ಶಕ ಮತ್ತು ಸಂಸ್ಕಾರಕರಾಗಿ ಅವರು ಡಾ. ರಾಜ್‌ಕುಮಾರ್ ಎಂಬ ಮಹಾನ್ ವ್ಯಕ್ತಿತ್ವದ ರೂಪುಗೊಳಿಸುವಿಕೆಯಲ್ಲಿ ಪ್ರಮುಖ ಪಾತ್ರವಹಿಸಿದ್ದರು. ಕಲೆ, ಪುಸ್ತಕಗಳು ಮತ್ತು ಸಂಸ್ಕೃತಿಯ ಮೇಲಿನ ಅವರ ಪ್ರೀತಿ ಅಪಾರವಾಗಿದ್ದು. ಭಾರತೀಯ ಶಾಸ್ತ್ರೀಯ ಸಂಗೀತದಿಂದ ಹಿಡಿದು ಪಾಶ್ಚಾತ್ಯ ವಾದ್ಯ ಸಂಗೀತದವರೆಗೆ ಅವರ ಆಸಕ್ತಿ ವಿಸ್ತರಿಸಿತ್ತು. ಈ ಕೃತಿಯಲ್ಲಿ ಅವರೊಂದಿಗೆ ನಡೆದ ಅಪರೂಪದ, ಸ್ಫೂರ್ತಿಯ ಸಂಭಾಷಣೆಗಳಿವೆ.

ಲೇಖಕರಾದ ಆರ್.ಮಂಜುನಾಥ್ ಚವಾಣ್ ಮತ್ತು ಡಾ.ಸೌಮ್ಯ ಮಂಜುನಾಥ್ ಚವಾಣ್ ಅವರು ಹಲವು ದಶಕಗಳಿಂದ ರಾಜಕುಮಾರ್ ಕುಟುಂಬದೊಂದಿಗೆ ಹೊಂದಿರುವ ನಿಕಟ ಸಂಪರ್ಕದ ಮೂಲಕ ಈ ಕೃತಿಯನ್ನು ಬರೆದಿದ್ದಾರೆ. ಇವರು ಇಂಗ್ಲಿಷ್ನಲ್ಲಿ ಬರೆದಿದ್ದು, ಸವಿತಾ ಜೋಶಿ ಕನ್ನಡಕ್ಕೆ ಅನುವಾದಿಸಿದ್ದಾರೆ.ಈ ಸಂಭಾಷಣೆಗಳಲ್ಲಿ ಸೂಪರ್ ಸ್ಟಾರ್ ನಿಧಾನವಾಗಿ ಮರೆಯಾಗುತ್ತಾನೆ ಮತ್ತು ಮುತ್ತುರಾಜು ಎಂಬ ಸರಳ, ಗಂಭೀರ ವ್ಯಕ್ತಿತ್ವವು ಹೊರಹೊಮ್ಮುತ್ತದೆ.

'ನಾದಯೋಗಿ: ಡಾ.ರಾಜಕುಮಾರ್' ಪುಸ್ತಕವು ಈ ಮಹಾನ್ ಕಲಾವಿದನ ಸಂಗೀತ ಜ್ಞಾನ ಮತ್ತು ಒಳಜಗತ್ತನ್ನು ಅನ್ವೇಷಿಸುವ ಒಂದು ಸತ್ಯಸಂಧ ಪ್ರಯತ್ನವಾಗಿದೆ. ಬುಧವಾರ ಚಾಮರಾಜಪೇಟೆಯಲ್ಲಿರುವ ಡಾ.ರಾಜ್ ಕುಮಾರ್ ಸಭಾಂಗಣದಲ್ಲಿ 'ನಾದಯೋಗಿ: ಡಾ.ರಾಜ್‌ಕುಮಾರ್' ಪುಸ್ತಕ ಅನಾವರಣಗೊಳ್ಳಲಿದೆ. ರಾಜ್ ಪುತ್ರಿಯರಾದ ಲಕ್ಷ್ಮೀ ಗೋವಿಂದರಾಜು ಹಾಗೂ ಪೂರ್ಣಿಮಾ ರಾಮ್ ಕುಮಾರ್ ಬಿಡುಗಡೆ ಮಾಡಲಿದ್ದಾರೆ. ಅಭಿಮಾನಿಗಳು ಈ ಕ್ಷಣಕ್ಕಾಗಿ ಕಾತರರಾಗಿದ್ದಾರೆ.

## ರಾಜಧಾನಿಯಲ್ಲಿ 20 ಕೋಟಿ ರೂ. ಮೌಲ್ಯದ ಮಾದಕವಸ್ತು ವಶ, ಆರು ಮಂದಿ ಬಂಧನ



**ಬೆಂಗಳೂರು, ಮೇ.5:** ನಗರದ ಯಶವಂತಪುರ ಮತ್ತು ನಂದಿನಿ ಲೇಔಟ್ ಠಾಣೆ ಪೊಲೀಸರು ಮಾದಕ ವಸ್ತು ಮಾರಾಟ ಪ್ರಕರಣಗಳಲ್ಲಿ ಕೇರಳದ ಇಬ್ಬರು ಡ್ರಗ್ ಪೆಡ್ಲರ್‌ಗಳು ಸೇರಿದಂತೆ ಆರು ಮಂದಿಯನ್ನು ಬಂಧಿಸಿ 20.10 ಕೋಟಿ ಮೌಲ್ಯದ ಗಾಂಜಾ, ಎಂಡಿಎಂಎ ವಶಪಡಿಸಿಕೊಂಡಿದ್ದಾರೆ.

ರಸ್ತೆ ಬದಿ ಮಾದಕ ವಸ್ತುಗಳು ಮಾರಾಟ ಮಾಡಲಾಗುತ್ತಿದೆ ಎಂಬ ಮಾಹಿತಿ ಮೇರೆಗೆ ಯಶವಂತಪುರ ಠಾಣೆ ಪೊಲೀಸರು ಕಾರ್ಯಾಚರಣೆ ನಡೆಸಿ ಸ್ಥಳೀಯ ನಾಲ್ವರನ್ನು ಬಂಧಿಸಿ 4.87 ಕೋಟಿ ಮೌಲ್ಯದ (ಮಾರುಕಟ್ಟೆ ಮೌಲ್ಯ 9.47 ಕೋಟಿ ) 4 ಕೆಜಿ 878 ಗ್ರಾಂ ಎಂಡಿಎಂಎ, 1.62 ಲಕ್ಷ ನಗದು, 4 ಮೊಬೈಲ್ ಹಾಗೂ 1 ಕಾರನ್ನು ವಶಪಡಿಸಿಕೊಳ್ಳಲಾಗಿದೆ.

ಮತ್ತೊಂದು ಪ್ರಕರಣದಲ್ಲಿ 3.18 ಕೋಟಿ (ಮಾರುಕಟ್ಟೆ ಮೌಲ್ಯ 6.36 ಕೋಟಿ) ಮೌಲ್ಯದ 3 ಕೆಜಿ 180 ಗ್ರಾಂ ಎಂಡಿಎಂಎ ವಶಪಡಿಸಿಕೊಂಡಿದ್ದಾರೆ. ನಂದಿನಿ ಲೇಔಟ್ ಠಾಣೆ ಪೊಲೀಸರು ಕೇರಳದ ಇಬ್ಬರನ್ನು ಬಂಧಿಸಿ 2 ಕೋಟಿ ಮೌಲ್ಯದ (ಮಾರುಕಟ್ಟೆ ಮೌಲ್ಯ 4 ಕೋಟಿ) 5 ಕೆಜಿ 700 ಗ್ರಾಂ ಹೈಡ್ರೋ ಗಾಂಜಾ ವಶಪಡಿಸಿಕೊಳ್ಳಲಾಗಿದೆ.

ಈ ಆರು ಮಂದಿಯನ್ನು ವಿಚಾರಣೆಗೆ ಒಳಪಡಿಸಿದಾಗ ಹೆಚ್ಚಿನ ಹಣ ಗಳಿಸುವ ಉದ್ದೇಶದಿಂದ ಹೊರ ರಾಜ್ಯದ ಮತ್ತು ಸ್ಥಳೀಯ ಅಪರಿಚಿತರಿಂದ ಮಾದಕ ವಸ್ತುವನ್ನು ಕಡಿಮೆ ಬೆಲೆಗೆ ಖರೀದಿಸಿಕೊಂಡು ಬಂದು ಹೆಚ್ಚಿನ ಬೆಲೆಗೆ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ ಮಾರಾಟ ಮಾಡುತ್ತಿದ್ದುದ್ದಾಗಿ ಹೇಳಿದ್ದಾರೆ.

ಈ ಪ್ರಕರಣಗಳಲ್ಲಿ ಆರೋಪಿಗಳಿಗೆ ಮಾದಕ ವಸ್ತು ಸರಬರಾಜು ಮಾಡುತ್ತಿದ್ದವರ ಪತ್ತೆಕಾರ್ಯ ಮುಂದುವರೆದಿದ್ದು, ಪ್ರಕರಣಗಳ ತನಿಖೆ ಪ್ರಗತಿಯಲ್ಲಿದೆ. ಈ ಕಾರ್ಯಾಚರಣೆಯನ್ನು ಇನ್‌ಸ್ಪೆಕ್ಟರ್‌ಗಳಾದ ಮಂಜುನಾಥ್, ಗಣಪತಿ ಹಾಗೂ ಸಿಬ್ಬಂದಿ ತಂಡ ಕೈಗೊಂಡು ಡ್ರಗ್‌ಪೆಡ್ಲರ್‌ಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ.

## ಸಚಿವ ಜಮೀರ್ ಅಹ್ಮದ್ ಮನೆಯಲ್ಲಿ ಚಿನ್ನಾಭರಣ ಕದ್ದಿದ್ದ ಇಬ್ಬರ ಸೆರೆ

**ಬೆಂಗಳೂರು, ಮೇ 5:** ಸಚಿವ ಜಮೀರ್ ಅಹಮದ್ ಖಾನ್ ಮನೆಯಲ್ಲಿ ಕೋಟ್ಯಾಂತರ ರೂಪಾಯಿ ಮೌಲ್ಯದ ಚಿನ್ನಾಭರಣ ಕದ್ದಿದ್ದ ಇಬ್ಬರನ್ನು ಶಿವಾಜಿನಗರ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಶಿವಾಜಿನಗರ ಪೊಲೀಸರು ತನಿಖೆಯ ನಡೆಸಿ ಇಬ್ಬರನ್ನು ಬಂಧಿಸಿದ್ದಾರೆ.

ಟ್ರಾವೆಲ್ಸ್ ಬ್ಯುಸಿನೆಸ್‌ನಲ್ಲಿ ಲಾಸ್ ಆಗಿದ್ದಕ್ಕೆ ಈ ಕೃತ್ಯ ಎಸಗಿದ್ದಾರೆ ಎಂದು ತಿಳಿದುಬಂದಿದೆ. ಕಳ್ಳತನ ಮಾಡಿದ್ದ 1.13 ಕೋಟಿ ಮೌಲ್ಯದ



ಸೈಯದ್ ಅಮೀರ್, ಅಮಿರ್ ಅಹ್ಮದ್ ಬಂಧಿತ ಆರೋಪಿಗಳು. ಕಂಟೋನ್ಮೆಂಟ್ ಬಳಿ ಇರುವ ಸಚಿವ ಜಮೀರ್ ಮನೆಯಲ್ಲಿ ಕಳೆದೊಂದು ವರ್ಷದಿಂದ ಹಂತ ಹಂತವಾಗಿ 1.13 ಕೋಟಿ ರೂಪಾಯಿ ಮೌಲ್ಯದ ಚಿನ್ನಾಭರಣ ಕದ್ದಿದ್ದರು. ಬಳಿಕ ಜಮೀರ್ ಅಹಮ್ಮದ್ ಅವರ ತಾಯಿ ನೀಡಿದ ದೂರಿನ ಮೇರೆಗೆ ಚಿನ್ನಾಭರಣಗಳನ್ನ ಅಡವಿಟ್ಟು ಹಣ ಪಡೆದಿದ್ದು, ಆ ಹಣ ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಿ ಲಾಭಕ್ಕೆ ಯೋಜನೆ ಮಾಡಿದ್ದರು. ಆದ್ರೆ, ಕಾಲ್ ಮಾಡಿದಾಗ ರಿಸೀವ್ ಮಾಡದಿದ್ದಾಗ ಇಬ್ಬರ ಮೇಲೆ ಅನುಮಾನ ವ್ಯಕ್ತವಾಗಿದ್ದು, ಬಳಿಕ ಪೊಲೀಸರು ವಿಚಾರಣೆ ನಡೆಸಿದಾಗ ಕೃತ್ಯ ಬಯಲಿಗೆ ಬಂದಿದೆ.

## ನಿರ್ಬಂಧಿತ ಪ್ರದೇಶದಲ್ಲಿ ಹಾರಾಟ ನಡೆಸಿದ ಡ್ರೋನ್ ವಶ: ಓರ್ವನ ವಿರುದ್ಧ ಪೀಣ್ಯ ಠಾಣೆಯಲ್ಲಿ ದೂರು ದಾಖಲು



**ಬೆಂಗಳೂರು, ಮೇ 5:** ಪೀಣ್ಯದಲ್ಲಿರುವ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಟೆಲಿಮೆಟ್ರಿ ಟ್ರ್ಯಾಕಿಂಗ್ ಮತ್ತು ಕಮಾಂಡ್ ನೆಟ್‌ವರ್ಕ್ ಕೇಂದ್ರದ ಆವರಣದಲ್ಲಿ ಅನಧಿಕೃತವಾಗಿ ಡ್ರೋನ್ ಹಾರಾಟ ನಡೆಸಿದ ಘಟನೆ ವರದಿಯಾಗಿದೆ. ಈ ಸಂಬಂಧ ಭದ್ರತಾ ನಿಯಮಗಳ ಉಲ್ಲಂಘನೆಗಾಗಿ ಓರ್ವ ವ್ಯಕ್ತಿಯ ವಿರುದ್ಧ ಪೀಣ್ಯ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

ಇಸ್ರೋ ಕೇಂದ್ರವು ದೇಶದ ಅತ್ಯಂತ ಸುರಕ್ಷಿತ ಮತ್ತು ನಿರ್ಬಂಧಿತ ವಲಯಗಳಲ್ಲಿ ಒಂದಾಗಿದ್ದು, ಅನುಮತಿಯಿಲ್ಲದೆ ಇಲ್ಲಿ ಡ್ರೋನ್ ಹಾರಿಸುವುದು ಗಂಭೀರ ಭದ್ರತಾ ಲೋಪವೆಂದು ಪರಿಗಣಿಸಲಾಗಿದೆ.

ಇಸ್ರೋ ಆವರಣದ ಮೇಲೆ ಡ್ರೋನ್ ಹಾರಾಡುತ್ತಿರುವುದನ್ನು ಗಮನಿಸಿದ ಭದ್ರತಾ ಸಿಬ್ಬಂದಿ ತಕ್ಷಣ ಕಾರ್ಯಪ್ರವೃತ್ತರಾಗಿ ಡ್ರೋನ್ ಅನ್ನು ವಶಪಡಿಸಿಕೊಂಡಿದ್ದಾರೆ.

ಈ ಬಗ್ಗೆ ಇಸ್ರೋ ಅಧಿಕಾರಿಗಳು ನೀಡಿದ ದೂರಿನನ್ವಯ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ಆರೋಪಿ ವ್ಯಕ್ತಿಯು ಯಾವುದೇ ಪೂರ್ವಾನುಮತಿ ಪಡೆಯದೆ ಚಿತ್ರೀಕರಣಕ್ಕಾಗಿ ಅಥವಾ ಹವ್ಯಾಸಕ್ಕಾಗಿ ಡ್ರೋನ್ ಬಳಸಿದ್ದ ಎನ್ನಲಾಗಿದೆ.ನಗರದ ಪ್ರಮುಖ ಸರ್ಕಾರಿ ಕಚೇರಿಗಳು ಮತ್ತು ರಕ್ಷಣಾ ಸಂಶೋಧನಾ ಸಂಸ್ಥೆಗಳ ಸುತ್ತಮುತ್ತ 'ನೋ ಫ್ಲೈ ಝೋನ್' ನಿಯಮಗಳು ಜಾರಿಯಲ್ಲಿರುತ್ತವೆ.

ಇಂತಹ ಪ್ರದೇಶಗಳಲ್ಲಿ ಡ್ರೋನ್ ಬಳಸುವ ಮೊದಲು ನಾಗರಿಕ ವಿಮಾನಯಾನ ನಿರ್ದೇಶನಾಲಯ ಹಾಗೂ ಸ್ಥಳೀಯ ಪೊಲೀಸರಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕಾಗುತ್ತದೆ. ಸದ್ಯ ಪೊಲೀಸರು ಡ್ರೋನ್‌ನಲ್ಲಿದ್ದ ದೃಶ್ಯಾವಳಿಗಳನ್ನು ಪರಿಶೀಲಿಸುತ್ತಿದ್ದು, ತನಿಖೆ ಮುಂದುವರಿಸಿದ್ದಾರೆ.

## ಮತಪತ್ರ ತಿದ್ದಿದ ಆರೋಪ: ಎಫ್‌ಐಆರ್ ರದ್ದು ಕೋರಿ ಜೀವರಾಜ್ ಸಲ್ಲಿಸಿದ ಅರ್ಜಿಗೆ ಮೇ 7ರವರೆಗೆ ತಡೆ




**ಬೆಂಗಳೂರು, ಮೇ 5:** ಶೃಂಗೇರಿ ವಿಧಾನಸಭಾ ಕ್ಷೇತ್ರದಲ್ಲಿ ಅಂಚೆ ಮತಗಳ ಮರು ಎಣಿಕೆಗೆ ಸಂಬಂಧಿಸಿದಂತೆ ಬ್ಯಾಲೆಟ್ ಪೇಪರ್‌ಗಳನ್ನು ತಿದ್ದಿದ ಆರೋಪದಲ್ಲಿ ತಮ್ಮ ವಿರುದ್ಧ ದಾಖಲಾಗಿರುವ ಎಫ್‌ಐಆರ್ ರದ್ದುಕೋರಿ ವಿಜೇತ ಅಭ್ಯರ್ಥಿ ಡಿ.ಎನ್.ಜೀವರಾಜ್ ಸಲ್ಲಿಸಿದ ಅರ್ಜಿಯ ಸಂಬಂಧ ಮೇ 7ರ ವರೆಗೂ ಹೈಕೋರ್ಟ್ ತಡೆ ನೀಡಿ ಆದೇಶಿಸಿದೆ.

ಅಲ್ಲದೆ. ಪ್ರಕರಣ ಸಂಬಂಧ ದೂರು ನೀಡಿರುವ ಸುಧೀರ್ ಕುಮಾರ್ ಮುರೊಳ್ಳಿ ಅವರಿಗೆ ನೋಟಿಸ್ ಜಾರಿ ಮಾಡಲಾಗಿದೆ. ಪ್ರಕರಣ ರದ್ದು ಕೋರಿ ಜೀವರಾಜ್ ಸಲ್ಲಿಸಿರುವ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ವಿ.ಶ್ರೀಶಾನಂದ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿತು. ಇದಕ್ಕೂ ಮುನ್ನ ನಡೆದ ವಿಚಾರಣೆ ವೇಳೆ ಸರ್ಕಾರದ ಪರ ವಕೀಲರು, ಪ್ರಕರಣ ಸಂಬಂಧ ದಾಖಲೆಗಳನ್ನು ತರಿಸಿಕೊಳ್ಳಲಾಗುವುದು. ಆದ್ದರಿಂದ ವಿಚಾರಣೆಯನ್ನು ಗುರುವಾರಕ್ಕೆ ನಿಗದಿಪಡಿಸಬಹುದು ಎಂದು ಪೀಠಕ್ಕೆ ಮನವಿ ಮಾಡಿದರು.ಈ ವೇಳೆ ಪೀಠ, ಮತ ಎಣಿಕೆ ಸಂಬಂಧ ದೋಷಗಳಿದ್ದರೆ ಚುನಾವಣಾಧಿಕಾರಿ ದೂರು ನೀಡಬಹುದು. ಆದರೆ, ಚುನಾವಣಾ ಏಜೆಂಟ್ ದೂರು ದಾಖಲಿಸಿದ್ದಾರೆ. ಚುನಾವಣಾಧಿಕಾರಿ ವಿರುದ್ಧ ದೂರು ನೀಡಿದರೆ ಪರಿಗಣಿಸಬಹುದು ಎಂದು ತಿಳಿಸಿತು. ಅಲ್ಲದೆ, ದೂರು ದುರುದ್ದೇಶಪೂರಿತವಾಗಿದೆ ಎಂದು ತಿಳಿಸಿ ಪ್ರಕರಣಕ್ಕೆ ತಡೆ ನೀಡಿತು.

ಜೊತೆಗೆ ತಡೆ ತೆರವಿಗೆ ಸರ್ಕಾರ ಅರ್ಜಿ ಸಲ್ಲಿಸ ಬಹುದು ಎಂದು ತಿಳಿಸಿ ವಿಚಾರಣೆ ಮುಂದೂಡಿದೆ.

ಶೃಂಗೇರಿ ವಿಧಾನಸಭಾ ಕ್ಷೇತ್ರದಲ್ಲಿ ಅಂಚೆ ಮತಗಳ ಎಣಿಕೆಯಲ್ಲಿ ಅಕ್ರಮ ನಡೆಸಲಾಗಿದೆ ಎಂಬ ಆರೋಪಿಸಿ ಹೈಕೋರ್ಟ್‌ಗೆ ಪರಾಜಿತ ಅಭ್ಯರ್ಥಿಯಾಗಿದ್ದ ಜೀವರಾಜ್ ಅರ್ಜಿ ಸಲ್ಲಿಸಿದ್ದರು. ಅರ್ಜಿಯ ಸಂಬಂಧ ಸುದೀರ್ಘ ವಿಚಾರಣೆ ನಡೆಸಿದ್ದ ಹೈಕೋರ್ಟ್, ಅಂಚೆ ಮತಗಳನ್ನು ಮರು ಎಣಿಕೆ ಮಾಡುವಂತೆ ನಿರ್ದೇಶನ ನೀಡಿತ್ತು. ಈ ಆದೇಶದಂತೆ ಮೇ 3ರಂದು ಅಂಚೆ ಮತಗಳ ಮರು ಎಣಿಕೆ ನಡೆಸಿದ್ದ ಫಲಿತಾಂಶವನ್ನೂ ಘೋಷಣೆ ಮಾಡಲಾಗಿತ್ತು. ಆದರೆ, ಈ ಹಿಂದೆ ಅಂದರೆ 2023ರ ಮೇ 15ರಂದು ನಡೆದಿದ್ದ ಮತ ಎಣಿಕೆ ಪ್ರಕ್ರಿಯೆಯಲ್ಲಿ ಎರಡೂ ಮತ್ತು ಅದಕ್ಕಿಂತ ಹೆಚ್ಚು ಬಾರಿ ನಮೂದಾಗಿದ್ದ ಮತಗಳನ್ನು ತಿರಸ್ಕರಿಸಲಾಗಿತ್ತು. ಮತ ಎಣಿಕೆ ಪ್ರಾರಂಭಕ್ಕೂ ಮುನ್ನ ಮತ ಎಣಿಕೆ ಟೇಬಲ್ ಏಜೆಂಟ್ ಆಗಿದ್ದ ದೂರುದಾರರು, ಮತ ಪತ್ರಗಳನ್ನು ಇರಿಸಲಾಗಿದ್ದ ಸ್ಟ್ರಾಂಗ್ ರೂಂ ಸೀಲ್ ಆಗಿರಲಿಲ್ಲ. ಟ್ರಂಕ್‌ಗಳ ಲಾಕ್ ಕಟ್ ಆಗಿತ್ತು ಎಂಬುದಾಗಿ ಸ್ಥಳದಲ್ಲಿಯೇ ಆರೋಪಿಸಿದ್ದರು. ಮತ ಪತ್ರಗಳನ್ನು ಟ್ಯಾಂಪರಿಂಗ್ ಮಾಡಲಾಗಿದೆ ಎಂದು ಆರೋಪಿಸಿ ದೂರು ನೀಡಿದ್ದರು.

## ಚೇತನ್ ಅಹಿಂಸಾಗೆ ಸಂಸ್ಕೃತಿ, ಇತಿಹಾಸದ ಅರಿವಿಲ್ಲ: ಸಾ.ರಾ.ಗೋವಿಂದು ವಾಗ್ದಾಳಿ



**ಬೆಂಗಳೂರು, ಮೇ 5:** ಕನ್ನಡ ಹೋರಾಟದಲ್ಲಿ ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಯಾವುದೇ ರಾಜಿ ಮಾಡಿಕೊಳ್ಳದೇ ನಿಂತಿದ್ದೇನೆ ಎಂದು ನಿರ್ಮಾಪಕ ಸಾ.ರಾ. ಗೋವಿಂದು ತಿಳಿಸಿದ್ದಾರೆ.

ನಟ ಚೇತನ್ ಅಹಿಂಸಾ ಮಾಡಿರುವ ಆರೋಪಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ತಮ್ಮ ಹೋರಾಟಕ್ಕೆ ಪ್ರೇರಣೆ ಡಾ. ರಾಜ್‌ಕುಮಾರ್ ಎಂದು ಹೇಳಿದರು.

ರಾಜ್‌ಕುಮಾರ್ ಸಮಾಧಿ ವಿಚಾರದಲ್ಲಿ ಚೇತನ್ ನೀಡಿದ ದೂರಿನ ಬಗ್ಗೆ ಮಾತನಾಡಿದ ಗೋವಿಂದು, "ಸಂಸ್ಕೃತಿ ಮತ್ತು ಇತಿಹಾಸದ ಅರಿವು ಇಲ್ಲದೆ ಆರೋಪ ಮಾಡಲಾಗುತ್ತಿದೆ" ಎಂದು ತಿರುಗೇಟು ನೀಡಿದರು. ಗೋಕಾಕ್ ಚಳುವಳಿಯಲ್ಲಿ ಡಾ. ರಾಜ್ಕುಮಾರ್ ವಹಿಸಿದ್ದ ಪಾತ್ರ ಮತ್ತು ಕನ್ನಡ ಹೋರಾಟದ ಹಿನ್ನೆಲೆಯನ್ನು ಪ್ರಶ್ನಿಸಿದ ಅವರು, ಪ್ರಶಸ್ತಿಗಳು ಹೋರಾಟದ ಫಲವಾಗಿ ಸಿಗುತ್ತವೆ ಎಂಬುದನ್ನು ಅರಿತುಕೊಳ್ಳಬೇಕು ಎಂದು ಹೇಳಿದರು.

ಡಾ. ರಾಜ್ ಕುಮಾರ್ ಅವರಿಗೆ ಜಾಗದ ಕೊರತೆ ಇರಲಿಲ್ಲ. ಕುಂಬಳಗೋಡು ಪ್ರದೇಶದಲ್ಲಿ ಅವರಿಗೆ ಸುಮಾರು 15 ಎಕರೆ ಜಮೀನು ಇದ್ದರೂ, ತಮ್ಮ ಸಹೋದರರ ಕುಟುಂಬದವರು ಸಮಾಧಿಯಾಗಿರುವ ಸ್ಥಳದಲ್ಲೇ ತಾವೂ ಇರಬೇಕೆಂದು ಅವರು ಬಯಸಿದ್ದರು. ಆದರೆ ಅಭಿಮಾನಿಗಳ ಅನುಕೂಲಕ್ಕಾಗಿ ಇಂದಿನ ಸ್ಥಳದಲ್ಲೇ ಸ್ಮಾರಕ ನಿರ್ಮಿಸಲಾಗಿದೆ ಎಂದು ಗೋವಿಂದು ಸ್ಪಷ್ಟಪಡಿಸಿದರು.

ತಮ್ಮ ವಿರುದ್ಧ ದಾಖಲಾಗಿರುವ ಆರೋಪಗಳನ್ನು ತಳ್ಳಿಹಾಕಿದ ಅವರು, ಯಾವುದೇ ಕಾನೂನುಬಾಹಿರ ಕೃತ್ಯ ಮಾಡಿಲ್ಲ ಎಂದು ಹೇಳಿದರು.

ಕರ್ನಾಟಕ ಹೈಕೋರ್ಟ್ ಮಾರ್ಗಸೂಚಿಗಳಂತೆ ಯಾವುದೇ ಪ್ರತಿಭಟನೆ ಅಥವಾ ಮೆರವಣಿಗೆ ನಡೆಸದಿರುವುದಾಗಿ ತಿಳಿಸಿದ್ದಾರೆ. ಇದೇ ವೇಳೆ, ಚೇತನ್ ನಡೆಸುತ್ತಿರುವ ಕ್ರಮಗಳ ವಿರುದ್ಧ ಸಮೂಹವಾಗಿ ದೂರು ನೀಡಲಾಗುವುದು ಎಂದು ಎಚ್ಚರಿಕೆ ನೀಡಿದರು.

## ವಿಶ್ವವಿದ್ಯಾನಿಲಯ ಅರ್ಹ ಅಭ್ಯರ್ಥಿಗಳಿಗೆ ಉದ್ಯೋಗ ನಿಯುಕ್ತಿ ಪತ್ರಗಳ ವಿತರಣೆ



**ಬೆಂಗಳೂರು, ಮೇ 5:** ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಉದ್ಯೋಗ ತರಬೇತಿ ಮತ್ತು ನಿಯುಕ್ತಿ ಕೇಂದ್ರದ ವತಿಯಿಂದ ಅರ್ಹ ಅಭ್ಯರ್ಥಿಗಳಿಗೆ ಏಜೈಲ್ ರೋಬೋಸ್ ಕಂಪನಿಯ ಉದ್ಯೋಗ ನಿಯುಕ್ತಿ ಪತ್ರಗಳನ್ನು ವಿತರಿ ಸಲಾಯಿತು.

ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ನೂತನ ಶೈಕ್ಷಣಿಕ ವಿಭಾಗದಲ್ಲಿ ನಡೆದ ಸಮಾರಂಭದಲ್ಲಿ ಆಯ್ಕೆಯಾದ ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳ ಒಟ್ಟು 45 ಅಭ್ಯರ್ಥಿಗಳ ಪೈಕಿ 34 ಮಂದಿ ಉದ್ಯೋಗ ನಿಯುಕ್ತಿ ಪತ್ರಗಳನ್ನು ಸ್ವೀಕರಿಸಿದರು.

ಕಾರ್ಯಕ್ರಮದ .ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ.ರಮೇಶ್.ಬಿ. ಉತ್ತಮ ಶೈಕ್ಷಣಿಕ ಸಾಧನೆಯ ಮೂಲಕ ವೈಯಕ್ತಿಕ ಬದುಕಿನ ಭವಿಷ್ಯ ರೂಪಿಸಿಕೊಳ್ಳುವ ಜೊತೆಗೆ ಸಮಾಜದ ಸರ್ವತೋಮುಖ ಪ್ರಗತಿಗೆ



ಗ್ರೀನ್ ಬರ್ಡ್ಸ್ ಆಗ್ರೋ ಫಾರ್ಮ್‌ನಿಂದ ಠೇವಣಿದಾರರಿಗೆ ಹಣ ಮರುಪಾವತಿಸುವಂತೆ ಒತ್ತಾಯಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಮತ್ತು ರಾಜ್ಯ ಬೆಳೆಗಾರರ ಸಂಘದ ಸದಸ್ಯರು ಮಂಗಳವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಿದರು.

## ನಮ್ಮ ಸಮಾಜದ ಭವಿಷ್ಯ ಹಾಳು ಮಾಡಿದರೆ

# ನಿಮ್ಮ ರಾಜಕೀಯ ಭವಿಷ್ಯ ಹಾಳಾಗುತ್ತೆ: ತಳವಾರ ಸಮಾಜದಿಂದ ಸಚಿವರಿಗೆ ಎಚ್ಚರಿಕೆ

**ಕಲಬುರಗಿ, ಮೇ. 5:** ತಳವಾರ ಸಮಾಜ ದವರಿಗೆ ಎಸ್‌ಟಿ ಪ್ರಮಾಣಪತ್ರ ನೀಡಬೇಕು ಎಂದು ಆಗ್ರಹಿಸಿ ಧರಣಿ ನಡೆಸುತ್ತಿದ್ದ ಪ್ರತಿಭಟನಾಕಾರರನ್ನು ವಶಕ್ಕೆ ಪಡೆದು, ಅವರ ವಿರುದ್ಧ ಪ್ರಕರಣ ದಾಖಲಿಸುವ ಮೂಲಕ ಹೋರಾಟವನ್ನು ಹತ್ತಿಕ್ಕುವ ಪ್ರಯತ್ನ ಮಾಡುತ್ತಿರುವ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ವರ್ತನೆ ಖಂಡನೀಯ. ಮುಂದಿನ ದಿನಗಳಲ್ಲಿ ಸಚಿವರ ಮನೆಗೆ ಮುತ್ತಿಗೆ ಸೇರಿದಂತೆ ಉಗ್ರ ಹೋರಾಟಕ್ಕೆ ತಳವಾರ ಸಮಾಜದವರು ನಿರ್ಣಯಿಸಿದರು. ನಮ್ಮ ಸಮಾಜದ ಭವಿಷ್ಯ ಹಾಳು ಮಾಡಲು ಪ್ರಯತ್ನಿಸಿದ್ರೆ ನಮ್ಮ ಇಡೀ ಸಮಾಜ ನಿಮ್ಮ ವಿರುದ್ಧ ದಂಗೆ ಎದ್ದು ನಿಮ್ಮ ರಾಜಕೀಯ ಭವಿಷ್ಯ ಹಾಳು ಮಾಡಬೇಕಾಗುತ್ತದೆ. ಈಗಾಗಲೇ ಮೊದಲ ಹಂತದ ಹೋರಾಟ



ನಡೆದಿದೆ. ಇನ್ಮುಂದಿನದು ನಿಮ್ಮ ವಿರುದ್ಧ 'ಮಾಡು ಇಲ್ಲವೆ ಮಡಿ' ಹೋರಾಟ ನಮ್ಮದಾಗಿರುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಿಗೆ ಜಿಲ್ಲಾ ತಳವಾರ ಸಮುದಾಯದವರು ನೇರ ಎಚ್ಚರಿಕೆ ನೀಡಿದರು.

ನಗರದ ಕೋಲಿ ಸಮಾಜದ ಭವನದಲ್ಲಿ ಏರ್ಪಡಿಸಿದ್ದ ಸಭೆಯಲ್ಲಿ ಹೋರಾಟದ ಸುದೀರ್ಘ ಚರ್ಚೆ ನಡೆಸಿದ ಸಮಾಜದ ಪ್ರಮುಖರು, ರಾಜ್ಯದ ಯಾವುದೇ ಜಿಲ್ಲೆಗಳಲ್ಲಿ ಇರದ ಸಮಸ್ಯೆ ಕಲಬುರಗಿ, ಯಾದಗಿರಿಯಲ್ಲಿ ಉದ್ದೇಶಪೂರ್ವಕವಾಗಿ ಸಚಿವ ಪ್ರಿಯಾಂಕ್ ಖರ್ಗೆ ಸಮಸ್ಯೆ ಸೃಷ್ಟಿಸಿದ್ದಾರೆ.

**ತಳವಾರರಿಗೆ ಪ್ರಮಾಣಪತ್ರಗಳನ್ನು ನೀಡುತ್ತಿಲ್ಲ. ಸಚಿವ ಪ್ರಿಯಾಂಕ್? ಖರ್ಗೆ ಸಂಪೂರ್ಣ ಸುಳ್ಳು ಹೇಳಿ, ಜನರ ದಾರಿ ತಪ್ಪಿಸುತ್ತಿದ್ದಾರೆ. ಬೋಯಾ ತಳವಾರ ನೀಡಿದ್ದೇವೆ ಎಂದು ಹೇಳುತ್ತಾರೆ. ನಮ್ಮ ಜಿಲ್ಲೆಯಲ್ಲಿ ಇಲ್ಲದ ಸಮಾಜಕ್ಕೆ ನೀಡುವುದು ಹೇಗೆ? ವ್ಯವಸ್ಥಿತವಾಗಿ ಸಮಾಜವನ್ನು ಹತ್ತಿಕ್ಕುವ ಕೆಲಸ ಖರ್ಗೆ ಮಾಡುತ್ತಿದ್ದು, ಅವರ ಮನೆಗೆ ಮುತ್ತಿಗೆ ಹಾಕಲಾಗುವುದು. – ಸರ್ದಾರ್ ರಾಯಪ್ಪ, ಅಧ್ಯಕ್ಷರು ತಳವಾರ ಸಮಾಜ.**

ಇದುವರೆಗೆ ಎಲ್ಲ ಶಾಸಕರ ಮನೆ ಎದುರು ಪ್ರತಿಭಟನೆ ನಡೆಸಿದ್ದು, ಮುಂದಿನ ಹೋರಾಟದ ರೂಪು–ರೇಷೆಗಳನ್ನು ಇನ್ನಷ್ಟು ಬಲಿಷ್ಠವಾಗಿ ರೂಪಿಸಲಾಗುವುದು. ದೊಡ್ಡ ಪ್ರಮಾಣದಲ್ಲಿ ಹೋರಾಟ ಮಾಡಲಾಗುವುದು. ಕಲಬುರಗಿ ಜಿಲ್ಲೆಯಲ್ಲಿ ಜಿಲ್ಲಾಡಳಿತ ವ್ಯವಸ್ಥಿತವಾಗಿ ಹೋರಾಟವನ್ನು ಹತ್ತಿಕ್ಕುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನ್ಯಾಯಯುತವಾಗಿ ತಳಮಟ್ಟದ ಸಮುದಾಯದವರು ಹೋರಾಟ ಮಾಡಿದರೆ ದಾಂಧಲೆ, ಹಲ್ಲೆ, ಆಸ್ತಿಪಾಸ್ತಿ ಹಾನಿಯ ಕೇಸ್ ದಾಖಲಿಸಿದ್ದಾರೆ. ಆದರೆ ವಾಸ್ತವದಲ್ಲಿ ಪರವಾನಗಿ ಪಡೆದು ಹಾಕಿದ್ದ ಹೋರಾಟದ ಟೆಂಟ್‌ನ್ನು ಕಿತ್ತು ಹಾಕಿ, ಕಳವು ಮಾಡಿ ಪೊಲೀಸರೇ ಅನ್ಯಾಯ ಎಸಗಿದ್ದಾರೆ. ಸುಳ್ಳು ಕೇಸ್‌ಗಳನ್ನು ಹೋರಾಟಗಾರರ ಮೇಲೆ ಹಾಕಿದ್ದು ಹಿಂಪಡೆಯಬೇಕು, ಟೆಂಟ್ ಹಾನಿ ಮಾಡಿದ ಪೊಲೀಸರ ವಿರುದ್ಧ ಕ್ರಮ ಕೈಗೊಳ್ಳಲು ಒತ್ತಾಯಿಸಬೇಕು ಎಂದು ನಿರ್ಧರಿಸಲಾಯಿತು. ನಾಳೆ ಮತ್ತೊಮ್ಮೆ ಮೀಟಿಂಗ್ ಮೇ ತಿಂಗಳ ಕೊನೇ ವಾರದಲ್ಲಿ ಜಿಲ್ಲೆಯಲ್ಲಿ ಬೃಹತ್ ಹೋರಾಟ ರೂಪಿಸುವುದು, ಮತ್ತೆ ಧರಣಿ ಸತ್ಯಾಗ್ರಹ ಆರಂಭಿಸಲು ಸಭೆಯಲ್ಲಿ ನಿರ್ಣಯಿಸಲಾಗಿದೆ. ಸಮಾಜದ ಹಿರಿಯ ಮುಖಂಡರ ಹೋರಾಟದ ಸಭೆಯನ್ನು ಶನಿವಾರ ನಡೆಸಲು ನಿರ್ಧರಿಸಲಾಯಿತು.

# ಪಂಚಮಸಾಲಿ ಪೀಠ ವಿವಾದ: ನಿಷೇಧಾಜ್ಞೆ ಇದ್ದರೂ ಸಭೆ ನಡೆಸಲು ಸಿದ್ಧತೆ

**ದಾವಣಗೆರೆ, ಮೇ 5:** ಹರಿಹರ ಪಂಚಮಸಾಲಿ ಪೀಠದ ವಿವಾದ ಮುಂದುವರೆದಿದ್ದು, ಸ್ವಾಮೀಜಿ ಹಾಗೂ ಟ್ರಸ್ಟಿಗಳ ನಡುವೆ ಮುನಿಸು ಮುಗಿಯುವಂತೆ ಕಾಣುತ್ತಿಲ್ಲ. ವಚನಾನಂದ ಸ್ವಾಮೀಜಿಗೆ, ಮಠದ ಟ್ರಸ್ಟಿಗಳಿಗೆ ಹಾಗೂ ಅವರ ಬೆಂಬಲಿಗರಿಗೆ ಜಿಲ್ಲಾಡಳಿತದಿಂದ ಹಾಗೂ ಪೊಲೀಸ್ ಇಲಾಖೆಯಿಂದ ನೋಟಿಸ್ ನೀಡಲಾಗಿದ್ದರೂ ಬುಧವಾರ ಸಭೆ ನಡೆಸಲು ಮುಂದಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.



ಕಾನೂನು ಪ್ರಕಾರ ನೋಟಿಸ್ ಜಾರಿಗೊಳಿಸಿ ನಿಷೇಧಾಜ್ಞೆ ಜಾರಿ ಮಾಡಲಾಗಿದೆ. ಮಠದಲ್ಲಿ ವಿವಾದಗಳು ಹೆಚ್ಚಾಗುತ್ತಿರುವ ಬೆನ್ನಲ್ಲೇ ಪಂಚಮಸಾಲಿ ಪೀಠದಲ್ಲಿ ಯಾವುದೇ ಸಭೆ, ಸಮಾರಂಭ ನಡೆಸದಂತೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಮೇ 1 ರಿಂದ 30ರ ವರೆಗೆ ಪಂಚಮಸಾಲಿ ಮಠದ ಆವರಣದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದ್ದರು.

ಕಳೆದ ಮಾ.10ರಿಂದ ಮಠದಲ್ಲಿ ಎರಡು ಕಡೆ ಬೆಂಬಲಿಗರಿಂದ ಸಭೆ, ಸಮಾರಂಭ, ಮಾಧ್ಯಮಗೋಷ್ಠಿಗಳು ನಡೆಯುತ್ತಿವೆ. ಇವು ವಿಕೋಪಕ್ಕೆ ತಿರುಗಿದ್ದು, ಗಲಾಟೆಗಳು, ಪ್ರಚೋದನಕಾರಿ ಹೇಳಿಕೆಗಳು ವ್ಯಕ್ತವಾಗುತ್ತಿವೆ. ಆದ್ದರಿಂದ ಸಾರ್ವಜನಿಕ ಆಸ್ತಿಪಾಸ್ತಿ ನಷ್ಟ, ಕಾನೂನು ಸುವ್ಯವಸ್ಥೆ ಹಾಳಾಗುತ್ತಿದೆ. ಪೊಲೀಸ್ ಇಲಾಖೆ ಪದೇಪದೇ ಭದ್ರತೆ ನೀಡಲು ಆಗುವುದಿಲ್ಲ. ಆದ್ದರಿಂದ ಪಂಚಮಸಾಲಿ ಪೀಠದಲ್ಲಿ ಯಾವುದೇ ಸಭೆ, ಸಮಾರಂಭ, ಮಾಧ್ಯಮಗೋಷ್ಠಿ ನಡೆಸುವಂತಿಲ್ಲ ಎಂದು ನೋಟಿಸ್ ನೀಡಲಾಗಿದೆ. ಹರಿಹರ ಗ್ರಾಮಾಂತರ ಠಾಣೆಯಿಂದಲೂ ಟ್ರಸ್ಟಿಗಳಿಗೆ ಹಾಗೂ ಸ್ವಾಮೀಜಿಗೆ ನೋಟಿಸ್ ಜಾರಿ ಮಾಡಲಾಗಿದೆ.

ವಚನಾನಂದ ಸ್ವಾಮೀಜಿ ಹಾಗೂ ಬೆಂಬಲಿಗರು ಇಂದು ಟ್ರಸ್ಟಿಗಳ ವಿರುದ್ಧ ಲೆಕ್ಕಕೊಡಿ ಅಭಿಯಾನ ಹಮ್ಮಿಕೊಂಡಿದ್ದರು. ಕಳೆದ ಎಪ್ರಿಲ್ 27 ರಂದು ಟ್ರಸ್ಟಿಗಳು ಸುಳ್ಳು ಲೆಕ್ಕ ನೀಡಿದ್ದಾರೆ ಎಂದು ಕೆಲವರು ಆಕ್ರೋಶ ವ್ಯಕ್ತಪಡಿಸಿದ್ದರು. ಪಾರದರ್ಶಕ ಲೆಕ್ಕವನ್ನು ಮಂಡನೆ ಮಾಡಬೇಕು ಎಂದು ಸ್ವಾಮೀಜಿ ಬೆಂಬಲಿಗರು ಮನವಿ ಮಾಡಿದ್ರು. ಹಳ್ಳಿ ಹಳ್ಳಿಗೂ ತೆರಳಿ ಭಕ್ತರು ನೀಡಿದ ಕಾಣಿಕೆ ಬಗ್ಗೆ ಪಟ್ಟಿ ಮಾಡಲು ಸ್ವಾಮೀಜಿ ಬೆಂಬಲಿಗರು ಮುಂದಾಗಿದ್ದರು. ಇನ್ನು ಇಂದು ವಚನಾನಂದ ಸ್ವಾಮೀಜಿ ನೇತೃತ್ವದಲ್ಲಿ ಸಭೆ ನಡೆಯಲಿದ್ದು, ಈ ಹಿನ್ನೆಲೆ ಯಾವುದೇ ಸಭೆ ನಡೆಸದಂತೆ ಮುನ್ನೆಚ್ಚರಿಕೆಯಿಂದ ನಿಷೇಧಾಜ್ಞೆಯನ್ನು ಜಿಲ್ಲಾಡಳಿತ ಜಾರಿ ಮಾಡಿದೆ.

ವಚನಾನಂದ ಸ್ವಾಮೀಜಿ ಅವರನ್ನು ಟ್ರಸ್ಟ್ ಉಚ್ಚಾಟನೆ ಮಾಡಿದಾಗಿನಿಂದ ಮಠದಲ್ಲಿ ಒಂದಲ್ಲ ಒಂದು ಘಟನೆ ನಡೆಯುತ್ತಲೇ ಇದೆ. ಮೊದಲಿಗೆ ವಚನಾನಂದ ಸ್ವಾಮೀಜಿ ಹಾಗೂ ಬೆಂಬಲಿಗರು, ಆಡಳಿತಾಧಿಕಾರಿ ಡಾ. ರಾಜಕುಮಾರ, ಮಾಜಿ ಶಾಸಕರಾದ ಶಿವಶಂಕರ್, ಅರುಣ್ ಕುಮಾರ್ ಪೂಜಾರ್ ಲೆಕ್ಕ ಕೊಡಿ ಚಳವಳಿ ಮಾಡಿದ್ದರು. ಟ್ರಸ್ಟಿಗಳು ಹಣದಲ್ಲಿ ಅವ್ಯವಹಾರ ಮಾಡಿದ್ದಾರೆ ಎಂದು ಆರೋಪಿಸಿದ್ದರು.

ಇದರಿಂದ ಪಟ್ಟುಹಿಡಿದ ಟ್ರಸ್ಟಿಗಳು ಲೆಕ್ಕ ಕೊಡುವ ಕಾರ್ಯಕ್ರಮ ಮಾಡಿ ಪ್ರಧಾನ ಧರ್ಮದರ್ಶಿ ಬಿ. ಸಿ. ಉಮಾಪತಿ ಒಂದೊಂದು ರೂಪಾಯಿ ಲೆಕ್ಕ ಕೊಟ್ಟರು. ಅದ್ರು ಇದು ಸುಳ್ಳು ಲೆಕ್ಕ ಎಂದು ಸ್ವಾಮೀಜಿ ಹಾಗೂ ಅವರ ಬೆಂಬಲಿಗರು ಆರೋಪಿಸಿ ಆಕ್ರೋಶ ವ್ಯಕ್ತಪಡಿಸಿದ್ದರು.

# ಜನಪ್ರಿಯ ಸಾಂಸ್ಕೃತಿಕ ಸಂಭ್ರಮೋತ್ಸವಕ್ಕೆ ವಿವಿಧ ಕಲೆಗಳ ಮೆರಗು

**ಕಲಬುರಗಿ, ಮೇ. 5:** ಕಲೆಗಳು ನಮ್ಮ ದೈನಂದಿನ ಒತ್ತಡಗಳಿಂದ ಮುಕ್ತಿ ಹೊಂದಲು ಸಹಾಯಕ ವಾಗುತ್ತವೆ, ಸಮಾಜದಲ್ಲಿನ ಒತ್ತಡವನ್ನು ತಿಳಿಗೊಳಿಸಲು ಇಂಥ ಸಾಂಸ್ಕೃತಿಕ ಕಾರ್ಯಕ್ರಮಗಳು ಅತ್ಯಾವಶ್ಯಕ ಎಂದು ಬಿ.ಜೆ.ಪಿ ಮಹಿಳಾ ಮೋರ್ಚಾ ದಕ್ಷಿಣ ವಲಯ ಅಧ್ಯಕ್ಷೆಯಾದ ಶ್ರೀಮತಿ ಜ್ಯೋತಿ ಪಾಟೀಲ್ ಅವರು ಅಭಿಪ್ರಾಯಪಟ್ಟರು.



ಕಲಬುರಗಿಯ ಜನಪ್ರಿಯ ಸಾಂಸ್ಕೃತಿಕ ಕಲಾ ಸಂಘ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾ ಶ್ರಯದಲ್ಲಿ ನಗರದ ರಂಗಾಯಣದ ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ 'ಜನಪ್ರಿಯ ಸಾಂಸ್ಕೃತಿಕ ಸಂಭ್ರಮೋತ್ಸವ'ವನ್ನು ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಚಲನಚಿತ್ರ ನಟ ಡಾ. ವಿಜಯಕುಮಾರ ಗೊತಗಿ ಮಾತನಾಡಿ ಕಲೆಗಳು ಮನರಂಜನೆ ಜೊತೆಗೆ ಮನೋವಿಕಾಶಕ್ಕೆ ಬೇಕಾದ ಅಂಶಗಳನ್ನು ಒದಗಿಸುವ ಕೆಲಸ ಮಾಡುತ್ತವೆ ಆದರಿಂದ ಎಲ್ಲರೂ ತಿಂಗಳಿಗೆ ಒಮ್ಮೆಯಾದರೂ ಇಂಥಹ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಇಡೀ ಕುಟುಂಬದೊಂದಿಗೆ ಪಾಲ್ಗೊಳ್ಳಬೇಕು ಎಂದರು. ಇನ್ನೊರ್ವ ಮುಖ್ಯ ಅತಿಥಿಗಳಾಗಿ ಖ್ಯಾತ ಚಲನಚತ್ರ ನಟಿ ಹಾಗೂ ಜನಪದ ಆಯುರ್ವೇದ ವೈದ್ಯರಾದ ಡಾ. ವೀಣಾ ಪಾಟೀಲ್ ಮಾತನಾಡಿ, ಮಕ್ಕಳು ಪಾಠದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವಂತೆ ಪಾಲಕರು ಪ್ರೋತ್ಸಾಹಿಸಬೇಕು, ಕಲೆ, ಸಾಹಿತ್ಯ, ಸಂಸ್ಕೃತಿ ಇವೆಲ್ಲವೂಗಳನ್ನು ಈ ಸಮಾಜದಲ್ಲಿ ಪಸರಿಸುವ ಕೆಲಸವನ್ನು ಜನಪ್ರಿಯ ತಂಡ ಹಾಗೂ ಮಠಪತಿಯವರ ಕುಟುಂಬ ಮಾಡ್ತಾ ಇದೆ ಎಂದು ಹೇಳಿ ಅಭಿನಂದಿಸಿದರು.

ಅತಿಥಿಗಳಾಗಿ ರಂಗಕರ್ಮಿ ಕಲ್ಯಾಣಿ ಭಜಂತ್ರಿ ಉಪಸ್ಥಿತರಿದರು. ಶಾಂತಲಿಂಗಯ್ಯ ಎಸ್ ಮಠಪತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದ ಆರಂಭದಲ್ಲಿ ಕು. ಅಕ್ಷರಾ ರಾಜಶೇಖರ ಅಣಕಲ್ ಅವರು ಭರತನಾಟ್ಯವನ್ನು ಪ್ರದರ್ಶನ ಮಾಡಿದರು.

ನಂತರ ಬಸ್ಸಯ್ಯ ಬಿ ಗುತ್ತೇದಾರ ಸುಗಮ ಸಂಗೀತ, ದತ್ತರಾಜ ಕಲ್ಲಶೆಟ್ಟಿ ತತ್ವಪದ ಗಾಯನ ಹಾಗೂ ಸೈದಪ್ಪಾ ಸಪ್ಪನಗೋಳ ಅವರಿಂದ ಜನಪದ ಗಾಯನ ನೆರವೇರಿದವು. ದಾಸವಾಣಿಯನ್ನು ಅಶ್ವಿನಿ ಆರ್ ಮೂಲಗೆ ಅವರು ಹಾಡಿ ಎಲ್ಲರ ಮನಸೆಳೆದರು. ಹಾಗೂ ಜನಪ್ರಿಯ ಸಂಗೀತ ಹಾಗು ನೃತ್ಯ ಶಾಲೆಯ ಮಕ್ಕಳಿಂದ ಜಾನಪದ ನೃತ್ಯ, ಶಾಸ್ತ್ರೀಯ ನೃತ್ಯ, ವಚನ ಗಾಯನ, ಭಕ್ತಿಗೀತೆ ಮುಂತಾದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಪ್ರದರ್ಶನಗೊಂಡು ಎಲ್ಲರ ಗಮನ ಸೆಳೆದರು.

# ಅಂತಾರಾಜ್ಯ ಮನೆಗಳ್ಳನ ಬಂಧನ: 14 ಲಕ್ಷ ಮೌಲ್ಯದ ಚಿನ್ನಾಭರಣ ವಶ

**ಕಲಬುರಗಿ, ಮೇ. 5:** ನಗರದ ಸ್ಟೇಷನ್ ಬಜಾರ್ ಠಾಣೆಯ ಪೋಲಿಸರು ಕಾರ್ಯಾಚರಣೆ ಕೈಗೊಂಡು ಕುಖ್ಯಾತ ಅಂತರಾಜ್ಯ ಮನೆಗಳ್ಳನೊಬ್ಬನನ್ನು ಬಂಧಿಸಿ, ಅವನಿಂದ ಸುಮಾರು 14 ಲಕ್ಷ ರೂ.ಗಳ ಮೌಲ್ಯದ ಚಿನ್ನಾಭರಣಗಳ ಸ್ವತ್ತು ವಶಪಡಿಸಿಕೊಂಡಿದ್ದಾರೆ ಎಂದು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರು ಹೇಳಿದರು.



ತಮ್ಮ ಕಚೇರಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮನೆಗಳ್ಳತನ ಪ್ರಕರಣಗಳಿಗೆ ಸಂಬಂಧಿಸಿದಂತೆ ಕೀಸರ ಮಂಡಲ ನಾಗವರಂನ ನಿವಾಸಿ ಹಾಗೂ ಚಾಲಕ ಶಿವಪ್ರಸಾದ್ ಆದಿನಾರಾಯಣ ಮಂತ್ರಿ ಅಲಿಯಾಸ್ ಮಂತ್ರಿ ಶಂಕರ್ ತಂದೆ ಆದಿನಾರಾಯಣ ಮಂತ್ರಿ (61) ಎಂಬಾತನಿಗೆ ಬಂಧಿಸಲಾಗಿದೆ. ಕಳೆದ ವರ್ಷ ಅಶೋಕನಗರ ಠಾಣೆಯ ಪೋಲಿಸರು ಆತನನ್ನು ಬಂಧಿಸಿದ್ದರು. ಆತನ ವಿರುದ್ಧ 220 ಪ್ರಕರಣಗಳು ಇವೆ ಎಂದರು.

ನಗರದ ದೇವಾನಗರದ ನಿವೃತ್ತ ಬಿಎಸ್‌ಎನ್‌ಎಲ್ ಅಧಿಕಾರಿ ಲಕ್ಷ್ಮೀಕಾಂತ್ ತಂದೆ ಗೋಪಾಲರಾವ್ ಜಹಾಗೀರದಾರ್ ಅವರು ಬೀದರ್‌ಕ್ಕೆ ಹೋದಾಗ ತಮ್ಮ ಮನೆಯ ಬೀಗ ಮುರಿದು ಸುಮಾರು 30,000ರೂ.ಗಳು ಸೇರಿದಂತೆ ಒಟ್ಟು 4.47 ಲಕ್ಷ ರೂ.ಗಳ ಮೌಲ್ಯದ ಕಿಮ್ಮತ್ತಿನ ಸ್ವತ್ತು ಕಳ್ಳತನ ಮಾಡಿಕೊಂಡು ಹೋಗಿರುವ ಕುರಿತು ದೂರು ಸಲ್ಲಿಸಿದ್ದರು.

ಈ ಕುರಿತು ಸ್ಟೇಷನ್ ಬಜಾರ್ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು ಎಂದು ಅವರು ಹೇಳಿದರು.

ಆರೋಪಿಯು ಕಳ್ಳತನವನ್ನು ಒಪ್ಪಿ ಕೊಂಡಿದ್ದು, ಬಂಧಿತನಿಂದ 75000ರೂ. ಗಳ ಮೌಲ್ಯದ ಐದು ಗ್ರಾಮ್ ತೂಕದ ಬಂಗಾರದ ಚೈನ್, 75000ರೂ.ಗಳ ಮೌಲ್ಯದ 5 ಗ್ರಾಮ್ ತೂಕದ ಬ್ರೈಸ್‌ಲೇಟ್, 1.50 ಲಕ್ಷ ರೂ.ಗಳ ಮೌಲ್ಯದ 10 ಗ್ರಾಮ್ ತೂಕದ ಎರಡು ಉಂಗುರುಗಳು, 75000ರೂ.ಗಳ ಮೌಲ್ಯದ ಐದು ಗ್ರಾಮ್ ತೂಕದ ಜುಮಕಿ, 4.25 ಲಕ್ಷ ರೂ. ಗಳ ಮೌಲ್ಯದ 25 ಗ್ರಾಮ್ ತೂಕದ ಬಂಗಾರದ ನೆಕ್ಲೆಸ್, ಮೂರು ಲಕ್ಷ ರೂ. ಗಳ ಮೌಲ್ಯದ 20 ಗ್ರಾಮ್ ತೂಕದ ಐದು ಬಂಗಾರದ ಉಂಗುರುಗಳು, 2.25 ಲಕ್ಷ ರೂ. ಗಳ ಮೌಲ್ಯದ 15 ಗ್ರಾಮ್ ತೂಕದ ಬಂಗಾರದ ಲಾಕೆಟ್ ಹಾಗೂ 75000ರೂ.ಗಳ ಮೌಲ್ಯದ ಐದು ಗ್ರಾಮ್ ತೂಕದ ಬಂಗಾರದ ಕಿವಿಯೋಲೆ ಸೇರಿ ಸುಮಾರು 14 ಲಕ್ಷ ರೂ.ಗಳ ಮೌಲ್ಯದ ಸ್ವತ್ತು ವಶಪಡಿಸಿಕೊಂಡು ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ ಎಂದು ಅವರು ಹೇಳಿದರು.

## ಅಡುಗೆ ಮಾಡೋಕೆ ಬರಲ್ಲ ಅಂದಿದ್ದೇ ತಪ್ಪಾ?

# ತವರು ಮನೆಯವರನ್ನು ಕರೆಸಿ ಗಂಡನ ಮೇಲೆ ಹಲ್ಲೆ; ಮಾವ ಗಂಭೀರ ಗಾಯ!

**ರಾಯಚೂರು, ಮೇ. 5:** ಯಾವುದಕ್ಕೂ ಕೊರತೆ ಇಲ್ಲದ ಅದೊಂದು ಸುಂದರ ಸಂಸಾರ. ಗಂಡ ಬ್ಯಾಂಕ್ ಉದ್ಯೋಗಿ, ಹೆಂಡತಿ ಕೃಷಿ ಇಲಾಖೆಯಲ್ಲಿ ಅಧಿಕಾರಿ. ಇಬ್ಬರೂ ಸುಶಿಕ್ಷಿತರೇ.... ಆದರೆ, ಅಡುಗೆ ಮನೆಯಲ್ಲಿ ಶುರುವಾದ ಒಂದು ಸಣ್ಣ 'ಉಪ್ಪು–ಖಾರ'ದ ಜಗಳ, ಇಂದು ಭಯಂಕರ ಹೊಡೆ ದಾಡಿಕೊಂಡು ರಕ್ತಪಾತಕ್ಕೆ ಬಂದು ನಿಂತಿದೆ. ರಾಯಚೂರಿನ ಹೊಸೂರು ರಸ್ತೆಯಲ್ಲಿ ನಡೆದ ಈ ಘಟನೆ ಈಗ ಇಡೀ ನಗರವನ್ನೇ ಬೆಚ್ಚಿಬೀಳಿಸಿದೆ.




ಬ್ಯಾಂಕ್ ಉದ್ಯೋಗಿ ಶಿವರಾಜ್ ಹಾಗೂ ಕೃಷಿ ಇಲಾಖೆಯ ಶೋಭಾ ದಂಪತಿ ನಡುವೆ ಕ್ಷುಲ್ಲಕ ಕಾರಣಕ್ಕೆ ಆಗಾಗ ಮನಸ್ತಾಪವಾಗುತ್ತಿತ್ತು. 'ನೀನು ಅಡುಗೆ ಸರಿಯಾಗಿ ಮಾಡುವು ದಿಲ್ಲ' ಎಂದು ಪತಿ ಶಿವರಾಜ್ ಕಿರಿಕ್ ತೆಗೆದಿದ್ದೇ ಈಗ ದೊಡ್ಡ ರಂಪಾಟಕ್ಕೆ ಕಾರಣವಾಗಿದೆ. ಮಾತಿಗೆ ಮಾತು ಬೆಳೆದು, ಇಡೀ ಮನೆ ರಣಾಂಗಣವಾಗಿ ಮಾರ್ಪಟ್ಟಿದೆ.

ಪತಿಯ ಮಾತಿನಿಂದ ಕೆರಳಿದ ಪತ್ನಿ ಶೋಭಾ, ತಕ್ಷಣವೇ ತನ್ನ ತವರು ಮನೆಯವರಿಗೆ ಫೋನ್ ಮಾಡಿದ್ದಾರೆ. ಮಗಳ ಕರೆಯನ್ನು ಕೇಳಿ ಆವೇಶದಿಂದ ಬಂದ ಶೋಭಾ ಮನೆಯವರು, ಪತಿ ಶಿವರಾಜ್ ಮಾತ್ರವಲ್ಲದೆ, ಅವರ ವಯಸ್ಸಾದ ತಂದೆ ದೇವಿಂದ್ರಪ್ಪ, ತಾಯಿ ಲಕ್ಷ್ಮೀ ಮತ್ತು ಸಹೋದರ ವೆಂಕಟೇಶ್ ಅವರ ಮೇಲೆಯೂ ಹಿಗ್ಗಾಮುಗ್ಗ ಹಲ್ಲೆ ನಡೆಸಿದ್ದಾರೆ. ಬೀಗರಿಂದಲೇ ಬೀಗರ ಮೇಲೆ ನಡೆದ ಈ ದಾಳಿಯಿಂದ ಇಡೀ ಕುಟುಂಬ ಕಂಗಾಲಾಗಿದೆ. ಈ ಹಲ್ಲೆಯಲ್ಲಿ ಗಂಭೀರವಾಗಿ ಗಾಯಗೊಂಡ ಶಿವರಾಜ್ ತಂದೆ ದೇವಿಂದ್ರಪ್ಪ ಅವರ ಸ್ಥಿತಿ ಚಿಂತಾಜನಕವಾಗಿದೆ. ಘಟನೆಗೆ ಸಂಬಂಧಿಸಿ ದಂತೆ ಪತ್ನಿ ಶೋಭಾ ಸೇರಿದಂತೆ ಐವರ ವಿರುದ್ಧ ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

# ಸಾರಿಗೆ ಸಂಸ್ಥೆ ಬಸ್‌ನಲ್ಲಿ ಆಕಸ್ಮಿಕ ಬೆಂಕಿ: ಚಾಲಕನ ಸಮಯಪ್ರಜ್ಞೆಯಿಂದ ಪ್ರಯಾಣಿಕರು ಪಾರು

**ಹಾವೇರಿ, ಮೇ.5:** ಬೆಂಗಳೂರಿನಿಂದ ಗದಗ ನಗರಕ್ಕೆ ಹೋಗುತ್ತಿದ್ದ ರಾಜ್ಯ ಸಾರಿಗೆ ಸಂಸ್ಥೆಯ ಪಲ್ಲಕ್ಕಿ ಬಸ್‌ನಲ್ಲಿ ಆಕಸ್ಮಿಕ ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆ ಚಾಲಕನ ಸಮಯಪ್ರಜ್ಞೆಯಿಂದ ಪ್ರಯಾಣಿಕರು ಪಾರಾಗಿದ್ದು, ಬಸ್ ಸುಟ್ಟು ಕರಕಲಾದ ಘಟನೆ ರಾಜ್ಯ ಹೆದ್ದಾರಿಯ ರಾಣೇಬೆನ್ನೂರು ತಾಲ್ಲೂಕಿನ ದೇವರಗುಡ್ಡ ಗ್ರಾಮದ ಬಳಿ ನಡೆದಿದೆ.





ಬೆಂಗಳೂರಿನಿಂದ ಗದಗ ನಗರಕ್ಕೆ ಹೊರಟಿದ್ದ ಈ ಸಾರಿಗೆ ಬಸ್‌ನಲ್ಲಿ ಸುಮಾರು 17 ಹೆಚ್ಚು ಪ್ರಯಾಣಿಕರು ಪ್ರಯಾಣಿಸುತ್ತಿದ್ದರು. ಬ್ರೇಕ್ ಲೈನ್ ದೋಷದಿಂದ ಬೆಂಕಿ ಅವಘಡ ಸಂಭವಿಸಿದೆ ಎನ್ನಲಾಗಿದೆ. ಬಸ್‌ನಲ್ಲಿ ಹೊಗೆ ಕಾಣಿಸುತ್ತಿದಂತೆ ಚಾಲಕ ಪಕ್ಕೀರಪ್ಪ ಅವರು ತಕ್ಷಣ ರಸ್ತೆ ಬದಿ ವಾಹನ ನಿಲ್ಲಿಸಿ ಪ್ರಯಾಣಿಕರನ್ನು ಕೆಳಗೆ ಇಳಿಸಿ ನಂತರ ಬೆಂಕಿ ನಂದಿಸಲು ಹರಸಹಾಸ ಪಟ್ಟರೂ ಪ್ರಯೋಜನವಾಗಲಿಲ್ಲ, ನೋಡ ನೋಡುತ್ತಿದ್ದಂತೆ ಬೆಂಕಿ ಬಸ್ ಪೂರ್ತಿ ಆವರಿಸಿ ಹೊತ್ತಿ ಉರಿಯಲಾರಂಭಿಸಿದೆ. ತಕ್ಷಣ ಅಗ್ನಿ ಶಾಮಕ ದಳಕ್ಕೆ ವಿಷಯ ತಿಳಿಸಿದ್ದಾರೆ. ಮಾಹಿತಿ ತಿಳಿದು ಅಗ್ನಿಶಾಮಕ ದಳದ ಸಿಬ್ಬಂದಿ ವಾಹನದೊಂದಿಗೆ ಸ್ಥಳಕ್ಕೆ ದಾವಿಸಿ ಬೆಂಕಿ ನಂದಿಸುವ ಕಾರ್ಯ ಮಾಡಿದ್ದಾರೆ. ಈ ಬಗ್ಗೆ ರಾಣೇಬೆನ್ನೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಭುಗಿಲೆದ್ದ ಮಂತ್ರಾಲಯ ರಾಯರ ಜಪದ ಕಟ್ಟೆ ವಿವಾದ,

# ಸಮೀಕ್ಷೆ ವೇಳೆ ಹೈಡ್ರಾಮಾ, ಹಲವು ರೈತರು ಪೊಲೀಸ್ ವಶಕ್ಕೆ

**ಮಂತ್ರಾಲಯ, ಮೇ. 5:** ರಾಘವೇಂದ್ರ ಸ್ವಾಮಿಗಳು ತಪಸ್ಸು ಮಾಡಿದ್ದ ಜಪದ ಕಟ್ಟೆ ಸಮೀಪವಿರುವ ಜಮೀನಿನ ವಿವಾದ ಇದೀಗ ತಾರಕ್ಕೇರಿದೆ. ಸರ್ಕಾರದ ಆದೇಶದನ್ವಯ ಇಂದು ಸಮೀಕ್ಷೆ ಕಾರ್ಯ ನಡೆಯುತ್ತಿದ್ದ ವೇಳೆ ಕೆಲ ಸ್ಥಳೀಯರು ವಿರೋಧ ವ್ಯಕ್ತಪಡಿಸಿದ್ದಾರೆ. ಈ ವೇಳೆ ತಳ್ಳಾಟ–ನೂಕಾಟ ಉಂಟಾಗಿದ್ದು, ದೊಡ್ಡ ಹೈಡ್ರಾಮಾವೇ ನಡೆದು ಹೋಗಿದೆ.

**ಏನಿದು ಪ್ರಕರಣ;** ರಾಯಚೂರು ತಾಲ್ಲೂಕಿನ ಬಿಚ್ಚಾಲಿ ಗ್ರಾಮದಲ್ಲಿ ಮಂತ್ರಾಲಯ ಶ್ರೀ ರಾಘವೇಂದ್ರ ಸ್ವಾಮಿಗಳು 13 ವರ್ಷಗಳ ಕಾಲ ತಪಸ್ಸು ಮಾಡಿದ್ದಾರೆ. ರಾಯರು ತಪಸ್ಸು ಮಾಡಿದ ಜಪದ ಕಟ್ಟೆ ಈಗಲೂ ಬಿಚ್ಚಾಲಿ ಗ್ರಾಮದಲ್ಲಿದೆ. ಇದೇ ಬಿಚ್ಚಾಲಿ ಗ್ರಾಮದಲ್ಲಿ ರಾಯರ ಜಪದ ಕಟ್ಟೆ ದರ್ಶನಕ್ಕೆ ಅಪಾರ ಭಕ್ತರು ನಿತ್ಯ ಇಲ್ಲಿಗೆ ಬರ್ತಾರೆ. ಈ ಜಪದ ಕಟ್ಟೆ ಬಿಚ್ಚಾಲಿ ಮೂಲದ ಬಿಚ್ಚಾಲೆ ಅಪ್ಪಣ್ಣಾಚಾರ್ಯ ಸೇವಾ ಟ್ರಸ್ಟ್ ಮೂಲಕ ಕಾರ್ಯನಿರ್ವಹಿಸುತ್ತಿದೆ. ಅಪ್ಪಣಾಚಾರ್ಯರು ರಾಯರ ಪರಮ ಶಿಷ್ಯರು. ಇದೇ ಜಪದ ಕಟ್ಟೆಗೆ ಹೊಂದಿಕೊಂಡಿರುವ ಸ್ಥಳ ಹಾಗೂ ಅದರ ಪಕ್ಕದಲ್ಲಿರುವ ಒಟ್ಟು 2.33 ಎಕರೆ ಜಮೀನಿನ ವಿವಾದ ಈಗ ತಾರಕ್ಕೇರಿದೆ. ಇದೇ ಭೂವಿವಾದ ಸಂಬಂಧ ಇಂದು ಸಮೀಕ್ಷೆ ನಡೆಯುವ ವೇಳೆ ದೊಡ್ಡ ಹೈಡ್ರಾಮಾವೇ ನಡೆದಿದೆ.



ಬಿಚ್ಚಾಲಿ ಗ್ರಾಮದ ರಾಯರ ಜಪದ ಕಟ್ಟೆಗೆ ಹೊಂದಿಕೊಂಡಿರುವ ಸರ್ವೆ ನಂಬರ್ 35 ರಲ್ಲಿ 1.2 ಎಕರೆ ಹಾಗೂ ಸರ್ವೆ ನಂಬರ್ 37 ರಲ್ಲಿ 1.31 ಎಕರೆ ಸೇರಿ ಒಟ್ಟು 2 ಎಕರೆ 33 ಗುಂಟೆ ಜಮೀನನ್ನ ರಾಜ್ಯ ಸರ್ಕಾರ, ರಾಘವೇಂದ್ರ ಮಠ ನಂಜನಗೂಡು ಹಾಗೂ ಮಂತ್ರಾಲಯ ಕ್ಯಾಂಪ್ ಮಠಕ್ಕೆ ಮಂಜೂರು ಮಾಡಿ ಆದೇಶಿಸಿದೆ. ರಾಘವೇಂದ್ರ ಸ್ವಾಮಿ ಚಾರಿತ್ರಿಕ ಸ್ಥಳಗಳನ್ನ ಅಭಿವೃದ್ಧಿ ಪಡಿಸಿ, ಧಾರ್ಮಿಕ ಹಾಗೂ ಪ್ರೇಕ್ಷಣೀಯ ಸ್ಥಳಗಳನ್ನಾಗಿ ಅಭಿವೃದ್ಧಿ ಪಡೆಸುವ ಉದ್ದೇಶಕ್ಕೆ 2021–22ರ ಸಾಲಿನಲ್ಲಿ ರಾಜ್ಯ ಸರ್ಕಾರ ಮಂಜೂರು ಮಾಡಿತ್ತು.

ಆದರೆ ಇದೇ ಸರ್ವೆ ನಂಬರ್‌ನ ಕೆಲವೆಡೆ ಬಿಚ್ಚಾಲಿ ಗ್ರಾಮದ ಕೆಲವರು ಸಾಗುವಳಿ ಮಾಡುತ್ತಿದ್ದಾರೆ. ಹೀಗಾಗಿ ಸರ್ಕಾರದ ಆದೇಶ ಪ್ರಶ್ನಿಸಿ ಹೈಕೋರ್ಟ್‌ನಲ್ಲಿ ಪಾಡದ ರಾಘವೇಂದ್ರ ಆಚಾರ್ಯ ಹಾಗೂ ಇತರರು ರಿಟ್ ಅರ್ಜಿ ಸಲ್ಲಿಸಿದ್ದು, ಕೇಸ್ ನಡೆದಿತ್ತು.

**ಸರ್ವೇ ವೇಳೆ ರಂಪಾಟ:** ಕಳೆದ ವಾರ ರಿಟ್ ಅರ್ಜಿಯನ್ನು ವಜಾಗೊಳಿಸಲಾಗಿದೆ. ಹೀಗಾಗಿ ಸರ್ಕಾರದ ಮಂಜೂರಾತಿ ಆದೇಶದನ್ವಯ ಗಡಿ ಗುರುತಿಸಿ ಹಸ್ತಾಂತರ ಮಾಡುವ ಪ್ರಕ್ರಿಯೆ ನಡೆದಿದೆ. ಹೀಗಾಗಿ ಹೈಕೋರ್ಟ್ ಆದೇಶದನ್ವಯ ಇಂದು ಅಧಿಕಾರಿಗಳ ತಂಡ ಸರ್ವೇಗೆ ಮುಂದಾದ್ದರು. ಬಿಗಿ ಪೊಲೀಸ್ ಬಂದೋಬಸ್ತ್ ಕೂಡ ನಿಯೋಜಿಸಲಾಗಿತ್ತು. ಆದರೆ ಸರ್ವೇ ವೇಳೆ ನಡೆದಿದ್ದೇ ಬೇರೆ. ಸರ್ವೆ ವೇಳೆ ಕೆಲ ಸ್ಥಳೀಯರು, ಸಾಗುವಳಿದಾರರು ಆಕ್ರೋಶ ಹೊರಹಾಕಿದರು. ಸರ್ವೆ ಮಾಡುವುದಕ್ಕೆ ಬಿಡಲ್ಲ ಅಂತ ಅಡ್ಡಿಪಡಿಸಿದರು.

ಈ ವೇಳೆ ಪೊಲೀಸರು ಎಷ್ಟೇ ಹೇಳಿದರು ಸುಮ್ಮನಾಗದ ಕೆಲವರು ದೊಡ್ಡ ರಂಪಾಟವೇ ಮಾಡಿದ್ದಾರೆ. ಈ ವೇಳೆ ಕೆಲವರು ಪೊಲೀಸರ ಜೊತೆ ವಾಗ್ವಾದ ಉಂಟಾಗಿದೆ. ಆಗ ಪರಿಸ್ಥಿತಿ ನಿಯಂತ್ರಿಸಲು ಪೊಲೀಸರು ಕೆಲವರನ್ನ ವಶಕ್ಕೆ ಪಡೆದರು. ಬಳಿಕ ಪೊಲೀಸರ ಸಮ್ಮುಖದಲ್ಲಿ ಸರ್ವೆ ಕಾರ್ಯ ನಡೆಯಿತು.

**ಇನ್ನು ಈ ಬಗ್ಗೆ ರಾಯಚೂರು ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ್ ಪ್ರತಿಕ್ರಿಯಿಸಿದ್ದು, 2022ರಲ್ಲಿ ಕರ್ನಾಟಕ ಸರ್ಕಾರ ರಾಘವೇಂದ್ರ ಸ್ವಾಮಿ ಮಠ ನಂಜನಗೂಡು ಹಾಗೂ ಮಂತ್ರಾಲಯ ಕ್ಯಾಂಪ್ ಆಫೀಸ್‌ಗೆ ಭೂ ಮಂಜೂರು ಮಾಡಿದೆ. ಸರ್ಕಾರದ ಮಂಜೂರಾತಿ ಆದೇಶದನ್ವಯ ಗಡಿ ಗುರುತಿಸಿ ಹಸ್ತಾಂತರ ಮಾಡುವ ಪ್ರಕ್ರಿಯೆ ನಡೆದಿದೆ. ಅತಿಕ್ರಮಣ ಸ್ಥಳದಲ್ಲಿ ಕಟ್ಟಡ ಕಟ್ಟಿದ್ದರೆ ಅದನ್ನ ಕಾನೂನು, ನಿಯಮದಡಿ ತೆರವು ಮಾಡಲಾಗತ್ತೆ. ಈ ಸರ್ವೆ ಅಡಿಯಲ್ಲಿ ರಾಯರ ಜಪದ ಕಟ್ಟೆ ಬರುವದಿಲ್ಲ ಎಂದಿದ್ದಾರೆ. ಸದ್ಯ ಸರ್ವೆ ಕಾರ್ಯ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಆದರೆ ಈ ವಿವಾದ ಸದ್ಯ ಬೂದಿ ಮುಚ್ಚಿದ ಕೆಂಡವಾಗಿದ್ದು, ಮುಂದೆ ಯಾವ ತಿರುವು ಪಡೆಯುತ್ತೆ ಕಾದು ನೋಡಬೇಕಿದೆ.**

# ಬಿಸಿಲಿನ ಬೇಗೆಯಿಂದ ಜಾಗ್ರತೆ: ಸಾರ್ವಜನಿಕರಿಗೆ ಜಿಲ್ಲಾ ಆರೋಗ್ಯ ಇಲಾಖೆಯ ಮಹತ್ವದ ಸಲಹೆ

**ಬಳ್ಳಾರಿ, ಮೇ 05.** ಜಿಲ್ಲೆಯಾದ್ಯಂತ ದಿನದಿಂದ ದಿನಕ್ಕೆ ಬಿಸಿಲಿನ ಪ್ರಖರತೆ ಮತ್ತು ತೀವ್ರತೆ ಏರುತ್ತಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ. ವಿಶೇಷವಾಗಿ ಗರ್ಭಿಣಿ ಯರು, ಬಾಣಂತಿಯರು, ಮಕ್ಕಳು ಹಾಗೂ ವಯೋವೃದ್ಧರು ಬಿಸಿಲಿನಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳಿಂದ ರಕ್ಷಿಸಿಕೊಳ್ಳಬೇಕು ಎಂದು ಅವರು ಹೇಳಿದ್ದಾರೆ. ಬಾಯಾರಿಕೆ ಇಲ್ಲದಿದ್ದರೂ ದಿನವಿಡೀ ಅತಿ ಹೆಚ್ಚು ನೀರನ್ನು ಕುಡಿಯುತ್ತಿರಬೇಕು. ನಿರ್ಜಲೀಕರಣ ತಡೆಯಲು ಇದು ಅತಿ ಮುಖ್ಯವಾಗಿದೆ.

ಅಂಗಡಿಯ ಕೃತಕ ಪಾನೀಯಗಳ ಬದಲು ಮನೆಯಲ್ಲಿ ತಯಾರಿಸಿದ ನಿಂಬೆ ಹಣ್ಣಿನ ರಸ, ಮಜ್ಜಿಗೆ ಹಾಗೂ ನೈಸರ್ಗಿಕ ಎಳೆನೀರನ್ನು ಹೆಚ್ಚಾಗಿ ಸೇವಿಸಬೇಕು.

**ಆಹಾರ ಕ್ರಮ:** ಸೌತೆಕಾಯಿ, ಕಲ್ಲಂಗಡಿ, ಕಿತ್ತಳೆ ಹಾಗೂ ದ್ರಾಕ್ಷಿಯಂತಹ ನೀರಿನ ಅಂಶ ಹೆಚ್ಚಿರುವ ಹಣ್ಣು ಮತ್ತು ತರಕಾರಿಗಳನ್ನು ದಿನನಿತ್ಯದ ಆಹಾರದಲ್ಲಿ ಸೇರಿಸಿಕೊಳ್ಳಬೇಕು.

**ಉಡುಪು:** ಹಗುರವಾದ, ತಿಳಿ ಬಣ್ಣದ ಸಡಿಲವಾದ ಹತ್ತಿ ಬಟ್ಟೆಗಳನ್ನು ಧರಿಸುವುದು ದೇಹವನ್ನು ತಂಪಾಗಿರಿಸಲು ಸಹಕಾರಿಯಾಗಲಿದೆ.

ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಬಿಸಿಲಿನ ತೀವ್ರತೆ ಹೆಚ್ಚಿರುವುದರಿಂದ ಆ ಸಮಯದಲ್ಲಿ ಹೊರಗೆ ಹೋಗುವುದನ್ನು ಸಾಧ್ಯವಾದಷ್ಟು ತಪ್ಪಿಸಿ. ಅನಿವಾರ್ಯವಿದ್ದಲ್ಲಿ ಛತ್ರಿ, ಟೋಪಿ, ಕಪ್ಪು ಕನ್ನಡಕ ಹಾಗೂ ಚಪ್ಪಲಿಗಳನ್ನು ಕಡ್ಡಾಯವಾಗಿ ಬಳಸಿ. ಸಭೆ–ಸಮಾರಂಭಗಳನ್ನು ನಡೆಸುವವರು ಜನರಿಗೆ ನೆರಳು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು.

**ತುರ್ತು ಸಂದರ್ಭದಲ್ಲಿ ಏನು ಮಾಡಬೇಕು?**

ಬಿಸಿಲಿನಿಂದ ಯಾರಾದರೂ ಪ್ರಜ್ಞೆ ತಪ್ಪಿ ಬಿದ್ದರೆ, ಕೂಡಲೇ ಅವರನ್ನು ತಂಪಾದ ಸ್ಥಳಕ್ಕೆ ಸ್ಥಳಾಂತರಿಸಬೇಕು. ಒದ್ದೆ ಬಟ್ಟೆಯಿಂದ ಮೈ ಒರೆಸಿ, ತಕ್ಷಣವೇ ವೈದ್ಯಕೀಯ ಚಿಕಿತ್ಸೆಗೆ ವ್ಯವಸ್ಥೆ ಮಾಡಬೇಕು.



ಮನುಷ್ಯರಷ್ಟೇ ಅಲ್ಲದೆ ಸಾಕು ಪ್ರಾಣಿಗಳ ಬಗ್ಗೆಯೂ ಕಾಳಜಿ ವಹಿಸಬೇಕು. ಅವುಗಳನ್ನು ನೆರಳಿನಲ್ಲಿ ರಿಸಿ, ಕುಡಿಯಲು ಸಾಕಷ್ಟು ನೀರಿನ ವ್ಯವಸ್ಥೆ ಮಾಡಬೇಕು. ನಿಲ್ಲಿಸಿದ ವಾಹನಗಳಲ್ಲಿ ಮಕ್ಕಳನ್ನು ಅಥವಾ ಸಾಕು ಪ್ರಾಣಿಗಳನ್ನು ಒಂಟಿಯಾಗಿ ಬಿಟ್ಟು ಹೋಗಬಾರದು ಎಂದು ಅವರು ತಿಳಿಸಿದ್ದಾರೆ.

ಆಲ್ಕೋಹಾಲ್, ಅತಿಯಾದ ಚಹಾ, ಕಾಫಿ ಮತ್ತು ಕಾರ್ಬೊನೇಟೆಡ್ (ತಂಪು ಪಾನೀಯ) ಪಾನೀಯಗಳು ದೇಹವನ್ನು ಶೀಘ್ರವಾಗಿ ನಿರ್ಜಲೀಕರಣಗೊಳಿಸುವುದರಿಂದ ಅವುಗಳ ಸೇವನೆಯನ್ನು ಆದಷ್ಟು ಕಡಿಮೆ ಮಾಡಬೇಕು. ಕೆರೆ, ಬಾವಿ ಅಥವಾ ಕಾಲುವೆಗಳ ಹತ್ತಿರ ಮಕ್ಕಳು ಹೋಗದಂತೆ ಪೋಷಕರು ಹೆಚ್ಚಿನ ನಿಗಾ ವಹಿಸಬೇಕು ಎಂದು ಡಿಎಚ್‌ಓ ಡಾ.ಯಲ್ಲಾ ರಮೇಶ್ ಬಾಬು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

### ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರ ಚುನಾವಣೆ

# ಅನುಭವಿ ಶಶಿಲ್ ನಮೋಶಿ ಗೆಲ್ಲಿಸಲು ರವಿಕುಮಾರ ಮನವಿ




**ಬೀದರ್, ಮೇ. 5:** ಮುಂಬರುವ ಈಶಾನ್ಯ ಶಿಕ್ಷಕರ ಕ್ಷೇತ್ರದಿಂದ ರಾಜ್ಯ ವಿಧಾನ ಪರಿಷತ್‌ಗೆ ನಡೆಯುವ ಶಿಕ್ಷಕ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಶಶಿಲ್ ನಮೋಶಿ ಅವರನ್ನು ಗೆಲ್ಲಿಸಬೇಕು. ನಾಲ್ಕು ಬಾರಿ ಆಯ್ಕೆಯಗಿ ಶಿಕ್ಷಕರ ಸಮಸ್ಯೆಗಳನ್ನು ಅರಿತು ಪರಿಹರಿಸಲು ನಿರಂತರ ಶ್ರಮಿಸುತ್ತಿರುವ ಅವರು ಅಪಾರ ಅನುಭವ ಹೊಂದಿರುವವರಾಗಿದ್ದಾರೆ ಎಂದು ರಾಜ್ಯ ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಕರೆ ನೀಡಿದರು. ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾಔಣೆಯ ನಿಮಿತ್ತ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಕಾರ್ಯಕರ್ತರು ಆ ನಿಟ್ಟಿನಲ್ಲಿ ಪ್ರತಿ ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸಬೇಕು. ಅನಂತರ ಪ್ರತಿಬೂತ್‌ಗೆ ಮತದಾರರು ಬಂದು ಮತ ಚಲಾಯಿಸುವಂತೆ ಮನವೊಲಿಸಬೇಕು ಎಂದರು.

ಅಭ್ಯರ್ಥಿ ಶಶಿಲ್ ನಮೋಶಿ ಅವರು ಮಾತನಾಡಿ, ಕಾರ್ಯಕರ್ತರು ಅರ್ಹ ಶಿಕ್ಷಕರನ್ನು ಗುರುತಿಸಿ ಅವರ ನೋಂದಣಿಯನ್ನು ಮಾಡಬೇಕೆಂದು ಹೇಳಿದರು ಹಾಗೂ ಈ ಚುನಾವಣೆಯ ಬಗ್ಗೆ ವಿಸ್ತಾರವಾದ ಮಾಹಿತಿಯನ್ನು ಕಾರ್ಯಕರ್ತರಿಗೆ ನೀಡಿದರು. ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ್ ಮಾತನಾಡಿ, ಮುಂಬರುವ ಈಶಾನ್ಯ ಶಿಕ್ಷಕರ ಚುನಾವಣೆಗಾಗಿ ಜಿಲ್ಲೆಯಎಲ್ಲ ನಗರ ಹಾಗೂ ಗ್ರಾಮಾಂತರ ಮಂಡಲಗಳ ಪದಾಧಿಕಾರಿಗಳಿಗೆ ನಿಯುಕ್ತಿಮಾಡಲಾಗಿದೆ. ನಿಯುಕ್ತ ಮಾಡಲಾದ ಪ್ರಭಾರಿಗಳು ತಮ್ಮ ಕ್ಷೇತ್ರದಲ್ಲಿ ಶ್ರಮಿಸಬೇಕು ಮತ್ತು ಅಭ್ಯರ್ಥಿ ಶಶಿಲ್ ನಮೋಶಿ ಯವರನ್ನು ಪ್ರಚಂಡ ಬಹುಮತದಿಂದ ಗೆಲ್ಲಿಸ ತರಬೇಕೆಂದು ಕಾರ್ಯಕರ್ತರಿಗೆ ಸೂಚಿಸಿದರು.

ರಾಜ್ಯ ಕಾರ್ಯದರ್ಶಿ ಹಾಗೂ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ಮಾತನಾಡಿ, ರಾಜ್ಯದ ಪದವಿಧರ ಹಾಗೂ ಶಿಕ್ಷಕರ ಕ್ಷೇತ್ರದಲ್ಲಿ ಬಿಜೆಪಿ ಪಕ್ಷವು ಗೆಲ್ಲುತ್ತಾ ಬಂದಿದೆ. ಮುಂದೆಯು ಕೂಡ ನಮ್ಮ ಅಭ್ಯರ್ಥಿಯನ್ನು ಗೆಲ್ಲಿಸಿ ತರಬೇಕೆಂದು ಕರೆ ನೀಡಿದರು. ಇದೇ ಮೇ 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರ 50 ವರ್ಷ ಅಭಿಮಾನೋತ್ಸವ ಕಾರ್ಯಕ್ರಮ ನಡೆಯಲಿದ್ದು ಕಾರ್ಯಕ್ರಮಕ್ಕೆ ಜಿಲ್ಲೆಯಿಂದ 10 ಸಾವಿರ ಕಾರ್ಯಕರು ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.




ಬೆಂಗಳೂರು ನಗರ ಪೊಲೀಸರು ವಶಪಡಿಸಿಕೊಂಡ ಕಳವು ವಸ್ತುಗಳನ್ನು ಮಂಗಳವಾರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಪರಿಶೀಲಿಸಿದರು.

# ರಂಗಭೂಮಿ ಹಳ್ಳಿಗಳಲ್ಲಿ ಇನ್ನೂ ಜೀವಂತ: ರಾಮಲಿಂಗಯ್ಯ ಸ್ವಾಮಿ



**ರಾಯಚೂರು, ಮೇ. 5:** ಹಳ್ಳಿಗಳಲ್ಲಿ ಜಾತ್ರೆ, ಹಬ್ಬಗಳ ಸಂದರ್ಭಗಳಲ್ಲಿ ಸಾಮಾಜಿಕ ನಾಟಕಗಳ ಮೂಲಕ ಹಳ್ಳಿಯ ಜನ ರಂಗ ಭೂಮಿಯ ಕಲೆಗಳನ್ನು ಇನ್ನೂ ಜೀವಂತವಾಗಿಟ್ಟಿದ್ದಾರೆ. ಈ ವರ್ಷ ನಮ್ಮ ಗ್ರಾಮದಲ್ಲಿ ರಂಗ ಕನಸು ರಂಗ ಕೇಂದ್ರ ಸಂಘದಿಂದ ನಾಟಕ ಪ್ರದರ್ಶನ ಮಾಡುತ್ತಿರುವುದು ತುಂಬಾ ಸಂತೋಷ ತಂದಿದೆ ಎಂದು ಗ್ರಾಮದ ಹಿರಿಯರಾದ ರಾಮಲಿಂಗಯ್ಯ ಸ್ವಾಮಿ ಅಭಿಪ್ರಾಯ ಪಟ್ಟರು.

ತಾಲ್ಲೂಕಿನ ಮಂಡಲಗೇರಾ ಗ್ರಾಮದಲ್ಲಿ ವಾರೆಮ್ಮ ದೇವಿ ಜಾತ್ರೆಯ ಅಂಗವಾಗಿ ರಂಗ ಕನಸು ರಂಗ ಕೇಂದ್ರ ಮಂಡಲ ಗೇರಾ ತಂಡದಿಂದ ಆಯೋಜಿಸಿ ಪ್ರಸ್ತುತ ಪಡಿಸಿದ ವೊಗಳಲ್ಲಿ ನಾಗರಾಜ ಅವರ ಗೂಂಡಾ ರಾಜ್ಯದಲ್ಲಿ ಗಂಡುಗಲಿ ಎನ್ನುವ ಸಾಮಾಜಿಕ ನಾಟಕ ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಗ್ರಾಮದ ಮುಖಂಡ ನರಸಣ್ಣ ಗೌಡ ಮಾತನಾಡಿ, 'ಮಂಡಲಗೇರಾ ಗ್ರಾಮದಲ್ಲಿ ಇಪ್ಪತ್ತು ವರ್ಷಗಳ ನಂತರ ಈ ಬಾರಿ ಜಾತ್ರೆಯ ಅಂಗವಾಗಿ ನಾಟಕ ಪ್ರದರ್ಶನ ವಾಗುತ್ತಿದೆ. ಇನ್ನು ಮುಂದೆ ಇದೇ ರೀತಿ ರಂಗ ಕನಸು ರಂಗ ಕೇಂದ್ರ ಸಂಘವು ಪ್ರತಿವರ್ಷ ಗ್ರಾಮದಲ್ಲಿ ಈ ನಾಟಕ ಕಾರ್ಯ ಕ್ರಮಗಳನ್ನು ಏರ್ಪಡಿಸಿ ಪ್ರದರ್ಶನ ಗಳನ್ನೂ ನೀಡಲಿ ಗ್ರಾಮದ ಎಲ್ಲರೂ ಬೆಂಬಲವಾಗಿರುತ್ತಾರೆ' ಎಂದರು.

# ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆ, 400 ಹೊಸ ಬಸ್‌ಗಳ ಖರೀದಿಗೆ ಟೆಂಡರ್: ಅರುಣಕುಮಾರ ಪಾಟೀಲ್



**ಕಲಬುರಗಿ, ಮೇ. 5:** ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಕೆಕೆಆರ್‌ಟಿಸಿ)ದಲ್ಲಿ ಬಸ್‌ಗಳ ಕೊರತೆ ನೀಗಿಸಲು 400 ಹೊಸ್ ಬಸ್‌ಗಳ ಖರೀದಿಗೆ ಟೆಂಡರ್ ಕರೆಯಲಾಗುತ್ತಿದೆ ಎಂದು ನಿಗಮದ ಅಧ್ಯಕ್ಷ ಅರುಣ ಕುಮಾರ ಎಂ. ಪಾಟೀಲ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 400 ಬಸ್‌ಗಳ ಖರೀದಿಗೆ ಬೇಕಾಗುವ ಅನುದಾನವನ್ನು ಮೇ.7ರಂದು ನಡೆಯುವ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಬಿಡುಗಡೆ ಕುರಿತಾಗಿ ತನ್ನ ಅಧಿಕೃತವಾಗಿ ಒಪ್ಪಿಗೆ ಕೊಡುವ ಸಾಧ್ಯತೆಗಳಿವೆ. ಸಂಪುಟ ಸಭೆಯಲ್ಲಿ 400 ಹೊಸ ಬಸ್‌ಗಳ ಖರೀದಿಗೆ ಸಂಪುಟ ಸಭೆ ಅನುಮೋದನೆ ನೀಡಿದಲ್ಲಿ ಶೀಘ್ರದಲ್ಲೇ ಕೆಕೆಆರ್‌ಟಿಸಿಗೆ ಬಸ್‌ಗಳ ಸೇರ್ಪಡೆಯಾಗಿ, ತಕ್ಕಮಟ್ಟಿಗೆ ಬಸ್‌ನ ಕೊರತೆಯ ಸಮಸ್ಯೆ ನಿವಾರಣೆಯಾಗಲಿದೆ ಎಂದರು.

ಹೊಸ ಬಸ್‌ಗಳನ್ನು ಸಂಪೂರ್ಣ ರಾಜ್ಯ ಸರ್ಕಾರದ ಅನುದಾನದಿಂದ ಖರೀದಿ ಮಾಡಲಾಗುತ್ತದೆ. ಈ ಹಿಂದೆ ಕೆಕೆಆರ್‌ಡಿಬಿ ಅನುದಾನದಿಂದ ಖರೀದಿ ಮಾಡಲಾಗಿದ್ದರೆ, ಪ್ರಸ್ತುತವಾಗಿ ರಾಜ್ಯ ಸರ್ಕಾರದಿಂದ ಬಿಡುಗಡೆ ಯಾಗುವ ಅನುದಾನದಿಂದ ಖರೀದಿ ಮಾಡಲಾಗುವುದು. 202526ನೇ ಸಾಲಿನ ಮುಂಗಡ ಪತ್ರದಲ್ಲಿ ರಾಜ್ಯದಾದ್ಯಂತ 1600 ಬಸ್‌ಗಳ ಖರೀದಿ ಬಗ್ಗೆ ಘೋಷಣೆ ಮಾಡಲಾಗಿತ್ತು. ಆದರೆ ರಾಜ್ಯದ ಇತರ ಮೂರು ನಿಗಮಗಳಿಗೆ ತಲಾ 400 ಬಸ್‌ಗಳ ಖರೀದಿಗೆ ಅನುದಾನ ಬಿಡುಗಡೆ ಮಾಡಿದ್ದರೆ, ಕೆಕೆಆರ್‌ಟಿಸಿಗೆ ಮಾತ್ರ ಬಿಡುಗಡೆಯಾಗಿರಲಿಲ್ಲ. ಆದರೆ ಈಗ ಅನುದಾನ ಬಿಡುಗಡೆ ಮಾಡಲಾಗುತ್ತಿದೆ ಎಂದು ಅರುಣ ಕುಮಾರ ವಿವರಣೆ ನೀಡಿದರು.

ಹೊಸ ಬಸ್‌ಗಳ ಖರೀದಿಗೆ ಪ್ರಸಕ್ತವಾಗಿಯೂ ಕೆಕೆಆರ್‌ಡಿಬಿಯಿಂದ ಅನುದಾನದಿಂದಲೇ ಖರೀದಿ ಮಾಡಲಿ ಎಂಬುದರ ಹಿನ್ನೆಲೆಯಲ್ಲಿ ಸ್ವಲ್ಪ ಸಮಯ ವಿಳಂಬವಾಗಿದ್ದು, ಆದರೆ ಕೊನೆಗೆ ರಾಜ್ಯ ಸರ್ಕಾರ ಅನುದಾನ ಬಿಡುಗಡೆ ಮಾಡುತ್ತಿರುವುದು ಖುಷಿ ತರುತ್ತಿದೆ 300 ನಿರ್ವಾಹಕರ ನೇಮಕ: ಕೆಕೆಆರ್ ಟಿಸಿಗೆ 300 ನಿರ್ವಾಹಕರ ಹಾಗೂ 13 ಸಿಬ್ಬಂದಿಗಳ ನೇಮಕಾತಿ ಮಾಡಿಕೊಳ್ಳಲಾಗುತ್ತಿದ್ದು, ನೇಮಕಾತಿ ಸಂಬಂಧವಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ಈಗಾಗಲೇ ಪರೀಕ್ಷೆ ನಡೆಸಿದೆ. ಆದರೆ ಒಳ ಮೀಸಲಾತಿ ಹಿನ್ನೆಲೆಯಲ್ಲಿ ಸ್ವಲ್ಪ ವಿಳಂಬವಾಗಿದೆ. ಆದರೆ ಈಗ ಒಳಮೀಸಲಾತಿ ಸಮಸ್ಯೆ ಬಗೆಹರಿದಿದ್ದರಿಂದ ಮುಂದಿನ ಪ್ರಕ್ರಿಯೆ ಆದಷ್ಟು ಮುಕ್ತಾಯಗೊಂಡು 300 ನಿರ್ವಾಹಕರು ನಿಗಮಕ್ಕೆ ಬರಲಿದ್ದಾರೆ ಎಂದು ಅರುಣಕುಮಾರ ಇದೇ ಸಂದರ್ಭದಲ್ಲಿ ಹೇಳಿದರು.

ನಾಲ್ಕು ಕಡೆ ಸೆಟಲೈಟ್ ಬಸ್ ನಿಲ್ದಾಣ: ಕಲಬುರಗಿ ಮಹಾನಗರದ ನಾಲ್ಕು ಕಡೆ ಸೆಟಲೈಟ್ ಬಸ್‌ನಿಲ್ದಾಣ ಮಾಡಲು ಉದ್ದೇಶಿಸಲಾಗಿದ್ದು, ಅದರಲ್ಲಿ ಈಗ ಸೇಡಂ ರಸ್ತೆಯಲ್ಲಿರುವ ವಿವಿ ಆವರಣದಲ್ಲಿ ಎರಡು ಎಕರೆ ಜಮೀನು ಮಂಜೂರಾಗಿದ್ದು, ಶೀಘ್ರದಲ್ಲಿ ನಿಲ್ದಾಣ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುವುದು. ಉಳಿದ ಮೂರು ಕರೆ ಜಮೀನು ಮಂಜೂರಾತಿ ದೊರೆತ ತಕ್ಷಣ ಕಾರ್ಯಪ್ರವೃತ್ತರಾಗಲಾಗುವುದು. ಸೆಟಲೈಟ್ ಬಸ್ ನಿಲ್ದಾಣವಾದರೆ ನಗರದಲ್ಲಿ ಟ್ರಾಫಿಕ್ ಸಮಸ್ಯೆ ಜತೆಗೆ ದೂರದ ಊರುಗಳಿಗೆ ಹೋಗಲು ಅನುಕೂಲವಾಗಲಿದೆ ಎಂದು ಹೇಳಿದರು.

## ಎಸ್.ಎಂ. ಕೃಷ್ಣ ದತ್ತಿನಿಧಿಗೆ ಯುವ ಮುಖಂಡ ರಘುವೀರ್ ಎಸ್ ಗೌಡ 3 ಲಕ್ಷ ದೇಣಿಗೆ



**ಮಂಡ್ಯ, ಮೇ 5:** ಕರ್ನಾಟಕದ ಮಾಜಿ ಮುಖ್ಯಮಂತ್ರಿಗಳು ಹಿರಿಯ ಮುತ್ಸುದ್ದಿ ಎಸ್.ಎಂ.ಕೃಷ್ಣ ಅವರ ಸ್ಮರಣಾರ್ಥವಾಗಿ ಕರ್ನಾಟಕ ಸಂಘದಲ್ಲಿ ಸ್ಥಾಪಿಸಿರುವ ಎಸ್.ಎಂ. ಕೃಷ್ಣ ದತ್ತಿ ನಿದಿ?ಗೆ ಕಾಂಗ್ರೆಸ್ ಯುವ ಮುಖಂಡ ರಘುವೀರ್ ಎಸ್.ಗೌಡ ಅವರು 3 ಲಕ್ಷ ರೂ. ನೀಡಿದ್ದಾರೆ. ಎಸ್.ಎಂ.ಕೃಷ್ಣ ಅವರ ಅಭಿಮಾನಿಗಳು ಕರ್ನಾಟಕ ಸಂಘದಲ್ಲಿ ಕಳೆದ ವರ್ಷ 7 ಲಕ್ಷ ರೂ. ಮೊತ್ತದಲ್ಲಿ ಎಸ್. ಎಂ.ಕೃಷ್ಣ ದತ್ತಿ ನಿಧಿ ಸ್ಥಾಪಿಸಿದ್ದರು. ಈಗ ರಘುವೀರ್ ಅವರು ಈ ದತ್ತಿ ನಿಧಿಗೆ 3 ಲಕ್ಷ ರೂ. ದೇಣಿಗೆ ನೀಡಿದ್ದು, ದತ್ತಿ ನಿಧಿ ಮೊತ್ತ 10 ರೂ.ಗೆ ಏರಿಕೆಯಾಗಿದೆ.

ಎಸ್.ಎಂ.ಕೃಷ್ಣ ಅವರ ಅಭಿಮಾನಿ ಆಗಿರುವ ರಾಜಾಜಿನಗರ ವಿಧಾನಸಭಾ ಕ್ಷೇತ್ರದ ರಘುವೀರ್ ಎಸ್. ಗೌಡ ಅವರು ಕೆಪಿಸಿಸಿ ಬೆಂಗಳೂರು ಕೇಂದ್ರ ಪ್ರಚಾರ ಸಮಿತಿ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ಎಸ್.ಎಂ.ಕೃಷ್ಣ ಅವರು ಈ ನಾಡಿಗೆ ನೀಡಿರುವ ಕೊಡುಗೆಗಳು ಅವಿಸ್ಮರಣೀಯ. ಅವರ ಸಾಧನೆ ನಮಗೆ ದಾರಿದೀಪವಾಗಬೇಕು. ಅವರ ಹೆಸರು, ಸಾಧನೆಯನ್ನು ನೆನೆಸಿಕೊಳ್ಳಬೇಕು ಎಂಬ ದೃಷ್ಟಿಯಿಂದ ಕರ್ನಾಟಕ ಸಂಘದಲ್ಲಿ ಸ್ಥಾಪಿಸಿರುವ ಎಸ್.ಎಂ.ಕೃಷ್ಣ ದತ್ತಿ ನಿಧಿಗೆ 3 ಲಕ್ಷ ರೂ. ನೀಡಲಾಗಿದೆ ಎಂದು ಹೇಳಿದರು.

ಶಿಕ್ಷಣ, ಆರೋಗ್ಯ, ಸಂಶೋಧನೆ, ಸಾಹಿತ್ಯ, ಕೃಷಿ ಹಾಗೂ ಸಮಾಜಮುಖಿ ಕಾರ್ಯ ಗಳಲ್ಲಿ ಸಾಧನೆ ಮಾಡಿದವರಿಗೆ ಎಸ್.ಎಂ.ಕೃಷ್ಣ ಅವರ ಸ್ಮರಣಾರ್ಥವಾಗಿ ಪ್ರತಿ ವರ್ಷ ಎಸ್.ಎಂ.ಕೃಷ್ಣ ದತ್ತಿ ನಿಧಿಯಿಂದ ಪ್ರಶಸ್ತಿ ನೀಡಲಾಗುತ್ತದೆ.

ಎಸ್.ಎಂ.ಕೃಷ್ಣ ದತ್ತಿ ನಿಧಿಯ ಪ್ರಥಮ ವರ್ಷದ ಪ್ರಶಸ್ತಿಗೆ ಮಾಜಿ ಸಚಿವ ಕಿಮ್ಮನೆ ರತ್ನಾಕರ್ ಅವರು ಪಾತ್ರರಾಗಿದ್ದು ಮೇ 5 ರಂದು "ಎಸ್.ಎಂ.ಕೃಷ್ಣ" ಪ್ರಶಸ್ತಿಯನ್ನು ಪ್ರಧಾನ ಮಾಡಲಾಗುತ್ತಿದೆ.

## ವಸತಿರಹಿತರ ಅರ್ಹ ಫಲಾನುಭವಿಗಳ ಪಟ್ಟಿ ಸೇರ್ಪಡೆಗೆ ಮೇ 15 ಕೊನೆಯ ದಿನ



**ಬಳ್ಳಾರಿ, ಮೇ.05:** 2018ರ ವಸತಿರಹಿತ ಮತ್ತು ನಿವೇಶನ ರಹಿತ ಸಮೀಕ್ಷೆಯ ಪಟ್ಟಿಯಲ್ಲಿ ಬಿಟ್ಟು ಹೋಗಿರುವ ಅರ್ಹ ಫಲಾನುಭವಿಗಳನ್ನು ಸೇರಿಸಲು ಹಾಗೂ ಪರಿಷ್ಕರಿಸಲು ಮೇ 15 ಕೊನೆಯ ದಿನವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ತಿಳಿಸಿದ್ದಾರೆ. 2018ರಲ್ಲಿ ನಡೆಸಲಾದ ಸಮೀಕ್ಷಾ ಪಟ್ಟಿಯನ್ನು ಪರಿಷ್ಕರಿಸಲು ಮತ್ತು ಅರ್ಹ ಕುಟುಂಬಗಳನ್ನು ಪಟ್ಟಿಗೆ ಸೇರಿಸಲು ಈಗ ಅವಕಾಶ ಕಲ್ಪಿಸಲಾಗಿದೆ. ಅರ್ಹ ಫಲಾನುಭವಿಗಳ ಹೆಸರನ್ನು ಸೇರಿಸಲು ಮೇ 15 ರವರೆಗೆ ಅಂತಿಮ ಕಾಲಾವಕಾಶ ನೀಡಲಾಗಿದೆ.

ಈ ನಿಗದಿತ ದಿನಾಂಕದ ನಂತರ ಯಾವುದೇ ಸೇರ್ಪಡೆಗೆ ಅವಕಾಶವಿರುವುದಿಲ್ಲ ಮತ್ತು ಅಂದೇ ಪಟ್ಟಿಯನ್ನು ಅಂತಿಮಗೊಳಿಸಲಾಗುವುದು. ಮೇ 15ರ ನಂತರ ಸಿದ್ಧವಾಗುವ ಪಟ್ಟಿಯನ್ನೇ ಅಂತಿಮ 'ವಸತಿ ಮತ್ತು ನಿವೇಶನ ರಹಿತರ ಪಟ್ಟಿ' ಎಂದು ಪರಿಗಣಿಸಲಾ ಗುವುದು. ಅರ್ಹ ಫಲಾನುಭವಿಗಳು ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಅಥವಾ ಹೆಸರು ಸೇರ್ಪಡೆಗಾಗಿ ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯತಿ ಸಿಬ್ಬಂದಿಯನ್ನು ಕೂಡಲೇ ಸಂಪರ್ಕಿಸಬಹುದು.

ವಸತಿ ಸೌಲಭ್ಯದಿಂದ ವಂಚಿತರಾದ ಅರ್ಹ ಕುಟುಂಬಗಳು ಈ ಕೂಡಲೇ ಸಂಬಂಧಪಟ್ಟ ದಾಖಲೆಗಳೊಂದಿಗೆ ಗ್ರಾಮ ಪಂಚಾಯತಿಯನ್ನು ಸಂಪರ್ಕಿಸಿ ತಮ್ಮ ಹೆಸರು ಪಟ್ಟಿಯಲ್ಲಿದೆಯೇ ಎಂದು ಖಚಿತಪಡಿಸಿಕೊಳ್ಳಬೇಕು. ಅರ್ಹ ಫಲಾನುಭವಿಗಳನ್ನು ಕೈ ಬಿಟ್ಟಿದ್ದಲ್ಲಿ ಸಂಬಂಧಿಸಿದ ಗ್ರಾಮ ಪಂಚಾ ಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.

## ಗರ್ಭಿಣಿಯರ ಆರೈಕೆ, ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಿ: ಡಿ.ಸಿ ಡಾ. ಆನಂದ ಸೂಚನೆ



**ವಿಜಯಪುರ, ಮೇ.5:** ರಾಷ್ಟ್ರೀಯ ಆರೋಗ್ಯ ಅಭಿಯಾನ ಮತ್ತು ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಯೋಜನೆಯನ್ನು ಜಿಲ್ಲೆ ಯಲ್ಲಿ ಸಮರ್ಪಕವಾಗಿ ಅನುಷ್ಠಾನ ಗೊಳಿಸಬೇಕು. ಗರ್ಭಿಣಿಯರ ಆರೈಕೆ ಮತ್ತು ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅಧಿಕಾರಿಗಳಿಗೆ ಸೂಚಿಸಿದರು.

ಗರ್ಭಿಣಿಯರ ಆರೋಗ್ಯ ತಪಾಸಣೆಯನ್ನು 12 ರಿಂದ 14 ಬಾರಿ ನಿಯಮಿತವಾಗಿ ಕೈಗೊಳ್ಳಬೇಕು. ಅನಿಮಿಯಾ, ಅಧಿಕ ರಕ್ತದೊತ್ತಡ, ಮಾನಸಿಕ ಆರೋಗ್ಯ ಮತ್ತು ವಿವಿಧ ಆರೋಗ್ಯ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲಿ ಗುರುತಿಸಿ ಉಚಿತ ಆರೋಗ್ಯ ಚಿಕಿತ್ಸೆಯನ್ನು ಒದಗಿಸಬೇಕು.

ಹೆರಿಗೆಯ ನಂತರ ಮಗುವಿಗೆ ಒಂದು ವರ್ಷ ತುಂಬುವವರೆಗೆ ಪಡೆದುಕೊಳ್ಳಬೇಕಾದ ಚಿಕಿತ್ಸೆ, ಔಷಧೋಪಚಾರ, ಲಸಿಕೆ ಸೌಲಭ್ಯಗಳ ಮಾಹಿತಿಯನ್ನು ಒದಗಿಸಬೇಕು. ಜೊತೆಗೆ ಆರೋಗ್ಯ ಸೇವಾ ಸೌಲಭ್ಯಗಳ ಮಾಹಿತಿ ನೀಡಬೇಕೆಂದು ಸೂಚಿಸಿದರು.

ಗರ್ಭಿಣಿಯರ ಮಾಹಿತಿಯನ್ನು ನಿಯಮಿತವಾಗಿ ನೋಂದಣಿ ಮಾಡಬೇಕು. ಆಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ, ಗಂಡಾಂತರ ಗರ್ಭಿಣಿಯರು ಕಂಡುಬಂದರೆ ಅಂತಹವ ರಿಗೆ ಸಕಾಲದಲ್ಲಿ ಆರೋಗ್ಯ ಸೇವೆ ನೀಡಬೇಕು. ಯಾವುದೇ ಕಾರಣಕ್ಕೆ ಗರ್ಭಿಣಿ ಹಾಗೂ ಮಕ್ಕಳನ್ನು ನಿರ್ಲಕ್ಷಿಸಬಾರದು ಎಂದರು.

ಕುಟುಂಬ ಕಲ್ಯಾಣ ಯೋಜನೆಯ ಬಗ್ಗೆ ಆಶಾ ಕಾರ್ಯಕರ್ತೆಯರು, ಅಂಗನವಾಡಿ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಹಾಗೂ ಸಮುದಾಯ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯವರಿಗೆ ತಾಲೂಕಾ ಮಟ್ಟದಲ್ಲಿ ತರಬೇತಿಯನ್ನು ನೀಡ ಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿಗಳು ಸೇರಿದಂತೆ ಎಲ್ಲ ವೈದ್ಯರಿಗೆ ಸೂಚಿಸಿದರು.

## ಇಂಡಿಯಲ್ಲಿ ಮುಂಬಯಿ ರೈಲು ನಿಲುಗಡೆಗೆ ಒತ್ತಾಯ

### ಸಂಸದ ರಮೇಶ ಜಿಗಜಿಣಗಿ ನೈಋತ್ಯ ರೈಲ್ವೆಯ ಪ್ರಧಾನ ವ್ಯವಸ್ಥಾಪಕರಿಗೆ ಪತ್ರ



**ವಿಜಯಪುರ, ಮೇ.5**–ಗದಗದಿಂದ ಮುಂಬಯಿಗೆ ಸಂಚರಿಸುವ ರೈಲ್ವೆಗೆ ಇಂಡಿ ರೈಲ್ವೆ ನಿಲ್ದಾಣದಲ್ಲಿ ನಿಲುಗಡೆ ಸೌಲಭ್ಯ ಕಲ್ಪಿಸಬೇಕು ಎಂದು ಸಂಸದರಾದ ರಮೇಶ ಜಿಗಜಿಣಗಿ ಒತ್ತಾಯಿಸಿದ್ದಾರೆ.

ನಿಂಬೆ ಬೆಳೆಯ ಜಾಗತಿಕ ಟ್ಯಾಗ್ ಪಡೆದಿರುವ ದೇಶದ ಎಲ್ಲ ಕಡೆ ನಿಂಬೆ ಹಣ್ಣು ಸರಬರಾಜು ಮಾಡುವ ಕರ್ನಾಟಕ ಮಹಾರಾಷ್ಟ್ರದ ಗಡಿ ಭಾಗವಾಗಿರುವ ಇಂಡಿ ಸಾಕಷ್ಟು ವ್ಯಾಪಾರ ವಹಿವಾಟಿನಲ್ಲಿ ಮುಂಚೂಣಿಯಲ್ಲಿದೆ. ಜೊತೆಗೆ ಅತ್ಯುತ್ತಮ ಗುಣಮಟ್ಟದ ದ್ರಾಕ್ಷಿ, ದಾಳಿಂಬೆ ಹಾಗೂ ಇತರೆ ವಾಣಿಜ್ಯ ಬೆಳೆಗಳನ್ನು ಹೆಚ್ಚಿನ ಪ್ರಮಾಣದಲ್ಲಿ ರಫ್ತು ಮಾಡುತ್ತಿದ್ದು, ಜವಳಿ ವ್ಯಾಪಾರದ ಕೇಂದ್ರವಾಗಿರುವ ಇಂಡಿ ತಾಲೂಕು, ಪ್ರಸ್ತುತ ಪುರಸಭೆಯಿಂದ ನಗರಸಭೆ ಉನ್ನತೀಕರಣಗೊಂಡಿದೆ. ಇದರಿಂದಾಗಿ ಹೆಚ್ಚಿನ ಪ್ರಮಾಣದಲ್ಲಿ ರೆವೆನ್ಯೂ ಸಂಗ್ರಹಿಸುತ್ತಿರುವ ತಾಲೂಕಾಗಿದೆ ಎಂದವರು ನೈಋತ್ಯ ರೈಲ್ವೆ ವಲಯದ ಪ್ರಧಾನ ವ್ಯವಸ್ಥಾಪಕರಿಗೆ ಪತ್ರ ಬರೆದಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿಯೇ ಅತೀ ಹೆಚ್ಚಿನ ಜನಸಂಖ್ಯೆ ಹೊಂದಿರುವ ತಾಲೂಕಾಗಿರುವ ಇಂಡಿ ನಗರದಿಂದ ಕಡಿಮೆ ದೂರದಲ್ಲಿ ಭೀಮಾನದಿಯಿದೆ. ಹೆಚ್ಚಿನ ರೈತರು ಕಬ್ಬು ಬೆಳೆಯುತ್ತಿದ್ದಾರೆ. ಈ ಎಲ್ಲ ವಾಣಿಜ್ಯ ಬೆಳೆ ಬೆಳೆಯುವ ರೈತರಿಗೆ ಹಾಗೂ ವ್ಯಾಪಾರಸ್ಥರಿಗೆ ಗದಗದಿಂದ ಮುಂಬಯಿಗೆ ಸಂಚರಿಸುವ ಮಧ್ಯ ಮಾರ್ಗದಲ್ಲಿ ಇಂಡಿ ರೈಲ್ವೆ ನಿಲ್ದಾಣದಲ್ಲಿ ನಿಲುಗಡೆ ವ್ಯವಸ್ಥೆಯಾದರೆ ಮುಂಬಯಿಗೆ ಹೋಗಿ ಬರುವ

## ಕ್ರಿಕೆಟ್ ಪಂದ್ಯಾವಳಿಯಲ್ಲಿ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದ ತಂಡಕ್ಕೆ ಅಂತಿಮ ಜಯ




**ಬಳ್ಳಾರಿ ಮೇ 05.** ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆ ಯಾದರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದ ತಂಡವು ಏ. 27 ರಿಂದ 306ರವರೆಗೆ ಜರುಗಿದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಗುಲ್ಬರ್ಗಾ ಅಂತರ್ ವಲಯದ ಕ್ರಿಕೆಟ್ ಪಂದ್ಯಾವಳಿಗಳಲ್ಲಿ ಅಂತಿಮ ಪಂದ್ಯಾವಳಿಯಲ್ಲಿ ಅಂತಿಮ ಜಯ ಗಳಿಸಿತು.

ಈ ಪಂದ್ಯಾವಳಿಗಳಲ್ಲಿ ಕಲಬುರ್ಗಿ ವಲಯದ 08ತಂಡಗಳು ಭಾಗವಹಿಸಲು ಆಗಮಿಸಿದ್ದವು. ಅಂತಿಮ ಪಂದ್ಯದಲ್ಲಿ, ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದ ತಂಡವು, ಮೊದಲು ಬ್ಯಾಟಿಂಗ್ ಮಾಡಲು ಆಯ್ಕೆ ಮಾಡಿತು ಹಾಗು ಬಾಗಲಕೋಟೆಯ ಬಿ.ಈ.ಸಿ ಇಂಜನಿಯರಿಂಗ್ ಕಾಲೇಜನ್ನು ಬೌಲಿಂಗ್ ಮಾಡಲು ಬಯಸಿತು. ರಾವ್ ಬಹದ್ದೂರ್ ತಾಂತ್ರಿಕ ಮಹಾವಿದ್ಯಾಲಯದ ತಂಡವು, ತಂಡವು 229 ರನ್ ಮಾಡಿದರೆ, ನಂತರ ಬ್ಯಾಟಿಂಗ್ ಮಾಡಿದ ಬಾಗಲಕೋಟೆಯ ಬಿ.ಈ.ಸಿ ಇಂಜನಿಯರಿಂಗ್ ಕಾಲೇಜು 74ರನ್‌ಗಳಿಗೆ ಆಲ್–ಔಟ್ ಆದರು. ರಾವ್ ಬಹದ್ದೂರ್ ತಾಂತ್ರಿಕ ಮಹಾ ವಿದ್ಯಾಲಯದ ತಂಡವು ಅಂತಿಮ ಜಯಗಳಿಸಿತು.

# ಮೂರು ರಾಜ್ಯಗಳಲ್ಲಿ ಬಿಜೆಪಿ ಗೆಲುವು: ಕಮಲ ವಿಜಯೋತ್ಸವ



**ಬೀದರ್, ಮೇ. 5:** ಪಂಚ ರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಮೂರರಲ್ಲಿ ಬಿಜೆಪಿ ಭಾರಿ ಗೆಲುವು ಸಾಧಿಸಿದ ಪ್ರಯುಕ್ತ ಬಿಜೆಪಿ ಹಾಗೂ ಹಿಂದೂ ಪರ ಸಂಘಟನೆಗಳ ಕಾರ್ಯಕರ್ತರು ನಗರದ ರಾಮಚೌಕ್‌ನಲ್ಲಿ ವಿಜಯೋತ್ಸವ ಆಚರಿಸಿದರು. ಪಟಾಕಿ ಸಿಡಿಸಿ, ಪರಸ್ಪರ ಸಿಹಿ ತಿನ್ನಿಸಿ ಸಂಭ್ರಮಿಸಿದರು.

ಬಿಜೆಪಿ ಮುಖಂಡ ರೇವಣಸಿದ್ದಪ್ಪ ಜಲಾದೆ ಅವರು ಮಾತನಾಡಿ, ಐದು ರಾಜ್ಯಗಳಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿ ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿಯಲ್ಲಿ

ಐತಿಹಾಸಿಕ ಗೆಲುವು ದಾಖಲಿಸಿದೆ. ಪಶ್ಚಿಮ ಬಂಗಾಳದ ಜನ ಬಿಜೆಪಿಗೆ ಅಭೂತಪೂರ್ವ ಗೆಲುವು ನೀಡುವ ಮೂಲಕ ಹೊಸ ಇತಿಹಾಸ ಬರೆದಿದ್ದಾರೆ. ಮುಕ್ತ, ನ್ಯಾಯ ಸಮ್ಮತ ಚುನಾವಣೆ ಹಾಗೂ ಹಿಂದೂಗಳ ಒಗ್ಗಟ್ಟಿನ ಪ್ರಯತ್ನದ ಪ್ರತಿಫಲ ಇದಾಗಿದೆ ಎಂದು ತಿಳಿಸಿದರು.

ದೇಶದ್ರೋಹಿ ಹಾಗೂ ಸಮಾಜ ಘಾತುಕ ಚಟುವಟಿಕೆಗಳ ಕಾರಣ ಪಶ್ಚಿಮ ಬಂಗಾಳ ರಾಜ್ಯ ಸರ್ಕಾರ ದೇಶಕ್ಕೆ ಆಘಾತಕಾರಿಯಾಗಿ ಪರಿಣಮಿಸಿತ್ತು. ಭ್ರಷ್ಟಾಚಾರ, ದಬ್ಬಾಳಿಕೆ ಸೇರಿ ಜನ ವಿರೋಧಿ ಆಡಳಿತದಿಂದ ಅಲ್ಲಿಯ ಜನ ಬೇಸತ್ತಿದ್ದರು. ಟಿಎಂಸಿಯನ್ನು ಕಿತ್ತೊಗೆದಿದ್ದರಿಂದ ಈಗ ಅವರಿಗೆ ನಿಜವಾದ ಸ್ವಾತಂತ್ರ್ಯ ಸಿಕ್ಕಿದೆ. ಮೂರು ರಾಜ್ಯಗಳಲ್ಲಿ ಬಿಜೆಪಿ ಗೆಲುವು ಸಾಧಿಸಿರುವುದು ದೇಶದ ಜನ ಬಿಜೆಪಿ ಮೇಲೆ ಇಟ್ಟಿರುವ ವಿಶ್ವಾಸಕ್ಕೆ ನಿದರ್ಶನವಾಗಿದೆ ಎಂದರು.

## ಕಾವ್ಯ – ಸಂಗೀತ ಬದುಕಿನ ಜೀವನಾಡಿ: ಡಾ.ಶ್ರೇಯಾ ಮಹೀಂದ್ರಕರ




**ಬೀದರ್, ಮೇ. 5:** ಕಾವ್ಯ ಮತ್ತು ಸಂಗೀತ ಎರಡೂ ಜೀವನದ ಅವಿಭಾಜ್ಯ ಅಂಗಗಳಾಗಿದ್ದು, ಕಾವ್ಯ ಆತ್ಮವಾದರೆ, ಸಂಗೀತ ಅದರ ಶರೀರವಾಗಿದೆ ಎಂದು ಖ್ಯಾತ ಕವಿಯಿತ್ರಿ ಡಾ.ಶ್ರೇಯಾ ಮಹೇಂದ್ರಕರ್ ಹೇಳಿದರು.

ನಗರದ ಮೈಲೂರು ಕ್ರಾಸ್ ಮಹಾಲಕ್ಷ್ಮಿ ಸಭಾಂಗಣದಲ್ಲಿ ದೇಶಪಾಂಡೆ ಸಾಹಿತ್ಯಿಕ ಮತ್ತು ಸಾಂಸ್ಕೃತಿಕ ಪ್ರತಿಷ್ಠಾನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕವಿಗೋಷ್ಠಿ, ಗೌರವ ಸನ್ಮಾನ ಹಾಗೂ ಸಂಗೀತ ಕಲಾ ಉತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಾವ್ಯವು ಅನುಭವ ಮತ್ತು ಅಧ್ಯಯನದಿಂದ ಮೂಡಿಬಂದಾಗ ಮಾತ್ರ ಅದಕ್ಕೆ ಮೌಲ್ಯ ಸಿಗುತ್ತದೆ. ಸಂಗೀತದೊಂದಿಗೆ ಒಡನಾಡಿದ ಕವಿತೆಗಳು ಮನಸ್ಸಿಗೆ ಶಾಂತಿಯನ್ನು ನೀಡುತ್ತವೆ. ಇಂದಿನ ಒತ್ತಡದ ಬದುಕಿನಲ್ಲಿ ಸಂಗೀತ ಅತ್ಯಂತ ಅಗತ್ಯವಾಗಿದ್ದು, ಸ್ವಲ್ಪ ಸಮಯ ಸಂಗೀತ ಆಲಿಸುವುದರಿಂದ ಬದುಕಿಗೆ ನೆಮ್ಮದಿ ದೊರೆಯುತ್ತದೆ ಎಂದು ಅವರು ತಿಳಿಸಿದರು. ಅಶ್ಲೀಲ ಮತ್ತು ಅಸಭ್ಯ ಸಂಗೀತ ಭವಿಷ್ಯದ ಬದುಕಿಗೆ ಮಾರಕವಾಗಬಹುದು ಎಂದು ಎಚ್ಚರಿಕೆ ನೀಡಿದರು.

ಕಾರ್ಯಕ್ರಮದಲ್ಲಿ ಆಶಯ ನುಡಿಗಳನ್ನಾಡಿದ ಡಾ. ನಿಜಲಿಂಗ ರಗಟೆ ಅವರು, ಕಾವ್ಯವು ಮಾನವೀಯ ಮೌಲ್ಯಗಳನ್ನು ಎತ್ತಿಹಿಡಿಯಬೇಕು. ಕಾವ್ಯವು ಕೇವಲ ವಾಕ್ಯವಲ್ಲ, ಅದು ಮನಸ್ಸನ್ನು ಆನಂದಗೊಳಿಸುವ ಅದ್ಭುತ ಮಂತ್ರ ಎಂದು ಹೇಳಿದರು. ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಕಾರ್ಯವೇ ಕಾವ್ಯದ ಮೂಲ ಉದ್ದೇಶವಾಗಬೇಕು ಎಂದು ಅಭಿಪ್ರಾಯಪಟ್ಟರು.

ಮುಖ್ಯ ಅತಿಥಿಗಳಾಗಿ ಖ್ಯಾತ ಸಂಗೀತ ಗಾಯಕಿ ರೇಖಾ ಅಪ್ಪಾರಾವ್‌ಸೌದಿ ಅವರು ಮಾತನಾಡಿ, ಸಂಗೀತವೇ ಬದುಕಿನ ಪರಿಭಾಯೆ ಎಂದು ಹೇಳಿ ಎರಡು ಮಧುರ ಭಾವಗೀತೆಗಳನ್ನು ಹಾಡಿ ಪ್ರೇಕ್ಷಕರ ಮೆಚ್ಚುಗೆ ಪಡೆದರು. ಮತ್ತೊಬ್ಬ ಮುಖ್ಯ ಅತಿಥಿ ರಾಮಚಂದ್ರ ಗಣಪೂರ ಅವರು ಕಾವ್ಯ ಕುರಿತ ತಮ್ಮ ಅನುಭವಗಳನ್ನು ಹಂಚಿಕೊಂಡರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಚೆನ್ನಮ್ಮಾ ವಲ್ಲೆಪುರೆ ಅವರು ಮಾತನಾಡಿ, ಕಾವ್ಯ ಕೇವಲ ಅಕ್ಷರಗಳ ಜೋಡಣೆಯಲ್ಲ, ಅದು ಭಾವನೆಗಳ ಪ್ರತಿಬಿಂಬವಾಗಿದ್ದು, ಜವಾಬ್ದಾರಿಯಿಂದ ಬರೆಯಬೇಕು. ಕವಿತೆ ದ್ವೇಷದ ನಡುವೆ ಪ್ರೀತಿಯನ್ನು ಹರಡಬೇಕು ಹಾಗೂ ಮಹಿಳೆಯರ ಶೋಷಣೆ ವಿರುದ್ಧ ಧ್ವನಿ ಎತ್ತುವ, ಅನ್ಯಾಯ ಹಾಗೂ ಭ್ರಷ್ಟಾಚಾರವನ್ನು ಖಂಡಿಸುವ ಕಾವ್ಯ ಬರಬೇಕೆಂದು ಕರೆ ನೀಡಿದರು.

# ಯುಎಇ ಮೇಲಿನ ಡ್ರೋನ್ ದಾಳಿಗೆ ಪ್ರಧಾನಿ ಖಂಡನೆ



- ಪಶ್ಚಿಮ ಏಷ್ಯಾದಲ್ಲಿ ರಾಜತಾಂತ್ರಿಕತೆ ಮತ್ತು ಕಡಲ ಭದ್ರತೆಗೆ ಬೆಂಬಲ
- ದಾಳಿಯಲ್ಲಿ ಮೂವರು ಭಾರತೀಯರಿಗೆ ಗಾಯ

**ನವದೆಹಲಿ, ಮೇ 5:** ಯುನೈಟೆಡ್ ಅರಬ್ ಎಮಿರೇಟ್ಸ್‌ನ (ಯುಎಇ) ಫುಜೈರಾ ಪೆಟ್ರೋಲಿಯಂ ಉದ್ಯಮ ವಲಯದ ಮೇಲೆ ನಡೆದ ಡ್ರೋನ್ ದಾಳಿಯನ್ನು ಪ್ರಧಾನಿ ನರೇಂದ್ರ ಮೋದಿ ಮಂಗಳವಾರ ತೀವ್ರವಾಗಿ ಖಂಡಿಸಿದ್ದಾರೆ. ಈ ದಾಳಿಯಲ್ಲಿ ಮೂವರು ಭಾರತೀಯರು ಗಾಯಗೊಂಡಿದ್ದು, ನಾಗರಿಕರು ಮತ್ತು ಪ್ರಮುಖ ಮೂಲಸೌಕರ್ಯಗಳ ಮೇಲೆ ದಾಳಿ ಮಾಡುವುದು "ಅಸ್ವೀಕಾರಾರ್ಹ" ಎಂದು ಮೋದಿ ಹೇಳಿದ್ದಾರೆ. ಅಲ್ಲದೆ, ಪ್ರದೇಶದಲ್ಲಿ ಸ್ಥಿರತೆಯನ್ನು ಮರುಸ್ಥಾಪಿಸಲು ರಾಜತಾಂತ್ರಿಕ ಪ್ರಯತ್ನಗಳಿಗೆ ಭಾರತದ ಬೆಂಬಲವನ್ನು ಪುನರುಚ್ಚರಿಸಿದ್ದಾರೆ.

ಸಾಮಾಜಿಕ ಮಾಧ್ಯಮ ವೇದಿಕೆ 'ಎಕ್ಸ್'ನಲ್ಲಿ ಹೇಳಿಕೆ ನೀಡಿರುವ ಮೋದಿ, "ಮೂವರು ಭಾರತೀಯ ಪ್ರಜೆಗಳು ಗಾಯಗೊಳ್ಳಲು ಕಾರಣವಾದ ಯುಎಇ ಮೇಲಿನ ದಾಳಿಯನ್ನು ಬಲವಾಗಿ ಖಂಡಿಸುತ್ತೇನೆ. ನಾಗರಿಕರು ಮತ್ತು ಮೂಲಸೌಕರ್ಯಗಳನ್ನು ಗುರಿ ಮಾಡುವುದು ಸ್ವೀಕಾರಾರ್ಹವಲ್ಲ ಎಂದು ತಿಳಿಸಿದ್ದಾರೆ. ಭಾರತವು "ಯುಎಇ ಜೊತೆ ದೃಢವಾಗಿ ನಿಂತಿದೆ. ಸಂವಾದ ಮತ್ತು ರಾಜತಾಂತ್ರಿಕತೆಯ ಮೂಲಕ ಎಲ್ಲಾ ಸಮಸ್ಯೆಗಳನ್ನು ಶಾಂತಿಯುತವಾಗಿ ಪರಿಹರಿಸುವ ಅಗತ್ಯವಿದೆ ಎಂದು ಹೇಳಿದ್ದಾರೆ.


ಹಾರ್ಮುಜ್ ಜಲಸಂಧಿಯ ಮೂಲಕ ಅಡೆತಡೆಯಿಲ್ಲದ ಕಡಲ ಸಂಚಾರವನ್ನು ಖಚಿತಪಡಿಸಿಕೊಳ್ಳುವ ಕಾರ್ಯತಂತ್ರದ ಪ್ರಾಮುಖ್ಯತೆಯನ್ನು ಒತ್ತಿ ಹೇಳಿರುವ ಪ್ರಧಾನಿ ಮೋದಿ, ಸುರಕ್ಷಿತ ಮತ್ತು ಅಡೆತಡೆಯಿಲ್ಲದ ಹಡಗುಗಳ ಸಂಚಾರವನ್ನು ಖಚಿತಪಡಿಸಿಕೊಳ್ಳುವುದು ಪ್ರಾದೇಶಿಕ ಶಾಂತಿ, ಸ್ಥಿರತೆ ಮತ್ತು ಜಾಗತಿಕ ಇಂಧನ ಭದ್ರತೆಗೆ ಅತ್ಯಗತ್ಯವಾಗಿದೆ ಎಂದಿದ್ದಾರೆ.

ಇರಾನ್‌ನಿಂದ ಈ ದಾಳಿ ನಡೆದಿದೆ ಎಂದು ಶಂಕಿಸಲಾಗಿದ್ದು, ಯುಎಇಯ ಪೂರ್ವ ಕರಾವಳಿಯ ಪ್ರಮುಖ ಇಂಧನ ಕೇಂದ್ರವಾದ ಫುಜೈರಾದ ತೈಲ ಸೌಲಭ್ಯದಲ್ಲಿ ಇದು ಬೆಂಕಿಗೆ ಕಾರಣವಾಗಿದೆ. ಸ್ಥಳೀಯ ಅಧಿಕಾರಿಗಳು ದಾಳಿಯ ಜವಾಬ್ದಾರಿಯನ್ನು ಅಧಿಕೃತವಾಗಿ ಯಾರ ಮೇಲೂ ಹೊರಿಸದಿದ್ದರೂ, ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆ ಹೆಚ್ಚಿರುವ ಸಮಯದಲ್ಲಿ ಈ ಘಟನೆ ಸಂಭವಿಸಿದೆ.

ವಿದೇಶಾಂಗ ವ್ಯವಹಾರಗಳ ಸಚಿವಾಲಯ ಕೂಡ ಈ ದಾಳಿಯನ್ನು "ಅಸ್ವೀಕಾರಾರ್ಹ" ಎಂದು ಕರೆದಿದೆ ಮತ್ತು "ಈ ಹಗೆತನವನ್ನು ತಕ್ಷಣವೇ ನಿಲ್ಲಿಸುವಂತೆ" ಒತ್ತಾಯಿಸಿದೆ. ನಾಗರಿಕ ಮೂಲಸೌಕರ್ಯ ಮತ್ತು ಅಮಾಯಕ ನಾಗರಿಕರನ್ನು ಗುರಿಯಾಗಿಸುವುದು ನಿಲ್ಲಬೇಕು ಮತ್ತು ಸಂವಾದ ಹಾಗೂ ರಾಜತಾಂತ್ರಿಕತೆಯು ಈ ಪ್ರದೇಶದ ಸಂಘರ್ಷಗಳನ್ನು ಪರಿಹರಿಸಲು ಇರುವ ಏಕೈಕ ಮಾರ್ಗ ಎಂಬ ಭಾರತದ ದೀರ್ಘಕಾಲದ ನಿಲುವನ್ನು ಸಚಿವಾಲಯವು ಪುನರುಚ್ಚರಿಸಿದೆ.

ಯುಎಇ ಜೊತೆಗೆ ಆಳವಾದ ಆರ್ಥಿಕ ಮತ್ತು ವ್ಯೂಹಾತ್ಮಕ ಸಂಬಂಧವನ್ನು ಹೊಂದಿರುವ ಭಾರತವು, ಹಾರ್ಮುಜ್ ಜಲಸಂಧಿಯ ಮೂಲಕ ಬರುವ ಇಂಧನ ಪೂರೈಕೆಯ ಮೇಲೆ ಹೆಚ್ಚು ಅವಲಂಬಿತವಾಗಿದೆ. ಈ ಹಿನ್ನೆಲೆಯಲ್ಲಿ, ಈ ಪ್ರದೇಶದಲ್ಲಿ ಸಂಯಮ ಕಾಯ್ದುಕೊಳ್ಳುವಂತೆ ಭಾರತ ನಿರಂತರವಾಗಿ ಪ್ರತಿಪಾದಿಸುತ್ತಿದೆ.

# ಅಮೆರಿಕದ ಹಡಗುಗಳನ್ನು ಗುರಿ ಮಾಡಿದರೆ ಇರಾನ್ ನಿರ್ನಾಮ: ಡೊನಾಲ್ಡ್ ಟ್ರಂಪ್ ಎಚ್ಚರಿಕೆ



**ವಾಷಿಂಗ್ಟನ್/ಟೆಹರಾನ್, ಮೇ 5:** ಹಾರ್ಮುಜ್ ಜಲಸಂಧಿಯ ವಿಚಾರವಾಗಿ ಅಮೆರಿಕ ಮತ್ತು ಇರಾನ್ ನಡುವೆ ಏರ್ಪಟ್ಟಿದ್ದ ಕದನ ವಿರಾಮವು ಈಗ ಮುರಿಯುವ ಹಂತಕ್ಕೆ ತಲುಪಿದೆ. ಪಾಕಿಸ್ತಾನದ ಮೂಲಕ ಇರಾನ್ ಕಳುಹಿಸಿದ್ದ ಇತ್ತೀಚಿನ ಪ್ರಸ್ತಾವನೆಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿರಸ್ಕರಿಸಿದ್ದಾರೆ. ಅಲ್ಲದೆ, ಈ ಪ್ರಮುಖ ಜಲಮಾರ್ಗದಲ್ಲಿ ಹಡಗುಗಳ ಸಂಚಾರಕ್ಕೆ ಸಹಾಯ ಮಾಡಲು "ಪ್ರಾಜೆಕ್ಟ್ ಫ್ರೀಡಂ" ಕಾರ್ಯಾಚರಣೆ ಪ್ರಾರಂಭಿಸಿದ್ದಾರೆ. ಹಾರ್ಮುಜ್ ಜಲಸಂಧಿ ಅಥವಾ ಪರ್ಷಿಯನ್ ಕೊಲ್ಲಿಯಲ್ಲಿ ಅಮೆರಿಕದ ಹಡಗುಗಳನ್ನು ಗುರಿಯಾಗಿಸಿದರೆ ಇರಾನ್ ಪಡೆಗಳನ್ನು "ಭೂಮಿಯ ಮುಖದಿಂದಲೇ ಅಳಿಸಿಹಾಕಲಾಗುವುದು ಟ್ರಂಪ್ ಎಚ್ಚರಿಸಿದ್ದಾರೆ.

ಯುನೈಟೆಡ್ ಅರಬ್ ಎಮಿರೇಟ್ಸ್‌ನ (ಯುಎಇ) ಫುಜೈರಾ ಪೆಟ್ರೋಲಿಯಂ ಇಂಡಸ್ಟ್ರೀಸ್ ವಲಯದ ಮೇಲೆ ಇರಾನ್ ಡ್ರೋನ್ ದಾಳಿ ನಡೆಸಿದ ನಂತರ ಉದ್ವಿಗ್ನತೆ ಮತ್ತಷ್ಟು ಹೆಚ್ಚಾಗಿದೆ. ಯುಎಇ ಈ ದಾಳಿಯನ್ನು "ಅಪಾಯಕಾರಿ ಬೆಳವಣಿಗೆ" ಎಂದು ಖಂಡಿಸಿದ್ದು, ಇದು ಉಭಯ ದೇಶಗಳ ನಡುವಿದ್ದ ತಾತ್ಕಾಲಿಕ ಶಾಂತಿಯನ್ನು ಅಂತ್ಯಗೊಳಿಸಿದೆ ಎಂದಿದ್ದಾರೆ

ಇದರ ಪರಿಣಾಮವಾಗಿ ತೈಲಬೆಲೆಗಳು ಏರಿಕೆಯಾಗುತ್ತಿವೆ. ಏ.8ರಂದು ಘೋಷಿಸಲಾಗಿದ್ದ ಕದನ ವಿರಾಮವನ್ನು ಏ.22 ರವರೆಗೆ ವಿಸ್ತರಿಸಲಾಗಿತ್ತು. ಆದರೆ, ಇರಾನ್ ಸಂಸತ್ತಿನ ಸ್ಪೀಕರ್ ಮೊಹಮ್ಮದ್ ಬಾಗೇರ್ ಗಾಲಿಬಾಫ್ ಈ ಬಗ್ಗೆ ಪ್ರತಿಕ್ರಿಯಿಸಿ, ಅಮೆರಿಕ ಮತ್ತು ಅದರ ಮಿತ್ರರಾಷ್ಟ್ರಗಳು ಕದನ ವಿರಾಮವನ್ನು ಉಲ್ಲಂಘಿಸಿ ದಿಗ್ಬಂಧನ ಹೇರುವ ಮೂಲಕ ಇಂಧನ ಸಾಗಣೆಗೆ ಅಪಾಯ ತಂದೊಡ್ಡುತ್ತಿವೆ ಎಂದು ಆರೋಪಿಸಿದ್ದಾರೆ. "ನಾವು ಇನ್ನೂ ಯುದ್ಧ ಆರಂಭಿಸಿಯೇ ಇಲ್ಲ" ಎಂದು ಹೇಳುವ ಮೂಲಕ ಇರಾನ್ ತನ್ನ ಬಳಿ ಇನ್ನೂ ದೊಡ್ಡ ಮಟ್ಟದ ಪ್ರತಿರೋಧದ ಆಯ್ಕೆಗಳಿವೆ ಎಂಬ ಎಚ್ಚರಿಕೆ ನೀಡಿದೆ.

ಸಿಲುಕಿಕೊಂಡಿರುವ ವಾಣಿಜ್ಯ ಹಡಗುಗಳನ್ನು ಸುರಕ್ಷಿತವಾಗಿ ಸಾಗಿಸಲು ಅಮೆರಿಕ ಈ ಬೃಹತ್ ಮಿಲಿಟರಿ ಕಾರ್ಯಾಚರಣೆ ಹಮ್ಮಿಕೊಂಡಿದೆ. ಇದರಲ್ಲಿ ಸುಮಾರು 15,000 ಸೈನಿಕರು, ಕ್ಷಿಪಣಿ ವಿಧ್ವಂಸಕ ನೌಕೆಗಳು ಮತ್ತು 100ಕ್ಕೂ ಹೆಚ್ಚು ವಿಮಾನಗಳನ್ನು ಬಳಸಲಾಗುತ್ತಿದೆ. ಮೊದಲ ದಿನ ಈ ಕಾರ್ಯಾಚರಣೆ ಯಶಸ್ವಿಯಾಗಿದ್ದು, ಅಮೆರಿಕದ ರಕ್ಷಣೆಯಲ್ಲಿ ಎರಡು ಹಡಗುಗಳು ಜಲಸಂಧಿಯನ್ನು ದಾಟಿವೆ. ದಾಳಿ ನಡೆಸಲು ಬಂದಿದ್ದ ಇರಾನ್‌ನ ಕ್ಷಿಪಣಿಗಳನ್ನು ಅಮೆರಿಕ ಹೊಡೆದುರುಳಿಸಿದೆ ಮತ್ತು ವಾಣಿಜ್ಯ ಹಡಗುಗಳ ಮೇಲೆ ದಾಳಿ ಮಾಡಲು ಯತ್ನಿಸಿದ ಇರಾನ್‌ನ ಆರು ಸಣ್ಣ ದೋಣಿಗಳನ್ನು ಅಮೆರಿಕದ ಹೆಲಿಕಾಪ್ಟರ್‌ಗಳು ಮುಳುಗಿಸಿವೆ ಎಂದು ಅಡ್ಮಿರಲ್ ಬ್ರಾಡ್ಲಿ ಕೂಪರ್ ತಿಳಿಸಿದ್ದಾರೆ.

ಆದರೆ, ನಿವೃತ್ತ ಲೆಫ್ಟಿನೆಂಟ್ ಜನರಲ್ ಕರೆನ್ ಗಿಬ್ಸನ್ ಅವರ ಪ್ರಕಾರ, ಈ ಯಶಸ್ಸು ಸೀಮಿತವಾದುದು. ಬಿಕ್ಕಟ್ಟು ಆರಂಭವಾಗುವ ಮೊದಲು ದಿನಕ್ಕೆ 120 ಹಡಗುಗಳು ಸಂಚರಿಸುತ್ತಿದ್ದವು, ಈಗ ಕೇವಲ ಎರಡು ಹಡಗುಗಳನ್ನು ಸಾಗಿಸುವುದು ಜಾಗತಿಕ ವಾಣಿಜ್ಯವನ್ನು ಪುನಃಸ್ಥಾಪಿಸಿದಂತಾಗುವುದಿಲ್ಲ. ಹಡಗು ಕಂಪನಿಗಳಲ್ಲಿ ಭಯ ಹುಟ್ಟಿಸುವ ಮೂಲಕ ಜಲಸಂಧಿಯನ್ನು ಪರೋಕ್ಷವಾಗಿ ಮುಚ್ಚಿಡುವಲ್ಲಿ ಇರಾನ್ ಯಶಸ್ವಿಯಾಗಿದೆ ಎಂದು ವಿಶ್ಲೇಷಿಸಿದ್ದಾರೆ. ಈ ನಡುವೆ, ಇರಾನ್‌ನ ದಾಳಿಯನ್ನು ಖಂಡಿಸಿರುವ ಯುಎಇಗೆ ವಿಶ್ವದಾದ್ಯಂತ ಬೆಂಬಲ ವ್ಯಕ್ತವಾಗುತ್ತಿದೆ. ಇರಾನ್ ಆಕ್ರಮಣಕಾರಿ ಧೋರಣೆ ತಳೆದಿದ್ದು, ಈ ಬಿಕ್ಕಟ್ಟಿಗೆ ಅವರೇ ಜವಾಬ್ದಾರರು ಎಂದು ಯುಎಇ ಅಧ್ಯಕ್ಷೀಯ ಸಲಹೆಗಾರ ಅನ್ವರ್ ಗರ್ಗಾಶ್ ತಿಳಿಸಿದ್ದಾರೆ.

# ರಾಜತಾಂತ್ರಿಕ ಬೆಂಬಲ ಕೋರಲು ಇರಾನ್ ವಿದೇಶಾಂಗ ಸಚಿವರಿಂದ ಬೀಜಿಂಗ್ ಪ್ರವಾಸ



**ಟೆಹರಾನ್/ಬೀಜಿಂಗ್, ಮೇ 5:** ಅಮೆರಿಕ–ಇಸ್ರೇಲ್ ಜಂಟಿ ಸಂಘರ್ಷ ಮತ್ತು ಪ್ರಾದೇಶಿಕ ಉದ್ವಿಗ್ನತೆಗಳ ನಡುವೆ ರಾಜತಾಂತ್ರಿಕ ಬೆಂಬಲ ಕೋರಿ ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಗ್ಚಿ ಅವರು ಮಂಗಳವಾರ ತಡರಾತ್ರಿ ಬೀಜಿಂಗ್‌ಗೆ ಪ್ರಯಾಣಿಸಲಿದ್ದಾರೆ.

ಇರಾನ್ ವಿದೇಶಾಂಗ ಸಚಿವಾಲಯದ ಪ್ರಕಾರ, ಈ ಚರ್ಚೆಗಳು "ದ್ವಿಪಕ್ಷೀಯ ಸಂಬಂಧಗಳು ಹಾಗೂ ಪ್ರಾದೇಶಿಕ ಮತ್ತು ಅಂತರಾಷ್ಟ್ರೀಯ ಬೆಳವಣಿಗೆಗಳ ಮೇಲೆ ಕೇಂದ್ರೀಕರಿಸಲಿವೆ". ಪ್ರಸ್ತುತ ನಡೆಯುತ್ತಿರುವ ಯುದ್ಧ ಮತ್ತು ಹಾರ್ಮುಜ್ ಜಲಸಂಧಿಯಲ್ಲಿನ ಸಂಚಾರ ವ್ಯತ್ಯಯದ ಕುರಿತು ಪ್ರಮುಖವಾಗಿ ಚರ್ಚಿಸುವ ನಿರೀಕ್ಷೆಯಿದೆ ಎನ್ನಲಾಗಿದೆ.

ಫೆಬ್ರವರಿ 28 ರಂದು ಯುದ್ಧ ಪ್ರಾರಂಭವಾದಾಗಿನಿಂದ ಚೀನಾ ಅತ್ಯಂತ ಜಾಗರೂಕ ನಿಲುವನ್ನು ತಳೆದಿದೆ. ಇರಾನ್ ಮೇಲೆ ಅಮೆರಿಕ ಮತ್ತು ಇಸ್ರೇಲ್ ನಡೆಸಿದ ಆರಂಭಿಕ ದಾಳಿಗಳನ್ನು ಬೀಜಿಂಗ್ ಖಂಡಿಸಿದ್ದರೂ, ಇರಾನ್ ಜೊತೆಗಿನ ನಿಕಟ ಸಂಬಂಧದ ಹೊರತಾಗಿಯೂ ಆಶ್ಚರ್ಯಕರವಾಗಿ ತಟಸ್ಥವಾಗಿದೆ. ಪರಿಸ್ಥಿತಿಯನ್ನು ತಿಳಿಗೊಳಿಸಲು ಮತ್ತು ರಾಜತಾಂತ್ರಿಕ ಪರಿಹಾರ ಕಂಡುಕೊಳ್ಳುವಂತೆ ಅದು ನಿರಂತರವಾಗಿ ಕರೆ ನೀಡುತ್ತಿದೆ.

ಚೀನಾವು ಇರಾನ್ ತೈಲದ ಅತಿದೊಡ್ಡ ಖರೀದಿದಾರನಾಗಿದೆ. ಆದರೂ, ತನ್ನಲ್ಲಿರುವ ಬೃಹತ್ ತೈಲ ಸಂಗ್ರಹ ಮತ್ತು ವೈವಿಧ್ಯಮಯ ಇಂಧನ ಮೂಲಗಳಿಂದಾಗಿ ಹಾರ್ಮುಜ್ ಜಲಸಂಧಿಯ ಸಂಚಾರ ವ್ಯತ್ಯಯದಿಂದ ಚೀನಾಕ್ಕೆ ಹೆಚ್ಚಿನ ತೊಂದರೆಯಾಗಿಲ್ಲ. ಇರಾನ್ ಈ ಜಲಸಂಧಿಯನ್ನು ತನಗೆ "ಶತ್ರು" ಎನಿಸಿದ ದೇಶಗಳಿಗೆ ಮಾತ್ರ ನಿರ್ಬಂಧಿಸಿದೆ.

ಈ ಭೇಟಿಯು ಅಮೆರಿಕ–ಚೀನಾ ಸಂಬಂಧದ ಪ್ರಮುಖ ಘಟ್ಟದ ಮುನ್ನ ನಡೆಯುತ್ತಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಮೇ 14–15 ರ ನಡುವೆ ಚೀನಾಕ್ಕೆ ಭೇಟಿ ನೀಡಿ ಅಧ್ಯಕ್ಷ ಷಿ ಜಿನ್ಪಿಂಗ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. 2025 ರಲ್ಲಿ ಶ್ವೇತಭವನಕ್ಕೆ ಮರಳಿದ ನಂತರ ಟ್ರಂಪ್ ಅವರ ಮೊದಲ ಚೀನಾ ಭೇಟಿ ಇದಾಗಿದೆ.

"ನಾನು ಎರಡು ವಾರಗಳಲ್ಲಿ ಅಧ್ಯಕ್ಷ ಷಿ ಅವರನ್ನು ಭೇಟಿ ಮಾಡಲು ಹೋಗುತ್ತಿದ್ದೇನೆ. ಅದಕ್ಕಾಗಿ ನಾನು ಕಾಯುತ್ತಿದ್ದೇನೆ. ಇದು ಅತ್ಯಂತ ಪ್ರಮುಖವಾದ ಪ್ರವಾಸವಾಗಲಿದೆ," ಎಂದು ಟ್ರಂಪ್ ನಿನ್ನೆ ಶ್ವೇತಭವನದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಹೇಳಿದ್ದಾರೆ.

ಇದೇ ವೇಳೆ, ಅಂತರಾಷ್ಟ್ರೀಯ ಹಡಗು ಸಂಚಾರಕ್ಕಾಗಿ ಹಾರ್ಮುಜ್ ಜಲಸಂಧಿಯನ್ನು ಮುಕ್ತವಾಗಿಡಲು ಇರಾನ್ ಮೇಲೆ ಒತ್ತಡ ಹೇರುವಂತೆ ಅಮೆರಿಕದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಚೀನಾಕ್ಕೆ ಮನವಿ ಮಾಡಿದ್ದಾರೆ.

# ನೇರ ಸಂಘರ್ಷಕ್ಕೆ ಎಳೆಯಬೇಡಿ ಅಮೆರಿಕಕ್ಕೆ ಇರಾನ್ ಎಚ್ಚರಿಕೆ

**ಟೆಹರಾನ್, ಮೇ 5:** ಇರಾನ್ ಮತ್ತು ಅಮೆರಿಕ ನಡುವಿನ ಉದ್ವಿಗ್ನತೆ ಉತ್ತುಂಗಕ್ಕೇರಿದ್ದು, ಹಾರ್ಮುಜ್ ಜಲಸಂಧಿಯ ಮೂಲಕ ಸಂಚಾರ ಬಹುತೇಕ ಸ್ಥಗಿತಗೊಂಡಿದೆ. ಈ ನಡುವೆ, ತನ್ನನ್ನು ನೇರ ಸಂಘರ್ಷಕ್ಕೆ ಎಳೆಯದಂತೆ ಇರಾನ್ ಅಮೆರಿಕಕ್ಕೆ ಎಚ್ಚರಿಕೆ ನೀಡಿದೆ.

"ಹಾರ್ಮುಜ್‌ನಲ್ಲಿ ನಡೆಯುತ್ತಿರುವ ಘಟನೆಗಳು ರಾಜಕೀಯ ಬಿಕ್ಕಟ್ಟಿಗೆ ಯಾವುದೇ ಮಿಲಿಟರಿ ಪರಿಹಾರವಿಲ್ಲ ಎಂಬುದನ್ನು ಸ್ಪಷ್ಟಪಡಿಸುತ್ತವೆ" ಎಂದು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಗ್ಚಿ 'ಎಕ್ಸ್' ನಲ್ಲಿ ಬರೆದಿದ್ದಾರೆ. ಪಾಕಿಸ್ತಾನದ ಮಧ್ಯಸ್ಥಿಕೆಯ ಮೂಲಕ ಮಾತುಕತೆಗಳು ಮುಂದುವರಿಯುತ್ತಿರುವಾಗ, "ದುಷ್ಟರ ಸಂಚಿನಿಂದಾಗಿ ಅಮೆರಿಕವು ಮತ್ತೆ ಸಂಕಷ್ಟಕ್ಕೆ ಸಿಲುಕದಂತೆ ಎಚ್ಚರ ವಹಿಸಬೇಕು" ಎಂದು ಸಲಹೆ ನೀಡಿದ್ದಾರೆ. ಈ ಎಚ್ಚರಿಕೆ ಯುಎಇ ಸೇರಿದಂತೆ ಕೊಲ್ಲಿ ರಾಷ್ಟ್ರಗಳಿಗೂ ಅನ್ವಯಿಸುತ್ತದೆ ಎಂದಿದ್ದಾರೆ. ಈ ಪ್ರದೇಶದಲ್ಲಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ 'ಪ್ರಾಜೆಕ್ಟ್ ಫ್ರೀಡಂ' ಎಂಬ ಮಿಲಿಟರಿ ಕಾರ್ಯಾಚರಣೆಯನ್ನು "ಪ್ರಾಜೆಕ್ಟ್ ಡೆಡ್ಲಾಕ್" ಎಂದು ಲೇವಡಿ ಮಾಡಿದ್ದಾರೆ.

# ಅಮೆರಿಕದ ಮಿಲಿಟರಿ ವಿಮಾನ ನಾಪತ್ತೆ: ಎಮರ್ಜೆನ್ಸಿ ಕೋಡ್ ಕಳುಹಿಸಿ ಕಣ್ಮರೆಯಾದ ಕೆಸಿ–135



**ಇರಾನ್, ಮೇ 5:** ಪರ್ಷಿಯನ್ ಕೊಲ್ಲಿಯ ಆಕಾಶ ಮಾರ್ಗದಲ್ಲಿ ಸಂಚರಿಸುತ್ತಿದ್ದ ಅಮೆರಿಕದ ವಾಯುಪಡೆಗೆ ಸೇರಿದ ಬೋಯಿಂಗ್ ಕೆಸಿ–135 ಸ್ಟ್ರಾಟೋಟ್ಯಾಂಕರ್ ಎಂಬ ಇಂಧನ ಪೂರೈಕೆ ವಿಮಾನ ಹಠಾತ್ತಾಗಿ ನಾಪತ್ತೆಯಾಗಿದೆ.

ಯುಎಇಯ ಅಲ್ ಧಫ್ರಾ ವಾಯುನೆಲೆಯಿಂದ ಹೊರಟಿದ್ದ ಈ ವಿಮಾನ, ಕತಾರ್ ವಾಯುಪ್ರದೇಶದಲ್ಲಿ ಇದ್ದಾಗ ನಿಯಂತ್ರಣ ಕೊಠಡಿಯೊಂದಿಗೆ ಸಂಪರ್ಕ ಕಳೆದುಕೊಂಡಿದೆ. ಸುಮಾರು ಆರು ದಶಕಗಳಿಂದ ಅಮೆರಿಕ ಸೇನೆಯಲ್ಲಿ ಮಹತ್ವದ ಪಾತ್ರ ವಹಿಸುತ್ತಿರುವ ಈ 'ಹಾರುವ ಗ್ಯಾಸ್ ಸ್ಟೇಷನ್' ವಿಮಾನವು ಯುದ್ಧ ವಿಮಾನಗಳಿಗೆ ಮಧ್ಯಮ ಆಕಾಶದಲ್ಲಿ ಇಂಧನ ತುಂಬಿಸುವ ಸಾಮರ್ಥ್ಯ ಹೊಂದಿದೆ. ಫ್ಲೈಟ್‌ರಾಡಾರ್ ಅಂಕಿಅಂಶಗಳ ಪ್ರಕಾರ, ಈ ವಿಮಾನ ಕಣ್ಮರೆಯಾಗುವ ಕೆಲವೇ ಕ್ಷಣಗಳ ಮೊದಲು ತುರ್ತು ಪರಿಸ್ಥಿತಿಯನ್ನು ಸೂಚಿಸುವ 7700' ಎಂಬ ಎಚ್ಚರಿಕೆಯ ಸಂಕೇತವನ್ನು ರವಾನಿಸಿತ್ತು. ಅಮೆರಿಕದ ಈ ತಾಂತ್ರಿಕ ವಿಮಾನ ಸಂಪರ್ಕ ಕಳೆದುಕೊಳ್ಳುವ ಮುನ್ನ ಆಕಾಶದಲ್ಲಿ ವ್ಯತ್ಯಾಕಾರವಾಗಿ ಚಲಿಸಿರುವುದು ಪತ್ತೆಯಾಗಿದೆ.

# ಉದ್ಯಮಿಯ ತಿಂದು ತೇಗಿದ್ದ 15 ಅಡಿ ಉದ್ದದ ಬೃಹತ್ ಮೊಸಳೆ



**ಕೇಪ್‌ಟೌನ್, ಮೇ 5:** ಸುಮಾರು 59 ವರ್ಷದ ಉದ್ಯಮಿಯನ್ನು ತಿಂದು ತೇಗಿದ್ದ ಬರೊಬ್ಬರಿ 15 ಅಡಿ ಉದ್ದ, 500 ಕೆ.ಜಿ. ತೂಕದ ಬೃಹತ್ ಮೊಸಳೆಯನ್ನು ಗುಂಡಿಟ್ಟು ಕೊಂದು ನೀರಿನಿಂದ ಹೊರಕ್ಕೆ ಏರ್‌ಲಿಫ್ಟ್ ಮಾಡಿದ ಘಟನೆ ದಕ್ಷಿಣ ಆಫ್ರಿಕಾದ ಕೇಪ್‌ಟೌನ್‌ನಲ್ಲಿ ನಡೆದಿದೆ.

ಮೃತ ವ್ಯಕ್ತಿಯನ್ನು 59 ವರ್ಷದ ಗೇಬ್ರಿಯಲ್ ಬಟಿಸ್ಟಾ ಎಂದು ಗುರುತಿಸಲಾಗಿದೆ. ಮೇ 2, 2026 ರಂದು ಗೇಬ್ರಿಯಲ್‌ನನ್ನು ತಿಂದ ಬಳಿಕ ಕೋಮತಿ ನದಿಯಲ್ಲಿ ಅವಿತಿದ್ದ ಮೊಸಳೆಯನ್ನು ರಕ್ಷಣಾ ಸಿಬ್ಬಂದಿ ಗುಂಡಿಕ್ಕಿ ಕೊಂದು ಹೆಲಿಕಾಪ್ಟರ್ ಸಹಾಯದಿಂದ ಏರ್‌ಲಿಫ್ಟ್ ಮೂಲಕ ಹೊರಗೆಳೆದು ಅದರ ಹೊಟ್ಟೆಯಲ್ಲಿದ್ದ ಉದ್ಯಮಿಯ ಮೃತದೇಹವನ್ನು ಹೊರಕ್ಕೆ ತೆಗೆದಿದ್ದಾರೆ ಎನ್ನಲಾಗಿದೆ. ಮೊಸಳೆಯ ಹೊಟ್ಟೆಯಲ್ಲಿ ಮನುಷ್ಯನ ದೇಹದ ಭಾಗಗಳು ಪತ್ತೆಯಾಗಿವೆ.

ಏಪ್ರಿಲ್ 28, 2026 ರಂದು ಸುರಿದ ಭಾರಿ ಮಳೆಯಿಂದಾಗಿ, ಕೊಮಟಿಪೂರ್ಟ್ ಬಳಿಯ ಸೇತುವೆಯ ಮೇಲೆ ಗೇಬ್ರಿಯಲ್ ಬಟಿಸ್ಟಾ ಅವರ ಕಾರು ನೀರಿನಲ್ಲಿ ಕೊಚ್ಚಿಹೋಗಿತ್ತು. ಅಂದಿನಿಂದ ಅವರು ನಾಪತ್ತೆಯಾಗಿದ್ದರು.

ಡ್ರೋನ್ ಮತ್ತು ಹೆಲಿಕಾಪ್ಟರ್‌ಗಳ ಮೂಲಕ ಹುಡುಕಾಟ ನಡೆಸುತ್ತಿದ್ದಾಗ, ಅಸಹಜವಾಗಿ ಉಬ್ಬಿದ ಹೊಟ್ಟೆಯನ್ನು ಹೊಂದಿದ್ದ ಈ ಬೃಹತ್ ಮೊಸಳೆ ಅಧಿಕಾರಿಗಳ ಕಣ್ಣಿಗೆ ಬಿದ್ದಿತು. ಮೊಸಳೆಯನ್ನು ಸೆರೆಹಿಡಿದು ಗುಂಡಿಟ್ಟು ಕೊಂದ ನಂತರ, ಕ್ಯಾಪ್ಟನ್ ಜೋಹಾನ್ ಪೋಟ್ಗೈಟರ್ ಅವರು ಹೆಲಿಕಾಪ್ಟರ್‌ನಿಂದ ನದಿಗೆ ಇಳಿದು, ಹಗ್ಗಗಳ ಸಹಾಯದಿಂದ ಮೊಸಳೆಯನ್ನು ಕಟ್ಟಿ ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಸಾಗಿಸಿದರು.

ಮೊಸಳೆಯ ಹೊಟ್ಟೆಯನ್ನು ಪರೀಕ್ಷಿಸಿದಾಗ ಮನುಷ್ಯನ ಪಕ್ಕೆಲುಬುಗಳು, ಎರಡು ಕೈಗಳು ಮತ್ತು ಎದೆಯ ಭಾಗದ ಮಾಂಸ ಪತ್ತೆಯಾಗಿವೆ. ಇದರೊಂದಿಗೆ ಬಟ್ಟೆ ಮತ್ತು ಒಂದು ಉಂಗುರ ಕೂಡ ಸಿಕ್ಕಿವೆ. ಈ ದೇಹದ ಭಾಗಗಳು ಬಟಿಸ್ಟಾ ಅವರದ್ದೇ ಎಂದು ಖಚಿತಪಡಿಸಿಕೊಳ್ಳಲು ಈಗ ಆಟಂ ಪರೀಕ್ಷೆ ನಡೆಸಲಾಗುತ್ತಿದೆ.

ಅವರು ಬದುಕಿದ್ದಾಗಲೇ ಮೊಸಳೆ ದಾಳಿ ಮಾಡಿದೆಯೇ ಅಥವಾ ನೀರಿನಲ್ಲಿ ಮುಳುಗಿ ಮೃತಪಟ್ಟ ನಂತರ ಮೊಸಳೆ ಅವರ ದೇಹವನ್ನು ತಿಂದಿದೆಯೇ ಎಂಬುದು ಇನ್ನಷ್ಟೇ ತಿಳಿಯಬೇಕಿದೆ.

# ಚೀನಾದ ಪಟಾಕಿ ಕಾರ್ಖಾನೆಯಲ್ಲಿ ಭೀಕರ ಸ್ಫೋಟ: 26 ಸಾವು, 61 ಮಂದಿಗೆ ಗಾಯ



**ಬೀಜಿಂಗ್, ಮೇ 5:** ಚೀನಾದ ಹುನಾನ್ ಪ್ರಾಂತ್ಯದ ಲಿಯುಯಾಂಗ್ ನಗರದ ಪಟಾಕಿ ತಯಾರಿಕಾ ಕಾರ್ಖಾನೆಯೊಂದರಲ್ಲಿ ಸಂಭವಿಸಿದ ಭೀಕರ ಸ್ಫೋಟದಲ್ಲಿ 26 ಮಂದಿ ಮೃತಪಟ್ಟಿದ್ದು, 61ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

ಗುವಾಂಡು ವಟ್ಟಣದಲ್ಲಿರುವ ಲಿಯುಯಾಂಗ್ ಹುವಾಶೆಂಗ್ ಪಟಾಕಿ ತಯಾರಿಕಾ ಘಟಕದಲ್ಲಿ ಸೋಮವಾರ ಸಂಜೆ 5 ಗಂಟೆ ಸುಮಾರಿಗೆ ಈ ಅವಘಡ ಸಂಭವಿಸಿದೆ. ಸ್ಫೋಟದ ತೀವ್ರತೆಗೆ ಕಾರ್ಖಾನೆಯ ಕಟ್ಟಡ ನೆಲಸಮವಾಗಿದ್ದು, ಇದರಿಂದ ಸುತ್ತಮುತ್ತಲಿನ ಪ್ರದೇಶದಲ್ಲಿ ಆತಂಕ ಸೃಷ್ಟಿಯಾಗಿತ್ತು. ಇನ್ನು, ಈ ವಿಷಯ ತಿಳಿಯುತ್ತಿದ್ದಂತೆಯೇ ಅಗ್ನಿಶಾಮಕ ದಳ ಮತ್ತು ತುರ್ತು ರಕ್ಷಣಾ ತಂಡಗಳು ಸ್ಥಳಕ್ಕೆ ಧಾವಿಸಿ ಕಾರ್ಯಾಚರಣೆ ನಡೆಸಿದವು ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ಮುಂದುವರಿದಿದೆ. ಘಟನೆಗೆ ನಿಖರ ಕಾರಣವೇನು ಎಂಬುದು ತಿಳಿದುಬಂದಿಲ್ಲ. ಇತ್ತೀಚೆಗಷ್ಟೇ ತಮಿಳುನಾಡಿನ ಪಟಾಕಿ ಘಟಕವೊಂದರಲ್ಲಿ ಸಂಭವಿಸಿದ ಸ್ಫೋಟದಲ್ಲಿ 18 ಮಂದಿ ಬಲಿಯಾಗಿದ್ದನ್ನು ಇಲ್ಲಿ ಸ್ಮರಿಸಬಹುದು.

# ಬೆಂಗಳೂರಿನಲ್ಲಿ ಐಪಿಎಲ್ ಫೈನಲ್ ಪಂದ್ಯದ ಆತಿಥ್ಯದ ಮೇಲೆ ಕಾರ್ಮೋಡ

**ಬೆಂಗಳೂರು, ಮೇ 5:** ವಿಶ್ವದ ಅತ್ಯಂತ ಶ್ರೀಮಂತ ಕ್ರಿಕೆಟ್ ಲೀಗ್ ಎನಿಸಿಕೊಂಡಿರುವ ಐಪಿಎಲ್‌ನ 2026ರ ಸೀಸನ್‌ನ ಫೈನಲ್ ಪಂದ್ಯದ ಆತಿಥ್ಯದ ಮೇಲೆ ಕಾರ್ಮೋಡ ಕವಿದಿದೆ. ಹಾಲಿ ಚಾಂಪಿಯನ್ ಆಗಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ತವರು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಈ ಬಾರಿ ಫೈನಲ್ ನಡೆಯಬೇಕಿತ್ತು. ಆದರೆ, ಇತ್ತೀಚೆಗೆ ನಡೆದ ಶಾಸಕರ ಟಿಕೆಟ್ ವಿವಾದವು ಪಂದ್ಯವನ್ನು ಬೇರೆಡೆಗೆ ಸ್ಥಳಾಂತರಿಸಲು ಬಿಸಿಸಿಐ ಚಿಂತಿಸುವಂತೆ ಮಾಡಿದೆ.

ಈ ವಿವಾದದ ಕೇಂದ್ರಬಿಂದು ಟಿಕೆಟ್ ಹಂಚಿಕೆ. ಇತ್ತೀಚೆಗೆ ನಡೆದ ಪಂದ್ಯಗಳ ವೇಳೆ ಕರ್ನಾಟಕದ ಶಾಸಕರು ಮತ್ತು ಸಚಿವರು ತಮಗೆ ವಿಐಪಿ ಟಿಕೆಟ್‌ಗಳನ್ನು ನೀಡುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದರು.ಕಾಂಗ್ರೆಸ್ ಶಾಸಕ ವಿಜಯಾನಂದ ಕಾಶಪ್ಪನವರ್ ಅವರು, ಶಾಸಕರಿಗೆ ತಲಾ ಕನಿಷ್ಠ 5 ಟಿಕೆಟ್‌ಗಳನ್ನು ನೀಡಬೇಕು ಮತ್ತು ಅವರನ್ನು ಸಾಮಾನ್ಯ ಸರತಿಯಲ್ಲಿ ನಿಲ್ಲಿಸಬಾರದು ಎಂದು ಬಹಿರಂಗವಾಗಿ ಆಗ್ರಹಿಸಿದ್ದರು.ಶಾಸಕರು ಜನಪ್ರತಿನಿಧಿಗಳಾಗಿದ್ದು ಅವರಿಗೆ ಸೂಕ್ತ ಗೌರವ ಸಿಗುತ್ತಿಲ್ಲ ಎಂಬುದು ಅವರ ವಾದವಾಗಿತ್ತು.ಈ ವಿಚಾರವು ಕರ್ನಾಟಕ ವಿಧಾನಸಭೆಯಲ್ಲೂ ಪ್ರತಿಧ್ವನಿಸಿತ್ತು. ಶಾಸಕರ ಬೇಡಿಕೆಗೆ ಪ್ರತಿಕ್ರಿಯಿಸಿದ್ದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಶಾಸಕರಿಗೆ ಮತ್ತು ಸಂಸದರಿಗೆ ತಲಾ ಮೂರು ಟಿಕೆಟ್‌ಗಳನ್ನು ನೀಡಲಾಗುವುದು ಎಂದು ಭರವಸೆ ನೀಡಿದ್ದರು. ಟಿಕೆಟ್ ಹಂಚಿಕೆಗೆ ಸಂಬಂಧಿಸಿದಂತೆ ರಾಜಕೀಯ ನಾಯಕರ ಈ ಕಿತ್ತಾಟ ಮತ್ತು ಆಡಳಿತಾತ್ಮಕ ಒತ್ತಡಗಳು ಬಿಸಿಸಿಐಗೆ ತಲೆನೋವಾಗಿ ಪರಿಣಮಿಸಿದೆ.ಪಂದ್ಯದ ಆಯೋಜನೆಯಲ್ಲಿ ಇಂತಹ ಹಸ್ತಕ್ಷೇಪಗಳು ಮತ್ತು ವಿವಾದಗಳು ಉಂಟಾದಾಗ ಪಾರದರ್ಶಕತೆ ಮತ್ತು ನಿರ್ವಹಣೆ ಕಷ್ಟವಾಗುತ್ತದೆ ಎಂಬುದು ಮಂಡಳಿಯ ಆತಂಕವಾಗಿದೆ. ಬಿಸಿಸಿಐ ಮೂಲಗಳ ಪ್ರಕಾರ ಐಪಿಎಲ್ 2026ರ ಪ್ಲೇ ಆಫ್ ಪಂದ್ಯಗಳನ್ನು ಕರ್ನಾಟಕ ಮತ್ತು ಪಂಜಾಬ್ ನಡುವೆ ಹಂಚಿಕೆ ಮಾಡಲಾಗುತ್ತದೆ. ಆದರೆ, ಮೇ 31ರಂದು ನಡೆಯಬೇಕಿರುವ ಫೈನಲ್ ಪಂದ್ಯದ ಸ್ಥಳದ ಬಗ್ಗೆ ಮಂಡಳಿ ಇನ್ನೂ ಅಂತಿಮ ನಿರ್ಧಾರ ತೆಗೆದುಕೊಂಡಿಲ್ಲ. ಬೆಂಗಳೂರಿನಲ್ಲಿ ಟಿಕೆಟ್ ಹಂಚಿಕೆ ಗದ್ದಲ ಮುಂದುವರಿದರೆ, ಫೈನಲ್ ಪಂದ್ಯವನ್ನು ಪಂಜಾಬ್ ಅಥವಾ ಬೇರೆ ಯಾವುದಾದರೂ ನಗರಕ್ಕೆ ಸ್ಥಳಾಂತರಿಸಲು ಬಿಸಿಸಿಐ ಗಂಭೀರವಾಗಿ ಯೋಚಿಸುತ್ತಿದೆ.

ಒಂದೆಡೆ ಆರ್‌ಸಿಬಿ ತನ್ನ ಅದ್ಭುತ ಪ್ರದರ್ಶನದ ಮೂಲಕ ಅಭಿಮಾನಿಗಳ ಮನಗೆದ್ದಿದ್ದರೆ, ಮತ್ತೊಂದೆಡೆ ಮೈದಾನದ ಹೊರಗಿನ ಈ ರಾಜಕೀಯ ಪಂದ್ಯದ ಆಯೋಜನೆಯ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ. ಒಂದು ವೇಳೆ ಫೈನಲ್ ಪಂದ್ಯ ಬೆಂಗಳೂರಿನಿಂದ ಹೊರಕ್ಕೆ ಹೋದರೆ ಅದು ಸ್ಥಳೀಯ ಅಭಿಮಾನಿಗಳಿಗೆ ದೊಡ್ಡ ನಿರಾಸೆಯಾಗಲಿದೆ. ಬಿಸಿಸಿಐ ಮುಂದಿನ 48 ರಿಂದ 72 ಗಂಟೆಗಳಲ್ಲಿ ಫೈನಲ್ ಪಂದ್ಯದ ಸ್ಥಳದ ಬಗ್ಗೆ ಅಧಿಕೃತ ಪ್ರಕಟಣೆ ಹೊರಡಿಸುವ ಸಾಧ್ಯತೆಯಿದೆ. ಅಲ್ಲಿಯವರೆಗೆ ಬೆಂಗಳೂರಿನ ಐಪಿಎಲ್ ಪ್ರೇಮಿಗಳು ಉಸಿರು ಬಿಗಿಹಿಡಿದು ಕಾಯಬೇಕಿದೆ.

# ಸಂಜು ಸಿಡಿಲಬ್ಬರ: ಸಿಎಸ್‌ಕೆ ತಂಡಕ್ಕೆ ಭರ್ಜರಿ ಜಯ



**ದೆಹಲಿ,ಮೇ 5:** ಇಂಡಿಯನ್ ಪ್ರೀಮಿಯರ್ ಲೀಗ್‌ನ 48ನೇ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡ ಭರ್ಜರಿ ಜಯ ಸಾಧಿಸಿದೆ. ದೆಹಲಿಯ ಅರುಣ್ ಜೇಟ್ಲಿ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡದ ನಾಯಕ ಅಕ್ಷರ್ ಪಟೇಲ್ ಬ್ಯಾಟಿಂಗ್ ಆಯ್ದುಕೊಂಡರು. ಅದರಂತೆ ಮೊದಲು ಬ್ಯಾಟ್ ಮಾಡಿದ ಡಿಸಿ ಪಡೆಯಿಂದ ನಿರೀಕ್ಷಿತ ಪ್ರದರ್ಶನ ಮೂಡಿಬಂದಿರಲಿಲ್ಲ.

ಆರಂಭಿಕರಾದ ಕೆಎಲ್ ರಾಹುಲ್ (12) ಹಾಗೂ ಪಾತುಮ್ ನಿಸ್ಸಂಕಾ (19) 36 ರನ್‌ಗಳಿಸುವಷ್ಟರಲ್ಲಿ ವಿಕೆಟ್ ಒಪ್ಪಿಸಿದ್ದರು. ಆ ಬಳಿಕ ಬಂದ ನಿತೀಶ್ ರಾಣಾ ಕಲೆಹಾಕಿದ್ದು ಕೇವಲ 15 ರನ್‌ಗಳು ಮಾತ್ರ. ಇನ್ನು ಕರುಣ್ ನಾಯರ್ 13 ರನ್‌ಗಳಿಸಿ ಔಟಾದರೆ, ನಾಯಕ ಅಕ್ಷರ್ ಪಟೇಲ್ 2 ರನ್‌ಗಳಿಸಿ ನಿರ್ಗಮಿಸಿದರು.

ಈ ಹಂತದಲ್ಲಿ ಜೊತೆಗೂಡಿದ ಟ್ರಿಸ್ಟನ್ ಸ್ಟಬ್ಸ್ (38) ಹಾಗೂ ಸಮೀರ್ ರಿಝ್ವಿ (40) ತಂಡಕ್ಕೆ ಆಸರೆಯಾಗಿ ನಿಂತರು. ಪರಿಣಾಮ ಡೆಲ್ಲಿ ಕ್ಯಾಫಿಟಲ್ಸ್ ತಂಡವು 20 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 155 ರನ್ ಗಳಿಸಲು ಸಾಧ್ಯವಾಯಿತು.

**ಸಂಜು ಸ್ಯಾಮ್ಸನ್ ಸಿಡಿಲಬ್ಬರ:**

ಈ ಸುಲಭ ಗುರಿ ಬೆನ್ನತ್ತಿದ ಸಿಎಸ್‌ಕೆ ತಂಡ ಕೂಡ ಉತ್ತಮ ಆರಂಭ ಪಡೆದಿರಲಿಲ್ಲ. ಆರಂಭಿಕ ದಾಂಡಿಗ ರುತುರಾಜ್ ಗಾಯಕ್ವಾಡ್ 6 ರನ್‌ಗಳಿಸಿ ಔಟಾದರೆ, ಆ ಬಳಿಕ ಬಂದ ಉರ್ವಿಲ್ ಪಟೇಲ್ 17 ರನ್‌ಗಳಿಸಿ ವಿಕೆಟ್ ಒಪ್ಪಿಸಿದರು. ಆದರೆ ಮತ್ತೊಂದೆಡೆ ಜವಾಬ್ದಾರಿಯುತ ಬ್ಯಾಟಿಂಗ್ ಪ್ರದರ್ಶಿಸಿದ ಸಂಜು ಸ್ಯಾಮ್ಸನ್ ಇನಿಂಗ್ಸ್ ಕಟ್ಟುವ ಜವಾಬ್ದಾರಿ ಹೆಗಲೇರಿಸಿಕೊಂಡರು. ಅದರಂತೆ ಆರಂಭದಲ್ಲಿ ಎಚ್ಚರಿಕೆಯ ಬ್ಯಾಟಿಂಗ್‌ಗೆ ಒತ್ತು ನೀಡಿದ ಸಂಜು ಪವರ್‌ಪ್ಲೇ ಮುಗಿಯುತ್ತಿದ್ದಂತೆ ಸಿಡಿಲಬ್ಬರ ಶುರು ಮಾಡಿದರು. ಪರಿಣಾಮ ಸಂಜು ಸ್ಯಾಮ್ಸನ್ ಬ್ಯಾಟ್‌ನಿಂದ 32 ಎಸೆತಗಳಲ್ಲಿ ಅರ್ಧಶತಕ ಮೂಡಿಬಂತು.

ಹಾಫ್ ಸೆಂಚುರಿ ಬಳಿಕ ಕೂಡ ಬಿರುಸಿನ ಬ್ಯಾಟಿಂಗ್ ಮುಂದುವರೆಸಿದ ಸಂಜು ಸ್ಯಾಮ್ಸನ್ ಯುವ ದಾಂಡಿಗ ಕಾರ್ತಿಕ್ ಶರ್ಮಾ ಜೊತೆಗೂಡಿ ಶತಕದ ಜೊತೆಯಾಟವಾಡಿದರು.

ಅಂತಿಮವಾಗಿ ಸಂಜು ಸ್ಯಾಮ್ಸನ್ 52 ಎಸೆತಗಳಲ್ಲಿ 6 ಭರ್ಜರಿ ಸಿಕ್ಸರ್ ಹಾಗೂ 7 ಫೋರ್‌ಗಳೊಂದಿಗೆ ಅಜೇಯ 87 ರನ್ ಬಾರಿಸಿದರು. ಮತ್ತೊಂದೆಡೆ ಕಾರ್ತಿಕ್ ಶರ್ಮಾ 41 ರನ್‌ಗಳ ಕೊಡುಗೆ ನೀಡಿದರು. ಈ ಮೂಲಕ ಚೆನ್ನೈ ಸೂಪರ್ ಕಿಂಗ್ಸ್ ತಂಡವು 17.3 ಓವರ್‌ಗಳಲ್ಲಿ 159 ರನ್ ಬಾರಿಸಿ 8 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ ಸಿಎಸ್‌ಕೆ ತಂಡವು 10 ಅಂಕಗಳೊಂದಿಗೆ ಅಂಕ ಪಟ್ಟಿಯಲ್ಲಿ 6ನೇ ಸ್ಥಾನಕ್ಕೇರಿದೆ.

**ಡೆಲ್ಲಿ ಕ್ಯಾಪಿಟಲ್ಸ್ (ಪ್ಲೇಯಿಂಗ್ XI):** ಕೆಎಲ್ ರಾಹುಲ್, ಪಾತುಮ್ ನಿಸ್ಸಾಂಕ, ಕರುಣ್ ನಾಯರ್, ಟ್ರಿಸ್ಟನ್ ಸ್ಟಬ್ಸ್, ನಿತೀಶ್ ರಾಣಾ, ಅಕ್ಷರ್ ಪಟೇಲ್ (ನಾಯಕ), ಆಶುತೋಷ್ ಶರ್ಮಾ, ಲುಂಗಿ ಎನ್‌ಗಿಡಿ, ಮಿಚೆಲ್ ಸ್ಟಾರ್ಕ್, ಕುಲದೀಪ್ ಯಾದವ್, ಟಿ ನಟರಾಜನ್.

**ಚೆನ್ನೈ ಸೂಪರ್ ಕಿಂಗ್ಸ್ (ಪ್ಲೇಯಿಂಗ್ XI):** ಸಂಜು ಸ್ಯಾಮ್ಸನ್, ರುತುರಾಜ್ ಗಾಯಕ್ವಾಡ್ (ನಾಯಕ), ಉರ್ವಿಲ್ ಪಟೇಲ್, ಕಾರ್ತಿಕ್ ಶರ್ಮಾ, ಡೆವಾಲ್ಡ್ ಬ್ರೆವಿಸ್, ಜೇಮಿ ಓವರ್ಟನ್, ಅಕೇಲ್ ಹುಸೈನ್, ನೂರ್ ಅಹ್ಮದ್, ಅನ್ಶುಲ್ ಕಾಂಬೋಜ್, ಮುಖೇಶ್ ಚೌಧರಿ, ಗುರ್ಜರ್‌ಪ್ರೀತ್ ಸಿಂಗ್.